

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಏಪ್ರಿಲ್ 18 ಮಂಗಳವಾರ 2023

ಸಂಪುಟ: 44 | ಸಂಚಿಕೆ: 3 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗ್: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಮೈಸೂರು ಜಿಲ್ಲೆಯಲ್ಲಿ ವಿ.ಸೋಮಣ್ಣ, ಜಿಟಿಡಿ, ಸಿದ್ದೇಗೌಡ, ನಾಗೇಂದ್ರ, ಎಂಕೆಎಸ್, ಸಂದೇಶ್ ಸ್ವಾಮಿ, ಅಶ್ವಿನ್‌ಕುಮಾರ್, ದರ್ಶನ್, ಕೆ.ವೆಂಕಟೇಶ್ ಸೇರಿ ಘಟಾನುಘಟಿಗಳಿಂದ

ನಾಮಪತ್ರ ಸಲ್ಲಿಕೆ

ಮೈಸೂರು ಜಿಲ್ಲೆಯಲ್ಲಿ ಸೋಮವಾರ 40 ಮಂದಿಯಿಂದ 51 ಉಮೇದುವಾರಿಕೆ ದಾಖಲು, ಈವರೆಗೆ 73 ಆಕಾಂಕ್ಷಿಗಳಿಂದ ಸ್ಪರ್ಧೆ ಬಯಸಿ ನಾಮಪತ್ರ ಸಲ್ಲಿಕೆ

ಮೈಸೂರು, ಏ. 17(ಆರ್‌ಕೆ)– ಮೈಸೂರು ಜಿಲ್ಲೆಯಲ್ಲಿ ಸಚಿವ ವಿ.ಸೋಮಣ್ಣ, ಶಾಸಕರಾದ ಜಿ.ಟಿ. ದೇವೇಗೌಡ, ಎಲ್.ನಾಗೇಂದ್ರ ಎಂ.ಅಶ್ವಿನ್‌ಕುಮಾರ್, ಅನಿಲ್ ಚಿಕ್ಕಮಾದು, ಹೆಚ್.ಪಿ. ಮಂಜುನಾಥ್, ಚಾಮುಂಡೇಶ್ವರಿ ಕಾಂಗ್ರೆಸ್ ಅಭ್ಯರ್ಥಿ ಎಸ್.ಸಿದ್ದೇಗೌಡ ಸೇರಿದಂತೆ ಹಲವು ಘಟಾನುಘಟಿಗಳು ಇಂದು ನಾಮಪತ್ರ ಸಲ್ಲಿಸಿದ್ದಾರೆ.



ವಿ.ಸೋಮಣ್ಣ

ಸೋಮವಾರ ಶುಭ ದಿನವಾದ್ದರಿಂದ ಒಂದೇ ದಿನ ಮೈಸೂರು ಜಿಲ್ಲೆಯ ಎಲ್ಲಾ 11 ವಿಧಾನ ಸಭಾ ಕ್ಷೇತ್ರಗಳಲ್ಲಿ 40 ಮಂದಿಯಿಂದ ಒಟ್ಟು 51 ನಾಮಪತ್ರಗಳನ್ನು ಸಲ್ಲಿಸಿದ್ದು, ಈವರೆಗೆ ಒಟ್ಟು 73 ಮಂದಿ ಸ್ಪರ್ಧೆ ಬಯಸಿ ಉಮೇದುವಾರಿಕೆ ಸಲ್ಲಿಸಿದಂತಾಗಿದೆ ನಿನ್ನೆ (ಏ. 16) ಭಾನುವಾರ ರಜೆ ಇದ್ದ ಕಾರಣ, ಇಂದು ಪ್ರಮುಖರು ಸೇರಿ ಅತೀ ಹೆಚ್ಚು ಮಂದಿ ತಮ್ಮ ಉಮೇದುವಾರಿಕೆ ಸಲ್ಲಿಸಿದ್ದಾರೆ. ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರದಿಂದ ಆಮ್ ಆದ್ಮಿ ಪಾರ್ಟಿಯ ರಾಜಶೇಖರ್, ಕಾಂಗ್ರೆಸ್‌ನ ಕೆ. ವೆಂಕಟೇಶ್, ಕೆ.ಆರ್. ನಗರದಲ್ಲಿ ಕಾಂಗ್ರೆಸ್‌ನ ಡಿ.ರವಿಶಂಕರ್, ಬಿಜೆಪಿಯ ಹೆಚ್.ಟಿ. ವೆಂಕಟೇಶ್, ಹುಣಸೂರಿನಲ್ಲಿ ಕೆಆರ್‌ಎಸ್‌ನ ತಿಮ್ಮಾಬೋವಿ, ಪಕ್ಷೇತರರಾಗಿ ಪಿ.ಎಸ್. ಯಡಿಯೂರಪ್ಪ, ಉಮೇಶ್, ಬೀರೇಶ್ ನಾಮಪತ್ರ ಸಲ್ಲಿಸಿದ್ದಾರೆ. ಹೆಚ್.ಡಿ.ಕೋಟೆಯಲ್ಲಿ ಉತ್ತಮ ಪ್ರಜಾಕೀಯ ಪಾರ್ಟಿಯ ಹೆಚ್.ಎಂ. ನಾಗೇಶ್,

● 6ನೇ ಪುಟಕ್ಕೆ



ಜಿ.ಟಿ.ದೇವೇಗೌಡ



ಎಂ.ಕೆ.ಸೋಮಶೇಖರ್



ಎಲ್.ನಾಗೇಂದ್ರ



ಸಂದೇಶ್‌ಸ್ವಾಮಿ



ಸಿದ್ದೇಗೌಡ



ದರ್ಶನ್ ಧ್ರುವನಾರಾಯಣ್



ಅಶ್ವಿನ್‌ಕುಮಾರ್



ಅನಿಲ್ ಚಿಕ್ಕಮಾದು

ನಾಮಪತ್ರ ಸಲ್ಲಿಕೆಯ ಮತ್ತಷ್ಟು ಸಚಿತ್ರ ವರದಿ ಒಳಪುಟಗಳಲ್ಲಿ

ಡಿಕೆಶಿ, ಹೆಚ್‌ಡಿಕೆ, ವಿಜಯೇಂದ್ರ ಸೇರಿ ಘಟಾನುಘಟಿಗಳಿಂದ ನಾಮಪತ್ರ ಸಲ್ಲಿಕೆ

ಬೆಂಗಳೂರು,ಏ.17(ಕೆಎಂಶಿ)–ರಾಜ್ಯ ವಿಧಾನಸಭಾ ಚುನಾವಣೆಗೆ ನಾಮಪತ್ರ ಸಲ್ಲಿಕೆಗೆ ಕಡೇ 3 ದಿನಗಳು ಬಾಕಿ ಇರುವ ಬೆನ್ನಲ್ಲೇ ಸೋಮವಾರ ಘಟಾನುಘಟ್ಟಿ ನಾಯಕರು ಅದೃಷ್ಟ ಪರೀಕ್ಷೆಗಾಗಿ ತಮ್ಮ ತಮ್ಮ ಕ್ಷೇತ್ರಗಳಲ್ಲಿ ಉಮೇದುವಾರಿಕೆ ಸಲ್ಲಿಸಿದ್ದಾರೆ.

ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಕನಕಪುರದಿಂದ ನಾಮಪತ್ರ ಸಲ್ಲಿಸಿದರೆ, ಜೆಡಿಎಸ್‌ನ ಶಾಸಕಾಂಗ ಪಕ್ಷದ ನಾಯಕ ಹಾಗೂ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಚನ್ನಪಟ್ಟಣ ದಿಂದಲೂ, ಅವರ ಪುತ್ರ ನಿಖಿಲ್ ಕುಮಾರಸ್ವಾಮಿ ರಾಮನಗರದಿಂದಲೂ ಕಣಕ್ಕಿಳಿದಿದ್ದಾರೆ.



ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಕನಕಪುರದಲ್ಲಿ ನಾಮಪತ್ರ ಸಲ್ಲಿಸಿದರು.


ಮಾಜಿ ಸಿಎಂ ಕುಮಾರಸ್ವಾಮಿ ಚನ್ನಪಟ್ಟಣದಲ್ಲಿ ಉಮೇದುವಾರಿಕೆ ಸಲ್ಲಿಸಿದರು.


ಬಿ.ವೈ.ವಿಜಯೇಂದ್ರ ಶಿಕಾರಿಪುರದಲ್ಲಿ ನಾಮಪತ್ರ ಸಲ್ಲಿಸಿದರು.

ಬಸವರಾಜ ಬೊಮ್ಮಾಯಿ ಸಂಪುಟ ಸಚಿವರಾದ ಆರ್.ಅಶೋಕ್ (ಪದ್ಮ ನಾಭ ನಗರ), ವಿ.ಸೋಮಣ್ಣ (ವರುಣ), ಎಂಟಿಬಿ ನಾಗರಾಜ (ಹೊಸಕೋಟೆ), ಅಶ್ವತ್ಥ್‌ನಾರಾಯಣ (ಮಲ್ಲೇಶ್ವಂ) ಕೆ.ಗೋಪಾಲಯ್ಯ (ಮಹಾಲಕ್ಷ್ಮೀ ಲೇಔಟ್), ಡಾ.ಸುಧಾಕರ್ (ಚಿಕ್ಕಬಳ್ಳಾಪುರ), ಎಸ್.ಟಿ.ಸೋಮಶೇಖರ್ (ಯಶವಂತಪುರ), ಶಶಿಕಲಾ ಜೊಲ್ಲೆ (ನಿಪ್ಪಾಣಿ), ನಾರಾಯಣಗೌಡ (ಕೆ.ಆರ್.ಪೇಟೆ) ಬಿಜೆಪಿ ಅಭ್ಯರ್ಥಿಗಳಾಗಿ ನಾಮಪತ್ರ ಸಲ್ಲಿಸಿದ್ದಾರೆ. ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ.(ಚಿಕ್ಕಮಗಳೂರು), ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ಬಿ.ವೈ.ವಿಜಯೇಂದ್ರ (ಶಿಕಾರಿಪುರ) ಸೇರಿದಂತೆ ವಿವಿಧ ಪಕ್ಷಗಳ ನಾಯಕರು ನಾಮಪತ್ರ ಸಲ್ಲಿಸಿದರು.

ಪಕ್ಷೇತರರು ಸೇರಿದಂತೆ ನೂರಾರು ಅಭ್ಯರ್ಥಿಗಳು ಇಂದು ತಮ್ಮ ನಾಮಪತ್ರ ಸಲ್ಲಿಸಿ ಸ್ಪರ್ಧೆಗಿಳಿದಿದ್ದಾರೆ. ರಾಜ್ಯದ ಹಲವು ಕ್ಷೇತ್ರಗಳಲ್ಲಿ ನಾಮಪತ್ರ ಸಲ್ಲಿಕೆ ಭರಾಟೆ ಜೋರಾಗಿತ್ತು. ಬಹಳಷ್ಟು ಅಭ್ಯರ್ಥಿಗಳು ನಾಮಪತ್ರ ಸಲ್ಲಿಕೆಗೂ ಮುನ್ನ ದೇವಾಲಯಗಳಲ್ಲಿ ಪೂಜೆ ಸಲ್ಲಿಸಿದ್ದಾರೆ. ನಂತರ ಆಯಾ ಕ್ಷೇತ್ರದ ಚುನಾವಣಾಕಾರಿಗಳ ಕಚೇರಿಗೆ ತೆರಳಿ ತಮ್ಮ ಉಮೇದುವಾರಿಕೆ ಸಲ್ಲಿಸಿದ್ದಾರೆ.

ನಾಮಪತ್ರ ಸಲ್ಲಿಕೆಗೂ ಮುನ್ನ ಕೆಲವರು ದೇವಾಲಯದಲ್ಲಿ ಪೂಜೆ ಸಲ್ಲಿಸುವುದರ ಜತೆಗೆ ಕ್ಷೇತ್ರದಲ್ಲಿ ಮೆರವಣಿಗೆ ನಡೆಸಿ ತಮ್ಮ ಶಕ್ತಿ ಪ್ರದರ್ಶನ ನಡೆಸಿದ್ದಾರೆ. ಇನ್ನೂ ಕೆಲವರು ಸಂವಿಧಾನ ಶಿಲ್ಪಿ ಬಿ.ಆರ್.ಅಂಬೇಡ್ಕರ್, ನಾಡಪ್ರಭು ಕೆಂಪೇಗೌಡರು ಸೇರಿದಂತೆ ಗಣ್ಯರ ಪ್ರತಿಮೆಗಳಿಗೆ ಪುಷ್ಪ ನಮನ ಸಲ್ಲಿಸಿದ ಬಳಿಕ ಚುನಾವಣಾಧಿಕಾರಿಗಳ ಕಚೇರಿಗೆ ತೆರಳಿ ನಾಮಪತ್ರ ಸಲ್ಲಿಸಿದ್ದಾರೆ.

ಮೆರವಣಿಗೆ ಸಂದರ್ಭದಲ್ಲಿ ಆಯಾ ಪಕ್ಷದ ಮುಖಂಡರು, ಅಭ್ಯರ್ಥಿಗಳ ಬೆಂಬಲಿಗರು, ಕಾರ್ಯಕರ್ತರು ಪಾಲ್ಗೊಂಡಿದ್ದರು. ಇದರಿಂದ ಚುನಾವಣೆಯ ಕಾವು ಬಿಸಿಲಿನಷ್ಟೇ ಜೋರಾಗಿ ಏರತೊಡಗಿದೆ. ಏ.13ರಿಂದ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಿದ್ದು, ನಿನ್ನೆವರೆಗೆ 421 ನಾಮಪತ್ರ ಸಲ್ಲಿಕೆಯಾಗಿದ್ದವು. ರಾಜ್ಯ ಮುಖ್ಯ ಚುನಾವಣಾಕಾರಿ ಕಚೇರಿಯ ಮಾಹಿತಿ ಪ್ರಕಾರ ಚುನಾವಣೆಗೆ 381 ಪುರುಷ ಹಾಗೂ 140 ಮಹಿಳಾ ಅಭ್ಯರ್ಥಿಗಳು ವಿವಿಧ ಕ್ಷೇತ್ರಗಳಲ್ಲಿ ಉಮೇದುವಾರಿಕೆ ಸಲ್ಲಿಸಿದ್ದಾರೆ. ಆಡಳಿತಾರೂಢ ಬಿಜೆಪಿ ಅಭ್ಯರ್ಥಿಗಳಿಂದ 56 ನಾಮಪತ್ರಗಳು ಸಲ್ಲಿಕೆಯಾಗಿದ್ದವು. ಅಭ್ಯರ್ಥಿಗಳು ಸಲ್ಲಿಸುವ ನಾಮ ಪತ್ರಗಳ ಪರಿಶೀಲನೆಯು ಏ.21ರಂದು ನಡೆಯಲಿದೆ. ನಾಮಪತ್ರಗಳನ್ನು ವಾಪಸ್ ಪಡೆಯಲು ಏ.24ರ ಗಡುವು ನೀಡಲಾಗಿದೆ. ಮೇ 10ರಂದು ರಾಜ್ಯದ 224 ಕ್ಷೇತ್ರಗಳಲ್ಲೂ ಏಕಕಾಲಕ್ಕೆ ಮತದಾನ ನಡೆಯಲಿದೆ. ಮೇ 13ರಂದು ಮತ ಎಣಿಕೆ ನಡೆಯಲಿದ್ದು, ಅಂದೇ ಚುನಾವಣಾ ಫಲಿತಾಂಶ ಹೊರ ಬೀಳಲಿದೆ.

ಸಾಹಿತಿ ಬನ್ನೂರು ಕೆ.ರಾಜುಗೆ ನಾಳೆ 60ರ ಸಂಭ್ರಮ



ಮೈಸೂರು, ಏ. 17– ಮೈಸೂರು ಜಿಲ್ಲಾ ಪತ್ರಕರ್ತರ ಸಂಘ ಮತ್ತು ಮೈಸೂರು ಕನ್ನಡ ವೇದಿಕೆ ವತಿಯಿಂದ ಸಾಹಿತಿ ಹಾಗೂ ಅಂಕಣಕಾರ ಬನ್ನೂರು ಕೆ.ರಾಜು–60 ಸಂಭ್ರಮವನ್ನು ಜಿಲ್ಲಾ ಪತ್ರಕರ್ತರ ಸಂಘದಲ್ಲಿ ಏ.19ರಂದು ಬೆಳಗ್ಗೆ 11.30ಕ್ಕೆ ಆಯೋಜಿಸಲಾಗಿದೆ. ಕಾರ್ಯಕ್ರಮದ ಸಾನ್ನಿಧ್ಯವನ್ನು ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ವಹಿಸುವರು. ಶ್ರೀ ಯೋಗಾನರಸಿಂಹಸ್ವಾಮಿ ಮಹಾಸಂಸ್ಥಾನ ಮಠದ ಪೀಠಾಧೀಶರಾದ ಪ್ರೊ.ಭಾಷ್ಯಂ ಸ್ವಾಮೀಜಿಯವರ ಸಮ್ಮುಖದಲ್ಲಿ, ಮಾಜಿ ಸಿಂಡಿಕೇಟ್ ಸದಸ್ಯ ಹಾಗೂ ಅರ್ಥೋಪೆಡಿಕ್ ಸರ್ಜನ್ ಡಾ.ಕೆ.ಮಹದೇವ್ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ.ರವಿಕುಮಾರ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಾಹಿತಿ ಡಿ.ಎನ್.ಕೃಷ್ಣಮೂರ್ತಿ, ವಿಶ್ರಾಂತ ಪ್ರಾಂಶುಪಾಲ ಕಾಡ್ನೂರು ಶಿವೇಗೌಡ, ಮೈಸೂರು ಕನ್ನಡ ವೇದಿಕೆ ಅಧ್ಯಕ್ಷ ಎಸ್. ಬಾಲಕೃಷ್ಣ, ಲೇಖಕಿ ಡಾ.ಜಮುನಾರಾಣಿ, ಗಾಯಕ ರೇವಣ್ಣ, ನಾಲಾಬೀದಿ ರವಿ, ಹಿರಣ್ಮಯಿ ಪ್ರತಿಷ್ಠಾನ ಅಧ್ಯಕ್ಷ ಎ.ಸಂಗಪ್ಪ, ಕಾವೇರಿ ಬಳಗದ ಎನ್.ಕೆ.ಕಾವೇರಿಯಮ್ಮ, ಮನುಗನಹಳ್ಳಿ ಎಸ್. ಗೋವಿಂದೇಗೌಡ ಭಾಗವಹಿಸುವರು.

ಮೇ 19ರಿಂದ ಕ್ಷಯ ರೋಗದ ಬಗ್ಗೆ ಅರಿವು

ಮೈಸೂರು: ಕ್ಷಯ ರೋಗದ ಬಗ್ಗೆ ಅರಿವು ಮೂಡಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಟಿಬಿ ಕೇಂದ್ರ, ಎನ್‌ಟಿಇಪಿ ಎಂಪ್ಲಾಯಿಸ್ ಯೂನಿಯನ್‌ನಿಂದ ಜೆ.ಕೆ.ಮೈದಾನದಲ್ಲಿ ಮೇ 19ರಿಂದ 21ರವರೆಗೂ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಲಾಗಿದೆ. ಮಾಹಿತಿಗೆ 9535597139, 9886509787, 9916282227, 8660804920.

ನಿಧನ



ಹೊನ್ನಮ್ಮ

ಮೈಸೂರು, ಏ. 17– ಮೈಸೂರಿನ ಗಾಂಧಿನಗರದ ಸಿದ್ದಪ್ಪಾಜಿ ದೇವಸ್ಥಾನದ ರಸ್ತೆ ನಿವಾಸಿ ಲೇಟ್ ದಾಸಯ್ಯ ಅವರ ಪತ್ನಿ ಶ್ರೀಮತಿ ಹೊನ್ನಮ್ಮ (90) ಏ.14ರಂದು ನಿಧನರಾದರು. ಮೃತರು ಮಗ ರವಿ ಮತ್ತು ಸೊಸೆ ಲಕ್ಷ್ಮಿ ಹಾಗೂ ಮೊಮ್ಮಕ್ಕಳಾದ ಸೌಮ್ಯ, ಸುಮಿತ್ರ, ನಂದಿನಿ, ಮಂಜುಳಾ, ಚಾಂದನಿ ಹಾಗೂ ಅಪಾರ ಬಂಧು–ವರ್ಗ ಅಗಲಿದ್ದಾರೆ. ಅಂತ್ಯಕ್ರಿಯೆ ಗಾಂಧಿನಗರದ ಆದಿಜಾಂಬವ ರುದ್ರಭೂಮಿಯಲ್ಲಿ ಏ.15ರಂದು ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

18.4.2023 ಮಂಗಳವಾರ,
ಮಳೆ ನಕ್ಷತ್ರ: ಅಶ್ವಿನಿ, 14.04.2023 ರಿಂದ 24.04.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು,
ಚೈತ್ರ ಮಾಸ, ಕೃಷ್ಣ ಪಕ್ಷ, ತಿಥಿ: ತ್ರಯೋದಶಿ, ನಕ್ಷತ್ರ: ಉಭಾ,
ರಾಹುಕಾಲ: ಮಧ್ಯಾಹ್ನ 3 ರಿಂದ 4.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಶ್ರದ್ಧೆಯ ಶಿಲ್ಪ–ಮೈಸೂರು ಸುತ್ತಲಿನ ದೇಗುಲಗಳ ಪರಿಚಯ, ಪ್ರಸ್ತುತಿ–ಡಾ.ಟಿ.ಎಸ್.ಗೋಪಾಲ್, 6.40 ಅರಿವಿನ ಶಿಖರ– ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಕಾರ್ಯಕ್ರಮ ಸರಣಿ, ಗಾಯನ–ನಿತಿನ್ ರಾಜಾರಾಂ ಶಾಸ್ತ್ರಿ, ಜಿ.ಪುಷ್ಪಲತಾ, ವ್ಯಾಖ್ಯಾನ–ಕೆ.ಎಲ್.ಪದ್ಮಿನಿ ಹೆಗಡೆ, 7.15 ಕಾದಂಬರಿ ವಿಹಾರ–ದೂರ ಸರಿದರು ಕಾದಂಬರಿಯ ಪ್ರಸ್ತುತಿ–ಉಮೇಶ್ ಎಸ್.ಎಸ್., 8.30 ರೂಪಕ "ಮರದಿಂದ ಮಳೆ, ಇಳೆಗೆ ಕಳೆ", ರಚನೆ–ಸುರೇಂದ್ರನಾಥ್ ಸಾತ್ವಿಕ್, ನಿರ್ಮಾಣ–ಪ್ರಭುಸ್ವಾಮಿ ಮಳಿಮಠ, 9.25 ನಾಟಕ–ಮತ್ತೆ ಮಕ್ಕಳಂತಾಗಿಬಿಡೋಣ, ಮೂಲ ಹಿಂಡಿ–ಕ್ಷಮಾ ಶರ್ಮಾ, ಕನ್ನಡಾನುವಾದ–ಪ್ರೊ.ಲಕ್ಷ್ಮೀನಾರಾಯಣ ಅರೋರಾ, ನಿರ್ಮಾಣ– ಪ್ರಭುಸ್ವಾಮಿ ಮಳಿಮಠ, 10.00 ಮೌನದಾಚೆಯ ಬೆಳಕು–ಸದಾಶಿವ ಬ್ರಹ್ಮೇಂದ್ರರ ಜೀವನ ಹಾಗೂ ರಚನೆಗಳನ್ನಾಧರಿಸಿದ ವಿಶೇಷ ಕಾರ್ಯಕ್ರಮ ಸರಣಿ. ನಿರ್ದೇಶನ ಹಾಗೂ ನಿರೂಪಣ ಸಾಹಿತ್ಯ– ಎಸ್.ಶಂಕರ್, ನಿರ್ಮಾಣ– ಗೀತಾ ರಮಾನಂದ್, 11.00 ಮಿಶ್ರ ಮಾಧುರ್ಯ **ಮಧ್ಯಾಹ್ನ:** 12.30 ದೇವರನಾಮ–ಶ್ರೀ ರಕ್ಷಾ, ಆರ್.ಕೆ. ಶ್ರೀಕಂಠನ್, 12.45 ಕಂಪ್ಯೂಟರ್ ವ್ಯವಹಾರದ ವಿಸ್ತಾರ–ಮನೋಜ್ ಸಿಂಗ್ ಎಂ.ಜಿ. ಅವರೊಂದಿಗೆ ಸಂದರ್ಶನ, 1.20 ಭಾವಗೀತೆಗಳು–ಎಂ.ಆರ್.ಶ್ರೀ ಹರ್ಷ, 3.00 ಕಲಾವತಿ ಅವಧೂತ್–ಹಾಡುಗಾರಿಕೆ, 4.00 ಕಥಾ ಕಾಲಕ್ಷೇಪ "ನಲ್ಲ ತಂಗಾದೇವಿ", ಪ್ರಸ್ತುತಿ–ವಿದ್ವಾನ್ ಆರ್.ಗುರುರಾಜುಲು ನಾಯ್ಡು, 5.05 ಮಿಶ್ರಮಾಧುರ್ಯ, 6.50 ಕೃಷಿರಂಗ–ಕಿಸಾನ್ ವಾಣಿ–ದಾಳಿಂಬೆ ಕೃಷಿಗೆ ಇರುವ ಅವಕಾಶಗಳು ಕುರಿತು ಡಾ.ಜಿ.ಮಂಜುನಾಥ್ ಅವರೊಂದಿಗೆ ಸಂದರ್ಶನ. ಸಂದರ್ಶಕರು–ಎಸ್.ಸುಬ್ರಹ್ಮಣ್ಯ, 9.15 ಯಕ್ಷಗಾನದ ಹಾಡುಗಳು–ಜಾಂಬವತಿ ಕಲ್ಯಾಣ ಪ್ರಸಂಗದ ಹಾಡುಗಳು–ಲಕ್ಷ್ಮೀನಾರಾಯಣಭಟ್, 9.30 ಸ್ಮಿತಾ ಶ್ರೀ ಕಿರಣ್–ವೇಣುವಾದನ, 10.30 ಗಮಕ ವ್ಯಾಖ್ಯಾನ, ವಾಚನ– ಮೀನಾ ನಾಗರಾಜ್, ವ್ಯಾಖ್ಯಾನ– ನಿರಂಜನ್

■ **ಶ್ರೀ ಬ್ರಹ್ಮತಂತ್ರ ಸ್ವತಂತ್ರ ಪರಕಾಲ ಮಠ :** ತಿರುನಕ್ಷತ್ರ ಮಹೋತ್ಸವ, ವೇದ ಪಂಡಿತರಿಂದ ಚಾತುರ್ವೇದ ಮತ್ತು ವಿಷ್ಣು ಸಹಸ್ರನಾಮ ಪಾರಾಯಣ, ಸ್ಥಳ: ಶ್ರೀ ಬ್ರಹ್ಮತಂತ್ರ ಸ್ವತಂತ್ರ ಪರಕಾಲ ಮಠ, ಬೆಳಗ್ಗೆ 9ರಿಂದ ಮತ್ತು ಸಂಜೆ 5ರಿಂದ.

■ **ಅಭಿರುಚಿ ಬಳಗ, ಎನ್.ವಿ. ರಮೇಶ್ ಕಲಾ ಬಳಗ, ಆಸಕ್ತಿ ಪ್ರಕಾಶನ, ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ :** ಎನ್.ವ್ಹಿ. ರಮೇಶ್ ಅವರ 'ಭಾರತೀಯ ಸಾಂಸ್ಕೃತಿಕ ಪರಂಪರೆ' ಪುಸ್ತಕ ಲೋಕಾರ್ಪಣೆ, ವಿಶ್ವ ಪರಂಪರಾ ದಿನದ ಉಪನ್ಯಾಸ ಹಾಗೂ ಕವಿಗೋಷ್ಠಿ, ಉದ್ಘಾಟನೆ : ಹಿರಿಯ ರಂಗಕರ್ಮಿ ಶ್ರೀಮತಿ ಹರಿಪ್ರಸಾದ್, ಮುಖ್ಯ ಅತಿಥಿಗಳು : ಎನ್.ವಿ. ರಮೇಶ್, ಶ್ರೀಮತಿ ಸುಶೀಲ ಶ್ಯಾಮಸುಂದರ್, ಶ್ರೀಮತಿ ಲಲಿತಾ ಹಾಸನ, ಶ್ರೀಮತಿ ಸುಮತಿ ಸುಬ್ರಹ್ಮಣ್ಯ, ಶ್ರೀಮತಿ ಪ್ರಭಾಶಾಸ್ತ್ರಿ, ಶ್ರೀಮತಿ ಲತಾ ಮೋಹನ್, ಅಧ್ಯಕ್ಷತೆ : ನಿವೃತ್ತ ಪ್ರಾಚಾರ್ಯ ಕೆಂಪರಾಜು, ಸ್ಥಳ: ನಮನ ಕಲಾ ಮಂಟಪ, ಕೃಷ್ಣಮೂರ್ತಿಪುರಂ, ಮಧ್ಯಾಹ್ನ 2.30ಕ್ಕೆ.

ಶೆಟ್ಟರ್ ಸ್ವಾಭಿಮಾನಕ್ಕೆ ಬಿಜೆಪಿಯಲ್ಲಿ ಧಕ್ಕೆಯಾಗಿದೆ, ಕಾಂಗ್ರೆಸ್ ಸೇರ್ಪಡೆಯಿಂದ ನಾವು ಅಧಿಕಾರಕ್ಕೆ ಬರುವುದು ನಿಶ್ಚಿತ

ಬೆಂಗಳೂರು: ಬಿಜೆಪಿ ತೊರೆದು ಕಾಂಗ್ರೆಸ್‌ಗೆ ಸೇರ್ಪಡೆಯಾದ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಅವರನ್ನು ಆತ್ಮೀಯವಾಗಿ ಪಕ್ಷಕ್ಕೆ ಬರಮಾಡಿಕೊಳ್ಳುತ್ತೇವೆ ಎಂದು ವಿಪಕ್ಷ ನಾಯಕ ಸಿದ್ದರಾಮಯ್ಯ ಹೇಳಿದ್ದಾರೆ.

ಜಗದೀಶ್ ಶೆಟ್ಟರ್ ಅವರನ್ನು ಆತ್ಮೀಯವಾಗಿ ಕಾಂಗ್ರೆಸ್ ಪಕ್ಷಕ್ಕೆ ಸ್ವಾಗತಿಸುತ್ತೇನೆ. ಶೆಟ್ಟರ್ ಅವರು ಕರ್ನಾಟಕ ಕಂಡ ಸಜ್ಜನ ರಾಜಕಾರಣಿ. ಅವರು ಆರ್‌ಎಸ್‌ಎಸ್‌ನಿಂದ ಬಂದಿದ್ದರೂ ಜಾತ್ಯಾತೀತ ತತ್ವದ ಮೇಲೆಯೇ ಕೆಲಸ ಮಾಡಿದ್ದಾರೆ. ನಾನು ಅವರನ್ನು ಹತ್ತಿರದಿಂದ ಕಂಡಿದ್ದೇನೆ. ಅವರು ಮುಖ್ಯಮಂತ್ರಿಯಾಗಿದ್ದಾಗ ನಾನು ವಿರೋಧ ಪಕ್ಷದ ನಾಯಕನಾಗಿ, ನಾನು ಮುಖ್ಯಮಂತ್ರಿಯಾಗಿದ್ದಾಗ ಅವರು ವಿರೋಧ ಪಕ್ಷದ ನಾಯಕರಾಗಿದ್ದರು. ಅವರು ಎಂದಿಗೂ ತಮ್ಮ ವೈಯಕ್ತಿಕ ಕೆಲಸಕ್ಕಾಗಿ ಭೇಟಿ ಮಾಡಿದವರಲ್ಲ. ಐದು ವರ್ಷಗಳ ಕಾಲ ವಿಧಾನಸಭೆ ಒಳಗೆ ಹಾಗೂ ಹೊರಗೆ ಬಿಜೆಪಿ ಪರವಾಗಿ ಹೋರಾಟ ಮಾಡಿದ್ದರು. ಬಹಳ ನಿಷ್ಠಾವಂತರಾಗಿದ್ದರು. ಬಿಜೆಪಿಯ ನೀತಿ ಕಾರ್ಯಕ್ರಮಗಳ ಬಗ್ಗೆ ರಾಜಿ ಮಾಡಿಕೊಳ್ಳುತ್ತಿರಲಿಲ್ಲ. ಸ್ವಾರ್ಥಕ್ಕಾಗಿ ಅದನ್ನು ಬಲಿ ಕೊಟ್ಟಿರಲಿಲ್ಲ. ನಮ್ಮ ಸರ್ಕಾರದ ವಿರುದ್ಧ ಹೋರಾಟವನ್ನು ಮಾಡಿದ್ದಾರೆ ಎಂದರು.



ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ವಿರೋಧ ಪಕ್ಷದ ಕೆಲಸವನ್ನು ನಿರ್ಭಯವಾಗಿ ನಿಷ್ಟುರವಾಗಿ ಮಾಡುತ್ತಿದ್ದರು. ಕೃಷ್ಣ ಅವರ ಕಾಲದಲ್ಲೂ ವಿರೋಧ ಪಕ್ಷದ ನಾಯಕರಾಗಿದ್ದರು. ಅವರು ಕೇವಲ ಉತ್ತರ ಕರ್ನಾಟಕ ನಾಯಕರಲ್ಲ, ಅವರು ಇಡೀ ರಾಜ್ಯದ ನಾಯಕರು. ಲಿಂಗಾಯತ ಸಮಾಜ ದೊಡ್ಡ ಸಮಾಜ. ಸಾಮಾನ್ಯವಾಗಿ ಯಡಿಯೂರಪ್ಪ ಅವರನ್ನು ಆ ಸಮಾಜದ ನಾಯಕ ಎಂದು ಬಿಂಬಿಸುತ್ತಾರೆ. ಎರಡನೇ ಸ್ಥಾನದಲ್ಲಿ ನೋಡುತ್ತಿದ್ದದ್ದು ಶೆಟ್ಟರ್ ಅವರನ್ನು. ಬಿಜೆಪಿ ಯಡಿಯೂರಪ್ಪ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ನಿರ್ದಾಕ್ಷಿಣ್ಯವಾಗಿ ತೆಗೆದು ಅಪಮಾನ ಮಾಡಿದರು. ಅವರ ಕಣ್ಣೀರು ಹಾಕಿಸಿದರು. ಶೆಟ್ಟರ್ ಅವರು ಲಿಂಗಾಯತ ಸಮಾಜದ ದೊಡ್ಡ ನಾಯಕರೆಂದು ಗುರುತಿಸಿಕೊಂಡಿದ್ದರು. ಅವರು ಬಹಳ ನೋವಿನಿಂದ ಮಾತನಾಡಿದ್ದಾರೆ. ಬಹುಶಃ ಬಿಜೆಪಿ ಅವರನ್ನು ನಡೆಸಿಕೊಂಡಿರುವ ರೀತಿ ಯಾವ ಪಕ್ಷದಲ್ಲಿ ಯಾವುದೇ ನಾಯಕರಿಗೆ ಆಗಬಾರದು ಎಂದರು.

ಯಾವುದೇ ಕಾರಣ ಇಲ್ಲದೇ, ಆರೋಪವಿಲ್ಲದೆ, ಬಿಜೆಪಿಯವರು ಅವರಿಗೆ ಟಿಕೆಟ್ ವಂಚಿಸಿದ್ದಾರೆ. ಇದು ದುರುದ್ದೇಶ ಎಂದು ಎಲ್ಲರಿಗೂ ಅರ್ಥವಾಗುತ್ತದೆ. ನಾನು ನೋಡಿದ ಹಾಗೆ ಶೆಟ್ಟರ್ ಅವರು ಸ್ವಾಭಿಮಾನಿ ರಾಜಕಾರಣಿ. ಸ್ವಾಭಿಮಾನಕ್ಕೆ ಧಕ್ಕೆಯಾಗುವಂತಹ ಕೆಲಸ ಮಾಡಿಲ್ಲ. ಈಗ ಅವರ ಸ್ವಾಭಿಮಾನ, ಸಮುದಾಯಕ್ಕೆ ಧಕ್ಕೆಯಾಗಿದೆ. ಅವರ ಅನುಯಾಯಿ, ಸ್ನೇಹಿತರಿಗೆ ಧಕ್ಕೆಯಾಗಿದೆ. ಇದು ಸಹಿಸಲಾಗದ ಅಪಮಾನ. ನಾನು ಕೂಡ ಇದನ್ನು ನಿರೀಕ್ಷೆ ಮಾಡಿರಲಿಲ್ಲ. ನಿಮಗೆ ಇಂತಹ ಅನ್ಯಾಯವಾಗುತ್ತದೆ ಎಂದು ಭಾವಿಸಿರಲಿಲ್ಲ ಎಂದು ಅವರನ್ನು ಭೇಟಿಯಾದಾಗ ಹೇಳಿದೆ. ಈ ರೀತಿ ಏಕಾಏಕಿ, ಯಾವುದೇ ಮುನ್ಸೂಚನೆ ಇಲ್ಲದೆ ಟಿಕೆಟ್ ತಪ್ಪಿಸಿರುವುದು ಘೋರ ಅಪರಾಧ. ಅವರು ತಮ್ಮ ಸ್ವಾಭಿಮಾನ ರಕ್ಷಣೆಗೆ ಪಕ್ಷ ಬಿಡಲು ತೀರ್ಮಾನಿಸಿದ್ದಾರೆ. ಶೆಟ್ಟರ್ ಅವರ ಆಗಮನದಿಂದ ಪಕ್ಷಕ್ಕೆ ದೊಡ್ಡ ಶಕ್ತಿ ಬಂದಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ನಿಶ್ಚಿತವಾಗಿದೆ ಎಂದರು.

ಸಾಮಾನ್ಯ ವಿಮಾ ಕಂಪನಿ ನೌಕರರ ಪ್ರತಿಭಟನೆ

ಮೈಸೂರು,ಏ.17(ಪಿಎಂ)– ಸಾರ್ವಜನಿಕ ವಲಯದ ಸಾಮಾನ್ಯ ವಿಮಾ ಕಂಪನಿಗಳಲ್ಲಿ ಕಾರ್ಯಕ್ಷಮತೆ ಸೂಚಕಗಳನ್ನು (ಕೆಪಿಐ) ಹೇರುವ ಮೂಲಕ ವಿಮಾ ಕಂಪನಿಗಳನ್ನು ಖಾಸಗೀಕರಣಗೊಳಿಸಲು ಕೇಂದ್ರ ಸರ್ಕಾರ ಮುಂದಾಗಿದೆ ಎಂದು ಆರೋಪಿಸಿ ಸಾರ್ವಜನಿಕ ವಲಯದ ಸಾಮಾನ್ಯ ವಿಮಾ ನೌಕರರು ಮತ್ತು ಅಧಿಕಾರಿಗಳ ಜಂಟಿ ಕ್ರಿಯಾ ಸಮಿತಿ ವತಿಯಿಂದ ಸೋಮವಾರ ಪ್ರತಿಭಟನೆ ನಡೆಸಲಾಯಿತು.



ಮೈಸೂರಿನ ರಾಮಸ್ವಾಮಿ ವೃತ್ತದಲ್ಲಿರುವ ನ್ಯಾಷನಲ್ ಇನ್ಸೂರೆನ್ಸ್ ಕಂಪನಿಯ ವಿಭಾಗೀಯ ಕಚೇರಿ ಎದುರು ಮಧ್ಯಾಹ್ನದ ಭೋಜನ ವಿರಾಮದ ವೇಳೆ ಅರ್ಧ ತಾಸಿಗೂ ಹೆಚ್ಚು ಕಾಲ ಪ್ರತಿಭಟನೆ ನಡೆಸಿದರು.

ಆಡಳಿತ ಸುಧಾರಣೆ ನೆಪದಲ್ಲಿ ಕೇಂದ್ರ ಸರ್ಕಾರ ಏಕಪಕ್ಷೀಯವಾಗಿ ಕೆಪಿಐ ಅನುಷ್ಠಾನಕ್ಕೆ ಮುಂದಾಗಿದೆ. ಇದು ಖಾಸಗೀಕರಣದ ಮೊದಲ ಹಂತವಾಗಿದ್ದು, ಯಾವುದೇ ಕಾರಣಕ್ಕೂ ಈ ಹೊಸ ಪದ್ಧತಿ ಅನುಷ್ಠಾನ ಮಾಡಕೂಡದು ಎಂದು ಆಗ್ರಹಿಸಿದರು.

ಸಾರ್ವಜನಿಕ ವಲಯದ ಸಾಮಾನ್ಯ ವಿಮಾ ಕಂಪನಿಗಳಾದ ನ್ಯೂ ಇಂಡಿಯಾ ಇನ್ಸೂರೆನ್ಸ್, ಯುನೈಟೆಡ್ ಇಂಡಿಯಾ ಇನ್ಸೂರೆನ್ಸ್, ಓರಿಯಂಟಲ್ ಇನ್ಸೂರೆನ್ಸ್ ಮತ್ತು ನ್ಯಾಷನಲ್ ಇನ್ಸೂರೆನ್ಸ್ ಕಂಪನಿಗಳನ್ನು ವಿಲೀನಗೊಳಿಸಬೇಕು ಎಂದು ಒತ್ತಾಯಿಸಿದರು. ಜಂಟಿ ಕ್ರಿಯಾ ಸಮಿತಿ ಜಂಟಿ ಕಾರ್ಯದರ್ಶಿ ಎಸ್.ಬಿ.ಬಲರಾಮ್, ಸದಸ್ಯರಾದ ಎನ್.ಮಹೇಶ್, ವಾಸುದೇವ್, ಎನ್.ಮಲ್ಲೇಶ್ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಮೇ 4ರಂದು ಉಡುಪಿಗೆ ಪ್ರಧಾನಿ ಮೋದಿ, ಯೋಗಿ ಆದಿತ್ಯನಾಥ್ ಭೇಟಿ ಸಾಧ್ಯತೆ

ಬೆಂಗಳೂರು: ಬಿಜೆಪಿ ಕಾರ್ಯಕರ್ತರ ಸಮಾವೇಶದಲ್ಲಿ ಪಾಲ್ಗೊಳ್ಳಲು ಪ್ರಧಾನಿ ನರೇಂದ್ರ ಮೋದಿ ಮೇ 4ರಂದು ಉಡುಪಿಗೆ ಆಗಮಿಸುವ ಸಾಧ್ಯತೆ ಇದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಕರ್ನಾಟಕದಲ್ಲಿ ಮೇ 10ರಂದು ನಡೆಯಲಿರುವ ವಿಧಾನಸಭಾ ಚುನಾವಣೆಗೆ ಮುನ್ನ ಪಕ್ಷದ ಕಾರ್ಯಕರ್ತರ ಸಮಾವೇಶದಲ್ಲಿ ಪ್ರಧಾನಿ ಮೋದಿ ಪಾಲ್ಗೊಳ್ಳಲಿದ್ದಾರೆ ಎಂದು ಬಿಜೆಪಿ ಉಡುಪಿ ಜಿಲ್ಲಾಧ್ಯಕ್ಷ ಕುಯಿಲಾಡಿ ಸುರೇಶ್ ನಾಯಕ್ ಸೋಮವಾರ ತಿಳಿಸಿದ್ದಾರೆ. ಯೋಗಿ ಆದಿತ್ಯನಾಥ್ ಕೂಡ ಚುನಾವಣಾ ಪ್ರಚಾರಕ್ಕೆ ಆಗಮಿಸುವ ಸಾಧ್ಯತೆ ಇದೆ ಎನ್ನಲಾಗಿದೆ. ಕಾಂಗ್ರೆಸ್ ಕೂಡ ರಾಷ್ಟ್ರೀಯ ನಾಯಕರು, ಸ್ಟಾರ್ ಪ್ರಚಾರಕರನ್ನು ಜಿಲ್ಲೆಗೆ ಆಹ್ವಾನಿಸಲು ಸಿದ್ಧತೆ ಮಾಡಿಕೊಳ್ಳುತ್ತಿದೆ. ನಗರ ಅಥವಾ ಭೇಟಿಗೆ ಸೂಕ್ತವಾದ ಸ್ಥಳಗಳಲ್ಲಿ ಬೃಹತ್ ಕಾರ್ಯಕ್ರಮವನ್ನು ಏರ್ಪಡಿಸಲಾಗುತ್ತದೆ. ರಾಷ್ಟ್ರೀಯ ನಾಯಕರು ಜಿಲ್ಲಾ ಪಕ್ಷಕ್ಕೆ ವಿಷಯ ತಿಳಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕೂಡ ಮೋದಿ ಅವರೊಂದಿಗೆ ಬರುವ ನಿರೀಕ್ಷೆಯಿದೆ ಎಂದು ಬಿಜೆಪಿ ಮೂಲಗಳು ತಿಳಿಸಿವೆ.


ನರೇಂದ್ರ ಮೋದಿ


ಯೋಗಿ ಆದಿತ್ಯನಾಥ್


ವರುಣಾ ಕ್ಷೇತ್ರದಿಂದ ಸಮಾಜವಾದಿ ಜನತಾ ಪಾರ್ಟಿ ಅಭ್ಯರ್ಥಿ ಕೆ.ನಾಗೇಶ್ ನಾಯಕ್ ಸೋಮವಾರ ಚುನಾವಣಾಧಿಕಾರಿಗೆ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಪಕ್ಷದ ರಾಜ್ಯಾಧ್ಯಕ್ಷ ಜಿಎಂ ಗಾಡ್ಕರ್, ಉಪಾಧ್ಯಕ್ಷ ಕೆ.ವಿ.ರಾಜು, ಚಾಮರಾಜನಗರ ಜಿಲ್ಲಾಧ್ಯಕ್ಷ ಕೆ.ಪರಶಿವಮೂರ್ತಿ ಇನ್ನಿತರರು ಹಾಜರಿದ್ದರು.

ಗ್ಯಾಂಗ್‌ಸ್ಟರ್ ಅತೀಕ್ ಅಹ್ಮದ್ ತಲೆಗೆ 1, ದೇಹಕ್ಕೆ 8 ಗುಂಡೇಟು

ವೈದ್ಯಕೀಯ ಪರೀಕ್ಷೆ ವರದಿ ಬಹಿರಂಗ

ನವದೆಹಲಿ: ಗ್ಯಾಂಗಸ್ಟರ್, ಪಾತಕಿ ಹಾಗೂ ಮಾಜಿ ಸಂಸದ ಅತೀಕ್ ಅಹ್ಮದ್ ತಲೆಗೆ ಒಂದು ಗುಂಡು ಸೇರಿದಂತೆ ದೇಹವನ್ನು 9 ಗುಂಡುಗಳು ಹೊಕ್ಕಿವೆ ಎಂದು ಮರಣೋತ್ತರ ಪರೀಕ್ಷೆ ವರದಿ ತಿಳಿಸಿದೆ.

ಮರಣೋತ್ತರ ಪರೀಕ್ಷೆಯ ಸಮಯದಲ್ಲಿ ಗ್ಯಾಂಗ್‌ಸ್ಟರ್ ದೇಹದಲ್ಲಿ ಕನಿಷ್ಠ 9 ಬುಲೆಟ್ ಹೊಕ್ಕಿದ್ದವು. ಆತನ ಸಹೋದರ ಅಶ್ರಫ್ ಅಹ್ಮದ್ ದೇಹದಿಂದ 5 ಗುಂಡುಗಳನ್ನು ಹೊರತೆಗೆಯಲಾಗಿದೆ ಎಂದು ವರದಿಯಾಗಿದೆ. ಅತೀಕ್ ಅಹ್ಮದ್ ತಲೆಗೆ ಒಂದು, ಎದೆ ಹಾಗೂ ಬೆನ್ನಿನ ಭಾಗಕ್ಕೆ ಎಂಟು ಬಾರಿ ಗುಂಡು ಹಾರಿಸಿರುವುದು ಶವಪರೀಕ್ಷೆಯಲ್ಲಿ ಪತ್ತೆಯಾಗಿದೆ. ಮೂವರು ಶೂಟರ್‌ಗಳನ್ನು ಪೊಲೀಸರು ಬಂಧಿಸಿದ್ದಾರೆ. ಐವರು ವೈದ್ಯರಿದ್ದ ತಂಡ ಮರಣೋತ್ತರ ಪರೀಕ್ಷೆ ನಡೆಸಿದೆ.



ಉಮೇಶ್ ಪಾಲ್ ಹತ್ಯೆ ಆರೋಪ ಪ್ರಕರಣದಲ್ಲಿ ಅತೀಕ್ ಅಹ್ಮದ್‌ನನ್ನು ಬಂಧಿಸಲಾಗಿತ್ತು.

ಪ್ರಯಾಗ್‌ರಾಜ್‌ನ ಆಸ್ಪತ್ರೆಯಲ್ಲಿ ವೈದ್ಯಕೀಯ ಪರೀಕ್ಷೆಗೆ ಪೊಲೀಸರು ಕರೆತಂದಿದ್ದ ವೇಳೆ ದುಷ್ಕರ್ಮಿಗಳು ಗುಂಡಿಕ್ಕಿ ಹತ್ಯೆ ಮಾಡಿದ್ದರು. ಪತ್ರಕರ್ತರ ಸೋಗಿನಲ್ಲಿ ಬಂದಿದ್ದ ದುಷ್ಕರ್ಮಿಗಳು ಅತೀಕ್ ಅಹ್ಮದ್‌ಗೆ ಮೊದಲು ತಲೆಗೆ ಗುರಿಯಿಟ್ಟು ಗುಂಡು ಹೊಡೆದರು. ನಂತರ ಆತನ ಸಹೋದರನಿಗೂ ಗುಂಡು ಹಾರಿಸಿದರು. ಇದರಿಂದ ಸ್ಥಳದಲ್ಲಿ ಕೆಲಕಾಲ ಆತಂಕದ ವಾತಾವರಣ ಸೃಷ್ಟಿಯಾಗಿತ್ತು.

ತಕ್ಷಣ ಎಚ್ಚೆತ್ತ ಪೊಲೀಸರು ದುಷ್ಕರ್ಮಿಗಳನ್ನು ವಶಕ್ಕೆ ಪಡೆದರು. ಅಷ್ಟರಲ್ಲಾಗಲೇ ಪಾತಕಿ ಅಹ್ಮದ್ ಮೇಲೆ ಹಲವು ಸುತ್ತಿನ ಗುಂಡು ಹಾರಿಸಲಾಗಿತ್ತು. ಅಹ್ಮದ್ ಮತ್ತು ಆತನ ಸಹೋದರ ಅಶ್ರಫ್ ರಕ್ತದ ಮಡುವಿನಲ್ಲಿ ಸ್ಥಳದಲ್ಲೇ ಮೃತಪಟ್ಟಿದ್ದರು.

ರಾಜ್ಯ ಬಿಜೆಪಿ ಕೆಲವು ವ್ಯಕ್ತಿಗಳ ಕಂಟ್ರೋಲ್‌ನಲ್ಲಿ ಇದೆ

ಕಾಂಗ್ರೆಸ್ ಸೇರಿದ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಆರೋಪ

ಬೆಂಗಳೂರು, ಏ.17– ಬಿಜೆಪಿ ಪಕ್ಷದಲ್ಲಿ ವ್ಯವಸ್ಥಿತವಾಗಿ ಸಂಚು ನಡೆಸಿ ನನಗೆ ಈ ಬಾರಿ ಚುನಾವಣೆಗೆ ಟಿಕೆಟ್ ನಿರಾಕರಿಸಲಾಗಿದೆ. ಕರ್ನಾಟಕದ ಕೆಲವು ನಾಯಕರಿಂದ ನನಗೆ ತೊಂದರೆಯಾಗಿದೆ, ಅವಮಾನವಾಗಿದೆ. ರಾಜ್ಯ ಬಿಜೆಪಿಯಲ್ಲಿ ಪರಿಸ್ಥಿತಿ ಸರಿಯಿಲ್ಲ, ಆ ಪಕ್ಷದಲ್ಲಿ ನನ್ನನ್ನು ನಡೆಸಿಕೊಂಡ ರೀತಿಯಿಂದ ಬೇಸತ್ತು ಇವತ್ತು ಹೊರಬಂದು ಸಂತೋಷ, ಸಮಾಧಾನದಿಂದ ಕಾಂಗ್ರೆಸ್ ಸೇರ್ಪಡೆಯಾಗುತ್ತಿದ್ದೇನೆ ಎಂದು ಮಾಜಿ ಮುಖ್ಯಮಂತ್ರಿ ಬಿಜೆಪಿಯಿಂದ ಬಂಡಾಯವೆದ್ದು ಹೊರ ಬಂದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದ ಜಗದೀಶ್ ಶೆಟ್ಟರ್ ಹೇಳಿದ್ದಾರೆ.

ಸೋಮವಾರ ಕೆಪಿಸಿಸಿ ಕಚೇರಿಯಲ್ಲಿ ಕಾಂಗ್ರೆಸ್ ನಾಯಕರಿಂದ ಪಕ್ಷದ ಬಾವುಟವನ್ನು ಸ್ವೀಕರಿಸಿ ಅಧಿಕೃತವಾಗಿ ಸೇರ್ಪಡೆಯಾದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ತಾವು ಏಕೆ ಬಿಜೆಪಿ ತೊರೆದು ಬಂದಿದ್ದೇನೆ ಎಂಬುದನ್ನು ವಿವರವಾಗಿ ಹೇಳಿದರು.

ಕರ್ನಾಟಕದಲ್ಲಿ ಉತ್ತರ ಕರ್ನಾಟಕ ಭಾಗದಲ್ಲಿ ಬಿಜೆಪಿ ಪಕ್ಷವನ್ನು ಕಟ್ಟಿ ಬೆಳೆಸಿದವರಲ್ಲಿ ನಾನು ಪ್ರಮುಖ. ನಾನು ಜನಸಂಘ, ಸಂಘ ಪರಿವಾರದಿಂದ ಬಂದ ವ್ಯಕ್ತಿ, ಬಿಜೆಪಿ ಪಕ್ಷಕ್ಕಾಗಿ ಹಗಲಿರುಳು ದುಡಿದಿದ್ದೇವೆ. ಇಂದು ಬಹಳಷ್ಟು ಜನರಿಗೆ ಅಶ್ಚರ್ಯ ಆಗಿದೆ. ಯಾಕೆ ಕಾಂಗ್ರೆಸ್ ಸೇರ್ತಿದ್ದಾರೆ ಎಂಬ ಚರ್ಚೆ ನಡೆಯುತ್ತಿದೆ. ಹಲವಾರು ತಿಂಗಳ ಹಿಂದೆ ಹಿರಿಯ ನಾಯಕನಾಗಿ ನನಗೆ ಏನು ವೇದನೆ ಆಗಿದೆ ಅದು ಯಾರ ಗಮನಕ್ಕೂ ಬರಲಿಲ್ಲ ಎಂದು ವೇದನೆ ತೋಡಿಕೊಂಡರು.

ನಾನು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ದಿವಂಗತ ಮಾಜಿ ಸಂಸದ ಅನಂತ್‌ಕುಮಾರ್ ಅವರ ಮಾರ್ಗದರ್ಶನದಲ್ಲಿ ಬಿಜೆಪಿ ಕಟ್ಟಿ ಬೆಳೆಸಿದ್ದೇನೆ. ಬಿಜೆಪಿ ಎಲ್ಲ ರೀತಿ ಗೌರವ ಸ್ಥಾನಮಾನ ನೀಡಿದೆ. ಅದಕ್ಕೆ ಪ್ರತಿಯಾಗಿ ನಾನೂ ಬಿಜೆಪಿ ಕಟ್ಟಿ ಬೆಳೆಸುವ ಕೆಲಸ ಮಾಡಿದ್ದೇನೆ. ಆರು ಬಾರಿ 1994ರಿಂದ ಸ್ಪರ್ಧೆ ಮಾಡಿದ್ದೇನೆ. ಇದು ಏಳನೇ ಬಾರಿ ನಾನು ಸ್ಪರ್ಧೆ ಮಾಡಬೇಕಾಗಿದೆ. ಸಹಜವಾಗಿ ಟಿಕೆಟ್ ಇಲ್ಲ ಅಂದಾಗ ಆಘಾತ ಆಯ್ತು, ವೇದನೆ ಆಯ್ತು. ಹಿರಿಯ ನಾಯಕನಾಗಿ ನನಗೆ ಗೌರವ ಕೊಡಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.


ಸೋಮವಾರ ಕೆಪಿಸಿಸಿ ಕಚೇರಿಯಲ್ಲಿ ಕಾಂಗ್ರೆಸ್ ಸೇರ್ಪಡೆಯಾದ ನಂತರ ಜಗದೀಶ್ ಶೆಟ್ಟರ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಈ ವೇಳೆ ಕಾಂಗ್ರೆಸ್ ಮುಖಂಡ ಮಲ್ಲಿಕಾರ್ಜುನ ಖರ್ಗೆ ಇದ್ದಾರೆ.

ಗೌರವಯುತವಾಗಿ ಕಳುಹಿಸಿಕೊಡಬೇಕಿತ್ತು: ನಾನು ಅಧಿಕಾರದ ಆಸೆಗಾಗಿ ಬಿಜೆಪಿ ಪಕ್ಷ ತೊರೆದಿಲ್ಲ, ಕೆಲ ತಿಂಗಳ ಹಿಂದೆ ಸಾಮಾನ್ಯ ಕಾರ್ಯಕರ್ತನಿಗೆ, ಚಿಕ್ಕ ಹುಡುಗನಿಗೆ ಹೇಳುವ ರೀತಿಯಲ್ಲಿ ನಿಮಗೆ ಮತ್ತು ಈಶ್ವರಪ್ಪಗೆ ಟಿಕೆಟ್ ಇಲ್ಲ ಎಂದು ಹೇಳಿದರು. ಟಿಕೆಟ್ ಇಲ್ಲ ಎಂದಾಗ ನನಗೆ ಆಘಾತವಾಯಿತು. ಕಳೆದ 6 ತಿಂಗಳಿನಿಂದ ನನ್ನನ್ನು ಕಡೆಗಣಿಸಿದ್ದರು, ಇಷ್ಟು ವರ್ಷಗಳಿಂದ ಪಕ್ಷದಲ್ಲಿದ್ದವರಿಗೆ ಈ ರೀತಿ ಹೇಳುವುದೇ, ಕೊನೆಗೆ ಪಕ್ಷ ಬಿಡುತ್ತೇನೆಂದಾಗ ಕೇಂದ್ರದಲ್ಲಿ ಹುದ್ದೆ ನೀಡುತ್ತೇವೆ ಎಂದರು; ಆಫರ್ ಕೊಟ್ಟರು, ಅದೇಕೆ, ಅದನ್ನು ಆರಂಭದಲ್ಲಿಯೇ ಹೇಳಬಹುದಾಗಿತ್ತಲ್ಲವೇ, ಇಲ್ಲ ದೆಹಲಿಗೆ ಕರೆಸಿ ನಿಮಗೆ ಟಿಕೆಟ್ ನೀಡುತ್ತಿಲ್ಲ, ಬೇರೆ ಹುದ್ದೆ ನೀಡುತ್ತೇವೆ ಎಂದು ಆರಂಭದಲ್ಲಿಯೇ ಹೇಳಬಹುದಾಗಿತ್ತಲ್ಲವೇ ಎಂದು ಜಗದೀಶ್ ಶೆಟ್ಟರ್ ಕೇಳಿದರು.

ಬಿಜೆಪಿಯ ಸ್ಥಳೀಯ ನಾಯಕರಲ್ಲಿ ಸಮಸ್ಯೆಯಿದೆ. ರಾಜ್ಯ ಬಿಜೆಪಿ ಬೆಳವಣಿಗೆ ವರಿಷ್ಠರ ಗಮನಕ್ಕೆ ಬಂದಿಲ್ಲ ಅನ್ನಿಸುತ್ತೆ. ನನಗೆ ಜೆಪಿ ನಡ್ಡಾ, ಅಮಿತ್ ಶಾ ಅವರ ಬಗ್ಗೆ ಸಮಸ್ಯೆಯಿಲ್ಲ, ಅವರನ್ನು ನಾನು ಆರೋಪ ಮಾಡುತ್ತಿಲ್ಲ. ರಾಜ್ಯ ಬಿಜೆಪಿ ಕೆಲವೇ ಕೆಲವು ವ್ಯಕ್ತಿಗಳ ಕಂಟ್ರೋಲ್‌ನಲ್ಲಿ ಇದೆ. ರಾಜ್ಯ ಬಿಜೆಪಿ ಕೆಲವು ವ್ಯಕ್ತಿಗಳ ಹಿಡಿತದಲ್ಲಿದೆ. ಕೆಲ ಬಿಜೆಪಿ ನಾಯಕರು ತಮ್ಮ ಹಿತಾಸಕ್ತಿಗಾಗಿ ಕೆಲಸ ಮಾಡ್ತಿದ್ದಾರೆ. ನಾನು ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರಿಗೆ ಟೀಕೆ ಮಾಡುತ್ತಿಲ್ಲ. ಲಿಂಗಾಯತ ನಾಯಕರಲ್ಲಿ ಬಿಎಸ್‌ವೈ ಬಿಟ್ಟರೆ ನಾನೇ ಹಿರಿಯ. ಅದಕ್ಕಾಗಿ ನನ್ನನ್ನು ಪಕ್ಷದಿಂದ ಹೊರಹಾಕಿರಬೇಕು ಎಂದು ಆರೋಪಿಸಿದರು.

ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದ ಬೆನ್ನಲ್ಲೇ ಕಾಂಗ್ರೆಸ್ ಪಕ್ಷದ ಸದಸ್ಯತ್ವ ಸ್ಥಾನ ನೀಡಿ ಬಿ–ಫಾರಂನ್ನು ಕೂಡ ಇದೇ ಸಂದರ್ಭದಲ್ಲಿ ಜಗದೀಶ್ ಶೆಟ್ಟರ್ ಅವರಿಗೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ನೀಡಿದರು. ಚುನಾವಣೆಗೆ ನಾಮಪತ್ರ ಸಲ್ಲಿಸಲು ಏ.20 ಕೊನೆಯ ದಿನವಾಗಿದೆ. ಜಗದೀಶ್ ಶೆಟ್ಟರ್ ಅವರು ಹುಬ್ಬಳ್ಳಿ ಕೇಂದ್ರ ಕ್ಷೇತ್ರದಿಂದ ಕಾಂಗ್ರೆಸ್‌ನಿಂದ ಸ್ಪರ್ಧಿಸಲಿದ್ದಾರೆ.

ಚಾಮುಂಡೇಶ್ವರಿಯಲ್ಲಿ ಜೆಡಿಎಸ್, ಕಾಂಗ್ರೆಸ್ ಶಕ್ತಿ ಪ್ರದರ್ಶನ

ಮೈಸೂರಲ್ಲಿ ಜಿಟಿಡಿ ಶಕ್ತಿ ಪ್ರದರ್ಶನ



ಮೈಸೂರು, ಏ. 17(ಆರ್‌ಕೆ)– ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿಯಾದ ಶಾಸಕ ಜಿ.ಟಿ. ದೇವೇಗೌಡ ಇಂದು ಬೃಹತ್ ಕಾರ್ಯಕರ್ತರ ಮೆರವಣಿಗೆಯಲ್ಲಿ ಸಾಗಿ ಮೈಸೂರಿನ ನಜರ್‌ಬಾದ್‌ನಲ್ಲಿರುವ ಮಿನಿ ವಿಧಾನ ಸೌಧದ ಚುನಾವಣಾಧಿಕಾರಿ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಿದರು.

ಬೆಳಗ್ಗೆ 11.45 ಗಂಟೆಗೆ ಅರಮನೆ ಉತ್ತರ ದ್ವಾರದ ಕೋಟೆ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ಸಾವಿರಾರು ಕಾರ್ಯಕರ್ತರೊಂದಿಗೆ ಸೇರಿದ ಜಿ.ಟಿ. ದೇವೇಗೌಡ, ಪತ್ನಿ ಲಲಿತಾ ಜಿ.ಟಿ. ದೇವೇಗೌಡ, ಪುತ್ರ ಜಿ.ಡಿ. ಹರೀಶ್‌ಗೌಡರೊಂದಿಗೆ ಶ್ರೀ ಗಣಪತಿ ಹಾಗೂ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಪೂಜೆ ನೆರವೇರಿಸಿದ ಬಳಿಕ ಪುರಭವನ ಆವರಣದ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ತೆರೆದ ವಾಹನದಲ್ಲಿ ಮೆರವಣಿಗೆ ಮೂಲಕ ನಜರ್‌ಬಾದ್‌ನ ಮಿನಿ ವಿಧಾನಸೌಧದಲ್ಲಿರುವ ಚುನಾವಣಾಧಿಕಾರಿ ಕಚೇರಿಗೆ ತೆರಳಿ ಮಧ್ಯಾಹ್ನ ನಾಮಪತ್ರ ಸಲ್ಲಿಸಿದರು.

ತೆರೆದ ವಾಹನದಲ್ಲಿ ಪುರಭವನದಿಂದ ಆರಂಭವಾದ ಮೆರವಣಿಗೆಯು ಹಾರ್ಡಿಂಜ್ ಸರ್ಕಲ್, ನಗರ ಪೊಲೀಸ್ ಆಯುಕ್ತರ ಕಚೇರಿ ಸರ್ಕಲ್, ನಜರ್‌ಬಾದ್ ಸರ್ಕಲ್ ಮಾರ್ಗವಾಗಿ ಮೈಸೂರು ತಾಲೂಕು ಕಚೇರಿ ತಲುಪಿತು. ನಗರ ಜೆಡಿಎಸ್ ಅಧ್ಯಕ್ಷ ಕೆ.ಟಿ. ಚೆಲುವೇಗೌಡ, ಜಿಲ್ಲಾಧ್ಯಕ್ಷ ನರಸಿಂಹಸ್ವಾಮಿ, ಮುಖಂಡರಾದ ಕೋಟೆ ಹುಂಡಿ ಮಹದೇವ, ಕೆ.ಜಿ. ಕೊಪ್ಪಲು ಶೇಖರ್, ಕಾಂತರಾಜು, ಕೊಪ್ಪಲು ರಾಜಣ್ಣ, ಬೆಳವಾಡಿ ಶಿವಕುಮಾರ್, ಲೋಕೇಶ್, ಮಹದೇವಸ್ವಾಮಿ, ಕೆ. ಉಮಾಶಂಕರ್, ಹರೀಶ್, ಪ್ರೇಮಾ ಶಂಕರೇಗೌಡ, ಚಂದ್ರಶೇಖರ, ಸುಂದರರಾಜ್, ಅಯ್ಯಣ್ಣ, ರಮೇಶ್, ರಮಣಿ, ಆರ್. ಲಿಂಗಪ್ಪ, ಮಾದೇಶ್, ಕೆ.ಜಿ. ಕೊಪ್ಪಲು ಕುಮಾರ್, ವಿರೂಪಾಕ್ಷ, ಶಿವು, ಬಾಳಿಗ, ಪುಟ್ಟಸ್ವಾಮಿ, ಸರಿತಾ ಸುರೇಶ್ ಸೇರಿದಂತೆ ಹಲವರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ನಂತರ ಮಿನಿ ವಿಧಾನಸೌಧದ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಚುನಾವಣಾಧಿಕಾರಿಗಳಿಗೆ ಪತ್ನಿ ಶ್ರೀಮತಿ ಲಲಿತಾ ಜಿ.ಟಿ. ದೇವೇಗೌಡ, ಪುತ್ರ ಜಿ.ಡಿ. ಹರೀಶ್‌ಗೌಡ, ಬೆಳವಾಡಿ ಶಿವಕುಮಾರ್, ಲೋಕೇಶ್, ಮಹದೇವಸ್ವಾಮಿ, ಬೆಳವಾಡಿ ಶಿವಮೂರ್ತಿ, ಕೆ. ಉಮಾ ಶಂಕರ್‌ರೊಂದಿಗೆ ಜಿ.ಟಿ. ದೇವೇಗೌಡ ಚಾಮುಂಡೇಶ್ವರಿ ಕ್ಷೇತ್ರದಿಂದ ಸ್ಪರ್ಧೆ ಬಯಸಿ ಎರಡು ಸೆಟ್‌ಗಳ ನಾಮಪತ್ರ ಸಲ್ಲಿಸಿದರು.

ಮೈಸೂರಿನ ವಿವಿಧ ಬಡಾವಣೆ, ಚಾಮುಂಡೇಶ್ವರಿ ಕ್ಷೇತ್ರದ ಹಲವು ಗ್ರಾಮಗಳಿಂದ ಜೆಡಿಎಸ್ ಕಾರ್ಯಕರ್ತರು, ಜಿಟಿಡಿ ಅಭಿಮಾನಿಗಳು, ಹಿತೈಷಿಗಳು ಬೈಕ್ ರ್‍ಯಾಲಿ ಮೂಲಕ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿಗೆ ಬಂದರಲ್ಲದೇ, ನಂತರ ಚುನಾವಣಾಧಿಕಾರಿ ಕಚೇರಿವರೆಗೆ ನಡೆದ ಬೃಹತ್ ಮೆರವಣಿಗೆಯಲ್ಲಿ ಪಾಲ್ಗೊಂಡರು. ಸಾವಿರಾರು ಮಂದಿ ಜಮಾಯಿಸಿದ ಕಾರಣ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಚಾಮರಾಜ ಸರ್ಕಲ್ ಬಳಿ ವಾಹನ ಸಂಚಾರಕ್ಕೆ ಅರ್ಧ ತಾಸು ಅಡಚಣೆ ಉಂಟಾಗಿತ್ತು.

ದೇವರಾಜ ಉಪವಿಭಾಗದ ಎಸಿಪಿ ಶಾಂತಮಲ್ಲಪ್ಪ ನೇತೃತ್ವದಲ್ಲಿ ಹೆಚ್ಚುವರಿ ಪೊಲೀಸ್ ಸಿಬ್ಬಂದಿ ನಿಂಯೋಜಿಸಿ ಜಿಟಿಡಿ ನಾಮಪತ್ರ ಸಲ್ಲಿಸುವ ವೇಳೆ ಭಾರೀ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು

ಸಹಸ್ರಾರು ಬೆಂಬಲಿಗರೊಂದಿಗೆ ಸಿದ್ದೇಗೌಡ ಉಮೇದುವಾರಿಕೆ ಸಲ್ಲಿಕೆ



ಮೈಸೂರು, ಏ. 17(ಆರ್‌ಕೆ)– ಚಾಮುಂಡೇಶ್ವರಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮಾವಿನಹಳ್ಳಿ ಸಿದ್ದೇಗೌಡ ಇಂದು ಸಾವಿರಾರು ಬೆಂಬಲಿಗರೊಂದಿಗೆ ನಾಮಪತ್ರ ಸಲ್ಲಿಸಿದರು.

ಬೆಳಗ್ಗೆ 10.30 ಗಂಟೆಗೆ ಚಾಮುಂಡಿ ಬೆಟ್ಟಕ್ಕೆ ತೆರಳಿ ತಾಯಿ ಶ್ರೀ ಚಾಮುಂಡೇಶ್ವರಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿದ ಅವರು, ಮಧ್ಯಾಹ್ನ 12.30 ಗಂಟೆಗೆ ಅರಮನೆ ಉತ್ತರ ದ್ವಾರದ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ ಬಳಿಕ ಪುರಭವನ ಆವರಣದ ಡಾ. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.

ನಂತರ ಮಾಜಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಶಾಸಕ ಡಾ. ಯತೀಂದ್ರ ಸಿದ್ದರಾಮಯ್ಯ, ಮೈಸೂರು ನಗರ ಕಾಂಗ್ರೆಸ್ ಅಧ್ಯಕ್ಷ ಆರ್. ಮೂರ್ತಿ, ಜಿಲ್ಲಾಧ್ಯಕ್ಷ ಡಾ. ಬಿ.ಜೆ. ವಿಜಯಕುಮಾರ್, ಮುಖಂಡರಾದ ಬೀರಿಹುಂಡಿ ಬಸವಣ್ಣ ಕೆ ಮರೀಗೌಡ ಕೂರ್ಗಳ್ಳಿ ಮಹದೇವು, ರಾಕೇಶ್ ಪಾಪಣ್ಣ ಸೇರಿದಂತೆ ಹಲವರು ಮಾವಿನಹಳ್ಳಿ ಸಿದ್ದೇಗೌಡರಿಗೆ ನಾಮಪತ್ರ ಸಲ್ಲಿಸಲು ಸಾಥ್ ನೀಡಿದರು.

ಚಾಮರಾಜ ವೃತ್ತದಿಂದ ಆರಂಭವಾದ ಮೆರವಣಿಗೆಯು, ಹಾರ್ಡಿಂಜ್ ಸರ್ಕಲ್, ನಗರ ಪೊಲೀಸ್ ಆಯುಕ್ತರ ಕಚೇರಿ ಸರ್ಕಲ್, ನಜರ್‌ಬಾದ್ ಸರ್ಕಲ್ ಮೂಲಕ ಸಾಗಿ ಮಿನಿ ವಿಧಾನಸೌಧ ತಲುಪಿತು. ಮಧ್ಯಾಹ್ನ 2.40 ಗಂಟೆ ವೇಳೆಗೆ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಚುನಾವಣಾ ಧಿಕಾರಿ ಕಚೇರಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಯಾಗಿ ಮಾವಿನಹಳ್ಳಿ ಸಿದ್ದೇಗೌಡರು ತಮ್ಮ ಉಮೇದುವಾರಿಕೆ ಸಲ್ಲಿಸಿದರು.

ಈ ವೇಳೆ ಮಾಜಿ ಶಾಸಕ ಡಾ. ಹೆಚ್.ಸಿ. ಮಹದೇವಪ್ಪ, ಶಾಸಕ ಡಾ. ಯತೀಂದ್ರ ಸಿದ್ದರಾಮಯ್ಯ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದು, ಮಾವಿನಹಳ್ಳಿ ಸಿದ್ದರಾಮಯ್ಯ ಅವರಿಗೆ ಸಾಥ್ ನೀಡಿದರು. ಕಾಂಗ್ರೆಸ್ ಮುಖಂಡರಾದ ನಾಗರಾಜು, ಉದ್ಬೂರು ಕೃಷ್ಣ, ಕೃಷ್ಣಕುಮಾರ್, ಲೇಖಾ ವೆಂಕಟೇಶ್, ಬಸವರಾಜು ಸೇರಿದಂತೆ ಮುಖಂಡರು, ಕಾಂಗ್ರೆಸ್ ಕಾರ್ಯಕರ್ತರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಅಭ್ಯರ್ಥಿ ಮಾವಿನಹಳ್ಳಿ ಸಿದ್ದೇಗೌಡರಿಗೆ ಜೈಕಾರ ಕೂಗಿದ ಕಾರ್ಯಕರ್ತರು, ಚುನಾವಣೆಯಲ್ಲಿ ಜಯ ನಮ್ಮದೆ ಎಂಬ ಘೋಷಣೆಗಳೂ ಮೆರವಣಿಗೆಯಲ್ಲಿ ಕೇಳಿಬಂದವು.

ತಡವಾಗಿ ಬಂದು ಆರ್‌ಓ ಕಚೇರಿಗೆ ಓಡಿದ ಡಾ. ಯತೀಂದ್ರ!

ಮೈಸೂರು, ಏ. 17(ಆರ್‌ಕೆ)– ಚಾಮುಂಡೇಶ್ವರಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮಾವಿನಹಳ್ಳಿ ಸಿದ್ದೇಗೌಡರು ನಾಮಪತ್ರ ಸಲ್ಲಿಸುವ ವೇಳೆ ತಡವಾಗಿ ಬಂದ ಶಾಸಕ ಡಾ. ಯತೀಂದ್ರ ಸಿದ್ದರಾಮಯ್ಯ, ಕಡೇ ಘಳಿಗೆಯಲ್ಲಿ ಚುನಾವಣಾಧಿಕಾರಿ ಕಚೇರಿಗೆ ಓಡೋಡಿ ಹೋದ ಪ್ರಸಂಗ ಮೈಸೂರಿನ ಮಿನಿ ವಿಧಾನಸೌಧದಲ್ಲಿ ನಡೆಯಿತು.

ಸಿದ್ದೇಗೌಡರ ನಾಮಪತ್ರ ಸಲ್ಲಿಸಲು ಇಂದು ಮಧ್ಯಾಹ್ನ 2.30 ಗಂಟೆಗೆ ಸಮಯ ನಿಗದಿಯಾಗಿತ್ತು. ಅದರಂತೆ ಮೆರವಣಿಗೆ ಮೂಲಕ ಚುನಾವಣಾಧಿಕಾರಿ ಕಚೇರಿಗೆ ತೆರಳಿದ ಅಭ್ಯರ್ಥಿಯು ಪ್ರಕ್ರಿಯೆ ಮಾಡುತ್ತಿದ್ದರು. ಸೂಚಕರು, ಅನುಮೋದಕರಾಗಿ ಸಹಿ ಮಾಡಬೇಕಿದ್ದ ಡಾ. ಯತೀಂದ್ರ 5 ನಿಮಿಷ ತಡವಾಗಿ ಬಂದರು. ಆ ವೇಳೆ ಪೊಲೀಸರು ತಡೆದ ಕಾರಣ, ಮತ್ತಷ್ಟು ಸಮಯವಾಗುತ್ತಿತ್ತು. ಚುನಾವಣಾಧಿಕಾರಿಗಳು ಸೂಚನೆ ನೀಡಿದ ನಂತರ ಪೊಲೀಸರು ಕಳುಹಿಸುತ್ತಿದ್ದಂತೆಯೇ ಡಾ. ಯತೀಂದ್ರ ಓಡೋಡಿ ಬಂದು ಚುನಾವಣಾಧಿಕಾರಿ ಕಚೇರಿಗೆ ತೆರಳಿ ಸಿದ್ದೇಗೌಡರ ನಾಮಪತ್ರ ಸಲ್ಲಿಸುವ ಪ್ರಕ್ರಿಯೆಗೆ ನೆರವಾದರು.

ಚಾಮರಾಜ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಲ್.ನಾಗೇಂದ್ರ ಉಮೇದುವಾರಿಕೆ ಸಲ್ಲಿಕೆ

- ನಾರಾಯಣಶಾಸ್ತ್ರಿ ರಸ್ತೆ ರಾಘವೇಂದ್ರ ಮಠಕ್ಕೆ ಭೇಟಿ
- ಬೆಂಬಲಿಗರೊಂದಿಗೆ ಪಾಲಿಕೆ ಕಚೇರಿವರೆಗೂ ಮೆರವಣಿಗೆ



ಮೈಸೂರು,ಏ.17(ಎಂಟಿವೈ)– ಚಾಮರಾಜ ಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಹಾಲಿ ಶಾಸಕ ಎಲ್.ನಾಗೇಂದ್ರ ಅಪಾರ ಬೆಂಬಲಿಗರೊಂದಿಗೆ ಮೆರವಣಿಗೆ ಮೂಲಕ ತೆರಳಿ ನಾಮಪತ್ರ ಸಲ್ಲಿಸಿದರು.

ಮೈಸೂರಿನ ನಾರಾಯಣಶಾಸ್ತ್ರಿ ರಸ್ತೆಯಲ್ಲಿ ರಾಘವೇಂದ್ರ ಮಠಕ್ಕೆ ಪತ್ನಿ ಶೀಲಾ, ಸಂಸದ ಪ್ರತಾಪ ಸಿಂಹ ಸೇರಿದಂತೆ ಮುಖಂಡರೊಂದಿಗೆ ತೆರಳಿ ಪೂಜೆ ಸಲ್ಲಿಸಿದರು. ಬಳಿಕ ತೆರೆದ ವಾಹನದಲ್ಲಿ ನಾರಾಯಣಶಾಸ್ತ್ರಿ ರಸ್ತೆಯಿಂದ ರಮಾ ವಿಲಾಸ ರಸ್ತೆ ಮೂಲಕ ಸಯ್ಯಾಜಿರಾವ್ ರಸ್ತೆ ತಲುಪಿ ಪಾಲಿಕೆ ಕಚೇರಿಗೆ ಹೋಗಿ ಎರಡು ಸೆಟ್ ನಾಮಪತ್ರ ಸಲ್ಲಿಸಿದರು.

ಒಂದು ಸೆಟ್ ನಾಮಪತ್ರ ಸಲ್ಲಿಸುವ ವೇಳೆ ವಿಧಾನ ಪರಿಷತ್ ಮಾಜಿ ಸದಸ್ಯ ತೋಂಟದಾರ್ಯ, ತಾಯಿ ಪುಟ್ಟಲಿಂಗಮ್ಮ, ಮೇಯರ್ ಶಿವಕುಮಾರ್, ಮೂಡಾ ಅಧ್ಯಕ್ಷ ಯಶಸ್ವಿನಿ ಸೋಮಶೇಖರ್ ಸೂಚಕರಾಗಿ ಉಪಸ್ಥಿತರಿದ್ದರು. ಮತ್ತೊಂದು ಸೆಟ್ ನಾಮಪತ್ರ ಸಲ್ಲಿಕೆ ವೇಳೆ ಚಾಮರಾಜ ಕ್ಷೇತ್ರದ ಬಿಜೆಪಿ ಅಧ್ಯಕ್ಷ ಸೋಮಶೇಖರ ರಾಜು, ಪ್ರಧಾನ ಕಾರ್ಯದರ್ಶಿ ಪುನೀತ್, ಬಿಎಲ್‌ಎ ದಿನೇಶ್ ಗೌಡ, ವಕೀಲ ಶಿವಕುಮಾರ್ ಉಪಸ್ಥಿತರಿದ್ದರು.

ಗೆಲ್ಲುವ ವಿಶ್ವಾಸವಿದೆ

ಕ್ಷೇತ್ರದ ಶಾಸಕನಾಗಿ ಒಂದು ಅವಧಿಯನ್ನು ಪೂರ್ಣಗೊಳಿಸಿದ್ದೇನೆ. ಈ ಅವಧಿಯಲ್ಲಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಶ್ರಮಿಸಿದ್ದೇನೆ. ನಾನು ಮಾಡಿರುವ ಅಭಿವೃದ್ಧಿ ಕಾರ್ಯ ಗಮನಿಸಿದ ಕ್ಷೇತ್ರದ ಜನತೆ ಈ ಬಾರಿಯೂ ನನಗೆ ಬೆಂಬಲ ನೀಡುತ್ತಾರೆ ಎಂಬ ವಿಶ್ವಾಸವಿದೆ.

- ಎಲ್.ನಾಗೇಂದ್ರ,
ಚಾಮರಾಜ ಕ್ಷೇತ್ರದ ಬಿಜೆಪಿ ಅಭ್ಯರ್ಥಿ

ಬೈಕ್ ಮೆರವಣಿಗೆ: ಎರಡನೇ ಬಾರಿ ಶಾಸಕರಾಗಿ ಆಯ್ಕೆಯಾಗಲು ಬಯಸಿ, ಟಿಕೆಟ್ ಗಿಟ್ಟಿಸಿಕೊಂಡಿರುವ ಶಾಸಕ ಎಲ್.ನಾಗೇಂದ್ರ ಅವರಿಗೆ ಕ್ಷೇತ್ರದ ಬಿಜೆಪಿ ಕಾರ್ಯಕರ್ತರು ಸಾಥ್ ನೀಡಿದರು. ಅಲ್ಲದೇ, ಕ್ಷೇತ್ರದ ವಿವಿಧ ಬಡಾವಣೆಗಳಿಂದ ಬೈಕ್ ಮೆರವಣಿಗೆ ಮೂಲಕ ಆಗಮಿಸಿ ಶಕ್ತಿ ಪ್ರದರ್ಶನ ಮಾಡಿದರು. ಬೆಂಬಲಿಗರು ಬೈಕ್‌ಗಳಲ್ಲಿ ಶಾಸಕ ಎಲ್.ನಾಗೇಂದ್ರ ಅವರ ಜತೆ ಮೆರವಣಿಗೆಯಲ್ಲಿ ಪಾಲಿಕೆ ಕಚೇರಿವರೆಗೂ ಸಾಗಿದರು. ಅಲ್ಲದೇ, ಮೆರವಣಿಗೆಯುದ್ದಕ್ಕೂ ಶಾಸಕ ನಾಗೇಂದ್ರ ಪರ ಘೋಷಣೆ ಕೂಗಿ ಅಭಿಮಾನ ಮೆರೆದರು.

ಈ ಸಂದರ್ಭದಲ್ಲಿ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಶಿವಕುಮಾರ್, ಮುಡಾ ಅಧ್ಯಕ್ಷ ಯಶಸ್ವಿನಿ ಸೋಮಶೇಖರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಎನ್‌ಆರ್ ಬಿಜೆಪಿ ಅಭ್ಯರ್ಥಿ ಸಂದೇಶ್ ಸ್ವಾಮಿ ಉಮೇದುವಾರಿಕೆ ಸಲ್ಲಿಕೆ



ಮೈಸೂರು, ಏ. 17(ಆರ್‌ಕೆ)– ಮೈಸೂರಿನ ನರಸಿಂಹರಾಜ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಸಂದೇಶ್ ಸ್ವಾಮಿ ಇಂದು ನಾಮಪತ್ರ ಸಲ್ಲಿಸಿದರು.

ಕ್ಯಾತಮಾರನಹಳ್ಳಿಯ ಹುಲಿಯಮ್ಮ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಅವರು, ಪಕ್ಷದ ಮುಖಂಡರು, ಕಾರ್ಯಕರ್ತರು, ಬೆಂಬಲಿಗರೊಂದಿಗೆ ನಜರ್‌ಬಾದ್‌ನ ಚಾಮುಂಡಿ ವಿಹಾರ ಕ್ರೀಡಾಂಗಣಕ್ಕೆ ತೆರಳಿ ಮಧ್ಯಾಹ್ನ 12.05 ಗಂಟೆ ವೇಳೆ ಚುನಾವಣಾಧಿಕಾರಿಗಳಿಗೆ ಸಂದೇಶ್ ಸ್ವಾಮಿ ತಮ್ಮ ಉಮೇದುವಾರಿಕೆ ಸಲ್ಲಿಸಿದರು.

ಈ ಸಂದರ್ಭ ಮೈಸೂರು ನಗರ ಬಿಜೆಪಿ ಅಧ್ಯಕ್ಷ ಶ್ರೀವತ್ಸ, ಮುಖಂಡರಾದ ಡಾ. ಅನಿಲ್ ಥಾಮಸ್, ಬಿ.ಪಿ. ಮಂಜುನಾಥ್, ಡಾ. ಬಾನು, ಸ್ವಾಮೀಗೌಡ, ವೇಲು, ಡಾ. ಜಿ. ರೂಪಾ, ಗಿರಿಧರ್, ಉಷಾ ಲೋಲಪ್ಪ, ಕಾರ್ಪೊರೇಟರ್‌ಗಳಾದ ಡಾ. ಅಶ್ವಿನಿ ಶರತ್, ಸಾತ್ವಿಕ್ ಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

3 ನಾಮಪತ್ರಗಳನ್ನು ಸಲ್ಲಿಸಿದ ಸಂದೇಶ್ ಸ್ವಾಮಿ ಅವರು, ಸುದ್ದಿಗಾರರೊಂದಿಗೆ ಮಾತನಾಡಿ, ಎನ್‌ಆರ್ ಕ್ಷೇತ್ರದಲ್ಲಿ ಅಪಾರ ಬಿಜೆಪಿ ಕಾರ್ಯಕರ್ತರ ಬೆಂಬಲ, ಸರ್ಕಾರದ ಜನಪರ ಯೋಜನೆಗಳು, ಜನರ ಆಶೀರ್ವಾದದಿಂದಾಗಿ ಈ ಬಾರಿ ತಮಗೆ ಜಯ ಸಿಗಲಿದೆ. ತಾವು ಮೇಯರ್ ಆಗಿದ್ದಾಗ, ಪಾಲಿಕೆ ಸದಸ್ಯನಾಗಿ ಮಾಡಿದ ಕೆಲಸಗಳು ವರದಾನವಾಗಲಿದೆ ಎಂದರು.

ಕೇಂದ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ, ರಾಜ್ಯದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಅಭಿವೃದ್ಧಿ ಯೋಜನೆಗಳಿಂದಾಗಿ ಜನರು ಈ ಬಾರಿಯೂ ಬಿಜೆಪಿಗೆ ಬೆಂಬಲ ನೀಡಲಿದ್ದು, ನರಸಿಂಹರಾಜ ಕ್ಷೇತ್ರದ ಮತದಾರರು ತಮಗೆ ಆಶೀರ್ವಾದ ಮಾಡಲಿದ್ದಾರೆ ಎಂದು ಅವರು ಇದೇ ಸಂದರ್ಭ ನುಡಿದರು.



ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿ ಮಾಜಿ ಶಾಸಕ ಎ.ಆರ್. ಕೃಷ್ಣಮೂರ್ತಿ ಅವರು ತಮ್ಮ ಬೆಂಬಲಿಗರೊಂದಿಗೆ ನಾಮಪತ್ರ ಸಲ್ಲಿಸಿದರು.



ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದಿಂದ ಜೆಡಿಎಸ್ ಅಭ್ಯರ್ಥಿ ಪುಟ್ಟಸ್ವಾಮಿ ಅವರು ತಮ್ಮ ಬೆಂಬಲಿಗರೊಂದಿಗೆ ತೆರಳಿ ನಾಮಪತ್ರ ಸಲ್ಲಿಸಿದರು.

ಸಿಎಂ ಬೊಮ್ಮಾಯಿ ಸಮ್ಮುಖದಲ್ಲಿ ಸೋಮಣ್ಣ ನಾಮಪತ್ರ ಸಲ್ಲಿಕೆ



ನಂಜನಗೂಡು, ಏ.17– ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸಮ್ಮುಖದಲ್ಲಿ ವರುಣಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಸಚಿವ ವಿ.ಸೋಮಣ್ಣ ಸೋಮವಾರ ನಾಮಪತ್ರ ಸಲ್ಲಿಸಿದರು.

ತಾಲೂಕಿನ ಗೋಳೂರಲ್ಲಿ ನಡೆದ ಕಾರ್ಯಕರ್ತರ ಬೃಹತ್ ಸಮಾವೇಶದ ಬಳಿಕ ಗೋಳೂರು ವೃತ್ತದಿಂದ ತೆರೆದ ವಾಹನದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಛಲವಾದಿ ನಾರಾಯಣಸ್ವಾಮಿ, ಸಂಸದರಾದ ಪ್ರತಾಪ್ ಸಿಂಹ, ವಿ.ಶ್ರೀನಿವಾಸಪ್ರಸಾದ್ ಸೇರಿದಂತೆ ಇನ್ನಿತರ ಮುಖಂಡರ ನೇತೃತ್ವದಲ್ಲಿ ನಗರದ ಚಾಮರಾಜ ಬೈಪಾಸ್ ರಸ್ತೆ ಮೂಲಕ ತಾಪಂವರೆಗೆ ಸಾವಿರಾರು ಕಾರ್ಯಕರ್ತರೊಂದಿಗೆ ಮೆರವಣಿಗೆಯಲ್ಲಿ ಸಾಗಿದ ಸಚಿವ ವಿ.ಸೋಮಣ್ಣ ಚುನಾವಣಾಧಿಕಾರಿ ಗೌರವ್‌ಗೆ 2 ಸೆಟ್ ನಾಮಪತ್ರ ಸಲ್ಲಿಸಿದರು. ನಾಮಪತ್ರ ಸಲ್ಲಿಸುತ್ತಿದ್ದಂತೆ ಹೊರಗೆ ನೆರೆದಿದ್ದ ಬಿಜೆಪಿ ಕಾರ್ಯಕರ್ತರು ಪಟಾಕಿ ಸಿಡಿಸಿ ಹರ್ಷ ವ್ಯಕ್ತಪಡಿಸಿದರು.

ಈ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇಖರ್, ಉಪಾಧ್ಯಕ್ಷ ಪ್ರತಾಪ್, ಜಿಪಂ ಮಾಜಿ ಸದಸ್ಯ ಗುರುಸ್ವಾಮಿ, ವರುಣಾ ಬಿಜೆಪಿ ಅಧ್ಯಕ್ಷ ವಿಜಯಕುಮಾರ್, ಮುಖಂಡರಾದ ಕಾಪು ಸಿದ್ದಲಿಂಗಸ್ವಾಮಿ, ಸಿದ್ದವೀರಪ್ಪ, ಶರತ್‌ಪುಟ್ಟಬುದ್ಧಿ ಸೇರಿದಂತೆ ಇತರರಿದ್ದರು.

ಬೃಹತ್ ಮೆರವಣಿಗೆಯಲ್ಲಿ ಸಾಗಿ ಸೋಮಶೇಖರ್ ನಾಮಪತ್ರ ಸಲ್ಲಿಕೆ

- ದೇವಾಲಯ, ಪ್ರಾರ್ಥನಾ ಮಂದಿರಕ್ಕೆ ಭೇಟಿ
- ವಿವಿಧ ಮಹನೀಯರಿಗೆ ಗೌರವ ಸಮರ್ಪಣೆ



ಮೈಸೂರು,ಏ.17(ಎಂಟಿವೈ)– ಕೆ.ಆರ್.ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ, ಮಾಜಿ ಶಾಸಕ ಎಂ.ಕೆ ಸೋಮಶೇಖರ್ ಅಪಾರ ಬೆಂಬಲಿಗರೊಂದಿಗೆ ಬೃಹತ್ ಮೆರವಣಿಗೆ ಮೂಲಕ ಸಾಗಿ ನಾಮಪತ್ರ ಸಲ್ಲಿಸಿ ಶಕ್ತಿ ಪ್ರದರ್ಶನ ಮಾಡಿದರು.

ಮೈಸೂರಿನ ಕೆ.ಆರ್.ವಿಧಾನಸಭಾ ಕ್ಷೇತ್ರದ ವಿದ್ಯಾರಣ್ಯಪುರಂನಲ್ಲಿನ ಚಾಮುಂಡಿವನದಲ್ಲಿರುವ ಶ್ರೀ ಚಾಮುಂಡೇಶ್ವರಿ ದೇವಾಲಯಕ್ಕೆ ಪೂಜೆ ಸಲ್ಲಿಸಿ ಭೂತಾಳೆ ಮೈದಾನಕ್ಕೆ ಆಗಮಿಸಿದರು. ಬಳಿಕ ವಿವಿಧ ಜಾನಪದ ಕಲಾತಂಡಗಳು ಹಾಗೂ ಅಪಾರ ಬೆಂಬಲಿಗರೊಂದಿಗೆ ಮೆರವಣಿಗೆ ಆರಂಭಿಸಿ, ಚಾಮುಂಡಿಪುರಂ, ಮೇದರಕೇರಿ, ಬಂಡಿಕೇರಿ, ನಂಜುಮಳಿಗೆ, ಗಾಡಿಚೌಕ, ಅಗ್ರಹಾರ, ಪಾಠಶಾಲೆ ವೃತ್ತದ ಮೂಲಕ ಪಾಲಿಕೆ ಕಚೇರಿಗೆ ತೆರಳಿ ಚುನಾವಣಾಧಿಕಾರಿಗಳಿಗೆ ನಾಮಪತ್ರ ಸಲ್ಲಿಸಿದರು.

ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಕಾಂಗ್ರೆಸ್ ಮುಖಂಡರಾದ ಗಣೇಶ್ ಪ್ರಸಾದ್, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ವಕೀಲ ವಾಮನ್ ಈ ಸಂದರ್ಭದಲ್ಲಿ ಜತೆಗಿದ್ದರು.

ದೈವದ ಮೊರೆ: ಕಾಂಗ್ರೆಸ್ ಅಭ್ಯರ್ಥಿ, ಮಾಜಿ ಶಾಸಕ ನಾಮಪತ್ರ ಸಲ್ಲಿಕೆ ಮುನ್ನ ದೈವದ ಮೊರೆ ಹೋದರು. ಚಾಮುಂಡಿವನದ ಚಾಮುಂಡೇಶ್ವರಿ ದೇವಾಲಯ, ರಾಮಲಿಂಗೇಶ್ವರ ದೇವಾಲಯ, ಅಗ್ರಹಾರದ ನೂರೊಂದು ಗಣಪತಿ ದೇವಾಲಯಕ್ಕೆ ತೆರಳಿ ಪೂಜೆ ಸಲ್ಲಿಸಿದರು. ಅಲ್ಲದೇ, ಗಾಡಿಚೌಕದ ದರ್ಗಾಕ್ಕೆ ಭೇಟಿ ನೀಡಿ ಪ್ರಾರ್ಥಿಸಿದರು. ಚುನಾವಣೆಯಲ್ಲಿ ಗೆಲುವು ಸಾಧಿಸಲೆಂದು ವಿಶೇಷ ಪೂಜೆ ಸಲ್ಲಿಸಿದರು.

ಮಹನೀಯರಿಗೆ ಗೌರವ: ನಾಮಪತ್ರ ಸಲ್ಲಿಸಲು ಮೆರವಣಿಗೆ ನಡೆಸುವ ವೇಳೆ ಎಂ.ಕೆ.ಸೋಮಶೇಖರ್ ಅಶೋಕಪುರಂನಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ, ವಿವೇಕಾನಂದನಗರದಲ್ಲಿರುವ ಸ್ವಾಮಿ ವಿವೇಕಾನಂದ ಪ್ರತಿಮೆ, ಸುಣ್ಣದಕೇರಿಯ ಮಹದೇಶ್ವರ ಸ್ವಾಮಿ ದೇವಸ್ಥಾನದಲ್ಲಿರುವ ಮಹರ್ಷಿ ವಾಲ್ಮೀಕಿ ಪುತ್ಥಳಿಗೆ ಹಾಗೂ ಜೆಎಸ್‌ಎಸ್ ವಿದ್ಯಾಪೀಠದ ಮುಂಭಾಗವಿರುವ ಬಸವಣ್ಣ ಪ್ರತಿಮೆ, ರಾಷ್ಟ್ರಕವಿ ಕುವೆಂಪು ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸಮರ್ಪಿಸಿದರು.

ಗಮನ ಸೆಳೆದ ಮೆರವಣಿಗೆ: ನಾಮಪತ್ರ ಸಲ್ಲಿಸಲು ಆಯೋಜಿಸಿದ್ದ ಮೆರವಣಿಗೆಯಲ್ಲಿ ವಿವಿಧ ಜಾನಪದ ಕಲಾತಂಡಗಳು ಪಾಲ್ಗೊಂಡು ಮೆರವಣಿಗೆಗೆ ಮೆರಗು ನೀಡಿದವು. ಕಂಸಾಳೆ, ಪೂಜಾ ಕುಣಿತ, ನಗಾರಿ, ಡೊಳ್ಳು ಕುಣಿತದ ತಂಡಗಳು ಪಾಲ್ಗೊಂಡು ಗಮನ ಸೆಳೆಯಿತು.

ಮೆರವಣಿಗೆಯಲ್ಲಿ ವಿಧಾನ ಪರಿಷತ್ ಸದಸ್ಯ ಡಾ.ತಿಮ್ಮಯ್ಯ, ಗುಂಡ್ಲುಪೇಟೆ ಕಾಂಗ್ರೆಸ್ ಅಭ್ಯರ್ಥಿ ಗಣೇಶ್ ಪ್ರಸಾದ್, ಮಾಜಿ ಮೇಯರ್‌ಗಳಾದ ನಾರಾಯಣ್, ಪುರುಷೋತ್ತಮ್, ಪುಷ್ಪಲತಾ ಟಿ.ಬಿ.ಚಿಕ್ಕಣ್ಣ, ಪುಷ್ಪಲತಾ ಜಗನ್ನಾಥ್, ಕೆಪಿಸಿಸಿ ಸದಸ್ಯ ಟಿ.ಎಸ್.ರವಿಶಂಕರ್, ಪಾಲಿಕೆ ಸದಸ್ಯರಾದ ಶೋಭಾ ಸುನೀಲ್, ಕೆ.ಜಿ.ಕೊಪ್ಪಲು ಶಿವಕುಮಾರ್, ಜೆ.ಗೋಪಿ, ಲೋಕೇಶ್ ಪಿಯಾ, ಕೆಪಿಸಿಸಿ ವಕ್ತಾರ ಶ್ರೀನಿವಾಸ್, ಪ್ರಚಾರ ಸಮಿತಿ ಕಾರ್ಯಾಧ್ಯಕ್ಷ ಪ್ರತಿಧ್ವನಿ ಪ್ರಸಾದ್, ಅಧ್ಯಕ್ಷರಾದ ಯೋಗೇಶ್, ಶ್ರೀನಾಥ್ ಬಾಬು, ಮಾಜಿ ಪಾಲಿಕೆ ಸದಸ್ಯರಾದ ಎಂ.ಸುನೀಲ್, ಪ್ರಭುಮೂರ್ತಿ, ಜಾಕೀರ್ ಪಾಷಾ, ಕುಮಾರ್ ಗೌಡ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಜಿ.ಸೋಮಶೇಖರ್, ಶ್ರೀಧರ್, ಕಾಂಗ್ರೆಸ್ ಮುಖಂಡರಾದ ಶೇಖರ್, ಹರೀಶ್, ರವಿಶಂಕರ್, ವಿಜಯ್ ಕುಮಾರ್, ದಿಲೀಪ್ ಮತ್ತಿತರರು ಪಾಲ್ಗೊಂಡಿದ್ದರು.

ನಕ್ಕರೆ ಅದೇ ಸ್ವರ್ಗ

ದಂತ ವೈದ್ಯ : (ಹಲ್ಲು ಕೀಳಲು) ಆಂ... ಮಾಡು, ಇನ್ನೂ ಅಗಲ ಮಾಡು, ಇನ್ನೂ ತೆರೆ

ರೋಗಿ : ಏನ್ ಡಾಕ್ಟ್ರೆ, ಬಾಯೊಳಗೇ ಹೋಗಿ ಕೂತ್ಕೊಂಡ್ ಹಲ್ಲು ಕೀಳ್ತೀರಾ ಹೇಗೆ

ಮೈಸೂರು ಮಿತ್ರ

ಮಂಗಳವಾರ, 18 ಏಪ್ರಿಲ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಜೀವನದಲ್ಲಿ ಎರಡು ರೀತಿಯ ದುರಂತಗಳಿವೆ, ಒಂದು ನಮ್ಮ ಆಸೆ ಕೈಗೂಡುವುದು. ಎರಡು ನಮ್ಮ ಆಸೆಗಳು ಕೈಗೂಡದಿರುವುದು.

–ಜಾರ್ಜ್ ಬರ್ನಾಡ್ ಷಾ

ವೇದ ಸುಳ್ಳಾದರೂ { ಭಾವಾರ್ಥ ಕೇಳಿ
ಗಾದೆ ಸುಳ್ಳಾಗದು { ಮೂಲಾರ್ಥ ಮರೆತ

ನಿಮ್ಮ ಪತ್ರಗಳು

ಅಂಬೇಡ್ಕರ್ ಆದರ್ಶ ಗುಣಗಳನ್ನು ಅಳವಡಿಸಿಕೊಳ್ಳೋಣ

ಮಾನ್ಯರೆ,

ಬಾಲ್ಯದಲ್ಲಿ ಹೆಜ್ಜೆ ಹೆಜ್ಜೆಗೂ ಕೀಳು ಕುಲಕ್ಕೆ ಸೇರಿದವನು ಎಂಬ ಅವಮಾನಕ್ಕೆ ಗುರಿಯಾದವರು. ದಿನನಿತ್ಯ ಸಂಕಷ್ಟದ ಅವಮಾನಗಳನ್ನು ಸಹಿಸಿದವರು. ಒಂದು ದಿನ ಇಡಿ ಭಾರತವೇ ಗೌರವಿಸುವಂತಹ ಸಂವಿಧಾನವನ್ನು ರಚಿಸಿ ಕೊಟ್ಟ ಮಹಾನಾಯಕ ಡಾ. ಬಿ.ಆರ್. ಅಂಬೇಡ್ಕರ್.

ಕತ್ತಲಲ್ಲಿ ಮುಳುಗಿದ್ದ ಜನರಿಗೆ ಬೆಳಕಾಗಿ ಬಂದ ಸೂರ್ಯ. ದಲಿತರ, ಮಹಿಳೆಯರ ಪರ ಸಮಾನತೆ, ಸಾಮಾಜಿಕ ನ್ಯಾಯದ ಜಾಗೃತಿ ಮೂಡಿಸಿದವರು. ಸಾಮಾಜಿಕ ಅನಿಷ್ಟ ಪದ್ಧತಿ ವಿರುದ್ಧ ಹೋರಾಡಿದ ಮಹಾಚೇತನ ಹುಟ್ಟಿದ್ದು ಮಧ್ಯ ಪ್ರದೇಶದ ಮಿಲಿಟರಿ ಕ್ಯಾಂಪಿನಲ್ಲಿ ತಂದೆ ರಾಮ್‌ಜೀ ಸಕ್ಪಾಲ್, ತಾಯಿ ಭೀಮಬಾಯಿಯ ಸುಪುತ್ರನಾಗಿ ಏಪ್ರಿಲ್ 14,1891ರಲ್ಲಿ. ಭೀಮ್ ರಾವ್ ರಾಮ್ ಜೀ ತಮ್ಮ ಜೀವನದುದ್ದಕ್ಕೂ ತುಳಿತಕ್ಕೊಳಗಾದವರಿಗೆ ಬದುಕನ್ನು ಮೀಸಲಿಟ್ಟವರು.

ಪ್ರಾಥಮಿಕ ಶಿಕ್ಷಣವನ್ನು ಸತಾರಲ್ಲಿ ಪಡೆದು ಮುಂಬೈನ ಪ್ರೌಢಶಾಲೆಗೆ ಸೇರಿ 1907ರಲ್ಲಿ ಮೆಟ್ರಿಕ್ ಹಂತದಲ್ಲಿ ಪ್ರಥಮ ಶ್ರೇಣಿಯಲ್ಲಿ ತೇರ್ಗಡೆಯಾದರು. ವಿವಿಧ ದೇಶಗಳಲ್ಲಿ ಉನ್ನತ ವ್ಯಾಸಂಗ ಮತ್ತು ಪದವಿಗಳನ್ನು ಪಡೆದು ಕೊಲಂಬಿಯಾ ವಿಶ್ವವಿದ್ಯಾಲಯದಲ್ಲಿ ಡಾಕ್ಟರೇಟ್‌ನ್ನು ಪಡೆದರು. ಭಾರತದ ಮನುಕುಲದ ಜನರ ಬದುಕಿಗಾಗಿ ಮತದಾನದ ಹಕ್ಕನ್ನು ಕೊಟ್ಟ ಮಹಾ ಮಾನವತಾವಾದಿ, ಹಿಂದಿನ ಕಾಲದಲ್ಲಿ ಜಮೀನ್ದಾರರಿಗೆ, ತೆರಿಗೆ ಪಾವತಿಸುವವರಿಗೆ ವಿದ್ಯಾವಂತರಿಗೆ ಮಾತ್ರ ಮತದಾನ ಮಾಡಲು ಅವಕಾಶ ಮಾತ್ರವಿತ್ತು. ಆದರೆ ಅಂಬೇಡ್ಕರ್ ಇದನ್ನು ತಪ್ಪಿಸಿ ಜನಸಾಮಾನ್ಯರಿಗೂ ಮತದಾನದ ಹಕ್ಕು ಕೊಡಿಸಿದರು.

ಮಹಾತ್ಮರ ಮತ್ತು ಮಹಾನಾಯಕರ, ದಾರ್ಶನಿಕರ ಜಯಂತಿಗಳು ಅವರ ಆದರ್ಶಗಳ ಹಾಗೂ ಚಿಂತನೆಗಳ ವಿಚಾರಗಳನ್ನು ಅಳವಡಿಸಿಕೊಂಡು ಮತ್ತಷ್ಟು ವಿಸ್ತರಿಸಿಗೊಳಿಸಿಕೊಳ್ಳುವ ಮೂಲಕ ಅವರ ಜನ್ಮ ದಿನವನ್ನು ಆಚರಿಸುವಂತಾಗಲಿ.

–ಪಿ.ಸಿ.ಕಂಗಾಣಿಸೋಮು, ಕ್ಯಾತಮಾರನಹಳ್ಳಿ, ಮೈಸೂರು.

ಕಾಲೇಜುಗಳಲ್ಲಿ ಓಟರ್ ಐಡಿ ನೀಡಲಿ

ಮಾನ್ಯರೆ,

ಮೊದಲ ಬಾರಿ ಓಟ್ ಮಾಡುವವರು ಉತ್ಸಾಹದಿಂದ ಇರುತ್ತಾರೆ. ಮಾಹಿತಿ ಕೊರತೆಯಿಂದ ವಂಚಿತರಾಗುತ್ತಾರೆ. ಮನೆ ಬದಲಾವಣೆ, ವಿದ್ಯಾಭ್ಯಾಸಕ್ಕಾಗಿ ಬೇರೆ ಊರಿನಲ್ಲಿ ವಾಸಿಸುತ್ತಿರುತ್ತಾರೆ. ಇಂತಹ ಮತದಾರರಿಗೆ ಅನ್ಯಾಯವಾಗದ ಹಾಗೆ ಎಲ್ಲಾ ಕಾಲೇಜುಗಳಲ್ಲಿ ಮತದಾರರ ವೋಟರ್ ಐಡಿ ನೀಡಿ ಮತದಾನ ಮಾಡುವ ಅವಕಾಶ ಮಾಡಿಕೊಡಿ. ಇದರಿಂದ ಯಾವುದೇ ವಿದ್ಯಾರ್ಥಿ ಮತದಾನದಿಂದ ವಂಚಿತಾಗುವುದಿಲ್ಲ. ಮತದಾರರ ಅಲೆದಾಟವು ತಪ್ಪುತ್ತದೆ. ಆ ವೋಟರ್ ಐಡಿಯು ನ್ಯಾಯಯುಕ್ತವಾಗಿರುತ್ತದೆ. ವಿದ್ಯಾವಂತ ವಿದ್ಯಾರ್ಥಿಗಳು ವಿಮರ್ಶೆ ಮಾಡಿ ಅರ್ಹ ಅಭ್ಯರ್ಥಿಯನ್ನು ಆಯ್ಕೆ ಮಾಡಬಹುದು. ಪ್ರತಿಯೊಬ್ಬ ವಿದ್ಯಾರ್ಥಿಯು ತನ್ನ ಹಕ್ಕು ಚಲಾಯಿಸಲು ಅವಕಾಶ ನೀಡಿದಂತಾಗುತ್ತದೆ ಹಲವಾರು ಕಾರಣದಿಂದ ಮತದಾನ ಮಾಡುವ ದಿನಾಂಕದಂದು ಪರ ಊರಿಗೆ ಹೊರಟಿದ್ದರೆ ಅಂತವರಿಗಾಗಿ ಆನ್‌ಲೈನ್ ಮತದಾನದ ವ್ಯವಸ್ಥೆಯನ್ನು ಮಾಡಲಿ.

–ಎಂ. ಎಸ್. ಉಷಾ ಪ್ರಕಾಶ್, ಮೈಸೂರು

ರಾಜಕಾರಣಿ ಹಂಚಿದ್ದ ಕುಕ್ಕರ್ ಸ್ಫೋಟ

ಮಾನ್ಯರೆ,

ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರದ "ಆಗಲಿ" ಗ್ರಾಮದ ಆಟೋ ರಿಕ್ಷಾ ಚಾಲಕರೊಬ್ಬರ ಮನೆಯಲ್ಲಿ ರಾಜಕಾರಣಿಯೊಬ್ಬರು ಪುಕ್ಕಟೆ ನೀಡಿದ್ದ "ಕುಕ್ಕರ್" ಸ್ಫೋಟಗೊಂಡಿದೆ. ಆದರೆ ಅವರ ಪುಣ್ಯಕ್ಕೆ ಯಾವುದೇ ಅನಾಹುತ ಸಂಭವಿಸಿಲ್ಲ. ಮತದಾರರಿಗೆ ಮತ ಹಾಕಲು ಸಾಮಾನ್ಯವಾಗಿ, ರಾಜಕಾರಣಿಗಳು ಇಂತಹ ಕಳಪೆ ವಸ್ತುಗಳನ್ನೇ ನೀಡುತ್ತಾರೆ. ಒಂದು ವೇಳೆ ಅನಾಹುತವಾಗಿ ಸಾವು–ನೋವುಗಳು ಸಂಭವಿಸಿದ್ದರೆ ಇದನ್ನು ನೀಡಿದ ರಾಜಕಾರಣಿಗಳ ವಿರುದ್ಧವೇ ಪೊಲೀಸರು ದೂರು ದಾಖಲಿಸಬೇಕಾಗಿತ್ತು. ನಮ್ಮ ಜನರು ಯಾವುದೇ ಕಾರಣಕ್ಕೂ ರಾಜಕಾರಣಿಗಳು ನೀಡುವ ಸೀರೆ, ಕುಕ್ಕರ್‌ಗಳನ್ನು ತೆಗೆದುಕೊಳ್ಳಬಾರದು. ಇದು ಪ್ರಜಾಪ್ರಭುತ್ವಕ್ಕೆ ಅಪಚಾರ ಮಾಡಿದಂತೆ. ಪುಕ್ಕಟೆ ಸಿಗುವುದು ಯಾವಾಗಲೂ ಕಳಪೆಯಾಗಿರುತ್ತದೆ.

–ಬೂಕನಕೆರೆ ವಿಜೇಂದ್ರ, ಕುವೆಂಪು ನಗರ, ಮೈಸೂರು

ಮಹಾರಾಜರುಗಳ ನಾಮಫಲಕ ಅಳವಡಿಸಿ

ಮಾನ್ಯರೆ,

ಸ್ವಾತಂತ್ರ್ಯ ಪೂರ್ವದಿಂದಲೂ ಇಡೀ ಭಾರತಕ್ಕೆ ಮಾದರಿ ರಾಜ್ಯಾಡಳಿತ ನೀಡಿದ ಕೀರ್ತಿ ಮೈಸೂರು ರಾಜ ಮನೆತನಕ್ಕೆ ಸಲ್ಲುತ್ತದೆ. ಇಂತಹ ಮಹಾರಾಜರುಗಳ ಸ್ಮರಣೆಗಾಗಿ ಮೂರ್ತಿಗಳ ಸಮೇತ ಮೈಸೂರು ಅರಮನೆಯ ಉತ್ತರ ಭಾಗದ ರಸ್ತೆಯಲ್ಲಿಯೇ ಮೂರು ವೃತ್ತಗಳನ್ನು ನಿರ್ಮಿಸಲಾಗಿದೆ. ಆದರೆ ದುರಂತವೆಂದರೆ ಯಾವುದೇ ವೃತ್ತದಲ್ಲಿಯೂ ಆ ಮಹಾನುಭಾವರುಗಳ ಪರಿಚಯಿಸುವ ನಾಮಫಲಕಗಳು ಇಲ್ಲ. ಹೊರಗಿನಿಂದ ಬರುವ ಪ್ರವಾಸಿಗರಿಗೆ, ಇತಿಹಾಸ ತಿಳಿಯದ ಸ್ಥಳೀಯರಿಗೆ ತಕ್ಷಣ ಕಾಣುವಂತೆ ವೃತ್ತದ ನಾಲ್ಕು ಕಡೆಗಳಲ್ಲೂ ನಾಮಫಲಕ ಅಳವಡಿಸುವ ಕಾರ್ಯ ತುರ್ತಾಗಿ ಆಗಬೇಕಿದೆ. ನಗರದ ರಸ್ತೆ, ನಾಮಫಲಕಗಳನ್ನು ನಿರ್ವಹಿಸುವ ಜವಾಬ್ದಾರಿ ಹೊಂದಿರುವ ಮೈಸೂರು ಮಹಾನಗರ ಪಾಲಿಕೆಯು ತುರ್ತಾಗಿ ಈ ಕೆಲಸ ಮಾಡಬೇಕು.


–ಎಸ್.ರವಿ, ವಕೀಲ, ಮೈಸೂರು.

ರಸಮಂಜರಿಯೋ, ಸಾರ್ವಜನಿಕ ಸಭೆಯೋ!

ಮಾನ್ಯರೆ,

ಡಾ.ರಾಜ್‌ಕುಮಾರ್ ಮ್ಯೂಸಿಕಲ್ ಗ್ರೂಪ್ ವತಿಯಿಂದ ಇತ್ತೀಚೆಗೆ ಗಾಯಕ ಜಯರಾಂ ನೇತೃತ್ವದಲ್ಲಿ 50ರ ಸುವರ್ಣ ಸಂಭ್ರಮ ಕಾರ್ಯಕ್ರಮವನ್ನು ಮೈಸೂರಿನ ಜಗನ್ಮೋಹನ ಅರಮನೆಯಲ್ಲಿ ಆಯೋಜಿಸಲಾಗಿತ್ತು. ಭಾನುವಾರವಾದ್ದರಿಂದ ಸಭಾಂಗಣ ಕಿಕ್ಕಿರಿದು ತುಂಬಿತ್ತು. ವರನಟ ಡಾ.ರಾಜ್‌ಕುಮಾರ್ ಹಾಡುಗಳನ್ನು ಕೇಳಲು ಅಭಿಮಾನಿಗಳು ಕಾತರರಾಗಿದ್ದರು. ಆದರೆ ಅನೇಕರಿಗೆ ಅಂದು ನಿರಾಸೆಯಂತೂ ಆಯಿತು. ಕಾರಣ ಮೊದಲು ಐದಾರು ಗೀತೆಗಳನ್ನು ಪ್ರಸ್ತುತಪಡಿಸಿ, ನಂತರ ಕೇವಲ ಹತ್ತು ನಿಮಿಷದಲ್ಲಿ ವೇದಿಕೆಯ ಕಾರ್ಯಕ್ರಮ ಮುಗಿಸುತ್ತೇವೆ ಎಂದು ಆಯೋಜಕರು ಹೇಳಿದರು. ಆದರೆ ವೇದಿಕೆ ಕಾರ್ಯಕ್ರಮ ಒಂದು ಗಂಟೆಗೂ ಅಧಿಕ ಕಾಲ ನಡೆದು ಅಭಿಮಾನಿಗಳಿಗೆ ನಿರಾಸೆಯಾಗಿ ಹೊರ ನಡೆದರು. ಇಲ್ಲಿ ರಸಮಂಜರಿ ಎಂದರೆ ಹಾಡುಗಳಿಗೆ ಪ್ರಾಮುಖ್ಯತೆ ಕೊಡಬೇಕೇ ಹೊರತು ಭಾಷಣಕ್ಕಲ್ಲ. ಅಧ್ಯಕ್ಷರ ಭಾಷಣ ಮುಕ್ಕಾಲು ಗಂಟೆ, ಮುಖ್ಯ ಅತಿಥಿಗಳ ಪ್ರಾಸ್ತಾವಿಕ ನುಡಿ ಅರ್ಧ ಗಂಟೆ ಹೀಗೆ ಭಾಷಣ ಮಾಡುತ್ತಾ ಹೋದರೆ ರಸಮಂಜರಿ ಎಂಬ ಪದಕ್ಕೆ ಅರ್ಥವೇ ಬರುವುದಿಲ್ಲ. ಇನ್ನು ಮುಂದಾದರೂ ವೇದಿಕೆ ಕಾರ್ಯಕ್ರಮವನ್ನು ಆದಷ್ಟು ಮೊಟಕುಗೊಳಿಸಿ ರಸಮಂಜರಿಯತ್ತ ಹೆಚ್ಚು ಗಮನಹರಿಸಿ.

–ಜಿ.ಪಿ.ಹರೀಶ್, ವಿ.ವಿ.ಮೊಹಲ್ಲಾ, ಮೈಸೂರು.



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ : 94482 08746 / 97421 79000

ಚಿಂತನೆ

ಸ್ವಯಂಕೃತ ಅಪರಾಧಕ್ಕೆ ದೂಷಣೆ ಸಲ್ಲದು...

ಕಳೆದ ವಾರ ಪ್ರಕಟವಾದ ಹಲವು ಸುದ್ದಿಗಳಲ್ಲಿ ಕೆಲವು ಆತಂಕಕಾರಿ ಎನಿಸಿದರೆ ಕೆಲವು ಸಮಾಧಾನ ನೀಡು ವಂತಹುದೂ ಆಗಿತ್ತು. ಇದರಲ್ಲಿ ಮುಖ್ಯವಾಗಿ ನಮ್ಮ ಪರಿಸರಕ್ಕೆ ಸಂಬಂಧಿಸಿದ ಸುದ್ದಿಗಳು ಯಾವಾಗಲೂ ನಮ್ಮ ಗಮನ ಸೆಳೆಯುತ್ತವೆ. ಇಂತಹ ಆತಂಕಕಾರಿ ಸುದ್ದಿಯಲ್ಲಿ ನಮ್ಮ ದೇಶದಲ್ಲಿ ಕಾಡುಗಳ ವಿಸ್ತೀರ್ಣದ ಸಂಖ್ಯೆ ಕಡಿಮೆಯಾಗುತ್ತಿದೆ ಎಂಬ ಸುದ್ದಿ ಕಳವಳವನ್ನು ಉಂಟುಮಾಡುವಂತಹುದು. ಕಾಡುಗಳನ್ನು ಉಳಿಸಿ ಬೆಳೆಸಬೇಕು ಎಂಬುದು ಕೇವಲ ಬಾಯಿ ಮಾತಿಗೆ, ಭಾಷಣಕ್ಕೆ ಸೀಮಿತವಾದಂತಿದೆ. ಆದರೆ ವಾಸ್ತವಾಂಶ ಅದಕ್ಕಿಂತ ಭಿನ್ನವಾಗಿರುವುದು ಕಂಡುಬರುತ್ತದೆ. ಇಂದು ನಮ್ಮ ಊರಿನಲ್ಲಿ, ನಮ್ಮ ರಾಜ್ಯದಲ್ಲಿ ಉತ್ತಮವಾದ ಕಾಡು ಇದ್ದರೆ ನಮ್ಮ ರಾಜ್ಯಕ್ಕೆ, ನಮ್ಮೂರಿಗೆ ಒಳಿತಾಗುತ್ತದೆ ಎಂದು ಭಾವಿಸಲು ಸಾಧ್ಯವಾಗುವುದಿಲ್ಲ. ಬೇರೆ ಊರಿನಲ್ಲಿ, ಬೇರೆ ರಾಜ್ಯದಲ್ಲಿ ಕಾಡು ನಾಶವಾದರೆ ಅದರ ಪರಿಣಾಮ ನಮ್ಮೂರಿನ ಮೇಲೂ ಆಗುತ್ತದೆ. ಇದು ಇತ್ತೀಚೆಗೆ ನಮ್ಮ ಗಮನಕ್ಕೆ ಬರುತ್ತಿದೆ. ವರ್ಷದಿಂದ ವರ್ಷಕ್ಕೆ ಭೂಮಿಯ ತಾಪಮಾನ ಹೆಚ್ಚಾಗುತ್ತಲೇ ಇದೆ. ಕಳೆದ ಒಂದೆರಡು ದಶಕಗಳಿಗೆ ಹೋಲಿಸಿದರೆ ನಮ್ಮೂರಿನ ತಾಪಮಾನ ಹೆಚ್ಚಾಗಿರುವುದು ನಮ್ಮ ಗಮನಕ್ಕೆ ಬರುತ್ತದೆ. ಈಗ ಕಡು ಬೇಸಿಗೆಯ ಸಮಯ. ಬಿಸಿಲಿಂದ ಬಳಲುವ ಹಿರಿಯರು ಹೇಳು ಮಾತೆಂದರೆ 'ಹಿಂದೆ ಹೀಗಿರಲಿಲ್ಲ, ಇಷ್ಟು ಬಿಸಿಲಿನ ಝಳವನ್ನು ನಾವು ಕಂಡಿರಲೇ ಇಲ್ಲ' ಎಂದು. ಇದು ಯುವ ಪೀಳಿಗೆಯ ಗಮನಕ್ಕೂ ಬಂದಿದೆ. ಕಳೆದ ವರ್ಷಕ್ಕಿಂತ ಈ ವರ್ಷ ಸೆಖೆ ಜಾಸ್ತಿ ಎಂಬುದನ್ನು ಎಲ್ಲರೂ ಹೇಳುತ್ತಾರೆ. ಹಾಗೆ ನೋಡಿದರೆ ನಮ್ಮೂರಿನ ಸುತ್ತಲೂ ಪ್ರಕೃತಿಯಲ್ಲಿ ಅಂತಹ ಬದಲಾವಣೆ ಏನೂ ಆಗಿಲ್ಲ. ಆದರೂ ನಮ್ಮೂರಿನಲ್ಲಿ ಸೆಖೆ ಯಾಕೆ ಜಾಸ್ತಿಯಾಗುತ್ತಿದೆ? ಎಂಬ ಪ್ರಶ್ನೆ ಮೂಡುತ್ತದೆ. ಇದಕ್ಕೆ ಉತ್ತರ ನಮ್ಮೂರಿನ ಹವಾಮಾನ ನಿರ್ಧರಿಸುವುದು ನಮ್ಮೂರು ಮಾತ್ರವೇ ಅಲ್ಲ. ಇತರೆಡೆಗಳ ಪರಿಣಾಮ ನಮ್ಮೂರಿನ ಮೇಲೂ ಆಗುತ್ತಿದೆ ಎಂಬುದನ್ನು ನಾವು ಕಂಡುಕೊಳ್ಳಬೇಕಾಗಿದೆ.

ನಮಗೆಲ್ಲರಿಗೂ ಪ್ರಕೃತಿಯ ಸಮತೋಲನ ಕಾಪಾಡುವುದು ನಮ್ಮ ಗಿಡಮರಗಳು, ನಮ್ಮ ಕಾಡುಗಳು ಎಂಬುದು ತಿಳಿದಿದೆ. ಈಗ ಕಾಡುಗಳ ನಾಶ ನಿರಂತರವಾಗಿ ನಡೆಯುತ್ತಿದೆ. ಅದಕ್ಕೆ ಕಾರಣಗಳು ಹಲವು. ಒಂದು ದುರಾಸೆಯ ಕಾರಣವಾದರೆ, ಮತ್ತೊಂದು ಕಚ್ಚಾವಸ್ತುವಿಗಾಗಿ ಕಾಡಿನ ನಾಶ. ಇದಲ್ಲದೆ ಅಭಿವೃದ್ಧಿ ಹೆಸರಿನಲ್ಲಿ ಮತ್ತಷ್ಟು ಕಾಡುಗಳ ನಾಶವಾಗುತ್ತಿದೆ. ಕಳೆದ ವಾರ ಪ್ರಕಟವಾದ ಒಂದು ವರದಿಯಲ್ಲಿ ಕೇಂದ್ರ ಪರಿಸರ ಖಾತೆ ಸಹಾಯಕ ಸಚಿವರು ರಾಜ್ಯಸಭೆಯಲ್ಲಿನ ಒಂದು ಪ್ರಶ್ನೆಗೆ ಉತ್ತರ ನೀಡುತ್ತಾ, 'ಕಳೆದ ಐದು ವರ್ಷಗಳಲ್ಲಿ ದೇಶದಲ್ಲಿ ಅರಣ್ಯೇತರ ಉದ್ದೇಶಗಳಿಗೆ 88,903 ಹೆಕ್ಟೇರ್ ಅರಣ್ಯ ಭೂಮಿ ಅರಣ್ಯೇತರ ಉದ್ದೇಶಗಳಿಗೆ ಬಳಕೆಯಾಗಿದೆ ಎಂದು ತಿಳಿಸಿದ್ದಾರೆ. ಇದು ಅಧಿಕೃತ ವರದಿ. ಅಂಕಿಯಿಂದ ಇದೆಷ್ಟು ಪ್ರದೇಶ ಎಂದು ಗೊತ್ತಾಗದಿದ್ದರೆ, ಈ ಪ್ರದೇಶ ಮುಂಬಯಿ ಹಾಗೂ ಕೊಲ್ಕೊತಾ ನಗರಗಳ ವಿಸ್ತೀರ್ಣದಷ್ಟು ಎಂದಾಗ ಅರಿವಾಗುತ್ತದೆ. ಹೀಗೆ ಹೇಳಿದಾಗ ನಮಗೆ ವಿಸ್ತೀರ್ಣದ ಕಲ್ಪನೆ ಮೂಡುತ್ತದೆ. ಅಷ್ಟು ಅರಣ್ಯ ಪ್ರದೇಶ ಕಡಿಮೆಯಾಗಿದೆ.

ಹೀಗೆ ಅರಣ್ಯದ ಬಳಕೆಯಲ್ಲಿ 19,424 ಹೆಕ್ಟೇರ್ ಅರಣ್ಯ ಪ್ರದೇಶವನ್ನು ರಸ್ತೆಗಳ ನಿರ್ಮಾಣಕ್ಕಾಗಿ ಬಳಸಲಾಗಿದೆ ಎಂದು ಕೇಂದ್ರ ಮಂತ್ರಿಗಳು ಹೇಳಿದ್ದಾರೆ. ಉಳಿದಂತೆ 18,847 ಹೆಕ್ಟೇರ್ ಅರಣ್ಯ ಭೂಮಿ ಗಣಿಗಾರಿಕೆಗೆ ಹಾಗೂ 13,344 ಹೆಕ್ಟೇರ್ ಅರಣ್ಯವನ್ನು ನೀರಾವರಿ ಯೋಜನೆಗಳಿಗೆ ಬಳಸಲಾಗಿದೆ. ಇದಲ್ಲದೆ ವಿದ್ಯುತ್ ಪ್ರಸರಣದ ಲೈನಿಗಾಗಿ, ರಕ್ಷಣಾ ಯೋಜನೆಗಳಿಗಾಗಿ, ರೈಲ್ವೆ ಯೋಜನೆಗಾಗಿ ವಶಪಡಿಸಿಕೊಳ್ಳಲಾಗಿದೆ. ಇದೆಲ್ಲವನ್ನೂ ಅಭಿವೃದ್ಧಿ ಹೆಸರಿನಲ್ಲಿ ಸಮರ್ಥನೆ ಮಾಡಿಕೊಳ್ಳಲಾಗುತ್ತದೆ. ರಸ್ತೆ, ವಿದ್ಯುತ್, ರೈಲ್ವೆ, ಗಣಿಗಾರಿಕೆ ಇವೆಲ್ಲಾ ಅನಿವಾರ್ಯ, ಆದ್ದರಿಂದ ಇದಕ್ಕೆ ಅರಣ್ಯ ಭೂಮಿ ಉಪಯೋಗಿಸಲಾಗಿದೆ ಎಂಬ ಸಮರ್ಥನೆ ನೀಡಲಾಗಿದೆ. ಇದು ಕಳೆದ ಐದು ವರ್ಷದ ವರದಿ. ಅದಕ್ಕೆ ಹಿಂದಿನದ್ದು ಕೇಳಿದರೆ ದಿಗ್ಭ್ರಾಂತಿಯಾಗುತ್ತದೆ. ಈ ಅಭಿವೃದ್ಧಿ ಹೆಸರಿನಲ್ಲಿ ಅರಣ್ಯ ನಾಶವನ್ನು ಸಮರ್ಥಿಸಿಕೊಳ್ಳುತ್ತಿರುವುದನ್ನು ಕಂಡಾಗ, ಹಾಗಾದರೆ ಈ ಅವಧಿಯಲ್ಲಿ ಎಷ್ಟು ಅರಣ್ಯ ಬೆಳೆಸಲು ಕ್ರಮ ವಹಿಸಿದ್ದೀರಿ? ಎಂದು ಕೇಳಬೇಕಾಗುತ್ತದೆ. ಇದಕ್ಕೆ ನಿಖರವಾದ ಉತ್ತರ ನಿರೀಕ್ಷಿಸಲೂ ಸಾಧ್ಯವಿಲ್ಲ. ನಮ್ಮ ದೇಶದಲ್ಲಿ ಎಲ್ಲ ರಾಜ್ಯಗಳಲ್ಲೂ ಅರಣ್ಯ ಇಲಾಖೆ ಇದೆ. ಅದು ಅರಣ್ಯ ಉಳಿಸಲು, ಬೆಳೆಸಲು ಏನು ಕ್ರಮ ತೆಗೆದುಕೊಳ್ಳುತ್ತದೆ? ಎಂಬ ಪ್ರಶ್ನೆಗೆ ಬಹುಶಃ ಮೌನವೇ ಉತ್ತರವಾಗಬಹುದು.



> ಈಗಾಗಲೇ ಭೂಮಿಯ ತಾಪಮಾನ ಏರಿಕೆಯ ಬಗ್ಗೆ ಇಡೀ ವಿಶ್ವ ಕಳವಳ ವ್ಯಕ್ತಪಡಿಸಿದೆ. ಒಂದು ದೇಶದಲ್ಲಿ ಅರಣ್ಯ ಕಡಿಮೆಯಾದರೆ ಅದರ ಫಲ ಮತ್ತೊಂದು ದೇಶ ಅಥವಾ ಭೂ ಭಾಗದ ಮೇಲೂ ಆಗುತ್ತಿದೆ. ತಾಪಮಾನ ಹೀಗೇ ಏರಿದರೆ ಹಿಮಪರ್ವತಗಳು ಕರಗಿ ಸಮುದ್ರಮಟ್ಟ ಏರಿಕೆಯಾದರೆ ಹಲವು ದೇಶಗಳ ಕಡಲತಡಿಯ ಹಲವು ನಗರಗಳು ಮುಳುಗುತ್ತವೆ ಎಂದು ಕಳೆದ ಒಂದು ದಶಕದಿಂದ ಎಚ್ಚರಿಕೆ ನೀಡಲಾಗುತ್ತಿದೆ. ಆದರೆ ಜನಸಂಖ್ಯಾ ಹೆಚ್ಚಳ ನಮಗೆ ಈಗ ಶಾಪವಾಗಿ ಕಾಡತೊಡಗಿದೆ. ಜನಸಂಖ್ಯೆ ಹೆಚ್ಚಾದರೆ ನಾಗರಿಕ ಸೌಲಭ್ಯಗಳನ್ನು ಹೆಚ್ಚಿಸಬೇಕಾಗುತ್ತದೆ, ಊರೂರುಗಳಲ್ಲಿ ಕೃಷಿ ಭೂಮಿಗಳು ನಿವೇಶನಗಳಾಗುತ್ತಿವೆ, ಕೆರೆಕಟ್ಟೆಗಳು ಸ್ವರೂಪ ಕಳೆದುಕೊಂಡು ಬಡಾವಣೆಗಳಾಗಿಬಿಡುತ್ತಿವೆ. ಇವೆಲ್ಲಾ ಈ ತಾಪಮಾನಕ್ಕೆ ಕಾರಣವಾಗುತ್ತವೆ. ಜೊತೆಗೆ ರಸ್ತೆಗಳ ವಿಸ್ತರಣೆಗಾಗಿ ಮರಗಳನ್ನು ಕಡಿಯುವುದೂ ಒಂದು ರೀತಿ ಸ್ವಯಂಕೃತ ಅಪರಾಧವಾಗುತ್ತಿದೆ.

ಮೇಲ್ಕಂಡ ಮಾಹಿತಿ ನೀಡಿರುವುದು ಕೇಂದ್ರ ಸರ್ಕಾರ. ಇದು ಅಧಿಕೃತ ವರದಿ. ಹಾಗಾದರೆ ಅನಧಿಕೃತವಾಗಿ ಎಷ್ಟು ಅರಣ್ಯ ನಾಶವಾಗಿದೆ ಎಂಬುದು ತಿಳಿದುಬರುವುದಿಲ್ಲ. ಅಭಿವೃದ್ಧಿ ಕೆಲಸಗಳು ಆಗಬೇಕು, ಸರಿ. ನಮ್ಮಲ್ಲಿ ಜನಸಂಖ್ಯೆ ಹೆಚ್ಚಾಗುತ್ತಿದೆ, ಹಾಗೆ ವಾಹನ ಸಂಖ್ಯೆಗಳು ಹೆಚ್ಚಾಗುತ್ತಿದೆ. ಈ ಕಾರಣದಿಂದಾಗಿ ರಸ್ತೆ ಸೇರದಂತೆ ನಾಗರಿಕ ಸವಲತ್ತುಗಳ ವಿಸ್ತರಣೆ ಆಗಬೇಕಾಗುತ್ತದೆ. ಇದನ್ನು ಸರಿಯಲ್ಲ ಎಂದು ಹೇಳಲಾಗುವುದಿಲ್ಲ. ಆದರೆ ಇದಕ್ಕೆ ಅರಣ್ಯ ಪ್ರದೇಶವೇ ಬೇಕೆ? ಬೇರೆ ಅವಕಾಶಗಳ ಕಡೆಗೆ ಏಕೆ ಗಮನ ಹರಿಸಬಾರದು ಎಂದು ಕೇಳಬೇಕಾಗುತ್ತದೆ. ಇಂದು ನಾವು ಒಂದು ರೀತಿಯ ಒತ್ತಡದಲ್ಲಿದ್ದೇವೆ. ನಮಗೆ ಅಭಿವೃದ್ಧಿಯೂ ಬೇಕು, ಪರಿಸರವೂ ಉಳಿಯಬೇಕು. ಇದು ಒಂದು ರೀತಿ ಸರ್ಕಾರಕ್ಕೂ ಸವಾಲಿನ ಕೆಲಸವೇ.

ಈ ರೀತಿಯ ಅರಣ್ಯಗಳ ಬಳಕೆ ಹಾಗೂ ದುರ್ಬಳಕೆಯಿಂದ ಇಂದು ಭೂಮಿಯ ತಾಪಮಾನ ಹೆಚ್ಚಾಗುತ್ತಿದೆ. ಕಳೆದ ವಾರ ಭಾರತೀಯ ಹವಾಮಾನ ಇಲಾಖೆ ಮುಂದಿನ ಐದು ದಿನಗಳಲ್ಲಿ ತಾಪಮಾನ 2ರಿಂದ 4 ಡಿಗ್ರಿ ಸೆಲ್ಸಿಯಸ್‌ನಷ್ಟು ಏರಿಕೆಯಾಲಿದೆ ಎಂದು ತಿಳಿಸಿದೆ. ನಮ್ಮ ದೇಹ ಅಷ್ಟು ಸುಲಭವಾಗಿ ಹೀಗೆ ಏರಿಕೆಯಾಗುವ ತಾಪಮಾನಕ್ಕೆ ಒಗ್ಗಿಕೊಳ್ಳುವುದಿಲ್ಲ. ಅದರಲ್ಲೂ 2ರಿಂದ 5 ಡಿಗ್ರಿ ತಾಪಮಾನ ಹೆಚ್ಚಳ ಎಂದರೆ ತಡೆದುಕೊಳ್ಳುವುದು ಕಷ್ಟದ ಕೆಲಸವೇ. ಅದರಲ್ಲೂ ದಿನವಿಡೀ ರಸ್ತೆ ಬದಿಗಳಲ್ಲಿ ನಿಂತು ವ್ಯಾಪಾರ ಮಾಡುವ ಜನರ ಪರಿಸ್ಥಿತಿ ಶೋಚನೀಯವಾಗಿ ಕಂಡುಬರುತ್ತದೆ. ನಾವು ದೇವರಾಜ ಮಾರುಕಟ್ಟೆ ಮತ್ತಿತರ ಕಡೆ ಹಣ್ಣು ಮಾರುವ ನೂರಾರು ಜನ ಇಡೀ ದಿನ ಬಿಸಿಲಿನಲ್ಲಿ ನಿಂತೇ ವ್ಯಾಪಾರ ಮಾಡುವುದನ್ನು ಕಾಣುತ್ತೇವೆ. ಅವರಿಗೆ ನೆರಳು, ನೀರು ಮೊದಲಾದ ಯಾವ ಸೌಲಭ್ಯಗಳೂ ಇಲ್ಲ. ಅವರೂ ಮನುಷ್ಯರೇ ತಾನೆ!!. ಅವರು ಹೀಗೆ ತಮ್ಮ ದೇಹವನ್ನು ಈ ಉರಿ ಬಿಸಿಲಿಗೆ ಒಡ್ಡುವುದು ಖಂಡಿತಾ ಒಳ್ಳೆಯದಲ್ಲ. ನಾವು ಸದಾ ನೆರಳಿನಲ್ಲಿ ಇರುವವರು ಕೆಲವು ಸಮಯ ಹೊರಹೋಗಿ ಬಂದರೆ, ಇಡೀ ದಿನ ಸುಧಾರಿಸಿಕೊಳ್ಳಬೇಕಾಗಿ ಬರುತ್ತಿದೆ. ಇದು ಪರಿಸರದ ಬಗ್ಗೆ ಚಿಂತಿಸುವಂತೆ ಮಾಡುತ್ತದೆ. ಈ ಬಿರು ಬೇಸಿಗೆಯಿಂದ ಅಂತರ್ಜಲದ ಮಟ್ಟ ಕುಸಿಯುತ್ತಿದೆ. ಬಿಸಿಗಾಳಿ ಅನಾರೋಗ್ಯ ತರುತ್ತಿದೆ.

ಇದು ಕೇವಲ ನಮ್ಮ ರಾಜ್ಯದ ಅಥವಾ ದೇಶದ ಸಮಸ್ಯೆಯಲ್ಲ. ಇದು ಇಡೀ ವಿಶ್ವದ ಸಮಸ್ಯೆಯಾಗಿದೆ. ಈಗಾಗಲೇ ಭೂಮಿಯ ತಾಪಮಾನ ಏರಿಕೆಯ ಬಗ್ಗೆ ಇಡೀ ವಿಶ್ವ ಕಳವಳ ವ್ಯಕ್ತಪಡಿಸಿದೆ. ಒಂದು ದೇಶದಲ್ಲಿ ಅರಣ್ಯ ಕಡಿಮೆಯಾದರೆ ಅದರ ಫಲ ಮತ್ತೊಂದು ದೇಶ ಅಥವಾ ಭೂಭಾಗದ ಮೇಲೂ ಆಗುತ್ತಿದೆ. ತಾಪಮಾನ ಹೀಗೇ ಏರಿದರೆ ಹಿಮಪರ್ವತಗಳು ಕರಗಿ ಸಮುದ್ರಮಟ್ಟ ಏರಿಕೆಯಾದರೆ ಹಲವು ದೇಶಗಳ ಕಡಲತಡಿಯ ಹಲವು ನಗರಗಳು ಮುಳುಗುತ್ತವೆ ಎಂದು ಕಳೆದ ಒಂದು ದಶಕದಿಂದ ಎಚ್ಚರಿಕೆ ನೀಡಲಾಗುತ್ತಿದೆ. ಆದರೆ ಜನಸಂಖ್ಯಾ ಹೆಚ್ಚಳ ನಮಗೆ ಈಗ ಶಾಪವಾಗಿ ಕಾಡತೊಡಗಿದೆ. ಜನಸಂಖ್ಯೆ ಹೆಚ್ಚಾದರೆ ನಾಗರಿಕ ಸೌಲಭ್ಯಗಳನ್ನು ಹೆಚ್ಚಿಸಬೇಕಾಗುತ್ತದೆ, ಊರೂರುಗಳಲ್ಲಿ ಕೃಷಿ ಭೂಮಿಗಳು ನಿವೇಶನಗಳಾಗುತ್ತಿವೆ, ಕೆರೆಕಟ್ಟೆಗಳು ಸ್ವರೂಪ ಕಳೆದುಕೊಂಡು ಬಡಾವಣೆಗಳಾಗಿ ಬಿಡುತ್ತಿವೆ. ಇವೆಲ್ಲಾ ಈ ತಾಪಮಾನಕ್ಕೆ ಕಾರಣವಾಗುತ್ತವೆ. ಜೊತೆಗೆ ರಸ್ತೆಗಳ ವಿಸ್ತರಣೆಗಾಗಿ ಮರಗಳನ್ನು ಕಡಿಯುವುದೂ ಒಂದು ರೀತಿ ಸ್ವಯಂಕೃತ ಅಪರಾಧವಾಗುತ್ತಿದೆ.

ನಗರ ಪ್ರದೇಶಗಳಲ್ಲಿನ ಮರಗಳಿಗೆ ಉಳಿಗಾಲವೇ ಇಲ್ಲ ಎಂಬಂತಾಗಿದೆ. ಇದಲ್ಲದೆ ರಸ್ತೆಗಳ ಪಕ್ಕದಲ್ಲಿರುವ ಮರಗಳಿಗೆ ನೀರಿನ ಆಸರೆಯೇ ಇಲ್ಲದೆ ಅವು ಒಣಗುವಂತಾಗುತ್ತಿದೆ. ರಸ್ತೆ ಮಾಡುವಾಗ ಈ ಮರಗಳ ತಳಭಾಗದಲ್ಲಿ ಮರಕ್ಕೆ ನೀರಿನ ಆಸರೆಯಾಗುವಂತೆ ಜಾಗ ಬಿಡದೇ, ಟಾರು ಹಾಕಿ ಮರವು ಕ್ರಮೇಣ ಒಣಗುವಂತೆ ಮಾಡಲಾಗುತ್ತಿದೆ. ಇನ್ನು ವಾಣಿಜ್ಯ ಪ್ರದೇಶಗಳಿರುವ ರಸ್ತೆಗಳಲ್ಲಿ ಈ ಮರಗಳು ತಮ್ಮ ಅಂಗಡಿಯು ಕಾಣದಂತೆ ಮಾಡುತ್ತದೆ ಎಂದು ಕ್ರಮೇಣ ಒಂದೊಂದೇ ಟೊಂಗೆ ಕಡಿದು ಮರ ಇಲ್ಲದಂತೆ ಮಾಡಲಾಗುತ್ತದೆ. ನಮಗೆ ಮರಗಳು ಹೆಚ್ಚಾಗಿ ಕಾಣಬೇಕಾಗಿರುವುದು ಉದ್ಯಾನವನಗಳಲ್ಲಿ ಹಾಗೂ ಬಡಾವಣೆಗಳಲ್ಲಿ. ಆದರೆ ಉದ್ಯಾನವನಗಳಲ್ಲಿ ಬೆಳೆಸುವ ಮರಗಳು ಮುಖ್ಯವಾಗಿ ಆಮ್ಲಜನಕ ಹೊರಸೂಸುವ ಮರಗಳಾಗಿರಬೇಕು. ಆದರೆ ಅದರ ಬಗ್ಗೆ ಗಮನವೇ ಇಲ್ಲದೆ, ಯಾವುದೋ ಒಂದು ಎಂದು ಒಂದಷ್ಟು ಮರ ಬೆಳೆಸಿ ಇದಿಷ್ಟೇ ನಮ್ಮ ಜವಾಬ್ದಾರಿ ಎಂದು ಪ್ರಾಧಿಕಾರಗಳು ಭಾವಿಸಿ ಬಿಡುತ್ತಿರುವುದು ಸರಿಯಾದ ನಡೆಯಾಗಿರುವುದಿಲ್ಲ. ಅನೇಕ ನಿವಾಸಿಗಳು ತಮ್ಮ ಮನೆ ಮುಂದಿನ ಮರಗಳನ್ನು ತೆರವುಗೊಳಿಸಲು ಇಚ್ಛಿಸುತ್ತಾರೆ, ಕಾರಣವೆಂದರೆ ಅವುಗಳಿಂದ ಕಸ ಹೆಚ್ಚಾಗಿ ಬೀಳುತ್ತದೆ ಎಂದು. ಹೀಗೆ ನಮ್ಮ ನಾಗರಿಕ ಅವಜ್ಞೆಯೂ ಪರಿಸರ ನಾಶಕ್ಕೆ ಕಾರಣವಾಗುತ್ತಿದೆ. ಮನುಷ್ಯನು ಆರೋಗ್ಯವಾಗಿ ಬಾಳಲು ಮರಗಳ ಅವಶ್ಯಕತೆ ಹೆಚ್ಚಾಗಿ ಇದೆ. ಆಮ್ಲಜನಕದ ಮಹತ್ವ ನಮಗೆ ಕೊರೋನಾ ಸಮಯದಲ್ಲಿ ಮನವರಿಕೆಯಾಗಿದೆ. ಇದಕ್ಕೆ ಪರಿಹಾರ ಮರಗಿಡ ಬೆಳೆಸುವುದೇ ಆಗಿದೆ. ಈ ಹಿಂದೆ ಮೈಸೂರಿನ ವಿಶೇಷ ಎಂದರೆ ಮರಗಿಡಗಳು ಎಂಬಂತಿತ್ತು. ಪ್ರತಿ ಮನೆಯ ಮುಂದೆ ಕನಿಷ್ಠ ಎರಡು ತೆಂಗಿನ ಮರ, ಒಂದಷ್ಟು ಹೂವಿನ ಗಿಡಗಳು ಇರಲೇ ಬೇಕು. ರಸ್ತೆಯ ಬದಿಗಳಲ್ಲಿ ಗಿಡ ನೆಟ್ಟು ಪ್ರತಿದಿನ ನೀರು ಹಾಕಿ ಮರ ಬೆಳೆಸುವವರ ಸಂಖ್ಯೆ ಹೆಚ್ಚಾಗಿತ್ತು. ಚಾಮುಂಡಿಬೆಟ್ಟದ ಮೇಲೆ ನಿಂತು ಮೈಸೂರನ್ನು ವೀಕ್ಷಿಸಿದರೆ ಹಸಿರೋ ಹಸಿರು ಎಂಬಂತಿತ್ತು. ಆದರೆ ನಾಗರಿಕ ಪ್ರಜ್ಞೆ ಹೀಗೆ ಕಡಿಮೆಯಾಗುತ್ತಾ, ದುರಂತಗಳಿಗೆ ನಾವೇ ಕಾರಣ ಎಂಬಂತಾಗಿಬಿಡುತ್ತಿದೆ.

ಇಷ್ಟರ ನಡುವೆ ಕೆಲವರು ಸದ್ದಿಲ್ಲದೇ ರಸ್ತೆ, ಉದ್ಯಾನವನಗಳಲ್ಲಿ ಮರಗಿಡಗಳಿಗೆ ನಿತ್ಯ ನೀರು ಉಣಿಸುವುದನ್ನು ಮಾಡುತ್ತಿದ್ದಾರೆ. ಇದನ್ನು ಅವರು ಕರ್ತವ್ಯ ಎಂದು ಭಾವಿಸುತ್ತಾರೆ. ಒಬ್ಬ ವ್ಯಕ್ತಿ ನಿರೋಗಿಯಾಗಿ ಬದುಕಬೇಕಾದರೆ ಏಳೆಂಟು ಮರಗಳ ಅವಶ್ಯಕತೆ ಇದೆ ಎಂದು ಹೇಳಲಾಗುತ್ತದೆ. ಆದರೆ ವರದಿಯ ಪ್ರಕಾರ ಬೆಂಗಳೂರಿನಲ್ಲಿ ಒಬ್ಬ ವ್ಯಕ್ತಿಗೆ ಒಂದು ಮರ ಎಂಬಂತಾಗಿದೆ. ಇದು ಸರ್ಧಯದ ಪರಿಸ್ಥಿತಿ. ಮುಂದೆ ಏನೋ ಊಹಿಸಲಾಗದು.

ಭೂಮಿಯ ತಾಪಮಾನವನ್ನು ಸಾಗರಗಳು ನಿಯಂತ್ರಿಸುತ್ತವೆ ಎಂದು ಈ ಹಿಂದೆ ಹೇಳಲಾಗುತ್ತಿತ್ತು. ಈಗ ಭೂಮಿಯ ತಾಪಮಾನ ಸಾಗರದ ತಾಪಮಾನಕ್ಕೆ ಸಡ್ಡುಹೊಡೆಯುತ್ತಿದೆ. ಭೂಮಿ ಸಾಗರಕ್ಕಿಂತ ಹೆಚ್ಚು ತಾಪಮಾನ ಹೊಂದಿ ಸಾಗರದ ಜಲಜೀವಿಗಳಿಗೆ ತೊಂದರೆಯಾಗುವಂತಾಗಿದೆ. ವಾತಾರಣದಲ್ಲಿ ಮೀಥೇನ್ ಹೆಚ್ಚಾಗುತ್ತಿದೆ. ಇದೂ ಭೂಮಿಯ ತಾಪಮಾನ ಹೆಚ್ಚಳಕ್ಕೆ ಕಾರಣವಾಗುತ್ತಿದೆ. ಇಂದು ಒಂದು ದೇಶದಲ್ಲಿ ನಡೆಯುವ ವಿದ್ಯಮಾನ ಮತ್ತೊಂದು ದೇಶದ ಮೇಲೂ ಆಗುತ್ತಿದೆ. ಭೂಮಿಯ ಒಂದು ಗೋಲದಲ್ಲಿ ಆಗುವ ಬದ ಲಾವಣೆ ಮತ್ತೊಂದು ಗೋಲದ ಮೇಲೂ ಆಗುತ್ತಿದೆ. ಈ ಹಂತದಲ್ಲಿ ಇಡೀ ವಿಶ್ವ ಎಚ್ಚರಿಕೆಯ ಹೆಜ್ಜೆ ಇಡಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ. ಇಷ್ಟರ ನಡುವೆ ನಮ್ಮ ದೇಶದಲ್ಲಿ ಹುಲಿ ಹಾಗೂ ಮತ್ತಿತರ ವನ್ಯಜೀವಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗುತ್ತಿರುವುದು ಸಮಾಧಾನದ ವಿಷಯವಾಗಿದೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವುದು ಖಚಿತ: ಶಾಸಕ ಡಾ.ಯತೀಂದ್ರ

ತಂದೆಯ ಪರ ಬಿರುಸಿನ ಪ್ರಚಾರ; ನುಡಿದಂತೆ ನಡೆಯುತ್ತೇವೆ

ವರುಣಾ,ಏ.17(ಎಂಟಿವೈ)–ಬಿಜೆಪಿ ಸರ್ಕಾರದ ದುರಾಡಳಿತ, ಕೋಮು ದ್ವೇಷದ ನೀತಿಯಿಂದಾಗಿ ಜನ ಬೇಸತ್ತಿದ್ದು, ರಾಜ್ಯದಲ್ಲಿ ಈ ಬಾರಿ ಕಾಂಗ್ರೆಸ್ ಪಕ್ಷಕ್ಕೆ 150 ಸ್ಥಾನ ದೊರೆತು ಜನಪರ ಸರ್ಕಾರ ಅಧಿಕಾರಕ್ಕೆ ಬರುವುದು ನಿಶ್ಚಿತ ಎಂದು ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ವರುಣಾ ಕ್ಷೇತ್ರದ ಹಾರೋಹಳ್ಳಿ, ಲಕ್ಷ್ಮೀಪುರ, ಶಿವಪುರ, ಗ್ರಾಮಗಳಲ್ಲಿ ವರುಣಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಿದ್ದರಾಮಯ್ಯ ಪರ ಬಿರುಸಿನ ಮತಯಾಚನೆ ನಡೆಸಿ ಮಾತನಾಡಿದ ಅವರು, ಕಳೆದ ಚುನಾವಣೆಯಲ್ಲಿ ಜನ ಬೆಂಬಲ ಇಲ್ಲದೇ ಇದ್ದರೂ, ಆಪರೇಷನ್ ಕಮಲದ ಮೂಲಕ ವಾಮಮಾರ್ಗದ ಮೂಲಕ ಅಧಿಕಾರಕ್ಕೆ ಬಂದ ಬಿಜೆಪಿ ಸರ್ಕಾರ ಅಭಿವೃದ್ಧಿಗಿಂತ ಭ್ರಷ್ಟಾಚಾರಕ್ಕೆ ಹೆಚ್ಚು ಆದ್ಯತೆ ನೀಡಿದೆ. ಬಿಜೆಪಿಗರು ಲೂಟಿ ಹೊಡೆಯುವುದರಲ್ಲಿ



ಮಗ್ನರಾಗಿದ್ದಾರೆ. ಇದರಿಂದ ರಾಜ್ಯದ ಜನರ ತೆರಿಗೆ ಹಣ ಸದ್ಬಳಕೆಯಾಗದೆ, ಕಬಳಿಸಿದ್ದಾರೆ ಎಂದರು.

ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಭ್ರಷ್ಟಾಚಾರ, ಹಗರಣಗಳ ಸರಮಾಲೆ ಹೆಚ್ಚಾಗಿದೆ. ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳು ನಡೆದಿಲ್ಲ. ಪದೇಪದೇ ಸುಳ್ಳು ಹೇಳುತ್ತಾ ಕಾಲ ಹರಣ ಮಾಡಿದ್ದಾರೆ ಎಂದು ಡಾ.ಯತೀಂದ್ರ ಕಿಡಿಕಾರಿದರು.

ಸಾವಿರಾರು ಕೋಟಿ ರೂ. ಸಾಲ ಮಾಡಿ ರಾಜ್ಯವನ್ನು ಸಾಲದ ಕೂಪಕ್ಕೆ ತಳ್ಳಿರುವುದೇ ಬಿಜೆಪಿ ಸರ್ಕಾರದ ಸಾಧನೆ. ಇದರಿಂದ ಬೇಸತ್ತಿರುವ ರಾಜ್ಯದ ಜನತೆ ಈ ಬಾರಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಲು ಬಯಸಿದ್ದಾರೆ. ಕಾಂಗ್ರೆಸ್ ನುಡಿದಂತೆ ನಡೆದ ಪಕ್ಷವಾಗಿದೆ ಎಂದರು.

ಈ ಬಾರಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೇ ಕುಟುಂಬದ ಪ್ರತಿ ಸದಸ್ಯರಿಗೆ 10 ಕೆಜಿ. ಅಕ್ಕಿ, ಪ್ರತಿ ಮನೆಯೊಡತಿಗೆ 2 ಸಾವಿರ ರೂ., ಪ್ರತಿ ಮನೆಗೆ 200 ಯೂನಿಟ್ ಉಚಿತ ವಿದ್ಯುತ್, ನಿರುದ್ಯೋಗಿ ಪದವೀಧರರಿಗೆ ಪ್ರತಿ ತಿಂಗಳು ರೂ. 3 ಸಾವಿರ ರೂ., ಡಿಪ್ಲೊಮಾ ಪದವೀಧರರಿಗೆ ತಿಂಗಳಿಗೆ 1500 ರೂ., ನೀಡುತ್ತೇವೆ. ಇದರಿಂದ ಪ್ರತಿಯೊಂದು ಕುಟುಂಬವೂ ನೆಮ್ಮದಿಯಿಂದ ಬದುಕಬಹುದಾಗಿದೆ. ಆದ್ದರಿಂದ ಈ ಬಾರಿ ಸಿದ್ದರಾಮಯ್ಯರವರನ್ನು ಅತಿ ಹೆಚ್ಚು ಮತಗಳ ಅಂತರದಿಂದ ಆಯ್ಕೆ ಮಾಡಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಿದ್ದರಾಮಯ್ಯ ಆಪ್ತ ಕಾರ್ಯದರ್ಶಿ ಎಂ.ರಾಮಯ್ಯ, ಜಿ.ಪಂ. ಮಾಜಿ ಸದಸ್ಯ ಕೆಂಪೀರಯ್ಯ, ತಾ.ಪಂ. ಮಾಜಿ ಅಧ್ಯಕ್ಷೆ ಮಂಜುಳಾ ಮಂಜುನಾಥ್, ಪುಟ್ಟಸ್ವಾಮಿ, ಎಪಿಎಂಸಿ ಮಾಜಿ ಸದಸ್ಯ ಆನಂದ್, ಚಿತ್ರ ನಿರ್ಮಾಪಕ ಸಂದೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಮೇಶ್ ಮುದ್ದೇಗೌಡ, ನಾಡನಹಳ್ಳಿ ರವಿ, ಗಮಹಳ್ಳಿ, ಮೆಲ್ಲಹಳ್ಳಿ ರವಿ, ಸಿದ್ದಯ್ಯ, ಸಾಕಣ್ಣ, ಗಂಗನ ತಿಮ್ಮಣ್ಣ, ಸಕ್ಕಳ್ಳಿ ಬಸವರಾಜು, ಹೆಳವರಹುಂಡಿ ಸೋಮು, ನಿವೃತ್ತ ಪ್ರಾಂಶುಪಾಲ ಸಿದ್ದಯ್ಯ, ಮಹದೇವಣ್ಣ, ಗ್ರಾ.ಪಂ. ಅಧ್ಯಕ್ಷೆ ಶಾಂತಮ್ಮ ಶೇಖರ್, ಭಾಗ್ಯಮ್ಮ, ಆರೀಫ್, ಮೋಹನ್‌ಕುಮಾರ್, ಮಂಚನಹಳ್ಳಿ ರಾಘವೇಂದ್ರ, ಮೆಲ್ಲಹಳ್ಳಿ ಮಹದೇವ, ರಾಜೇಶ್, ಪುಷ್ಪ ಬೋರೇಗೌಡ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಬಿಜೆಪಿ ಅಧಿಕಾರಕ್ಕೆ ಬಂದರೆ ವರುಣಾ ತಾಲೂಕು ಕೇಂದ್ರ ಘೋಷಣೆ

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಭರವಸೆ



ನಂಜನಗೂಡು, ಏ.17– ಬಿಜೆಪಿ ಸರ್ಕಾರ ಮತ್ತೇ ಅಧಿಕಾರಕ್ಕೆ ಬಂದ ಕೂಡಲೇ ಮೊದಲ ಸಂಪುಟ ಸಭೆಯಲ್ಲೇ ವರುಣಾವನ್ನು ತಾಲೂಕು ಕೇಂದ್ರವನ್ನಾಗಿ ಘೋಷಣೆ ಮಾಡುವುದಾಗಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಭರವಸೆ ನೀಡಿದರು.

ತಾಲೂಕಿನ ಗೋಳೂರು ಗ್ರಾಮದಲ್ಲಿ ಸೋಮವಾರ ಆಯೋಜಿಸಿದ್ದ ವರುಣಾ ವಿಧಾನಸಭಾ ಕ್ಷೇತ್ರದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ವಿ.ಸೋಮಣ್ಣ ಅಭ್ಯರ್ಥಿ ಎಂದು ಘೋಷಣೆ ಆಗುತ್ತಿದ್ದಂತೆ ವರುಣಾ ವರ್ಣಮಯವಾಗಿದ್ದು, ವರುಣಾ ಕ್ಷೇತ್ರಕ್ಕೆ ತಾಲೂಕು ಕೇಂದ್ರವೇ ಅಲ್ಲ ಎಂಬುದನ್ನು ಕೇಳಿ ಬೇಸರವಾಯಿತು. ವರುಣಾ ಅಭಿವೃದ್ಧಿ ವಿಚಾರದಲ್ಲಿ ಜಿಡ್ಡುಗಟ್ಟಿದೆ. ಈ ಬಗ್ಗೆ ಮುಂಚೆಯೇ ಹೇಳಿದ್ದರೆ ವರುಣಾ ಕ್ಷೇತ್ರವನ್ನು ತಾಲೂಕು ಕೇಂದ್ರವನ್ನಾಗಿ ಮಾಡಿ ಇಲ್ಲಿಗೆ ಬರುತ್ತಿದ್ದೆ. ನಮ್ಮ ಸರ್ಕಾರ ಬಂದರೆ ಮೊದಲ ಸಂಪುಟ ಸಭೆಯಲ್ಲೇ ತಾಲೂಕು ಕೇಂದ್ರವನ್ನಾಗಿ ಮಾಡಿ ಮಂಜೂರಾತಿ ನೀಡುವುದಾಗಿ ತಿಳಿಸಿದ ಅವರು, ವರುಣಾ ಕ್ಷೇತ್ರದ ಹೆಸರು ಮೈಸೂರು ಜಿಲ್ಲೆ ದಾಟಿ ಹೋಗಿಲ್ಲ. ವಿಕ್ಟರಿ ಸೋಮಣ್ಣ ಈ ಕ್ಷೇತ್ರದ ಅಭ್ಯರ್ಥಿಯಾದ ಬಳಿಕ ಇಡೀ ದೇಶಕ್ಕೆ ಪರಿಚಯವಾಗಿದೆ. ಗೋವಿಂದರಾಜ ನಗರ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಸೋಮಣ್ಣ ರೂಪಿಸಿದ್ದಾರೆ. ಅಲ್ಲಿನ ಜನರು ಬಿಟ್ಟು ಹೋಗಬೇಡಿ ಎಂದು ಗೋಳೋ ಎಂದು ಅಳುತ್ತಿದ್ದಾರೆ. ವರುಣಾ ಕೂಡ ಗೋವಿಂದ ರಾಜನಗರ ಕ್ಷೇತ್ರದಂತೆ ಅಭಿವೃದ್ಧಿಯಾಗಬೇಕಾದರೆ ಸೋಮಣ್ಣ ಅವರನ್ನು ಈ ಕ್ಷೇತ್ರದ ಮತದಾರರು ಆಶೀರ್ವದಿಸಬೇಕು ಎಂದರು.

ಕಾಂಗ್ರೆಸ್ ಸರ್ಕಾರವಿದ್ದಾಗ ಎಲ್ಲಾ ಇಲಾಖೆಗಳಲ್ಲೂ ಭ್ರಷ್ಟಾಚಾರ ವ್ಯಾಪಕಗೊಂಡಿತ್ತು. ಚುನಾವಣಾ ಗಿಮಿಕ್‌ಗಾಗಿ ಈಗ ನಮ್ಮ ಮೇಲೆ 40 ಪರ್ಸೆಂಟ್ ಸರ್ಕಾರ ಎಂದು ಗೂಬೆ ಕೂರಿಸುತ್ತಿದ್ದಾರೆ. ಎಲ್ಲಿ ತಮ್ಮ ಭ್ರಷ್ಟಾಚಾರ ಬಯಲಾಗುತ್ತದೆ ಎಂಬ ಕಾರಣಕ್ಕೆ ಲೋಕಾಯುಕ್ತ ದುರ್ಬಲಗೊಳಿಸಿದ ಕೀರ್ತಿ ಕಾಂಗ್ರೆಸ್‌ಗೆ ಸಲ್ಲುತ್ತದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವಾಗ್ದಾಳಿ ನಡೆಸಿದರು. ನಮ್ಮ ಸರ್ಕಾರದ ಮೇಲೆ 40 ಪರ್ಸೆಂಟ್ ಆರೋಪದ ಬಗ್ಗೆ ಒಂದೇ ಒಂದು ದೂರು ದಾಖಲಾಗಿಲ್ಲ. ಆದರೆ ಕಾಂಗ್ರೆಸ್ ಸರ್ಕಾರವಿದ್ದಾಗ ಕೆಲಸ ಮಾಡದೆಯೇ ಬಿಲ್ ತೆಗೆದುಕೊಂಡಿರುವ ಬಗ್ಗೆ ಲೋಕಾಯುಕ್ತದಲ್ಲಿ ದೂರು ದಾಖಲಾಗಿದೆ. ಸಿಕ್ಕಿಹಾಕಿಕೊಳ್ಳುವ ಭಯದಲ್ಲಿ ಲೋಕಾಯುಕ್ತವನ್ನೇ ನಿಷ್ಕ್ರಿಯಗೊಳಿಸಿದ ಕೀರ್ತಿ ಕಾಂಗ್ರೆಸ್‌ಗೆ ಸಲ್ಲುತ್ತದೆ ಎಂದರು.

ರಾಜ್ಯವೆಲ್ಲಾ ಸುತ್ತಾಡಿ ವರುಣಾಗೆ ಬಂದಿದ್ದಾರೆ: ಹದ್ದು ಮೇಲೆಲ್ಲಾ ಹಾರಾಡಿ ಕಡೆಗೆ ಕಾಳು ತಿನ್ನಲು ಭೂಮಿಗೆ ಬರಲೇಬೇಕು. ಅಂತೆಯೇ, ಮಾಜಿ ಸಿಎಂ ಸಿದ್ದರಾಮಯ್ಯ ರಾಜ್ಯವನ್ನೆಲ್ಲಾ ಸುತ್ತಾಡಿ ಕಡೆಗೆ ವರುಣಾ ಕ್ಷೇತ್ರಕ್ಕೆ ಬಂದಿದ್ದಾರೆ ಎಂದು ಸಂಸದ ವಿ.ಶ್ರೀನಿವಾಸಪ್ರಸಾದ್ ವ್ಯಂಗ್ಯವಾಡಿದರು. ನಾನು ಮಲ್ಲಿಕಾರ್ಜುನ ಖರ್ಗೆ ಅಷ್ಟೆ ಸರಿಸಮಾನರು. ಖರ್ಗೆ 1972ರಲ್ಲಿ ಚುನಾವಣೆಗೆ ನಿಂತರೆ ನಾನು 1974ರಲ್ಲಿ ಚುನಾವಣೆಗೆ ನಿಂತೆ. 9 ಲೋಕಸಭಾ, 5 ವಿಧಾನಸಭಾ ಚುನಾವಣೆ ಎದುರಿಸಿರುವ ನಾನು ಸಿದ್ದರಾಮಯ್ಯಗಿಂತಲೂ ಸೀನಿಯರ್. ನನ್ನನ್ನು ಸಚಿವ ಸಂಪುಟದಿಂದ ತೆಗೆದು ಖರ್ಗೆ ಮಗನಿಗೆ ಸ್ಥಾನ ನೀಡಿದ ಸಿದ್ದರಾಮಯ್ಯ ಕಥೆ ಈಗ ಏನಾಗಿದೆ ಎಂಬುದು ಎಲ್ಲರಿಗೂ ಗೊತ್ತಿದೆ. ಕೋಲಾರ, ಬಾದಾಮಿ ಕಡೆಯಲ್ಲಾ ಸುತ್ತಾಡಿ ಕಡೆಗೆ ವರುಣಾಕ್ಕೆ ಬಂದಿದ್ದಾರೆ. ಹಕ್ಕಿ ಎಷ್ಟೇ ಎತ್ತರಕ್ಕೆ ಹಾರಾಡಿದರೂ, ನೆಲಕ್ಕೆ ಕಾಳು ತಿನ್ನಲು ಬರಲೇಬೇಕು. ಅವರನ್ನು ಹೇಗೆ ಚುನಾವಣೆಯಲ್ಲಿ ಕಟ್ಟಿಹಾಕಬೇಕೆಂಬುದು ನಮಗೆ ಗೊತ್ತಿದೆ. ಬಿಜೆಪಿ ಹೈಕಮಾಂಡ್ ಸಮರ್ಥ ಅಭ್ಯರ್ಥಿ ಆಯ್ಕೆ ಮಾಡಿದ್ದಾರೆ. ವಿ.ಸೋಮಣ್ಣ ಅವರನ್ನು ಗೆಲ್ಲಿಸಿಕೊಂಡು ಬರುವುದಾಗಿ ಹೇಳಿದರು.

ನಾನು ಹೇಡಿಯಲ್ಲ: ನಾನು ರಣರಂಗದಿಂದ ಓಡಿಹೋಗುವ ಹೇಡಿಯಲ್ಲ. ಸಾರ್ವಜನಿಕ ಜೀವನ ಮುಳ್ಳಿನ ಹಾಸಿಗೆ ಇದ್ದಂತೆ. ವರುಣಾ ಕ್ಷೇತ್ರದಲ್ಲಿ ಸ್ಪರ್ಧಿಸುವ ಅವಕಾಶ ಭಗವಂತನ ಪ್ರೇರಣೆ ಎಂದೇ ಭಾವಿಸಿದ್ದೇನೆ. ಈ ಕ್ಷೇತ್ರದಲ್ಲಿ ಕಾಂಗ್ರೆಸ್‌ನವರಿಗೆ 15 ವರ್ಷ ಆಡಳಿತಕ್ಕೆ ಅವಕಾಶ ನೀಡಿದ್ದೀರಿ. ನನಗೆ 5 ವರ್ಷ ಅವಕಾಶ ಮಾಡಿಕೊಡಿ. ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಕೈ ಜೋಡಿಸುವುದಾಗಿ ವಿ.ಸೋಮಣ್ಣ ಹೇಳಿದರು.

ಇದೇ ವೇಳೆ ಸಂಸದ ಪ್ರತಾಪ್‌ಸಿಂಹ, ಮಾಜಿ ಸಚಿವ ಕೋಟೆ ಶಿವಣ್ಣ, ವಿಧಾನಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ, ವಿಧಾನ ಪರಿಷತ್ ಮಾಜಿ ಸದಸ್ಯ ಸಿದ್ದರಾಜು, ಜಿಪಂ ಮಾಜಿ ಸದಸ್ಯ ಬಿ.ಎನ್.ಸದಾನಂದ, ಬಿಜೆಪಿ ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇಖರ್, ಉಪಾಧ್ಯಕ್ಷ ಪ್ರತಾಪ್, ಜಿಪಂ ಮಾಜಿ ಸದಸ್ಯ ಗುರುಸ್ವಾಮಿ, ವರುಣಾ ಬಿಜೆಪಿ ಅಧ್ಯಕ್ಷ ವಿಜಯಕುಮಾರ್, ಮುಖಂಡರಾದ ಕಾಪು ಸಿದ್ದಲಿಂಗಸ್ವಾಮಿ, ಸಿದ್ದವೀರಪ್ಪ, ಶರತ್ ಪುಟ್ಟಬುದ್ಧಿ, ಸಿಎಂ.ಮಹದೇವಯ್ಯ, ಕಾಂಪೋಸ್ಟ್ ಅಭಿವೃದ್ಧಿ ನಿಗಮ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ, ಖಾದಿ ಗ್ರಾಮೋದ್ಯೋಗ ಮಂಡಳಿ ಮಾಜಿ ಅಧ್ಯಕ್ಷ ಎನ್.ಆರ್.ಕೃಷ್ಣಪ್ಪಗೌಡ, ಎಲ್.ಆರ್.ಮಹದೇವಸ್ವಾಮಿ, ಮಂಜುನಾಥ್, ಸುಬ್ಬಣ್ಣ, ವರುಣಾ ಕ್ಷೇತ್ರ ಉಸ್ತುವಾರಿ ಪ್ರಮುಲ್ಲ ಮಲ್ಲಾಡಿ, ಪ್ರಶಾಂತ್, ರಾಜೇಂದ್ರ, ಮಂಜು ಕುಮಾರ್, ನಾಗಮ್ಮ, ಮೋಹನ್, ಮಧು ರಾಜ್, ಶಿವಯ್ಯ, ಚಂದ್ರು, ಡಾ. ಶಿವರಾಮ್, ನಾಗೇಂದ್ರ ಇತರರಿದ್ದರು.

ಬಿಜೆಪಿ ಅಭ್ಯರ್ಥಿಗಳ 3ನೇ ಪಟ್ಟಿ ಬಿಡುಗಡೆ

ಕೆ.ಆರ್.ನಲ್ಲಿ ರಾಮದಾಸ್‌ಗೆ ಟಿಕೆಟ್ ಮಿಸ್, ಶ್ರೀವತ್ಸಗೆ ಮಣೆ

ಮೈಸೂರು, ಏ. 17– ಬಿಜೆಪಿ 10 ಅಭ್ಯರ್ಥಿಗಳನ್ನೊಳಗೊಂಡ 3ನೇ ಪಟ್ಟಿಯನ್ನು ಬಿಡುಗಡೆ ಮಾಡಿದ್ದು, ಕೃಷ್ಣರಾಜ ಕ್ಷೇತ್ರದ ಹಾಲಿ ಶಾಸಕ ಎಸ್.ಎ. ರಾಮದಾಸ್ ಅವರಿಗೆ ಟಿಕೆಟ್ ಕೈತಪ್ಪಿದ್ದು, ಮೈಸೂರು ನಗರ ಬಿಜೆಪಿ ಅಧ್ಯಕ್ಷ ಶ್ರೀವತ್ಸ ಅವರಿಗೆ ಕೆ.ಆರ್.ಕ್ಷೇತ್ರದ ಟಿಕೆಟ್ ನೀಡಲಾಗಿದೆ.

ಉಳಿದಂತೆ ಮಹದೇವಪುರ ಕ್ಷೇತ್ರದಲ್ಲಿ ಮಾಜಿ ಸಚಿವ ಅರವಿಂದ ಲಿಂಬಾವಳಿ ಅವರಿಗೆ ಬದಲಾಗಿ ಅವರ ಪತ್ನಿ ಮಂಜುಳಾ ಅವರಿಗೆ ಟಿಕೆಟ್ ನೀಡಲಾಗಿದೆ. ಕಾಂಗ್ರೆಸ್ ಸೇರ್ಪಡೆಗೊಂಡಿರುವ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಪ್ರತಿನಿಧಿಸುತ್ತಿದ್ದ ಹುಬ್ಬಳ್ಳಿ–ಧಾರವಾಡ ಸೆಂಟ್ರಲ್ ಕ್ಷೇತ್ರದಲ್ಲಿ ಮಹೇಶ್ ಟೆಂಗಿನಕಾಯಿ ಅವರನ್ನು ಕಣಕ್ಕಿಳಿಸಲಾಗಿದೆ. ಹೆಬ್ಬಾಳ ಕ್ಷೇತ್ರದಲ್ಲಿ ಮಾಜಿ ಸಚಿವ ಕಟ್ಟಾ ಸುಬ್ರಮಣ್ಯ ನಾಯ್ಡು ಪುತ್ರ ಕಟ್ಟಾ ಜಗದೀಶ್ ಅವರಿಗೆ ಟಿಕೆಟ್ ನೀಡಲಾಗಿದೆ. ಸಚಿವ ವಿ. ಸೋಮಣ್ಣ ಪ್ರತಿನಿಧಿಸುತ್ತಿದ್ದ ಗೋವಿಂದರಾಜನಗರ ಕ್ಷೇತ್ರದಲ್ಲಿ ಅವರ ಪುತ್ರ ಅರುಣ್ ಸೋಮಣ್ಣರಿಗೆ ಟಿಕೆಟ್ ನಿರಾಕರಿಸಲಾಗಿದೆ. ಸೋಮಣ್ಣ ಬೆಂಬಲಿಗರೇ ಆದ ಉಮೇಶ್ ಶೆಟ್ಟಿ ಅವರಿಗೆ ಟಿಕೆಟ್ ನೀಡಲಾಗಿದೆ. ಇನ್ನುಳಿದಂತೆ ನಾಗಠಾಣಾದಲ್ಲಿ ಸಂಜೀವ್ ಐಹೊಳೆ, ಸೇಡಂನಲ್ಲಿ ಮಂಜುನಾಥ್ ಅಂಬರೀಶ್, ರೋಣದಲ್ಲಿ ಕಳಕಪ್ಪ ಬಂಡಿ, ಹಗರಿಬೊಮ್ಮನಹಳ್ಳಿಯಲ್ಲಿ ಬಿ. ರಾಮಣ್ಣ ಅವರಿಗೆ ಟಿಕೆಟ್ ನೀಡಲಾಗಿದ್ದು, ಉಳಿದಂತೆ ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್.ಈಶ್ವರಪ್ಪ ಸ್ಪರ್ಧಿಸುತ್ತಿದ್ದ ಶಿವಮೊಗ್ಗ ನಗರ ಮತ್ತು ಮಾನ್ವಿ ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಿಸಿಲ್ಲ.

ತಾಯಿ ಮನೆಯಿಂದ(ಬಿಜೆಪಿ) ಓಡಿಸಿದ್ದಾರೆ... ಅಲ್ಲಿರಬೇಕೆ ಬೇಡವೆ...? ಇಂದು ನಿರ್ಧರಿಸುತ್ತೇನೆ...

ನಿರ್ಧಾರ ಕೈಗೊಳ್ಳುವವರೆಗೆ ಯಾರನ್ನೂ ಬೇಟಿಯಾಗಲ್ಲ; ಶಾಸಕ ರಾಮದಾಸ್ ಪ್ರತಿಕ್ರಿಯೆ



ಮೈಸೂರು, ಏ.17(ಎಂಕೆ)– 30 ವರ್ಷಗಳಿಂದ ತಾಯಿ(ಬಿಜೆಪಿ) ಮನೆಯಲ್ಲಿದ್ದೆ. ಈಗ ತಾಯಿ ಮನೆಯಿಂದ ಓಡಿಸಿದ್ದಾರೆ. ಆದ್ದರಿಂದ ತಾಯಿ ಮನೆಯಲ್ಲೇ ಇರಬೇಕಾ? ಬೇಡವಾ? ಎಂಬುದನ್ನು ನಾಳೆ(ಏ.18) ನನ್ನೆಲ್ಲಾ ಕಾರ್ಯಕರ್ತರೊಂದಿಗೆ ಚರ್ಚಿಸಿ ತೀರ್ಮಾನಿಸುತ್ತೇನೆ ಎಂದು ಶಾಸಕ ಎಸ್.ಎ.ರಾಮದಾಸ್ ಹೇಳಿದರು.

ಕೆ.ಆರ್.ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಹೆಸರು ಅಧಿಕೃತವಾಗಿ ಘೋಷಣೆಯಾಗುತ್ತಿದ್ದಂತೆಯೇ ವಿದ್ಯಾರಣ್ಯಪುರಂನಲ್ಲಿರುವ ತಮ್ಮ ಕಚೇರಿಯಲ್ಲಿ ಬೆಂಬಲಿಗರು ಹಾಗೂ ಕಾರ್ಯಕರ್ತರೊಂದಿಗೆ ಗಂಟೆಗೂ ಹೆಚ್ಚುಕಾಲ ಸಭೆ ನಡೆಸಿದ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ನನ್ನೆಲ್ಲಾ ಕಾರ್ಯಕರ್ತರೊಂದಿಗೆ ಚರ್ಚೆ ಮಾಡಿ, ನಂತರ ನಿರ್ಣಯ ತೆಗೆದುಕೊಳ್ಳುತ್ತೇನೆ. ಏಕೆಂದರೆ ಕಳೆದ 30 ವರ್ಷಗಳಿಂದ ತಾಯಿ(ಬಿಜೆಪಿ) ಮನೆಯಲ್ಲಿದ್ದೆ. ಈಗ ತಾಯಿ ಮನೆಯಿಂದ ಓಡಿಸಿದ್ದಾರೆ. ಆದ್ದರಿಂದ ಮುಂದಿನ ದಿನಗಳಲ್ಲಿಯೂ ತಾಯಿ ಮನೆಯಲ್ಲೇ ಇರಬೇಕಾ? ಬೇಡವಾ? ಎಂಬುದನ್ನು ತಿಳಿಸಲಾಗುವುದು ಎಂದರಲ್ಲದೆ ನನಗಾಗಿ ದುಡಿದಿರುವ ಕಾರ್ಯಕರ್ತರು ಅಭಿಪ್ರಾಯ ಮುಖ್ಯವಾಗಿದ್ದು, ನಾನು ಕೂಡ ಮುಕ್ತವಾಗಿದ್ದೇನೆ. ನಿರ್ಧಾರ ತೆಗೆದುಕೊಳ್ಳುವವರೆಗೆ ಯಾರನ್ನೂ ಭೇಟಿ ಮಾಡುವುದಿಲ್ಲ ಎಂದು ಹೇಳಿದರು.

ಶ್ರೀವತ್ಸ ಭೇಟಿ ನಿರಾಕರಿಸಿದ ರಾಮದಾಸ್...



ಶಾಸಕ ರಾಮದಾಸ್ ಅವರ ಬೆಂಬಲ ಕೋರುವ ಸಲುವಾಗಿ ಕೆ.ಆರ್.ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಟಿ.ಎಸ್.ಶ್ರೀವತ್ಸ, ಸಂಸದ ಪ್ರತಾಪ್ ಸಿಂಹ, ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ವೀಕ್ಷಕ ರಾಜೀವ್ ಬಬ್ಬರ್, ಮುಖಂಡ ಮೈ.ವಿ.ರವಿಶಂಕರ್, ರಾಮದಾಸ್ ಅವರ ಕಚೇರಿಗೆ ಇಂದು ರಾತ್ರಿ ಆಗಮಿಸಿದ್ದರು. ಮಹಡಿಯ ಕೊಠಡಿಯಲ್ಲಿ ಬೆಂಬಲಿಗರ ಸಭೆ ನಡೆಸುತ್ತಿದ್ದ ರಾಮದಾಸ್ ಮಾಧ್ಯಮದವರೊಂದಿಗೆ ಮಾತನಾಡಲು ಕೆಳಗಿಳಿದು, ಒಂದೆರಡು ಮಾತುಗಳನ್ನಷ್ಟೇ ಆಡಿ ಹಿಂತಿರುಗುವಾಗ ತಮ್ಮನ್ನು ಭೇಟಿಯಾಗಲು ಬಂದಿದ್ದ ಅಭ್ಯರ್ಥಿ ಶ್ರೀವತ್ಸ ಮತ್ತಿತರರನ್ನು ನೋಡಿಯೂ ನೋಡದಂತೆ ಸರಸರನೆ ನಿರ್ಗಮಿಸಿದರು. ಇತ್ತ ರೂಂನಲ್ಲಿ ಅರ್ಧ ಗಂಟೆಯಿಂದ ಕಾಯುತ್ತಾ ಕುಳಿತಿದ್ದ ಶ್ರೀವತ್ಸ ಮತ್ತಿತರರು ಬಂದ ದಾರಿಗೆ ಸುಂಕವಿಲ್ಲದಂತೆ ವಾಪಾಸ್ಸಾಗಬೇಕಾಯಿತು.



ಸಮಾಜವಾದಿ ಜನತಾ ಪಾರ್ಟಿ ಜಿಲ್ಲಾಧ್ಯಕ್ಷ ಮೆಹುಲ್ ಜೆ.ಪಟೇಲ್ ಅವರು ಸೋಮವಾರ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದರು. ಎಸ್.ಆರ್.ಎಸ್ ಕಾಲೋನಿಯ ನೂತನ್, ಸಿದ್ದಲಿಂಗಪುರದ ಲೋಕೇಶ್, ಗುಂಗ್ರಾಲ್ ಛತ್ರದ ರಘುನಾಯಕ್, ಹಿನಕಲ್ ನಿವಾಸಿ ಶ್ರೀಕಂಠ ಅವರನ್ನು ಚಿತ್ರದಲ್ಲಿ ಕಾಣಬಹುದು.

ಸಾಮಾನ್ಯ ಕಾರ್ಯಕರ್ತನಾದ ನನಗೆ ಟಿಕೆಟ್ ನೀಡಿರುವುದು ಸಂತಸ ತಂದಿದೆ

● ಕೆ.ಆರ್.ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶ್ರೀವತ್ಸ ಹರ್ಷ ● ರಾಮದಾಸ್, ರಾಜೀವ್ ಸಹಕರಿಸುವ ವಿಶ್ವಾಸವಿದೆ





ಮೈಸೂರು, ಏ.17(ಎಸ್‌ಬಿಡಿ)– ಸಂಘಟನಾತ್ಮಕವಾಗಿ ವಿವಿಧ ಜವಾಬ್ದಾರಿ ನಿರ್ವಹಿಸಿದ ಓರ್ವ ಸಾಮಾನ್ಯ ಕಾರ್ಯಕರ್ತನಿಗೆ ಟಿಕೆಟ್ ನೀಡಿರುವುದರಿಂದ ತುಂಬಾ ಸಂತೋಷವಾಗಿದೆ ಎಂದು ಭಾರೀ ಪೈಪೋಟಿ ನಡುವೆಯೂ ಕೃಷ್ಣರಾಜ (ಕೆಆರ್) ವಿಧಾನಸಭಾ ಕ್ಷೇತ್ರದ ಬಿಜೆಪಿ ಟಿಕೆಟ್ ಗಿಟ್ಟಿಸಿರುವ ಟಿ.ಎಸ್. ಶ್ರೀವತ್ಸ ಹರ್ಷ ವ್ಯಕ್ತಪಡಿಸಿದರು.

ಟಿಕೆಟ್ ಘೋಷಣೆ ಬಳಿಕ ಮೈಸೂರಿನ ಬಿಜೆಪಿ ಕಚೇರಿಯಲ್ಲಿ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯಿಸಿದ ಅವರು, 1988ರಲ್ಲಿ ಅಗ್ರಹಾರ ವಾರ್ಡ್‌ನ ಪ್ರಧಾನ ಕಾರ್ಯದರ್ಶಿಯಾಗಿ ಪಕ್ಷದ ಕೆಲಸ ಆರಂಭಿಸಿ ನಂತರದಲ್ಲಿ ವಿವಿಧ ಜವಾಬ್ದಾರಿಗಳನ್ನು ನಿರ್ವಹಿಸಿ ಮೂರು ದಶಕಗಳ ಬಳಿಕ ಮೈಸೂರು ನಗರಾಧ್ಯಕ್ಷನಾಗಿ ಕೆಲಸ ಮಾಡುತ್ತಿದ್ದೇನೆ. ಪಕ್ಷ ಸಂಘಟನೆ ಹೊರತು ದೊಡ್ಡ ನಿರೀಕ್ಷೆಗಳಿರಲಿಲ್ಲ. ಆದರೆ ಅಭ್ಯರ್ಥಿ ಆಯ್ಕೆ ಹಿನ್ನೆಲೆಯಲ್ಲಿ ಕಾರ್ಯಕರ್ತರ ಅಭಿಪ್ರಾಯಕ್ಕೆ ಮನ್ನಣೆ ನೀಡಿ, ಬಿಜೆಪಿ ಕೇಂದ್ರ ಹಾಗೂ ರಾಜ್ಯದ ನಾಯಕತ್ವ, ಓರ್ವ ಸಾಮಾನ್ಯ ಕಾರ್ಯಕರ್ತನಿಗೆ ಇಂದು ಈ ಸ್ಥಾನ ಮಾನ ನೀಡಿದೆ. ಈ ಬಗ್ಗೆ ಏನು ಹೇಳಬೇಕೋ ತಿಳಿಯದಷ್ಟು ಸಂತೋಷವಾಗಿದೆ ಎಂದರು.

ಹೊಸಬರಿಗೆ ಅವಕಾಶ ನೀಡಿರುವ ಪಕ್ಷದ ನಿರ್ಧಾರದಿಂದ ಸಾಮಾನ್ಯ ಕಾರ್ಯಕರ್ತರ ನಂಬಿಕೆ ಹೆಚ್ಚಿಸಿದೆ. 34 ವರ್ಷಗಳಿಂದ ಪಕ್ಷದ ವಿವಿಧ ಜವಾಬ್ದಾರಿ ನಿರ್ವಹಿಸಿದ್ದೇನೆ ಪಕ್ಷ ವಹಿಸಿದ ಕೆಲಸವನ್ನು ಸಮರ್ಥವಾಗಿ ನಿರ್ವಹಿಸಿದ್ದೇನೆಂಬ ವಿಶ್ವಾಸವಿದೆ. ಕೋವಿಡ್ ಸಂದಿಗ್ಧ ಪರಿಸ್ಥಿತಿಯಲ್ಲಿ ಕಾರ್ಯಕರ್ತರೊಂದಿಗೆ ಸೇರಿ ಸಾರ್ವಜನಿಕರ ಸೇವೆ ಮಾಡಿದ್ದನ್ನೂ ನಾಯಕರು ಪರಿಗಣಿಸಿರಬಹುದು. ಹಾಲಿ ಶಾಸಕರಿರುವ ಕ್ಷೇತ್ರಗಳಲ್ಲಿ ಪಕ್ಷದ ಜಿಲ್ಲಾಧ್ಯಕ್ಷರಾದವರು ಟಿಕೆಟ್ ಬಯಸಿ ಗೊಂದಲ ಸೃಷ್ಟಿಸಬಾರದು. ಆ ಬಗ್ಗೆ ಕೇಂದ್ರ ಹಾಗೂ ರಾಜ್ಯ ನಾಯಕತ್ವ ತೀರ್ಮಾನಿಸಲಿದೆ ಎಂಬ ಸೂಚನೆಯಿತ್ತು. ಹಾಗಾಗಿ ಬಹಳ ನಿರೀಕ್ಷೆ ಇಟ್ಟುಕೊಂಡಿರಲಿಲ್ಲ. ಆದರೆ ಅಭಿಪ್ರಾಯ ಸಂಗ್ರಹ ನಂತರ ಕಾರ್ಯಕರ್ತರು ನಿಮ್ಮ ಹೆಸರು ಬರೆದಿದ್ದೇವೆ ಎನ್ನುತ್ತಿದ್ದರು. ಇದೀಗ ಕಾರ್ಯಕರ್ತರ ಅಭಿಪ್ರಾಯಕ್ಕೆ ಮನ್ನಣೆ ಸಿಕ್ಕಿದೆ ಎಂದು ಹೇಳಿದರು.

ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಅವರ ಒತ್ತಾಯದಿಂದ ಟಿಕೆಟ್ ಸಿಕ್ಕಿದೆ ಎಂಬ ಕೆಲವರ ಅಭಿಪ್ರಾಯಕ್ಕೆ ಪ್ರತಿಕ್ರಿಯಿಸಿ, ಹೀಗಾಗಿದೆ ಎಂದು ನನಗನ್ನಿಸುತ್ತಿಲ್ಲ. ಪಕ್ಷದ ರಾಜ್ಯಾಧ್ಯಕ್ಷರಾದ ನಳಿನ್ ಕುಮಾರ್ ಕಟೀಲ್ ಅವರೂ ಶಿಫಾರಸು ಮಾಡಿರಬಹುದು. ಬಿ.ಎಸ್.ಯಡಿಯೂರಪ್ಪನವರು ಪಕ್ಷದ ಅಧ್ಯಕ್ಷರಾಗಿದ್ದಾಗ ನನ್ನನ್ನು ರಾಜ್ಯ ಕಾರ್ಯಕಾರಿಣಿ ಸದಸ್ಯನಾಗಿ ನೇಮಿಸಿ, ಮಂಡ್ಯ ಜಿಲ್ಲೆ ಜವಾಬ್ದಾರಿ ವಹಿಸಿದ್ದರು. ಹಾಗಾಗಿ ಎಲ್ಲಾ ನಾಯಕರೂ ನನ್ನ ಹೆಸರನ್ನು ಶಿಫಾರಸು ಮಾಡಿರಬಹುದು ಎಂದರು.

ಟಿಕೆಟ್ ಈಗಷ್ಟೇ ಪ್ರಕಟವಾಗಿದೆ. ನಾಮಪತ್ರ ಸಲ್ಲಿಸಲು ಇನ್ನೂ ಎರಡು ದಿನ ಕಾಲಾವಕಾಶವಿದೆ. ಹಿರಿಯ ನಾಯಕರೊಂದಿಗೆ ಮಾತನಾಡಿ, ನಾಮಪತ್ರ ಸಲ್ಲಿಕೆಗೆ ಯಾರೆಲ್ಲಾ ರಾಜ್ಯ ನಾಯಕರು ಆಗಮಿಸುತ್ತಾರೆ ಎಂದು ಖಚಿತಪಡಿಸಿಕೊಂಡು ಮುಂದಿನ ಪ್ರಕ್ರಿಯೆ ನಡೆಸಲಾಗುವುದು. ಕೃಷ್ಣರಾಜ ಕ್ಷೇತ್ರ ಯಾವಾಗಲೂ ಬಿಜೆಪಿ ಕ್ಷೇತ್ರ. ಜನಸಂಘದ ಕಾಲದಲ್ಲಿ ಹೆಚ್.ಗಂಗಾಧರನ್ 2 ಬಾರಿ ಗೆದ್ದಿದ್ದರು. ನಂತರ ಎಸ್.ಎ.ರಾಮದಾಸ್ ಅವರು 4 ಬಾರಿ ಬಿಜೆಪಿ ಶಾಸಕರಾಗಿ ಗೆದ್ದು ಬಂದಿರುವ ಕ್ಷೇತ್ರವಿದು. ಹಾಗಾಗಿ ಇಲ್ಲಿನ ಮತದಾರರು ಸಹಜವಾಗಿ ಬಿಜೆಪಿಯನ್ನು ಬೆಂಬಲಿಸುವ ವಿಶ್ವಾಸವಿದೆ. ಪ್ರಧಾನಿ ಮೋದಿ, ಬಿ.ಎಸ್.ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಅವರ ಅತ್ಯುತ್ತಮ ಕೆಲಸಗಳು, ಕೋವಿಡ್ ಸಮಯದಲ್ಲಿ ತಂಡದ ನಿರ್ವಹಣೆ, ಈ ಎಲ್ಲಾ ಅಂಶಗಳ ಆಧಾರದಲ್ಲಿ ಮತದಾರರ ಆಶೀರ್ವಾದ ಪಡೆಯುವುದು ಸುಲಭವಾಗಬಹುದು ಎಂದು ಅಭಿಪ್ರಾಯಿಸಿದರು.

ಅಭಿನಂದನೆ: ಸಂಸದ ಪ್ರತಾಪ್ ಸಿಂಹ, ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ಮೇಯರ್ ಶಿವಕುಮಾರ್, ಜಿಲ್ಲಾ ಬ್ರಾಹ್ಮಣರ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್ ಸೇರಿದಂತೆ ಅನೇಕ ವಿಪ್ರ ಮುಖಂಡರು, ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಪಕ್ಷದ ಕಚೇರಿಯಲ್ಲಿ ಶ್ರೀವತ್ಸ ಅವರನ್ನು ಅಭಿನಂದಿಸಿದರು. ಈ ವೇಳೆ ಶ್ರೀವತ್ಸ ಬೆಂಬಲಿಗರು ಜೈಕಾರ ಹಾಕಿ ಸಂಭ್ರಮಾಚರಿಸಿದರು.

> **ಎಲ್ಲಾ ಚುನಾವಣೆ ಸಂದರ್ಭದಲ್ಲೂ ಇಬ್ಬರು ಅಥವಾ ಮೂವರು ಆಕಾಂಕ್ಷಿಗಳಿರುವುದು ಸಹಜ. ಎಸ್.ಎ.ರಾಮದಾಸ್ ಅವರು ನಾಲ್ಕು ಬಾರಿ ಶಾಸಕರಾಗಿ ಉತ್ತಮ ಕೆಲಸ ಮಾಡಿದ್ದಾರೆ. ಮೋದಿ ಯುಗೋತ್ಸವ ಇನ್ನಿತರ ಕಾರ್ಯಕ್ರಮಗಳ ಮೂಲಕ ಜನಸೇವೆ ಮಾಡಿದ್ದಾರೆ. ಹೆಚ್.ವಿ.ರಾಜೀವ್ ಅವರೂ ಮುಡಾ ಅಧ್ಯಕ್ಷರಾಗಿ ಅತ್ಯುತ್ತಮ ಕೆಲಸ ಮಾಡಿದ್ದಾರೆ. 1994ರ ಚುನಾವಣೆಯಿಂದಲೂ ನಾವು ಮೂವರೂ ಒಟ್ಟಿಗೆ ಕೆಲಸ ಮಾಡಿದ್ದು, ಉತ್ತಮ ಬಾಂಧವ್ಯವಿದೆ. ಯಾರಿಗೂ ನನ್ನೊಂದಿಗೆ ವೈರತ್ವವಿಲ್ಲ. ಇಬ್ಬರೂ ಹಿರಿಯ ನಾಯಕರ ಮನೆಗೂ ಹೋಗಿ ಮಾತನಾಡುತ್ತೇನೆ. ಪಕ್ಷ ನನ್ನ ತಾಯಿಯಿದ್ದಂತೆ ಎಂದು ರಾಮದಾಸ್ ಅವರು ಯಾವಾಗಲೂ ಹೇಳುತ್ತಾರೆ. ಹಾಗಾಗಿ ಇಬ್ಬರೂ ಪಕ್ಷದ ತೀರ್ಮಾನಕ್ಕೆ ವಿರುದ್ಧವಾಗಿ ಹೋಗುವುದಿಲ್ಲ ಎಂಬ ನಂಬಿಕೆ ಇದೆ. ನನಗೆ ಈ ಇಬ್ಬರು ನಾಯಕರ ಸಹಕಾರ ಅವಶ್ಯವಾಗಿದೆ. ಅದು ದಕ್ಕುತ್ತದೆ ಎಂಬ ಅಚಲ ವಿಶ್ವಾಸ ನನ್ನಲ್ಲಿದೆ.**
>
> **-ಟಿ.ಎಸ್.ಶ್ರೀವತ್ಸ, ಬಿಜೆಪಿ ಅಭ್ಯರ್ಥಿ, ಕೃಷ್ಣರಾಜ ಕ್ಷೇತ್ರ**

ಶ್ರೀವತ್ಸ ಬಗ್ಗೆ ಸಂಕ್ಷಿಪ್ತ ವಿವರ

ತಲಕಾಡಿನ ಟಿ.ಎನ್.ಶ್ರೀನಿವಾಸ ತಾತಾಚಾರ್ ಹಾಗೂ ರಂಗಲಕ್ಷ್ಮಿ ದಂಪತಿಯ 9 ಮಕ್ಕಳಲ್ಲಿ ಟಿ.ಎಸ್. ಶ್ರೀವತ್ಸ ಕೊನೆಯವರು. 1966ರ ನವೆಂಬರ್ 3ರಂದು ಜನಿಸಿದ ಇವರು, ಬೆಳೆದಿದ್ದೆಲ್ಲಾ ಮೈಸೂರಿನಲ್ಲಿ. ಬಿ.ಕಾಂ ಪದವೀಧರರಾಗಿರುವ ಇವರು, ಸದ್ಯ ಅಗ್ರಹಾರದ ರಾಮಾನುಜ ರಸ್ತೆ 2ನೇ ಕ್ರಾಸ್‌ನಲ್ಲಿ ನೆಲೆಸಿದ್ದಾರೆ. ಬಿಜೆಪಿ ಸಂಘಟನೆ ಜೊತೆಗೆ ಅಗರ್‌ಬತ್ತಿ ಪ್ಯಾಕಿಂಗ್ ಕೈಗಾರಿಕೆ ನಡೆಸುತ್ತಿದ್ದಾರೆ. 1988ರಲ್ಲಿ ಅಗ್ರಹಾರ ವಾರ್ಡ್ ಪ್ರಧಾನ ಕಾರ್ಯದರ್ಶಿಯಾಗಿ, ನಂತರ ವಾರ್ಡ್ ಅಧ್ಯಕ್ಷರಾಗಿ, ಕೃಷ್ಣರಾಜ ಕ್ಷೇತ್ರದ ಪ್ರಧಾನ ಕಾರ್ಯದರ್ಶಿ, ಕ್ಷೇತ್ರದ ಅಧ್ಯಕ್ಷ, ಜಿಲ್ಲಾ ಪ್ರಧಾನ ಕಾರ್ಯದರ್ಶಿ, ಜಿಲ್ಲಾ ಸಂಘಟನಾ ಪ್ರಧಾನ ಕಾರ್ಯದರ್ಶಿ, ವಿಭಾಗ ಸಂಘಟನಾ ಪ್ರಧಾನ ಕಾರ್ಯದರ್ಶಿ, ರಾಜ್ಯ ಕಾರ್ಯಕಾರಿಣಿ ಸದಸ್ಯರಾಗಿ ಕಾರ್ಯ ನಿರ್ವಹಿಸಿರುವ ಶ್ರೀವತ್ಸ, 2020ರ ಜನವರಿಯಿಂದ ಬಿಜೆಪಿ ಮೈಸೂರು ನಗರಾಧ್ಯಕ್ಷರಾಗಿದ್ದಾರೆ.

ರಾಮದಾಸ್‌ರವರೇ ಶ್ರೀವತ್ಸರನ್ನು ಗೆಲ್ಲಿಸಲಿದ್ದಾರೆ

ಸಂಸದ ಪ್ರತಾಪ ಸಿಂಹ ವಿಶ್ವಾಸ

ಮೈಸೂರು, ಏ.17(ಎಸ್‌ಪಿಎನ್)– ಮೈಸೂರು ಭಾಗದ ಬಿಜೆಪಿ ಹಿರಿಯ ನಾಯಕ, ಎಸ್.ಎ. ರಾಮದಾಸ್ ಅವರಿಗೆ ಅಸಮಾಧಾನವಿದ್ದರೂ, ಪಕ್ಷದ ತೀರ್ಮಾನವನ್ನು ಸ್ವಾಗತಿಸುತ್ತಾರೆ. ಅವರೇ ಮುಂದೆ ನಿಂತು ಅಭ್ಯರ್ಥಿ ಶ್ರೀವತ್ಸ ಅವರನ್ನು ಗೆಲ್ಲಿಸಿಕೊಂಡು ಬರಲಿದ್ದಾರೆ ಎಂದು ಸಂಸದ ಪ್ರತಾಪ ಸಿಂಹ ವಿಶ್ವಾಸ ವ್ಯಕ್ತಪಡಿಸಿದರು.

ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಅಭ್ಯರ್ಥಿ ಶ್ರೀವತ್ಸ ಅವರಿಗೆ ಶುಭ ಹಾರೈಸಿದ ನಂತರ ಮಾತನಾಡಿದ ಅವರು, ರಾಮದಾಸ್ ಅವರೊಬ್ಬ ಬಿಜೆಪಿಯ ಕಟ್ಟಾಳು. ಪಕ್ಷವನ್ನು ಅವರು, ತಮ್ಮ ತಾಯಿ ಎಂದೇ ಅವರು ಭಾವಿಸಿದ್ದಾರೆ. ಈ ಮೊದಲು ಹಿರಿಯ ಪುತ್ರ (ರಾಮದಾಸ್)ನಿಗೆ ಪಕ್ಷ ಟಿಕೆಟ್ ನೀಡಿತ್ತು. ಇದೀಗ ಕಿರಿಯ ಪುತ್ರ(ಶ್ರೀವತ್ಸ)ನಿಗೆ ಟಿಕೆಟ್ ನೀಡಿದೆ ಎಂದು ವಿಶ್ಲೇಷಿಸಿದರು.



ಅಲ್ಲದೆ, ಇನ್ನೊಬ್ಬ ಆಕಾಂಕ್ಷಿ ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್ ಅವರಿಗೆ ಮುಡಾ ಅಧ್ಯಕ್ಷ ಸ್ಥಾನ ನೀಡಲಾಗಿತ್ತು. ಅವರನ್ನು ಪಕ್ಷ ಯಾವುದೇ ಕಾರಣಕ್ಕೂ ಮೂಲೆ ಗುಂಪು ಮಾಡಿಲ್ಲ. ಅವರ ಸೇವೆಯನ್ನು ಗುರುತಿಸಿ ಮುಡಾ ಅಧ್ಯಕ್ಷ ಸ್ಥಾನ ನೀಡಲಾಗಿತ್ತು. ಅವರೂ ಸಹ ಟಿಕೆಟ್ ಆಕಾಂಕ್ಷಿಯಾಗಿದ್ದರು. ಇದೀಗ ಬಿಜೆಪಿ ಹೈ ಕಮಾಂಡ್ ಶ್ರೀವತ್ಸ ಅವರಿಗೆ ಅಭ್ಯರ್ಥಿ ಎಂದು ಘೋಷಣೆ ಮಾಡಿರುವುದರಿಂದ ಅವರೂ ಸಹ ಪಕ್ಷ ತೀರ್ಮಾನ ಸ್ವಾಗತಿಸಿ ಅಭ್ಯರ್ಥಿ ಪರ ಪ್ರಚಾರ ಮಾಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಬಾರಿ ತೀವ್ರ ಕುತೂಹಲ ಕೆರಳಿಸಿದ್ದ ಮೈಸೂರಿನ ಕೃಷ್ಣರಾಜ ವಿಧಾನ ಸಭಾ ಕ್ಷೇತ್ರಕ್ಕೆ ಈ ಬಾರಿ ಸಾಮಾನ್ಯ ಕಾರ್ಯಕರ್ತನಿಗೆ ಬಿಜೆಪಿ ಹೈಕಮಾಂಡ್ ಟಿಕೆಟ್ ಘೋಷಣೆ ಮಾಡಿರುವುದು ಸಂತಸದ ತಂದಿದೆ. ನಾನೂ ಸಹ 2013ರ ಲೋಕಸಭಾ ಚುನಾವಣೆಯಲ್ಲಿ ಸಾಮಾನ್ಯ ಕಾರ್ಯಕರ್ತನಾಗಿ ಚುನಾವಣೆಗೆ ಇಳಿದಿದ್ದೇ. ಇದೇ ಕಾರ್ಯಕರ್ತರು ನನ್ನನ್ನು ಗೆಲ್ಲಿಸಿಕೊಂಡು ಬಂದರು. 2ನೇ ಬಾರಿಗೆ ನನಗೆ ಪಕ್ಷ ಲೋಕಸಭೆಗೆ ಟಿಕೆಟ್ ನೀಡಿತು. ಆಗಲೂ ಇದೇ ಕಾರ್ಯಕರ್ತರು ಗೆಲ್ಲಿಸಿಕೊಂಡು ಬಂದರು. ಅದೇ ರೀತಿ ಶ್ರೀವತ್ಸ ಅವರ ಗೆಲುವಿಗೂ ನಮ್ಮ ಕಾರ್ಯಕರ್ತರು ಶ್ರಮಿಸುತ್ತಾರೆ ಎಂದರು.

ಹಾಲಿ ಶಾಸಕ ಎಸ್.ಎ.ರಾಮದಾಸ್ ಅವರಿಗೆ ಪಕ್ಷ 6 ಬಾರಿ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ಮಾಡಿಕೊಟ್ಟಿದೆ. ಬರೋಬರಿ 30 ವರ್ಷ ಶಾಸಕರಾಗಿ, ಸಚಿವರಾಗಿ ಕೆಲಸ ಮಾಡಿದ್ದಾರೆ. ಇದೀಗ ಬಿಜೆಪಿ ಹೈಕಮಾಂಡ್ ಶ್ರೀವತ್ಸ ಅವರ ಸ್ಪರ್ಧೆಗೆ ಅವಕಾಶ ಮಾಡಿಕೊಟ್ಟಿರುವುದರಿಂದ ಎಲ್ಲರೂ ಅವರನ್ನು ಒಮ್ಮತದ ಅಭ್ಯರ್ಥಿಯಾಗಿ ಸ್ವಾಗತಿಸುತ್ತೇವೆ ಎಂದರು.

ಮುಗಿಲು ಮುಟ್ಟಿದ ಕಾರ್ಯಕರ್ತರ ಜಯಘೋಷ: ಬಿಜೆಪಿ ಹೈಕಮಾಂಡ್ ಕೃಷ್ಣರಾಜ ಕ್ಷೇತ್ರಕ್ಕೆ ಶ್ರೀವತ್ಸ ಅವರ ಹೆಸರನ್ನು ಘೋಷಣೆ ಮಾಡುತ್ತಿದ್ದಂತೆ ಬಿಜೆಪಿ ಕಚೇರಿಯಲ್ಲಿ ಕಾರ್ಯಕರ್ತರ ಸಂಭ್ರಮ ಮುಗಿಲು ಮುಟ್ಟಿತ್ತು. ಸ್ಥಳದಲ್ಲಿದ್ದ ಅಭ್ಯರ್ಥಿ ಶ್ರೀವತ್ಸ ಹಾಗೂ ಸಂಸದ ಪ್ರತಾಪಸಿಂಹ ಅವರು ಭಾರತ ಮಾತೆ ಫೋಟೋಗೆ ಪುಷ್ಪಾರ್ಚನೆ ಮಾಡಿ, ಸಂತಸ ವ್ಯಕ್ತಪಡಿಸಿದರು.

'ಕೈ' ಅಭ್ಯರ್ಥಿ ದರ್ಶನ್ ಉಮೇದುವಾರಿಕೆ ಸಲ್ಲಿಕೆ

ನಂಜನಗೂಡು, ಏ.17– ನಂಜನಗೂಡು ಮೀಸಲು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ದರ್ಶನ್ ಧ್ರುವನಾರಾಯಣ್ ಅವರು ಅಸಂಖ್ಯಾತ ಕಾರ್ಯಕರ್ತರು, ಭಾರೀ ಜನಸ್ತೋಮದ ನಡುವೆ ಸೋಮವಾರ ನಾಮಪತ್ರ ಸಲ್ಲಿಸಿದರು.

ನಗರದ ವಿದ್ಯಾವರ್ಧಕ ಶಾಲಾ ಮೈದಾನದಲ್ಲಿ ಜಮಾಯಿಸಿದ ಕಾಂಗ್ರೆಸ್ ಕಾರ್ಯಕರ್ತರು ಹುಲ್ಲಹಳ್ಳಿ ರಸ್ತೆ ಮೂಲಕ ಚಿಂತಾಮಣಿ ಗಣಪತಿ ದೇವಾಲಯಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು. ನಂತರ ತೆರೆದ ವಾಹನ ಏರಿದ ಅಭ್ಯರ್ಥಿ ದರ್ಶನ್ ಊಟಿ–ಮೈಸೂರು ಮುಖ್ಯರಸ್ತೆ ಮೂಲಕ ತಾಲೂಕು ಕಚೇರಿವರೆಗೆ ಅದ್ದೂರಿ ಮೆರವಣಿಗೆಯಲ್ಲಿ ಸಾಗಿದರು. ಕಾಂಗ್ರೆಸ್ ನಾಯಕರು, ಕಾರ್ಯಕರ್ತರು ಪಕ್ಷದ ಬಾವುಟ, ಶಲ್ಯ, ಟೋಪಿ ಧರಿಸಿ ಹುಮ್ಮಸ್ಸಿನಿಂದ ಭಾಗಿಯಾದರು. ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ, ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಗುಂಡ್ಲು ಪೇಟೆ ಅಭ್ಯರ್ಥಿ ಗಣೇಶ್ ಪ್ರಸಾದ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಿ.ಜೆ.ಬಿಜಯ ಕುಮಾರ್ ಸಾಥ್ ನೀಡಿದರು.



ತಾಲೂಕು ಕಚೇರಿಗೆ ತೆರಳಿದ ದರ್ಶನ್ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಜಿಪಂ ಮಾಜಿ ಸದಸ್ಯೆ ಲತಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮಹೇಶ್, ಸಿ.ಎಂ. ಶಂಕರ್, ಶ್ರೀಕಂಠನಾಯಕ ಸಮ್ಮುಖದಲ್ಲಿ ಚುನಾವಣಾಧಿಕಾರಿ ಕೃಷ್ಣಮೂರ್ತಿಗೆ 3 ಸೆಟ್ ನಾಮಪತ್ರ ಸಲ್ಲಿಸಿದರು.

ದರ್ಶನ್ ಮಾತನಾಡಿ, ನನ್ನ ಬದಲಿಗೆ ನನ್ನ ತಂದೆ ಧ್ರುವನಾರಾಯಣ್ ನಾಮಪತ್ರ ಸಲ್ಲಿಸಬೇಕಿತ್ತು. ಆದರೆ ವಿಧಿ ಆಟದಿಂದ ಅವರು ವಿಧಿವಶರಾಗಿರುವ ಕಾರಣ ನಿಮ್ಮೆಲ್ಲರ ಒತ್ತಾಯದ ಮೇರೆಗೆ ನಾನು ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿದ್ದೇನೆ. ಅಲ್ಲದೆ ಪಕ್ಷದ ಶಕ್ತಿಯಾಗಿರುವ ಕಾರ್ಯಕರ್ತರ ನಡುವೆ ನಾಮಪತ್ರ ಸಲ್ಲಿಸುತ್ತಿದ್ದೇನೆ. ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್ ಪಕ್ಷದ ಹಸ್ತದ ಗುರುತಿಗೆ ಮತ ನೀಡಿ ನನ್ನನ್ನು ಜಯಶೀಲರನ್ನಾಗಿ ಮಾಡುವ ಮೂಲಕ ನಿಮ್ಮಗಳ ಸೇವೆ ಮಾಡಲು ಅವಕಾಶ ಕಲ್ಪಿಸಬೇಕು ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್ ಮಾತನಾಡಿದರು. ಈ ವೇಳೆ ಸಿನಿಮಾ ನಿರ್ದೇಶಕ ಎಸ್.ನಾರಾಯಣ್, ವಿಧಾನಸಭಾ ಉಸ್ತುವಾರಿ ಶ್ರೀಕಂಠು, ಸೋಮೇಶ್, ವಾಲ್ಮೀಕಿ ನಿಗಮದ ಮಾಜಿ ಅಧ್ಯಕ್ಷ ಎಚ್.ಸಿ.ಬಸವರಾಜು, ಮುಖಂಡರಾದ ದೊರೆಸ್ವಾಮಿ ನಾಯಕ, ನಾಗೇಶ್ ರಾಜ್, ನಾಗರಾಜಯ್ಯ, ಎಂ.ರಾಜು, ಬ್ಲಾಕ್ ಕಾಂಗ್ರೆಸ್ ಕಾರ್ಯದರ್ಶಿ ಬಸವ ರಾಜು, ಪ್ರದೀಪ್, ಕೆಪಿಸಿಸಿ ಸದಸ್ಯ ಅಕ್ಬರ್ ಅಲಿಂ, ಅಬ್ದುಲ್ ಖಾದರ್, ಕುಳ್ಳಯ್ಯ ಸೇರಿದಂತೆ ಸಾವಿರಾರು ಕಾರ್ಯಕರ್ತರಿದ್ದರು.

ನಾರಾಯಣಗೌಡ, ಸುರೇಶ್‌ಗೌಡ, ಚಲುವರಾಯಸ್ವಾಮಿ, ರಮೇಶ್‌ಬಾಬು ಸೇರಿ ಹಲವರು ಉಮೇದುವಾರಿಕೆ ಸಲ್ಲಿಕೆ







ಕೆಆರ್ ಪೇಟೆಯಲ್ಲಿ ಸಚಿವ, ಬಿಜೆಪಿ ಅಭ್ಯರ್ಥಿ ಕೆ.ಸಿ.ನಾರಾಯಣಗೌಡ, ನಾಗಮಂಗಲದಲ್ಲಿ ಮಾಜಿ ಸಚಿವ, ಕಾಂಗ್ರೆಸ್ ಅಭ್ಯರ್ಥಿ ಎನ್.ಚಲುವರಾಯಸ್ವಾಮಿ ಹಾಗೂ ಜೆಡಿಎಸ್ ಅಭ್ಯರ್ಥಿ, ಶಾಸಕ ಸುರೇಶ್‌ಗೌಡ ಸೋಮವಾರ ನಾಮಪತ್ರ ಸಲ್ಲಿಸಿದರು.

ಮಂಡ್ಯ, ಏ.17(ಮೋಹನ್‌ರಾಜ್)– ಸಕ್ಕರೆ ನಾಡು ಮಂಡ್ಯ ಜಿಲ್ಲೆಯಲ್ಲಿ ಐದಕ್ಕೂ ಹೆಚ್ಚು ಮಂದಿ ಘಟಾನುಘಟಿಗಳು ಸೋಮವಾರ ಉಮೇದುವಾರಿಕೆ ಸಲ್ಲಿಸಿದರು.

ಕೆಸಿಎನ್ ನಾಮಪತ್ರ: ಕೆ.ಆರ್.ಪೇಟೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಕೆ.ಸಿ.ನಾರಾಯಣಗೌಡ ಪತ್ನಿ ದೇವಕಿ ಸಮೇತರಾಗಿ ಸೋಮವಾರ ಮಧ್ಯಾಹ್ನ ಚುನಾವಣಾಧಿಕಾರಿ ಕೃಷ್ಣಕುಮಾರ್ ಅವರಿಗೆ ಸಹಾಯಕ ಚುನಾವಣಾಧಿಕಾರಿ ನಿಸರ್ಗಪ್ರಿಯ ಅವರ ಸಮಕ್ಷಮದಲ್ಲಿ ನಾಮಪತ್ರ ಸಲ್ಲಿಸಿದರು.

ಬಳಿಕ ಮಾತನಾಡಿದ ಅವರು, ರಾಜ್ಯ ಬಿಜೆಪಿ ಸರ್ಕಾರದಲ್ಲಿ ಕ್ರಿಯಾಶೀಲವಾಗಿ ಕಾರ್ಯ ನಿರ್ವಹಿಸಿ ಕೆ.ಆರ್.ಪೇಟೆಯನ್ನು ಜಿಲ್ಲೆಯಲ್ಲೇ ಮಾದರಿ ತಾಲೂಕನ್ನಾಗಿ ಅಭಿವೃದ್ಧಿಪಡಿಸಿ, ಏತ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸಿ, ಶಾಶ್ವತವಾಗಿ ಸಂತೇಬಾಚಹಳ್ಳಿ, ಶೀಳನೆರೆ ಹಾಗೂ ಬೂಕನಕೆರೆ ಹೋಬಳಿ ಬರಡು ಭೂಮಿಯ ಕೆರೆಕಟ್ಟೆಗಳನ್ನು ತುಂಬಿಸಿ ಇತಿಹಾಸ ನಿರ್ಮಿಸಿರುವ ಜೊತೆಗೆ 400 ಕೋಟಿ ರೂ. ವೆಚ್ಚದ ಶುದ್ಧ ಕುಡಿಯುವ ನೀರಿನ ಯೋಜನೆ ಅನುಷ್ಠಾನ, ಶಿಕ್ಷಣ, ನೀರಾವರಿ, ಆರೋಗ್ಯ ಸೇರಿದಂತೆ ವಿದ್ಯುತ್ ಕ್ಷೇತ್ರದಲ್ಲಿ ಸಬ್ ಸ್ಟೇಷನ್‌ಗಳನ್ನು ನಿರ್ಮಿಸಿ ಕೆ.ಆರ್.ಪೇಟೆಗೆ ಸೆಸ್ಕ್ ವಿಭಾಗ ಕಚೇರಿ, ಟ್ರಾನ್ಸ್‌ಫಾರ್ಮರ್ ದುರಸ್ಥಿ ಕೇಂದ್ರ, ನವೋದಯ ಮಾದರಿ ಅಲ್ಪಸಂಖ್ಯಾತರ ವಸತಿ ಶಾಲೆ ಮಂಜೂರು ಮಾಡಿಸಿ ತಂದಿರುವ ತಮಗೆ ಮತ್ತೊಂದು ಅವಕಾಶ ನೀಡಿ ಭಾರೀ ಬಹುಮತಗಳ ಅಂತರದಿಂದ ಗೆಲ್ಲಿಸಿಕೊಡಬೇಕು ಎಂದು ಮನವಿ ಮಾಡಿದರು. ಈ ವೇಳೆ ಮುಡಾ ಅಧ್ಯಕ್ಷ ಕೆ.ಶ್ರೀನಿವಾಸ್, ಜಿಪಂ ಮಾಜಿ ಉಪಾಧ್ಯಕ್ಷ ಎಸ್.ಅಂಬರೀಶ್, ಆಪ್ತ ಸಹಾಯಕ ದಯಾನಂದ ಇತರರಿದ್ದರು.

ಸುರೇಶ್‌ಗೌಡ: ನಾಗಮಂಗಲ ಶಾಸಕ ಹಾಗೂ ಜೆಡಿಎಸ್ ಅಭ್ಯರ್ಥಿ ಕೆ.ಸುರೇಶ್‌ಗೌಡ ಭಾರೀ ಬೆಂಬಲಿಗರೊಂದಿಗೆ ತೆರಳಿ ನಾಮಪತ್ರ ಸಲ್ಲಿಸಿದರು.

ಪಟ್ಟಣದ ಸೌಮ್ಯ ಕೇಶವ ದೇಗುಲದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಬಳಿಕ 10 ಸಾವಿರಕ್ಕೂ ಅಧಿಕ ಜೆಡಿಎಸ್ ಕಾರ್ಯಕರ್ತರೊಂದಿಗೆ ಮೆರವಣಿಗೆ ಹೊರಟ ಗೌಡರು, ಪಟ್ಟಣದ ಮಿನಿ ವಿಧಾನಸೌಧದಲ್ಲಿ ತಮ್ಮ ಉಮೇದುವಾರಿಕೆ ಸಲ್ಲಿಸಿದರು. ನಾಮಪತ್ರ ಸಲ್ಲಿಕೆ ವೇಳೆ ಮಾಜಿ ಶಾಸಕರಾದ ಕೆ.ಟಿ.ಶ್ರೀಕಂಠೇಗೌಡ, ಎನ್.ಅಪ್ಪಾಜಿಗೌಡ, ಮನ್‌ಮುಲ್ ನಿರ್ದೇಶಕ ನೆಲ್ಲಿಗೆರೆ ಬಾಲು, ಸುರೇಶ್‌ಗೌಡ ಪತ್ನಿ ಉಪಸ್ಥಿತರಿದ್ದರು.

ಬಳಿಕ ಮಾತನಾಡಿದ ಸುರೇಶ್‌ಗೌಡ, ರಾಜ್ಯದ ಬಡವರು, ರೈತರು, ಕಾರ್ಮಿಕರ ಉಳಿವಿಗೆ ಕುಮಾರಸ್ವಾಮಿ ಸಿಎಂ ಆಗಬೇಕು. ಆ ಕಾರಣಕ್ಕೆ ಮತದಾರರು ನನ್ನನ್ನು ಬೆಂಬಲಿಸಬೇಕು. ಕಳೆದ 5 ವರ್ಷದಲ್ಲಿ ತಾಲೂಕಿನ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಿದ್ದು, ಮತ್ತಷ್ಟು ಕ್ಷೇತ್ರದ ಅಭಿವೃದ್ಧಿಗಾಗಿ ನನಗೆ ಮತಕೊಡಬೇಕೆಂದು ಮನವಿ ಮಾಡಿದರು.

ಚಲುವರಾಯಸ್ವಾಮಿ: ನಾಗಮಂಗಲ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎನ್. ಚಲುವರಾಯಸ್ವಾಮಿ ಸೋಮವಾರ ನಾಮಪತ್ರ ಸಲ್ಲಿಸಿದರು. ಪಟ್ಟಣದ ಸೌಮ್ಯಕೇಶವ ದೇಗುಲದಿಂದ ಸಾವಿರಾರು ಕಾರ್ಯಕರ್ತರೊಂದಿಗೆ ಮೆರವಣಿಗೆ ಹೊರಟ ಚಲುವರಾಯಸ್ವಾಮಿ, ಪಟ್ಟಣದ ಮಿನಿವಿಧಾನಸೌಧಕ್ಕೆ ಆಗಮಿಸಿ, ತಮ್ಮ ಉಮೇದುವಾರಿಕೆ ಸಲ್ಲಿಸಿದರು. ಈ ವೇಳೆ ಮಾಜಿ ಸಚಿವ ಪಿ.ಎಂ.ನರೇಂದ್ರ ಸ್ವಾಮಿ, ಮನ್‌ಮುಲ್ ಮಾಜಿ ನಿರ್ದೇಶಕ ತೂಬಿನಕೆರೆ ಜವರೇಗೌಡ, ಚಲುವರಾಯ ಸ್ವಾಮಿ ಪತ್ನಿ ಧನಲಕ್ಷ್ಮಿ ಸೇರಿದಂತೆ ಇತರರಿದ್ದರು.





ಶ್ರೀರಂಗಪಟ್ಟಣದಲ್ಲಿ ಮಾಜಿ ಶಾಸಕ ಹಾಗೂ ಕಾಂಗ್ರೆಸ್ ಅಭ್ಯರ್ಥಿ ರಮೇಶ್‌ಬಾಬು ಬಂಡಿಸಿದ್ದೇಗೌಡ, ಬಿಜೆಪಿ ಅಭ್ಯರ್ಥಿ ಇಂಡುವಾಳು ಸಚ್ಚಿದಾನಂದ ನಾಮಪತ್ರ ಸಲ್ಲಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಚುನಾವಣೆ ನನಗೆ ಮಾಡು ಇಲ್ಲವೇ ಮಡಿ ಎಂಬಂತಾಗಿದ್ದು, ಒಂದು ವೇಳೆ ಈ ಚುನಾವಣೆಯಲ್ಲಿ ನಾನು ಸೋತರೆ ಮತ್ತೆಂದೂ ಸ್ಪರ್ಧಿಸಲ್ಲ. ಅಭಿವೃದ್ಧಿ ಮಾಡಿದ್ದೇನೆ. ಮತದಾರರು ಮತ ನೀಡುವ ಭರವಸೆ ಇದೆ ಎಂದರು.

ರಮೇಶ್ ಬಂಡಿಸಿದ್ದೇಗೌಡ: ಶ್ರೀರಂಗಪಟ್ಟಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎ.ಬಿ.ರಮೇಶ್ ಬಾಬು ಬಂಡಿಸಿದ್ದೇಗೌಡ ಸೋಮವಾರ ಚುನಾವಣಾಧಿಕಾರಿ ಎಂ.ಬಾಬು ಅವರಿಗೆ ನಾಮಪತ್ರ ಸಲ್ಲಿಸಿದರು.

ಪಟ್ಟಣದ ಖಾಸಗಿ ಬಸ್ ನಿಲ್ದಾಣದಿಂದ ಸಾವಿರಾರು ಕಾರ್ಯಕರ್ತರೊಂದಿಗೆ ಮೆರವಣಿಗೆ ನಡೆಸಿದ ಬಂಡಿಸಿದ್ದೇಗೌಡ, ಬಳಿಕ ತಾಲೂಕು ಕಚೇರಿಗೆ ತೆರಳಿ ಉಮೇದುವಾರಿಕೆ ಸಲ್ಲಿಸಿದರು. ಈ ಸಂದರ್ಭ ಕಾಂಗ್ರೆಸ್ ಮುಖಂಡರಾದ ಎಂ.ಪುಟ್ಟೇಗೌಡ, ಪುರಸಭೆ ಸದಸ್ಯ ಎಂ.ಎಲ್.ದಿನೇಶ್ ಇತರರಿದ್ದರು.

ಇಂದ್ರೇಶ್: ಮೇಲುಕೋಟೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಎನ್.ಎಸ್. ಇಂದ್ರೇಶ್ ಶಕ್ತಿ ಪ್ರದರ್ಶನ ಮಾಡುವ ಮೂಲಕ ನಾಮಪತ್ರ ಸಲ್ಲಿಸಿದರು. ಬೆಳಗ್ಗೆ ಪಟ್ಟಣದ ಕಾಮನಚೌಕ(ಹಿರೇಮರಳಿ ಆಟೋ ನಿಲ್ದಾಣ)ದ ಬಳಿಯ ಶ್ರೀರಾಮ ಮಂದಿರದಲ್ಲಿ ಪೂಜೆ ಸಲ್ಲಿಸಿ ಬೆಳಗ್ಗೆ 11 ಗಂಟೆಗೆ ಮೆರವಣಿಗೆಯಲ್ಲಿ ಮಿನಿ ವಿಧಾನಸೌಧಕ್ಕೆ ತೆರಳಿ ಇಂದ್ರೇಶ್ ನಾಮಪತ್ರ ಸಲ್ಲಿಸಿದರು. ರ‍್ಯಾಲಿಯಲ್ಲಿ ಅಭ್ಯರ್ಥಿ ಡಾ.ಎನ್.ಎಸ್.ಇಂದ್ರೇಶ್ ಜತೆಗೆ ರಘು ಕೌಟಿಲ್ಯ, ಪತ್ನಿ ಪರಿಮಳ ಇಂದ್ರೇಶ್, ಬಿಜೆಪಿ ಅಭ್ಯರ್ಥಿ ಅಶೋಕ್, ಮಂಜುಳ ಸೇರಿದಂತೆ ಹಲವು ಗಣ್ಯರು ಪಾಲ್ಗೊಂಡಿದ್ದರು. ಪಟ್ಟಣದ ತಾಲೂಕು ಕಚೇರಿಗೆ ತೆರಳಿದ ಬಿಜೆಪಿ ಅಭ್ಯರ್ಥಿ ಡಾ.ಎನ್.ಎಸ್. ಇಂದ್ರೇಶ್, ಪತ್ನಿ ಪರಿಮಳ, ಬಿಜೆಪಿ ಅಧ್ಯಕ್ಷ ಅಶೋಕ್, ಮುಖಂಡ ನಂದೀಶ್ ಅವರೊಟ್ಟಿಗೆ ಚುನಾವಣಾಧಿಕಾರಿ ವಿಕ್ರಮ್ ರಾಜ್ ಅರಸ್.ಜಿ. ಅವರಿಗೆ ನಾಮಪತ್ರ ಸಲ್ಲಿಸಿದರು.

ಎಸ್.ಪಿ.ಸ್ವಾಮಿ: ಮದ್ದೂರು ಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಮನ್‌ಮುಲ್ ನಿರ್ದೇಶಕ ಎಸ್.ಪಿ.ಸ್ವಾಮಿ ಸಾವಿರಾರು ಬೆಂಬಲಿಗರೊಂದಿಗೆ ತಾಲೂಕು ಕಚೇರಿಗೆ ಮೆರವಣಿಗೆ ಮೂಲಕ ತೆರಳಿ ಚುನಾವಣಾಧಿಕಾರಿಗಳಿಗೆ ನಾಮಪತ್ರ ಸಲ್ಲಿಸಿದರು. ಈ ವೇಳೆ ಪತ್ನಿ, ಜಿಪಂ ಮಾಜಿ ಅಧ್ಯಕ್ಷೆ ನಾಗರತ್ನಸ್ವಾಮಿ, ಸಂಸದೆ ಸುಮಲತಾ, ಜಿಪಂ ಮಾಜಿ ಸದಸ್ಯ ಬೋರಯ್ಯ, ವಿಎಸ್‌ಎಸ್‌ಎನ್‌ಬಿ ಅಧ್ಯಕ್ಷ ಕಿಟ್ಟಿ ಇತರರಿದ್ದರು.

ಸಚ್ಚಿದಾನಂದ: ಶ್ರೀರಂಗಪಟ್ಟಣ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಇಂಡುವಾಳು ಸಚ್ಚಿದಾನಂದ ಸೋಮವಾರ ನಾಮಪತ್ರ ಸಲ್ಲಿಸಿದರು. ಸಂಸದೆ ಸುಮಲತಾ ಅಂಬರೀಶ್, ಚಿತ್ರನಟ ದರ್ಶನ್ ಅಭ್ಯರ್ಥಿ ಇಂಡುವಾಳು ಸಚ್ಚಿದಾನಂದರಿಗೆ ಸಾಥ್ ನೀಡಿದರು.

ಪಟ್ಟಣದ ಕುವೆಂಪು ವೃತ್ತದಿಂದ ಸಾವಿರಾರು ಕಾರ್ಯಕರ್ತರು, ಮುಖಂಡರುಗಳೊಂದಿಗೆ ತಾಲೂಕು ಕಚೇರಿಗೆ ತೆರಳಿದ ಸಚ್ಚಿದಾನಂದ, ತಹಸೀಲ್ದಾರ್ ಅಶ್ವಿನಿ ನೇತೃತ್ವದಲ್ಲಿ ಚುನಾವಣಾಧಿಕಾರಿ ಎಂ.ಬಾಬು ಅವರಿಗೆ ನಾಮಪತ್ರ ಸಲ್ಲಿಸಿದರು. ಇದಕ್ಕೂ ಮುನ್ನ ಬೃಹತ್ ಮೆರವಣಿಗೆಯಲ್ಲಿ ಸಚ್ಚಿದಾನಂದಗೆ ನಟ ದರ್ಶನ್, ಸಂಸದೆ ಸುಮಲತಾ, ಬಿಜೆಪಿ ರೈತ ಮೋರ್ಚಾ ಉಪಾಧ್ಯಕ್ಷ ಕೆ.ಎಸ್.ನಂಜುಂಡೇಗೌಡ, ರಾಜ್ಯಕಾರ್ಯಕಾರಿಣಿ ಸಮಿತಿ ಸದಸ್ಯ ಡಾ.ಸಿದ್ದರಾಮಯ್ಯ, ಜಿಲ್ಲಾ ಉಪಾಧ್ಯಕ್ಷ ಟಿ.ಶ್ರೀಧರ್, ತಾಲೂಕು ಅಧ್ಯಕ್ಷ ಪೀಹಳ್ಳಿ ರಮೇಶ್ ಸಾಥ್ ನೀಡಿದರು.

ಘಟಾನುಘಟಿಗಳಿಂದ ಇಂದು ನಾಮಪತ್ರ ಸಲ್ಲಿಕೆ

ಮಂಗಳವಾರ ಮೇಲುಕೋಟೆ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಸಿ.ಎಸ್. ಪುಟ್ಟರಾಜು, ಕೆ.ಆರ್.ಪೇಟೆ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಹೆಚ್.ಟಿ.ಮಂಜು, ಶ್ರೀರಂಗಪಟ್ಟಣ ಜೆಡಿಎಸ್ ಅಭ್ಯರ್ಥಿ ರವೀಂದ್ರ ಶ್ರೀಕಂಠಯ್ಯ ನಾಮಪತ್ರ ಸಲ್ಲಿಕೆ ಮಾಡಲಿದ್ದು, ಮೂರು ಅಭ್ಯರ್ಥಿಗಳ ಪರ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಭಾಗವಹಿಸಲಿದ್ದಾರೆ. ಇನ್ನು ಮಳವಳ್ಳಿ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಡಾ.ಕೆ.ಅನ್ನದಾನಿ ನಾಮಪತ್ರ ಸಲ್ಲಿಸಲಿದ್ದು, ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಭಾಗಿಯಾಗಲಿದ್ದಾರೆ. ಇವರಲ್ಲದೇ ನಾಗಮಂಗಲ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಸುಧಾ ಶಿವರಾಮೇಗೌಡ, ನಾಗಮಂಗಲ ಪಕ್ಷೇತರ ಅಭ್ಯರ್ಥಿ ಫೈಟರ್ ರವಿ ನಾಮಪತ್ರ ಸಲ್ಲಿಸಲಿದ್ದಾರೆ.



ಮದ್ದೂರು ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಪಿ.ಸ್ವಾಮಿ ತಾಲೂಕು ಕಚೇರಿಗೆ ಮೆರವಣಿಗೆ ಮೂಲಕ ತೆರಳಿ ಚುನಾವಣಾಧಿಕಾರಿಗಳಿಗೆ ನಾಮಪತ್ರ ಸಲ್ಲಿಸಿದರು.



ಮೇಲುಕೋಟೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಎನ್.ಎಸ್.ಇಂದ್ರೇಶ್ ಸೋಮವಾರ ನಾಮಪತ್ರ ಸಲ್ಲಿಸಿದರು.

ಪುಟ್ಟರಾಜು ವಿರುದ್ಧ ದರ್ಶನ್ ಬೆಂಬಲಿಗರ ಆರೋಪ ಸರಿಯಲ್ಲ



ಮಂಡ್ಯ, ಏ.17– ಮೇಲುಕೋಟೆ ಕ್ಷೇತ್ರದ ಶಾಸಕ ಸಿ.ಎಸ್.ಪುಟ್ಟರಾಜು ಅವರ ವಿರುದ್ಧ ಸರ್ವೋದಯ ಕರ್ನಾಟಕ ಪಕ್ಷದ ಅಭ್ಯರ್ಥಿ ದರ್ಶನ್ ಪುಟ್ಟಣ್ಣಯ್ಯ ಹಾಗೂ ಅವರ ಬೆಂಬಲಿಗರು ಮಾಡುತ್ತಿರುವ ಅಪಪ್ರಚಾರವನ್ನು ಮೇಲುಕೋಟೆ ಕ್ಷೇತ್ರ ವ್ಯಾಪ್ತಿಯ ದುದ್ದ ಹೋಬಳಿ ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು ಖಂಡಿಸುತ್ತೇವೆ ಎಂದು ಮಾಜಿ ಶಾಸಕ ಜಿ.ಬಿ.ಶಿವಕುಮಾರ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಂಡ್ಯ ತಾಲೂಕಿನ ದುದ್ದ ಹೋಬಳಿ ಮತದಾರರು ಸಮಾಜಮುಖಿ ಕಳಕಳಿಯುಳ್ಳ ಅನೇಕ ನಾಯಕರಿಗೆ ರಾಜಕೀಯ ಸ್ಥಾನಮಾನ ಕಲ್ಪಿಸಿದ್ದಾರೆ. ಆ ಪೈಕಿ ದಿ.ಜಿ.ಎಸ್.ಬೊಮ್ಮೇಗೌಡ, ಹೆಚ್.ಡಿ.ಚೌಡಯ್ಯ, ಜಿ.ಬಿ.ಶಿವಕುಮಾರ್, ಎನ್.ತಮ್ಮಣ್ಣ ಸೇರಿದಂತೆ ಹಾಲಿ ಶಾಸಕ ಸಿ.ಎಸ್.ಪುಟ್ಟರಾಜು ಹಾಗೂ ರೈತ ನಾಯಕ ಕೆ.ಎಸ್.ಪುಟ್ಟಣ್ಣಯ್ಯ ಅವರ ರಾಜಕೀಯ ಏಳಿಗೆಗೆ ಈ ಹೋಬಳಿ ಮತದಾರರ ಆಶೀರ್ವಾದ ದೊರೆತಿದೆ ಎಂದರು. 2018ರ ಚುನಾವಣೆಯಲ್ಲಿ ಜಯಗಳಿಸಿದ ಹಾಲಿ ಶಾಸಕ ಪುಟ್ಟರಾಜು ಅವರು ಸಮ್ಮಿಶ್ರ ಸರ್ಕಾರದಲ್ಲಿ ಜಿಲ್ಲಾ ಉಸ್ತುವಾರಿ ಹಾಗೂ ಸಣ್ಣ ನೀರಾವರಿ ಸಚಿವರಾಗಿ ದುದ್ದ ಏತ ನೀರಾವರಿ ಯೋಜನೆ, ಶ್ಯಾದನಹಳ್ಳಿ ಏತ ನೀರಾವರಿ ಯೋಜನೆ, ಬಳೆತಗುಪ್ಪೆ, ಏತ ನೀರಾವರಿ ಯೋಜನೆ, ಮಲ್ಲಿಗೆರೆ ಏತ ನೀರಾವರಿ ಯೋಜನೆ, ಸುಂಕಾ ತೊಣ್ಣೂರು ಏತ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಲು ಶ್ರಮಿಸಿದ್ದಾರೆ. ಈ ಮೂಲಕ ನೂರಾರು ಕೆರೆ–ಕಟ್ಟೆಗಳನ್ನು ತುಂಬಿಸಲು ಮತ್ತು ಸಾವಿರಾರು ಎಕರೆ ಮಳೆಯಾಶ್ರಿತ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವ ಮಹತ್ತರ ಯೋಜನೆ ಪೂರ್ಣಗೊಳಿಸಿದ್ದಾರೆ ಎಂದು ತಿಳಿಸಿದರು.

ದುದ್ದ ಹೋಬಳಿ ವ್ಯಾಪ್ತಿಯ ಸಂಪರ್ಕ ರಸ್ತೆಗಳ ಅಭಿವೃದ್ಧಿ, ಶಾಲಾ ಹಾಗೂ ಕಾಲೇಜು ಕಟ್ಟಡಗಳ ನಿರ್ಮಾಣ, ಕುಡಿಯುವ ನೀರಿನ ಸಂಪರ್ಕಕ್ಕೆ ಶ್ರಮಿಸಿದ್ದಾರೆ. ತಮ್ಮ ದುಡಿಮೆಯ ಪಾಲಿನ ಹಣದಲ್ಲಿ ದುದ್ದ ವ್ಯಾಪ್ತಿಯ ಹತ್ತಾರು ದೇವಾಲಯಗಳ ಜೀರ್ಣೋದ್ಧಾರಕ್ಕೆ ಲಕ್ಷಾಂತರ ರೂಪಾಯಿ ಹಣ ನೀಡಿ, ತಮ್ಮ ಧಾರ್ಮಿಕ ಪ್ರೀತಿಯನ್ನು ಸಾಬೀತು ಮಾಡಿದ್ದಾರೆ. ಶಾಸಕ ಸಿ.ಎಸ್.ಪುಟ್ಟರಾಜು ಹಾಗೂ ಪಕ್ಷದ ಸ್ಥಳೀಯ ಮುಖಂಡರು ಕ್ಷೇತ್ರ ಅಭಿವೃದ್ಧಿ ಜೊತೆಗೆ ವೈಯಕ್ತಿಕ ಸಂಕಷ್ಟಗಳಿಗೆ ನೆರವಾಗಿ ಅನೇಕ ಬಡ ವಿದ್ಯಾವಂತ ವಿದ್ಯಾರ್ಥಿಗಳ ಉನ್ನತ ವ್ಯಾಸಂಗ ಹಾಗೂ ಇಂಜಿನಿಯರ್ ಹಾಗೂ ವೈದ್ಯಕೀಯ ಶಿಕ್ಷಣಕ್ಕೆ ನೆರವಾಗಿದ್ದಾರೆ. ಇಂತಹವರ ಬಗ್ಗೆ ಲಘು ಟೀಕೆ ಯಾರಿಗೂ ಶೋಭೆ ತರುವುದಿಲ್ಲ ಎಂದು ತಿರುಗೇಟು ನೀಡಿದರು. ದಿನದ ಬಹುಪಾಲು ವೇಳೆಯನ್ನು ಕ್ಷೇತ್ರದ ಜನರ ಅಭ್ಯುದಯಕ್ಕೆ ಮೀಸಲಿಟ್ಟಿರುವ ಶಾಸಕರ ಬಗ್ಗೆ ಸರ್ವೋದಯ ಕರ್ನಾಟಕ ಪಕ್ಷದ ಕಾರ್ಯಕರ್ತರು ಅಪಪ್ರಚಾರಗೈದು 'ದುಡ್ಡಿಗಾಗಿ ಅಲ್ಲ, ದುದ್ದ ಸ್ವಾಭಿಮಾನಕ್ಕೆ ಸಿದ್ದ' ಎಂಬ ಶೀರ್ಷಿಕೆಯಡಿ ಪಾದಯಾತ್ರೆಗೆ ಮುಂದಾಗಿ ಕ್ಷೇತ್ರದಲ್ಲಿ ಪ್ರಚೋದನಾ ರಾಜಕಾರಣಕ್ಕೆ ಮುಂದಾದರೆ ಅದರ ಪರಿಣಾಮವನ್ನು ಎದುರಿಸಲು ಮುಂದಾಗಬೇಕಾಗುತ್ತದೆ ಎಂದು ಎಚ್ಚರಿಸಿದರು.

2013ರಲ್ಲಿ ಸರ್ವೋದಯ ಕರ್ನಾಟಕ ಪಕ್ಷದ ಅಭ್ಯರ್ಥಿ ಜಯಗಳಿಸಿರುತ್ತಾರೆ. ಇದು ದುದ್ದ ಜನರ ತೀರ್ಪೇ ಹೊರತು, ಮತ ಮಾರಾಟವಲ್ಲ ಎಂಬುದು ನಮ್ಮ ಅಚಲ ನಂಬಿಕೆ. ಇದನ್ನು ಅವಮಾನಿಸುವುದಾದರೆ ದುದ್ದ ಹೋಬಳಿ ಮತದಾರರನ್ನು ಅಣಕಿಸುವ ನಿಮ್ಮ ಪಾದಯಾತ್ರೆಯ ಶೀರ್ಷಿಕೆಯನ್ನು ಹಿಂಪಡೆಯಿರಿ ಎಂಬುದು ನಮ್ಮೆಲ್ಲರ ಒಕ್ಕೊರಲ ಒತ್ತಾಯವಾಗಿದೆ ಎಂದರು. ರಾಜ್ಯ ಒಕ್ಕಲಿಗರ ಸಂಘದ ಮಾಜಿ ನಿರ್ದೇಶಕ ಮಾಜಿ ಉಪಾಧ್ಯಕ್ಷ ಹೆಚ್.ಎಲ್. ಶಿವಣ್ಣ ಮಾತನಾಡಿದರು. ಪತ್ರಿಕಾಗೋಷ್ಠಿಯಲ್ಲಿ ಜಿಪಂ.ಮಾಜಿ ಸದಸ್ಯ ಸಿ.ಮಾದಪ್ಪ, ಮುಖಂಡರಾದ ಬೆಟ್ಟಸ್ವಾಮಿ, ಬಾಲರಾಜು, ಬದ್ರಿ ನಾರಾಯಣ್, ಕೃಷ್ಣ ಉಪಸ್ಥಿತರಿದ್ದರು.

ಅಬಕಾರಿ ಇಲಾಖೆಯಿಂದ ಮದ್ಯ, ಗಾಂಜಾ ವಶ

ಮಂಡ್ಯ, ಏ.17– ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಫೆ.18ರಿಂದ ಏ.16ರವರೆಗೆ ಅಬಕಾರಿ ಇಲಾಖೆಯಿಂದ 1,16,74,284 ರೂ. ಮೌಲ್ಯದ ಮದ್ಯ, ಗಾಂಜಾ ಹಾಗೂ ವಸ್ತುಗಳನ್ನು ವಶಪಡಿಸಿಕೊಂಡು 454 ಆರೋಪಿಗಳನ್ನು ಬಂಧಿಸಲಾಗಿದೆ.

ಈ ಕುರಿತು ಸೋಮವಾರ ಮಾಹಿತಿ ನೀಡಿರುವ ಅಬಕಾರಿ ಜಿಲ್ಲಾಧಿಕಾರಿ ಅವರು, ವಿವಿಧೆಡೆ ದಾಳಿ ನಡೆಸಿ 97 ಘೋರ ಮೊಕದ್ದಮೆಗಳು, ಕಲಂ 15(ಎ) ಅಡಿ 435, ಸನ್ನದು ಷರತ್ತು ಉಲ್ಲಂಘನೆ ಅಡಿ 135 ಹಾಗೂ 2 ಎನ್‌ಡಿಪಿಎಸ್ ಪ್ರಕರಣಗಳಲ್ಲಿ 7 ಗಾಂಜಾ ಗಿಡ ಮತ್ತು 850 ಗ್ರಾಂ ಒಣ ಗಾಂಜಾ ಮತ್ತು 30 ಲೀ. ಸೇಂದಿ ಸೇರಿ 669 ಪ್ರಕರಣಗಳನ್ನು ದಾಖಲಿಸಿ 454 ಆರೋಪಿಗಳನ್ನು ಬಂಧಿಸಿ ತನಿಖೆ ನಡೆಸಲಾಗುತ್ತಿದೆ.

ವಿವಿಧ ಪ್ರಕರಣಗಳಲ್ಲಿ ಒಟ್ಟು 8,019 ಲೀ ಮದ್ಯ ಹಾಗೂ 21,159 ಲೀ ಬಿಯರ್ ಜಪ್ತಿ ಮಾಡಿ 61 ದ್ವಿಚಕ್ರ ವಾಹನ ಮತ್ತು 3 ನಾಲ್ಕು ಚಕ್ರದ ವಾಹನ ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು. ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಅಕ್ರಮ ಮದ್ಯ ತಯಾರಿಕೆ, ಶೇಖರಣೆ, ಸಾಗಾಣಿಕೆ, ಮಾರಾಟ ಹಾಗೂ ಅಕ್ರಮವಾಗಿ ಮದ್ಯ ತಯಾರಿಕಾ ವಸ್ತುಗಳು ಮತ್ತು ಗಾಂಜಾ ಅಫೀಮು, ಡ್ರಗ್ಸ್ ಹಾಗೂ ಇನ್ನಿತರ ಯಾವುದೇ ಮಾದಕ ವಸ್ತುಗಳ ಬಗ್ಗೆ ದೂರುಗಳಿದ್ದಲ್ಲಿ ಟೋಲ್ ಫ್ರೀ ನಂ.18004253854 ಗೆ ಕರೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಒಂದನೇ ಪುಟದಿಂದ

ನಾಮಪತ್ರ ಸಲ್ಲಿಕೆ

ಪಕ್ಷೇತರರಾಗಿ ಎ.ಎಂ.ಬಾಬು, ಗಿರಿಜಾಂಬ, ಜೆಡಿಎಸ್‌ನ ಸಿ.ಜಯಪ್ರಕಾಶ್, ಕಾಂಗ್ರೆಸ್‌ನ ಸಿ. ಅನಿಲ್‌ಕುಮಾರ್, ಸಮಾಜವಾದಿ ಜನತಾ ಪಾರ್ಟಿಯ ಕೆ.ವಿ. ರಾಜು, ನಂಜನಗೂಡು ಕ್ಷೇತ್ರ ದಿಂದ ಕಾಂಗ್ರೆಸ್‌ನ ಡಿ.ದರ್ಶನ್, ಚಾಮುಂಡೇ ಶ್ವರಿ ಕ್ಷೇತ್ರದಿಂದ ಉತ್ತಮ ಪ್ರಜಾಕೀಯ ಪಾರ್ಟಿಯ ಎಸ್. ಹರೀಶ್, ಜೆಡಿಎಸ್‌ನ ಜಿ.ಟಿ. ದೇವೇಗೌಡ, ಸಮಾಜವಾದಿ ಜನತಾ ಪಾರ್ಟಿಯ ಮೇಹುಲ್ ಪಟೇಲ್, ಆಮ್ ಆದ್ಮಿ ಪಾರ್ಟಿಯ ಕಿರಣ್ ನಾಗೇಶ್ ಕಲ್ಯಾಣಿ, ಕಾಂಗ್ರೆಸ್‌ನ ಎಸ್. ಸಿದ್ದೇಗೌಡ ಉಮೇದುವಾರಿಕೆ ಸಲ್ಲಿಸಿದವರಾಗಿದ್ದಾರೆ. ಮೈಸೂರಿನ ಕೃಷ್ಣರಾಜ ಕ್ಷೇತ್ರದಲ್ಲಿ ಆಮ್ ಪಾರ್ಟಿ ಹಾಗೂ ಪಕ್ಷೇತರರಾಗಿ ಎ.ಎಸ್.ಸತೀಶ್, ಇಂಡಿಯನ್ ಮೂವ್‌ಮೆಂಟ್ ಪಾರ್ಟಿಯ ಎಂ. ಲಿಂಗರಾಜು, ಕಾಂಗ್ರೆಸ್‌ನ ಎಂ.ಕೆ. ಸೋಮಶೇಖರ್, ಚಾಮರಾಜ ಕ್ಷೇತ್ರದಲ್ಲಿ ಬಿಜೆಪಿಯ ಎಲ್. ನಾಗೇಂದ್ರ, ಕರ್ನಾಟಕ ರಾಷ್ಟ್ರ ಸಮಿತಿಯ ಡಿಪಿಕೆ. ಪರಮೇಶ್, ಕಂಟ್ರಿ ಸಿಟಿಜನ್ ಪಾರ್ಟಿಯ ಎಂ. ಪಂಚಲಿಂಗು ನಾಮಪತ್ರ ಸಲ್ಲಿಸಿದರು.

ನರಸಿಂಹರಜದಲ್ಲಿ ಪಕ್ಷೇತರರಾಗಿ ವಿ. ಗಿರಿಧರ್, ರಿಪಬ್ಲಿಕ್ ಪಾರ್ಟಿ ಆಫ್ ಇಂಡಿಯಾದ ವಿನೋದ್ ಎಂ. ಚಾಕೋ ವರುಣಾದಿಂದ, ಸಮಜವಾದಿ ಜನತಾ ಪಾರ್ಟಿಯ ಕೆ. ನಾಗೇಶ್ ನಾಯ್ಕ, ಇಂಡಿಯನ್ ನ್ಯೂ ಕಾಂಗ್ರೆಸ್‌ನ ಗುರುಲಿಂಗಯ್ಯ, ಬಿಜೆಪಿಯ ವಿ. ಸೋಮಣ್ಣ, ಕನ್ನಡ ದೇಶ ಪಕ್ಷದ ಅರುಣ್ ಸಿಂಗ್, ಟಿ.ನರಸೀಪುರ ಕ್ಷೇತ್ರದಿಂದ ಜೆಡಿಎಸ್‌ನ ಎಂ. ಅಶ್ವಿನ್‌ಕುಮಾರ್, ಆಮ್ ಆದ್ಮಿ ಪಾರ್ಟಿಯ ಎಂ. ಸಿದ್ದರಾಜು ಹಾಗೂ ಬಿಜೆಪಿಯ ಡಾ. ಎಂ. ರೇವಣ್ಣ, ಅವರು ಸೋಮವಾರ ತಮ್ಮ ಬೆಂಬಲಿಗರೊಂದಿಗೆ ನಾಮಪತ್ರ ಸಲ್ಲಿಸಿದ್ದಾರೆ. ನಾಳೆ (ಏ. 18) ಮಂಗಳವಾರವಾಗಿರುವುದರಿಂದ ಹೆಚ್ಚು ಮಂದಿ ನಾಮಪತ್ರ ಸಲ್ಲಿಸುವುದಿಲ್ಲ. ಮೇ 20 ರಂದು ಕಡೇ ದಿನವಾದ ಕಾರಣ, ಏಪ್ರಿಲ್ 19 ಮತ್ತು 20ರಂದು ಅತೀ ಹೆಚ್ಚಿನ ಸಂಖ್ಯೆಯಲ್ಲಿ ಅಭ್ಯರ್ಥಿ ಆಕಾಂಕ್ಷಿಗಳು ತಮ್ಮ ಉಮೇದುವಾರಿಕೆ ಸಲ್ಲಿಸಲಿದ್ದಾರೆ.

ಸೋಲಿನ ಭೀತಿಯಿಂದ ವಿರೋಧಿಗಳಿಂದ ಅಪಪ್ರಚಾರ



ಚಿನಕುರಳಿ, ಏ.17– ಸೋಲಿನ ಭೀತಿಯಿಂದ ವಿರೋಧಿಗಳು ನನ್ನ ವಿರುದ್ಧ ಅಪಪ್ರಚಾರ ನಡೆಸುತ್ತಿದ್ದಾರೆ ಎಂದು ಮೇಲುಕೋಟೆ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ, ಶಾಸಕ ಸಿ.ಎಸ್.ಪುಟ್ಟರಾಜು ಅವರು ಆಕ್ರೋಶ ಹೊರಹಾಕಿದರು.

ತಿರುಮಲಾಪುರದಲ್ಲಿ ನಡೆದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು, ಕ್ಷೇತ್ರದಲ್ಲಿ ನನ್ನ ವಿರೋಧಿಗಳಿಗೆ ಸೋಲಿನ ಭೀತಿ ಶುರುವಾಗಿದೆ. ಇದರಿಂದಾಗಿಯೇ ಕ್ಷೇತ್ರದಲ್ಲಿ ಹಲವರು ನನ್ನ ವಿರುದ್ಧ ಅಪಪ್ರಚಾರ ನಡೆಸುತ್ತಿದ್ದಾರೆ. ಜನತೆ ಇಂತಹ ಅಪಪ್ರಚಾರಗಳಿಗೆ ಕಿವಿಗೊಡದೆ ಚುನಾವಣೆಯಲ್ಲಿ ಅವರಿಗೆ ತಕ್ಕಪಾಠ ಕಲಿಸಬೇಕು ಎಂದರು.

ನಾನು ಚುನಾವಣೆಗಾಗಿ ರಾಜಕೀಯ ಮಾಡಿದವನ್ನಲ್ಲ. ಜನರ ಕಷ್ಟ ಕಾರ್ಪಣ್ಯಗಳಿಗೆ ಸ್ಪಂದಿಸಬೇಕು, ನೊಂದವರು, ಶೋಷಿತ ಜನರ ಧ್ವನಿಯಾಗಿ ಕೆಲಸ ಮಾಡುವುದಕ್ಕಾಗಿ ರಾಜಕೀಯ ಮಾಡುತ್ತಿದ್ದೇನೆ. ಇನ್ನೊಬ್ಬರ ರೀತಿ ಚುನಾವಣೆಗಾಗಿ 5 ವರ್ಷಕ್ಕೊಮ್ಮೆ ಚುನಾವಣೆ 2 ತಿಂಗಳು ಇರುವ ಹಾಗೆ ಕ್ಷೇತ್ರಕ್ಕೆ ಬಂದವನಲ್ಲ. ಕ್ಷೇತ್ರದ ಜನತೆ ನನಗೆ ಅಧಿಕಾರಕೊಟ್ಟು ಶಾಸಕ, ಮಂತ್ರಿ ಮಾಡಿ ಐಷಾರಾಮಿ ಜೀವನ ನಡೆಸುವ ಅವಕಾಶಕೊಟ್ಟರು ಸಹ ಅದನ್ನೆಲ್ಲ ತ್ಯಜಿಸಿ ನಾನು ನನ್ನ ಜನರ ಮಧ್ಯೆ ಇದ್ದು ಜೀವನ ನಡೆಸಿದ್ದೇನೆ. ಬೆಳಗ್ಗೆ ದೆಹಲಿಗೆ ಹೋದರು ರಾತ್ರಿ ವಾಪಸ್ ನನ್ನ ಹುಟ್ಟೂರಿನ ಚಿನಕುರಳಿ ಮನೆಗೆ ಬಂದು ಮಲಗಿದರೆ ಮಾತ್ರ ನನಗೆ ನೆಮ್ಮದಿ ಸಿಗುತ್ತಿತ್ತು. ಅಷ್ಟರ ಮಟ್ಟಿಗೆ ಜನರ ಮಧ್ಯೆ ಇದ್ದು ಕೆಲಸ ಮಾಡಿದ್ದೇನೆ ಎಂದರು.

ತಿರುಮಲಪುರ ಗ್ರಾಮಸ್ಥರು ಸದಾ ನನಗೆ ಆಶೀರ್ವಾದ ಮಾಡಿದ್ದಾರೆ. ತೊಣ್ಣೂರು ಕೆರೆ ಹಿನ್ನೀರಿನ ಪ್ರದೇಶದವರಿಗೆ ನಾನು ಶಾಸಕನಾಗುವರೆಗೂ ಭೂ ಪರಿಹಾರ ದೊರೆತಿರಲಿಲ್ಲ. 2004ರಲ್ಲಿ ಮೊದಲ ಬಾರಿಗೆ ಶಾಸಕನಾದ ಬಳಿಕ ತಿರುಮಲಪುರ, ಸಣಬ, ಸಣಬಕೊಪ್ಪಲು, ಕುರುಬನಕೊಪ್ಪಲು ಗ್ರಾಮದ ಜನರಿಗೆ ಭೂ ಪರಿಹಾರ ದೊರೆಕಿಸಿಕೊಡುವ ಕೆಲಸ ಮಾಡಿದ್ದೇನೆ ಎಂದು ಹೇಳಿದರು.

ಈ ಬಾರಿ ರಾಜ್ಯದಲ್ಲಿ ಜೆಡಿಎಸ್ ಪಕ್ಷ ಅಧಿಕಾರಕ್ಕೆ ಬಂದು ಹೆಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿ ಆಗುವುದು ಖಚಿತ. ನನಗೂ ಸಹ ಮಂತ್ರಿಯಾಗಿ ಕೆಲಸ ಮಾಡುವ ಅವಕಾಶವಿದೆ. ಕ್ಷೇತ್ರದಲ್ಲಿ ಜೆಡಿಎಸ್ ಪರವಾದ ಒಲವಿದ್ದು ಅಧಿಕ ಬಹುಮತದಿಂದ ಗೆಲ್ಲುವ ಅವಕಾಶ ಇರುವಂತಹ ಸಂದರ್ಭ ತಿರುಮಲಾಪುರ ಸೇರಿದಂತೆ ಸುತ್ತಮುತ್ತಲಿನ ಜನತೆ ನನಗೆ ಹೆಚ್ಚಿನ ಮತಗಳನ್ನು ಕೊಟ್ಟು ಗೆಲ್ಲಿಸಿ ವಿಧಾನಸಭೆಗೆ ಕಳುಹಿಸಿಕೊಡಬೇಕಾಗಿದೆ ಎಂದು ಮನವಿ ಮಾಡಿದರು.

ಇದಕ್ಕೂ ಮುನ್ನ ಅದ್ದೂರಿಯಾಗಿ ಎತ್ತಿನಗಾಡಿ ಮೆರವಣಿಗೆ ಮೂಲಕ ಶಾಸಕ ಸಿ.ಎಸ್.ಪುಟ್ಟರಾಜು ಅವರನ್ನು ಕರೆತಂದರು. ಗ್ರಾಮದ ಆರಂಭದಲ್ಲಿ ಡಾ. ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆಸಲ್ಲಿಸಿ ಪುಷ್ಪಾರ್ಚನೆ ಮಾಡಿ ನಮಿಸಿದರು. ಬಳಿಕ ಕ್ರೇನ್ ಮೂಲಕ ಬೃಹತ್ ಸೇಬಿನ ಹಾರಹಾಕಿ ಸ್ವಾಗತಿಸಿದರು. ಹಲವಾರು ಮುಖಂಡರು ರೈತಸಂಘ ತೊರೆದು ಜೆಡಿಎಸ್ ಸೇರ್ಪಡೆಗೊಂಡರು.

ಸಮಾರಂಭದಲ್ಲಿ ಜಿಪಂ ಮಾಜಿ ಸದಸ್ಯ ಸಿ.ಅಶೋಕ್, ತಾಪಂ ಮಾಜಿ ಸದಸ್ಯ ಸಿ.ಎಸ್.ಗೋಪಾಲಗೌಡ, ಲಾರಿ ಮಾಲೀಕರ ಸಂಘದ ಅಧ್ಯಕ್ಷ ಸಿ.ಶಿವಕುಮಾರ್, ಸನ್ಮತಿ ಜಯರಾಮು, ಎ.ಎಸ್. ರಮೇಶ್, ಗ್ರಾಪಂ ಅಧ್ಯಕ್ಷೆ ಭಾರತಿ, ಉಪಾಧ್ಯಕ್ಷೆ ಶ್ವೇತ, ಸದಸ್ಯ ಲೋಕೇಶ್, ಯಜಮಾನರಾದ ಕರಿಗಿರೀಗೌಡ, ಸುರೇಶ್, ಕಾಂತರಾಜು, ಜಯರಾಮು, ಚನ್ನಕೃಷ್ಣ, ಸ್ವಾಮಿಗೌಡ, ದೇಶಹಳ್ಳಿಪ್ರಭಾಕರ್, ವೇಣು ಸೇರಿದಂತೆ ಹಾಜರಿದ್ದರು.

ಹೆಚ್ಡಿಕೆ ಎದುರು ಸ್ಪರ್ಧಿಸಲ್ಲ



ಮದ್ದೂರು, ಏ.17– ಮಂಡ್ಯ ಕ್ಷೇತ್ರದಿಂದ ಕುಮಾರಸ್ವಾಮಿ ಅಭ್ಯರ್ಥಿಯಾಗುವ ಸಾಧ್ಯತೆ ಇದ್ದು, ಅವರ ವಿರುದ್ಧ ನಾನು ಸ್ಪರ್ಧಿಸಲ್ಲ. ಏಕೆಂದರೆ ಈಗಾಗಲೇ ಘೋಷಿಸಿರುವ ಅಭ್ಯರ್ಥಿಯೇ ಸಮರ್ಥರಿದ್ದಾರೆ ಎಂದು ಸಂಸದೆ ಸುಮಲತಾ ಅಂಬರೀಷ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಮಂಡ್ಯದಿಂದ ಸ್ಪರ್ಧೆ ಮಾಡಿದರೆ ಸಂಸದರು ಎದುರಾಳಿಯಾಗಲಿದ್ದಾರೆಂಬ ಊಹಾಪೋಹಗಳ ಬಗ್ಗೆ ಮಾತನಾಡಿ, ಅವರ ವಿರುದ್ಧ ಮಂಡ್ಯ ಕ್ಷೇತ್ರದಲ್ಲಿ ಬಿಜೆಪಿ ಪಕ್ಷದ ಸಮರ್ಥ ಅಭ್ಯರ್ಥಿ ಇದ್ದಾರೆ. ಅವರ ಪರ ನಾನೇ ಚುನಾವಣಾ ಪ್ರಚಾರ ನಡೆಸುತ್ತೇನೆ. ಯಾರೇ ಬಂದು ಸ್ಪರ್ಧಿಸಿದರೂ ಫೇಸ್ ಮಾಡುವ ಶಕ್ತಿ ನಮಗಿದ್ದು, ಕಾರ್ಯಕರ್ತರು ಎದೆಗುಂದದೆ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಬೇಕೆಂದರು.

ಜಿಲ್ಲೆಯಲ್ಲೇ ಪ್ರತಿಯೊಬ್ಬರು ತಿರುಗಿ ನೋಡುವ ಆಶ್ಚರ್ಯಕರ ಫಲಿತಾಂಶ ಬರಲಿದ್ದು, ಬಿಜೆಪಿಯಿಂದ ಸ್ಪರ್ಧಿಸಿರುವ ಅಭ್ಯರ್ಥಿಗಳು ಜಯಶೀಲರಾಗಲಿದ್ದಾರೆ. ಮೇಲುಕೋಟೆ ಕ್ಷೇತ್ರದ ರೈತ ಸಂಘದ ಅಭ್ಯರ್ಥಿ ದರ್ಶನ್ ಪುಟ್ಟಣ್ಣಯ್ಯ ಬೆಂಬಲ ನೀಡುವ ಬಗ್ಗೆ ಪ್ರತಿಕ್ರಿಯಿಸಿದ ಸಂಸದರು, ಈ ಸಂಬಂಧ ಪಕ್ಷದ ನಾಯಕರೊಂದಿಗೆ ಚರ್ಚಿಸಿ ಮುಂದಿನ ದಿನಗಳಲ್ಲಿ ತೀರ್ಮಾನ ಕೈಗೊಳ್ಳಲಿದ್ದು, ಕಳೆದ ಲೋಕಸಭೆ ಚುನಾವಣೆಯಲ್ಲಿ ದರ್ಶನ್ ಪುಟ್ಟಣ್ಣಯ್ಯ ನನ್ನ ಪರ ನಿಂತಿದ್ದು ತಮಗೆ ಅರಿವಿದ್ದು ಪಕ್ಷದ ವರಿಷ್ಠರಿಗೆ ಮನವರಿಕೆ ಮಾಡಿ ವರಿಷ್ಠರ ಸೂಚನೆಯಂತೆ ಕಾರ್ಯ ನಿರ್ವಹಿಸುವುದಾಗಿ ತಿಳಿಸಿದರು.

ಹೆಚ್ಡಿಕೆ ವಿರುದ್ಧ ಗಂಭೀರ ಚುನಾವಣೆ ಮಾಡ್ತೇವೆ



ನಾಗಮಂಗಲ, ಏ.17– ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಮಂಡ್ಯ ಕ್ಷೇತ್ರದಿಂದ ಸ್ಪರ್ಧಿಸಿದರೆ ಅವರ ವಿರುದ್ಧ ಗಂಭೀರವಾಗಿ ಚುನಾವಣೆ ಮಾಡುತ್ತೇವೆ ಎಂದು ಮಾಜಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದರು. ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೆಚ್ಡಿಕೆ ಸ್ಪರ್ಧಿಸಿದರೆ ಅವರನ್ನು ಕಟ್ಟಿಹಾಕಲು ಎಲ್ಲಾ ರೀತಿಯ ಪ್ರಯತ್ನ ಮಾಡುತ್ತೇವೆ. ಆದರೆ ಅವರ ವಿರುದ್ಧ ನಾನು ಸ್ಪರ್ಧೆ ಮಾಡಲ್ಲ. ನಾಗಮಂಗಲದಿಂದ ಮಾತ್ರ ನಾನು ಕಣಕ್ಕಿಳಿಯಲಿದ್ದು, ಹೆಚ್ಡಿಕೆ ಸ್ಪರ್ಧಿಸಿದರೂ ಈಗಾಗಲೇ ಘೋಷಣೆ ಮಾಡಿದಂತೆ ಗಣಿಗ ರವಿಕುಮಾರ್ ಅವರೇ ಮಂಡ್ಯ ಕ್ಷೇತ್ರದ ಅಭ್ಯರ್ಥಿ ಎಂದರು.

ಒಂದು ವೇಳೆ ಮಂಡ್ಯ ಕ್ಷೇತ್ರದ ಅಭ್ಯರ್ಥಿ ಬದಲಾವಣೆ ಮಾಡುವ ಅಧಿಕಾರ ಎಐಸಿಸಿ ಅಥವಾ ಕೆಪಿಸಿಸಿಗೆ ಇದೆ. ಈ ಸಂದರ್ಭ ಬದಲಾವಣೆ ಅಸಾಧ್ಯ. ಎಲ್ಲರನ್ನೂ ಒಗ್ಗೂಡಿಸಿಕೊಂಡು ಚುನಾವಣೆ ಎದುರಿಸುತ್ತೇವೆ. ಕುಮಾರಸ್ವಾಮಿ ಅವರನ್ನು ಎದುರಿಸಲು ನಾವು ಸಮರ್ಥರಿದ್ದು, ಹೆಚ್ಡಿಕೆ ಬಗ್ಗೆ ಮಂಡ್ಯ ಜನರಿಗೆ ಗೊತ್ತಿದೆ ಎಂದರು.

ಈ ಚುನಾವಣೆ ನನಗೆ ಮಾಡು ಇಲ್ಲವೇ ಮಡಿ ಎಂಬಂತಾಗಿದ್ದು, ಒಂದು ವೇಳೆ ಈ ಚುನಾವಣೆಯಲ್ಲಿ ನಾನು ಸೋತರೆ ಮತ್ತೆಂದೂ ಸ್ಪರ್ಧಿಸಲ್ಲ. ಅಭಿವೃದ್ಧಿ ಮಾಡಿದ್ದೇನೆ ಮತದಾರರು ಮತ ನೀಡುವ ಭರವಸೆ ಇದೆ ಎಂದರು.

ಗೋಷ್ಠಿಯಲ್ಲಿ ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ, ಮಾಜಿ ಸಚಿವ ಪಿ.ಎಂ.ನರೇಂದ್ರಸ್ವಾಮಿ, ಮಾಜಿ ಶಾಸಕ ಬಿ.ರಾಮಕೃಷ್ಣ, ಮನ್‌ಮುಲ್ ಮಾಜಿ ನಿರ್ದೇಶಕ ತೂಬಿನಕರೆ ಜವರೇಗೌಡ ಇತರರಿದ್ದರು.



ಮಾಜಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರು ಸುತ್ತೂರು ಮಠಕ್ಕೆ ಭೇಟಿ ನೀಡಿ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಗಳಿಂದ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಮಾಜಿ ಶಾಸಕಿ ಸುನೀತ ವೀರಪ್ಪಗೌಡ, ನಂಜನಗೂಡು ತಾಲೂಕು ವೀರಶೈವ ಮಹಾಸಭಾದ ಅಧ್ಯಕ್ಷ ದೇವನೂರು ಬುಲೆಟ್ ಮಹದೇವಪ್ಪ, ಶ್ರೀಕಂಠೇಶ್ವರ ದೇವಾಲಯದ ಧರ್ಮದರ್ಶಿ ಮಂಡಳಿ ಮಾಜಿ ಅಧ್ಯಕ್ಷ ಇಂಧನ್‌ಬಾಬು, ತಾ.ಪಂ ಮಾಜಿ ಸದಸ್ಯ ಮೂಗಶೆಟ್ಟಿ ಸೇರಿದಂತೆ ನಂಜನಗೂಡು ಕ್ಷೇತ್ರದ ಹಲವಾರು ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

ಚಿತ್ರಕಲಾ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ



ಮೈಸೂರು, ಏ.17–ಸೈನಿಕ ಅಕಾಡೆಮಿ (SAM) ಹಾಗೂ ಕೆಎಂಪಿಕೆ ಚಾರಿಟೇಬಲ್ ಟ್ರಸ್ಟ್ ವತಿಯಿಂದ ವಿಶ್ವ ಕಲಾ ದಿನಾಚರಣೆ ಅಂಗವಾಗಿ ಬೆಳವಾಡಿಯಲ್ಲಿರುವ ಸೈನಿಕ ಶಾಲೆಯಲ್ಲಿ 14 ವರ್ಷದ ಒಳಗಿರುವ 50ಕ್ಕೂ ಹೆಚ್ಚು ಮಕ್ಕಳು ಪರಿಸರದ ಬಗ್ಗೆ ಚಿತ್ರಕಲಾ ಸ್ಪರ್ಧೆಯಲ್ಲಿ ಉತ್ಸಾಹದಿಂದ ಭಾಗವಹಿಸಿ ಚಿತ್ರ ಬಿಡಿಸಿದರು.

ವಿಜೇತರಾದ ಮೊದಲನೇ ಬಹುಮಾನ ಹಂಸಶ್ರೀ, ದ್ವಿತೀಯ ತನ್ಮಯ್, ತೃತೀಯ ಯಶಸ್, ನಾಲ್ಕನೇ ಬಹುಮಾನ ಅಮೃತ, ಐದನೇ ಬಹುಮಾನ ಪಡೆದ ಖುಷಿ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಸ್ಪರ್ಧಿಸಿದ್ದ ಎಲ್ಲಾ ಮಕ್ಕಳಿಗೂ ಅಭಿನಂದನಾ ಪತ್ರ ವಿತರಿಸಲಾಯಿತು. ಸೈನಿಕ ಅಕಾಡೆಮಿ ಮೈಸೂರಿನ ಸಂಸ್ಥಾಪಕರು ಹಾಗೂ ನಿವೃತ್ತ ಕಮಾಂಡೋ ಶ್ರೀಧರ್ ಸಿ.ಎಂ ಮಾತನಾಡಿ ಪರಿಸರ ಉತ್ತಮವಾಗಿದ್ದಲ್ಲಿ ಮಾತ್ರ ಆರೋಗ್ಯ ಪೂರ್ಣ ಜೀವನ ನಡೆಸಲು ಸಾಧ್ಯವಿದೆ. ಭೂಮಿ, ನೀರು, ಗಾಳಿ, ಬೆಳಕು ಮೊದಲಾದವುಗಳನ್ನು ಒಳಗೊಂಡ ಪ್ರಕೃತಿ ದೇವರ ಕೊಡುಗೆ. ಅದನ್ನು ಕಾಪಾಡಿಕೊಂಡು ಹೋಗುವ ಹೊಣೆ ಎಲ್ಲರ ಮೇಲಿದೆ. ಮಕ್ಕಳಿಗೆ ಪರಿಸರದ ಪಾಠ ಮನೆಯಿಂದಲೇ ಆರಂಭವಾಗಬೇಕಿದೆ ಎಂದರು.

ಮನೋರೋಗ ತಜ್ಞರಾದ ಡಾ. ರೇಖಾ ಮನಶಾಂತಿ ಮಾತನಾಡಿ, ಚಿಕ್ಕ ವಯಸ್ಸಿನಲ್ಲಿ ಮಕ್ಕಳು ಕನಸು ಕಂಡರೆ ದೊಡ್ಡವರಾದ ಮೇಲೆ ನನಸು ಮಾಡಿಕೊಳ್ಳಲು ಸಾಧ್ಯವಾಗುತ್ತದೆ. ಪಾಲಕರು ತಮ್ಮ ಮಕ್ಕಳ ಕಲಿಕೆಗೆ ಪ್ರೋತ್ಸಾಹ ನೀಡುವ ಮೂಲಕ ಅವರ ವಿದ್ಯಾಭ್ಯಾಸಕ್ಕೆ ದಾರಿದೀಪವಾಗಬೇಕು ಎಂದರು.

ಅನಿಲ್ ಕುಮಾರ್ ಮಾತನಾಡಿ, ಮಕ್ಕಳ ಚಿತ್ರಗಳನ್ನು ನೋಡುವುದು ಚಂದ, ಅವರಿಗೆ ಬರೆಯಲು ಬರದಿದ್ದರೂ ಏನೋ ಒಂದು ಬರೆಯುತ್ತಾರೆ. ಎಲ್ಲರೂ ಒಂದೇ ರೀತಿ ಬರೆಯುವುದಿಲ್ಲ. ಪ್ರತಿಯೊಬ್ಬರೂ ತಮ್ಮ ಆಲೋಚನಾ ಕ್ರಮಗಳಿಗೆ ಅನುಗುಣವಾಗಿ ವಿಭಿನ್ನವಾಗಿ ಬರೆಯುತ್ತಾರೆ. ಅವರ ಕಲ್ಪನೆ ಏನಿರುತ್ತದೆ ಹಾಗೆ ಬರೆಯುತ್ತಾರೆ. ಮಕ್ಕಳಿಗೆ ಇದು ಒಳ್ಳೆಯ ವೇದಿಕೆ ಮೈಸೂರು ನಗರದಲ್ಲಿ ಅನೇಕ ಚಿತ್ರಕಲಾ ಶಾಲೆಗಳಿವೆ. ಆ ಶಾಲೆಯ ಮಕ್ಕಳು ಇಂತಹ ಸ್ಪರ್ಧೆಗಳಲ್ಲಿ ಹೆಚ್ಚು ಭಾಗವಹಿಸಬೇಕು ಎಂದರು.

ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಕೆಎಂಪಿಕೆ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷರಾದ ವಿಕ್ರಮ ಅಯ್ಯಂಗಾರ್, ಸ್ವಾತಿ,ಶಿಕ್ಷಕರಗಳಾದ ರವಿ, ವಿನುತಾ, ಸುನಿತಾ, ಸಿದ್ದಾರ್ಥ್, ಗಗನ್, ವಿಜಯಕುಮಾರ್ ಹಾಗೂ ಮುಂತಾದವರು ಹಾಜರಿದ್ದರು

ಕಾಂಗ್ರೆಸ್ ಬಂಡಾಯ ಅಭ್ಯರ್ಥಿಯಾಗಿ ಅನಿಲ್ ಲಾಡ್



ಬಳ್ಳಾರಿ: ಬಳ್ಳಾರಿ ನಗರ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿ, ಮಾಜಿ ಶಾಸಕ ಅನಿಲ್ ಲಾಡ್ ಬಂಡಾಯದ ಬಾವುಟ ಹಾರಿಸಿದ್ದು, ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುವುದಾಗಿ ಘೋಷಿಸಿದ್ದಾರೆ.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2022 ನವೆಂಬರ್.7 ರಂದು ದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷೆ ಸೋನಿಯಾಗಾಂಧಿ ಅವರನ್ನು ಭೇಟಿಯಾದಾಗ ನಗರ ಕ್ಷೇತ್ರದ ಟಿಕೆಟ್ ನೀಡುವ ಭರವಸೆ ನೀಡಿದ್ದರು. ಆದರೆ, ಕೇವಲ ಆರು ತಿಂಗಳ ಹಿಂದೆ ಬಂದ ನಾರಾ ಭರತ್ ರೆಡ್ಡಿ ಅವರಿಗೆ ಟಿಕೆಟ್ ನೀಡಲಾಗಿದೆ. ಕಲಘಟಗಿಯಲ್ಲಿ 25 ಸಾವಿರ ಮತಗಳ ಅಂತರದಿಂದ ಪರಾಭವಗೊಂಡ ಸಂತೋಷ್ ಲಾಡ್, ಕಳೆದ ಬಾರಿ ಚುನಾವಣೆಯಲ್ಲಿ 60 ಸಾವಿರ ಮತ ಪಡೆದಿದ್ದ ಮುರಳಿಕೃಷ್ಣ, ಚುನಾವಣೆಯಿಂದ ದೂರ ಉಳಿದಿದ್ದ ಮಾಜಿ ಶಾಸಕ ಬಿ.ಎಂ.ನಾಗರಾಜ್ ಅವರಿಗೆ ನೀಡಲಾಗಿದೆ. ಪಕ್ಷಕ್ಕಾಗಿ ದುಡಿದವರನ್ನು ಪರಿಗಣಿಸಿಲ್ಲ ಎಂದು ಆರೋಪಿಸಿದರು. ಜನರ ಅಭಿಪ್ರಾಯ ಮೇಲೆ ಕಾಂಗ್ರೆಸ್ ಬಂಡಾಯ ಅಭ್ಯರ್ಥಿಯಾಗಿ ಏಪ್ರಿಲ್ 20ರಂದು ನಾಮಪತ್ರ ಸಲ್ಲಿಸಲಾಗುವುದು ಎಂದು ಅನಿಲ್ ಲಾಡ್ ಹೇಳಿದರು.

ಸಾಮೂಹಿಕ ಉಪನಯನ

ಮೈಸೂರು, ಏ. 17– ಶ್ರೀ ಮಾತಾ ದುರ್ಗಾ ಪರಮೇಶ್ವರೀ ಚಾರಿಟೆಬಲ್ ಟ್ರಸ್ಟ್ ವತಿಯಿಂದ ತ್ರಿಮತಸ್ಥ ಬ್ರಾಹ್ಮಣ ವಟುಗಳಿಗೆ ಮೇ 7 ರಂದು ಶ್ರೀ ಶಂಕರ ಜಯಂತಿ ಪ್ರಯುಕ್ತ ಸಾಮೂಹಿಕ ಉಪನಯನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮ ಶೃಂಗೇರಿ ಶ್ರೀ ಶಂಕರ ಮಠ, ಅಭಿನವ ಶಂಕರಾಲಯದ ಧರ್ಮಾಧಿಕಾರಿ ಹೆಚ್.ರಾಮಚಂದ್ರ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ಟ್ರಸ್ಟ್ ಅಧ್ಯಕ್ಷ ಕೆ.ಪಾರ್ಥನಾರಾಯಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಾಮೂಹಿಕ ಉಪನಯನ ಮಾಡಲು ಇಚ್ಛಿಸುವವರು ಏ.30ರೊಳಗೆ ನೋಂದಾಯಿಸಿಕೊಳ್ಳುವಂತೆ ಕೋರಲಾಗಿದೆ.

ಮಹಿಳೆಯರಿಗೆ ಶಿಕ್ಷಣ, ಸಮಾನತೆಯನ್ನು ಸಾರಿದ ವಿಶ್ವಜ್ಞಾನಿ ಡಾ.ಬಿ.ಆರ್.ಅಂಬೇಡ್ಕರ್

ಕಾನೂನು ವಿಭಾಗದ ಪ್ರಾಧ್ಯಾಪಕರಾದ ಡಾ.ರಮೇಶ್



ಮೈಸೂರು, ಏ. 17– ಮೈಸೂರಿನ ಕೃಷ್ಣಮೂರ್ತಿಪುರಂನಲ್ಲಿರುವ ಶಾರದಾ ವಿಲಾಸ ವಿದ್ಯಾಸಂಸ್ಥೆಗಳ ಆಶ್ರಯದಲ್ಲಿ ಮಹಾ ಮಾನವತಾವಾದಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 132ನೇ ಜಯಂತ್ಸೋವವನ್ನು ಆಚರಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮೈಸೂರು ವಿ.ವಿ ಕಾನೂನು ವಿಭಾಗದ ಪ್ರಾಧ್ಯಾಪಕರಾದ ಡಾ.ರಮೇಶ್ ಅವರು ಬಾಬಾ ಸಾಹೇಬರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಹಿಳೆಯರಿಗೆ ಶಿಕ್ಷಣ ಮತ್ತು ಸಮಾನತೆ ನೀಡುವಲ್ಲಿ ಹೋರಾಟ ಮಾಡಿದ ಮಹಾನ್ ಚೇತನ ಅಂಬೇಡ್ಕರ್. ಸಮಾಜದಲ್ಲಿ ಅಸ್ಪೃಶ್ಯತೆ ನಿವಾರಣೆ ಮತ್ತು ದಲಿತರ ಉದ್ಧಾರಕ್ಕಾಗಿಯೇ ಮಾತ್ರ ಬಾಬಾ ಸಾಹೇಬರು ದುಡಿಯಲಿಲ್ಲ, ಸಮಾಜದ ಕಟ್ಟಕಡೆಯ ವ್ಯಕ್ತಿಯೂ ಜೀವನವನ್ನು ತನ್ನ ಹಕ್ಕುಗಳ ಮೂಲಕ ಹೋರಾಡಿ ಬದುಕಬಹುದೆಂಬ ಛಲವನ್ನು ತೋರಿಸಿಕೊಟ್ಟವರು ಎಂದರು.

ಸಂಸ್ಥೆಯ ಗೌರವ ಕಾರ್ಯದರ್ಶಿ ಎನ್.ಚಂದ್ರಶೇಖರ್ ಮಾತನಾಡಿ, ಡಾ. ಬಿ.ಆರ್.ಅಂಬೇಡ್ಕರ್ ಅವರ ಜೀವನ ಮತ್ತು ಆದರ್ಶ ನಮ್ಮೆಲ್ಲರ ಬದುಕಿಗೆ ಸ್ಫೂರ್ತಿ ಎಂದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಸ್ಥೆಯ ಅಧ್ಯಕ್ಷರಾದ ಡಾ.ಬಿ. ಎನ್. ಸುಬ್ರಾಯ ಅವರು ಮಾತನಾಡಿ ದೇಶದಲ್ಲಿ ಆರ್ಥಿಕತೆ, ಪತ್ರಿಕೋದ್ಯಮ, ಕಾರ್ಮಿಕರ ಹಿತಚಿಂತನೆ, ವಿದೇಶಾಂಗ ನೀತಿ, ಕಾನೂನು, ಶಿಕ್ಷಣ, ರಾಜಕೀಯ ಹೀಗೆ ಹತ್ತು ಹಲವು ಕ್ಷೇತ್ರಗಳಲ್ಲಿ ಮಹತ್ವದ ಕೊಡುಗೆಯನ್ನು ನೀಡಿದ ಮಹಾನ್ ಚೇತನ ಎಂದರು. ಇದೇ ವೇಳೆ ಡಾ. ರಮೇಶ್ ಅವರನ್ನು ಸನ್ಮಾನಿಸಲಾಯಿತು.

ಕಾಂಗ್ರೆಸ್ 150 ಸ್ಥಾನಗಳಲ್ಲಿ ಗೆಲ್ಲಲಿದೆ

ಎಐಸಿಸಿ ಮುಖಂಡ ರಾಹುಲ್ ಗಾಂಧಿ ವಿಶ್ವಾಸ



ಬೆಂಗಳೂರು, ಏ. 17(ಕೆಎಂಶಿ)–ಈ ಬಾರಿ ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ 150 ಕ್ಷೇತ್ರಗಳಲ್ಲಿ ಪ್ರಚಂಡ ಗೆಲುವು ಸಾಧಿಸಲಿದೆ ಎಂದು ಕಾಂಗ್ರೆಸ್ ವರಿಷ್ಠ ರಾಹುಲ್ ಗಾಂಧಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಹುಮ್ನಾಬಾದ್‌ನಲ್ಲಿ ನಡೆದ ಪಕ್ಷದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಿಜೆಪಿ ಅಧಿಕಾರ ಹಿಡಿದ ದಿನದಿಂದಲೂ ಭ್ರಷ್ಟಾಚಾರ ಎಸಗಿ ಸಾವಿರಾರೂ ಕೋಟಿ ರೂ. ಹಣವನ್ನು ನುಂಗಿ ಹಾಕಿದೆ. ಈ ಸರ್ಕಾರಕ್ಕೆ ಇಡೀ ರಾಷ್ಟ್ರದಲ್ಲಿ 40% ಸರ್ಕಾರ ಎಂದು ಬಣ್ಣಿಸಲಾಗಿದೆ ಎಂದು ವಾಗ್ದಾಳಿ ನಡೆಸಿದರು.

ನಮ್ಮ ಪಕ್ಷ ಜನಪರ ಕೆಲಸ ಮಾಡುತ್ತಿದೆ. ಹೀಗಾಗಿ ನಾನು ಪಕ್ಷದ ನಾಯಕರಿಗೆ ಜನರಿಗೇ ಬೇಕಾದ ಅಗತ್ಯ ಗ್ಯಾರಂಟಿ ಯೋಜನೆಗಳನ್ನು ಪ್ರಕಟಿಸಿ. ಈ ಯೋಜನೆಗಳನ್ನು ಸರ್ಕಾರ ಬಂದ ಮೊದಲ ಸಚಿವ ಸಂಪುಟದಲ್ಲೇ ಜಾರಿ ಮಾಡಿ ಎಂದು ಹೇಳಿದ್ದೆ ಎಂದರು.

ಬಿಜೆಪಿಯನ್ನು ಕೇವಲ ರಾಜ್ಯದಲ್ಲಿ ಮಾತ್ರವಲ್ಲ ಇಡೀ ದೇಶದಲ್ಲಿ 40% ಸರ್ಕಾರ ಎಂದು ಕರೆಯುತ್ತಾರೆ. ಈ ಬಿರುದು ಕೊಟ್ಟಿದ್ದು ನಾನಲ್ಲ. ರಾಜ್ಯದ ಜನ ಕೊಟ್ಟಿದ್ದಾರೆ. ಬಿಜೆಪಿ ಸರ್ಕಾರದ ಭ್ರಷ್ಟಾಚಾರವನ್ನು ರಾಜ್ಯದ ಜನರು ಕಣ್ಣಾರೆ ಕಂಡಿದ್ದಾರೆ. ಪ್ರಧಾನಿ ಮೋದಿ ಅವರು ಎಲ್ಲೇ ಹೋದರು ಭ್ರಷ್ಟಾಚಾರದ ಬಗ್ಗೆ ಮಾತನಾಡುತ್ತಾರೆ. ರಾಜ್ಯದ ಗುತ್ತಿಗೆದಾರರ ಸಂಘದವರು ರಾಜ್ಯದಲ್ಲಿ 40% ಕಮಿಷನ್ ಭ್ರಷ್ಟಾಚಾರ ನಡೆಯುತ್ತಿದೆ ಎಂದು ಪತ್ರ ಬರೆದರೆ ಅದಕ್ಕೆ ಯಾವುದೇ ಉತ್ತರವಿಲ್ಲ ಎಂದು ಅವರು ಹೇಳಿದರು.

ಇನ್ನು ಮೈಸೂರು ಸ್ಯಾಂಡಲ್ ಸೋಪ್ ಸಂಸ್ಥೆಯಲ್ಲಿ ನಡೆದಿರುವ ಅಕ್ರಮದಲ್ಲಿ ಬಿಜೆಪಿ ಶಾಸಕರ ಪುತ್ರ 8 ಕೋಟಿ ಲೂಟಿ ವೇಳೆ ಸಿಕ್ಕಿಬಿದ್ದಿದ್ದಾರೆ. ಈ ಬಗ್ಗೆ ಮೋದಿ ಮೌನವಾಗಿದ್ದಾರೆ. ನೇಮಕಾತಿ ಹಗರಣವಾದಾಗ ಸರ್ಕಾರ ಒಂದೇ ಒಂದು ಮಾತನಾಡಲಿಲ್ಲ. ಪಿಎಸ್‌ಐ, ಸಹಾಯಕ ಪ್ರಾಧ್ಯಾಪಕರು, ಜೆಇಇ ನೇಮಕಾತಿ ಅಕ್ರಮದ ಬಗ್ಗೆ ಏಕೆ ಮಾತನಾಡಲಿಲ್ಲ ಎಂದು ಅವರು ಇದೇ ಸಂದರ್ಭದಲ್ಲಿ ಪ್ರಶ್ನಿಸಿದರು. ಬಿಜೆಪಿಯವರು ಈ ಬಾರಿಯೂ ಈ ಲೂಟಿ ಹಣದಲ್ಲಿ ಸರ್ಕಾರವನ್ನು ಬೀಳಿಸಲು ಪ್ರಯತ್ನಿಸಲಿದ್ದಾರೆ. ಹೀಗಾಗಿ ನೀವು ಕಾಂಗ್ರೆಸ್ ಪಕ್ಷವನ್ನು 150 ಕ್ಷೇತ್ರಗಳಲ್ಲಿ ಗೆಲ್ಲಿಸಲೇಬೇಕು. ಇಲ್ಲದಿದ್ದರೆ ಮತ್ತೆ ಸರ್ಕಾರ ಬೀಳಿಸಲು ಪ್ರಯತ್ನಿಸುತ್ತಾರೆ. ಬಿಜೆಪಿಗೆ 40 ಕ್ಕಿಂತ ಹೆಚ್ಚು ಕ್ಷೇತ್ರಗಳನ್ನು ಗೆಲ್ಲಲು ಬಿಡಬಾರದು ಎಂದು ರಾಹುಲ್ ಹೇಳಿದರು. ಮೋದಿ ಅವರು ಈ ದೇಶದಲ್ಲಿ ಕೇವಲ ಒಂದಿಬ್ಬರು ಶ್ರೀಮಂತರ ಪರವಾಗಿ ಕೆಲಸ ಮಾಡುತ್ತಿದ್ದು, ಕಾಂಗ್ರೆಸ್ ಪಕ್ಷ ಈ ಗ್ಯಾರಂಟಿ ಯೋಜನೆಗಳನ್ನು ರಾಜ್ಯದ ಜನ ಸಾಮಾನ್ಯರಿಗಾಗಿ ನೀಡಲಾಗುತ್ತಿದೆ. ಈ ನಾಲ್ಕು ಯೋಜನೆ ಕರ್ನಾಟಕದ ಜನರ ಬದುಕು ಬದಲಿಸಲಿದೆ ಎಂದು ರಾಹುಲ್ ಗಾಂಧಿ ಹೇಳಿದರು.

ನಾನು ಸಂಸತ್ತಿನಲ್ಲಿ ಭ್ರಷ್ಟಾಚಾರದ ಬಗ್ಗೆ ಮಾತನಾಡುತ್ತಾ ಅದಾನಿ ಅವರ ಜತೆಗಿನ ಸಂಬಂಧದ ಬಗ್ಗೆ ಪ್ರಶ್ನೆ ಮಾಡಿದೆ. ಅದಕ್ಕೆ ಅವರು ನನ್ನ ಮೈಕ್ ಆಫ್ ಮಾಡಿ ನನ್ನನ್ನು ಸಂಸತ್ತಿನಿಂದ ಅನರ್ಹರನ್ನಾಗಿ ಮಾಡಿದರು. ಲೋಕಸಭೆಯಿಂದ ಹೊರಹಾಕಿದರು. ನಾನು ಭ್ರಷ್ಟಾಚಾರದ ಬಗ್ಗೆ ಮೋದಿ ಅವರನ್ನು ಪ್ರಶ್ನಿಸಿದ್ದೆ. ಮೋದಿ ಹಾಗೂ ಅದಾನಿ ಅವರ ನಡುವಣ ಸಂಬಂಧವೇನು ಎಂದು ಕೇಳಿದ್ದೆ. ಬಿಜೆಪಿಯವರ ಈ ದಬ್ಬಾಳಿಕೆಗೆ ನಾನು ಹೆದರುವುದಿಲ್ಲ. ಕರ್ನಾಟಕ ರಾಜ್ಯದ ಜನರೂ ಹೆದರುವುದಿಲ್ಲ ಎಂದು ರಾಹುಲ್ ಹೇಳಿದರು.ರಾಜ್ಯದ ಜನ ಭ್ರಷ್ಟಾಚಾರದ ಬಗ್ಗೆ ಪ್ರಶ್ನೆ ಮಾಡುತ್ತಿದ್ದಾರೆ. 40% ಕಮಿಷನ್ ಹಣ ನಿಮ್ಮ ಹಣ. ಈ ಹಣವನ್ನು ನಿಮ್ಮ ಆರೋಗ್ಯ, ಶಿಕ್ಷಣಕ್ಕೆ ಮೀಸಲಿಡಬೇಕು. ಕಳೆದ ಬಾರಿ ನೀವು ಬಿಜೆಪಿ ಸರ್ಕಾರಕ್ಕೆ ಅಧಿಕಾರ ನೀಡಿರಲಿಲ್ಲ. ಆದರೂ ಅವರು ಅಧಿಕಾರಕ್ಕೆ ಬಂದರು.

ಮೋದಿ ಅವರು ನಾನು ಒಬಿಸಿ ಸಮುದಾಯಕ್ಕೆ ಅಪಮಾನ ಮಾಡಿದ್ದೇನೆ ಎಂದು ಹೇಳಿದ್ದಾರೆ. ನಾನು ಎಂದೂ ಯಾರಿಗೂ ಅಪಮಾನ ಮಾಡುವುದಿಲ್ಲ. ನರೇಂದ್ರ ಮೋದಿ ಅವರಿಗೆ ಒಬಿಸಿ ಸಮುದಾಯಗಳ ಬಗ್ಗೆ ಕಾಳಜಿ ಇದ್ದರೆ, ಈ ಸಮುದಾಯಗಳಿಗೆ ರಾಜಕೀಯ, ಆರ್ಥಿಕ ಶಕ್ತಿ ತುಂಬಲಿ. ಶೇ.50ರಷ್ಟು ನಿಗದಿ ಮಾಡಿರುವ ಮೀಸಲಾತಿ ಮಿತಿಯನ್ನು ತೆರವುಗೊಳಿಸಲಿ ಎಂದು ರಾಹುಲ್ ಹೇಳಿದರು.

ಯುಪಿಎ ಸರ್ಕಾರ 2011ರಲ್ಲಿ ಜಾತಿಗಣತಿ ಮಾಡಿಸಿದ್ದು, ಅದರ ಪ್ರಕಾರ ದೇಶದಲ್ಲಿ ಹಿಂದುಳಿದ ವರ್ಗಗಳು ಹಾಗೂ ದಲಿತರ ಜನಸಂಖ್ಯೆ ಎಷ್ಟಿದೆ ಎಂದು ಬಹಿರಂಗಪಡಿಸಲಿ ಎಂದರು. ಮೋದಿ ಸರ್ಕಾರ ಜನಸಂಖ್ಯೆ ಅಂಕಿ ಅಂಶಗಳನ್ನು ಯಾರಿಗೂ ನೀಡುತ್ತಿಲ್ಲ. ಬಿಜೆಪಿ ಸರ್ಕಾರ ಈ ಕೆಲಸ ಮಾಡದಿದ್ದರೆ ಕಾಂಗ್ರೆಸ್ ಸರ್ಕಾರ ಈ ಕೆಲಸ ಮಾಡಲಿದೆ. ನಾವು ಒಬಿಸಿ, ದಲಿತರು, ಆದಿವಾಸಿಗಳಿಗೆ ಶಕ್ತಿ ತುಂಬಲಿದೆ ಎಂದು ಹೇಳಿದರು.

ಮೋದಿ ಅವರ ಸರ್ಕಾರದಲ್ಲಿ ಕಾರ್ಯದರ್ಶಿಗಳ ಮಟ್ಟದ ಅಧಿಕಾರಿಗಳ ಪೈಕಿ ಕೇವಲ 7% ಮಾತ್ರ ಹಿಂದುಳಿದವರು, ದಲಿತರು ಇದ್ದಾರೆ ಇದು ಮೋದಿ ಅವರ ಕಾಳಜಿಯೇ? ಈ 7% ಅಧಿಕಾರಿಗಳನ್ನು ಸಣ್ಣಪುಟ್ಟ ಕೆಲಸಕ್ಕೆ ಮೀಸಲಿಟ್ಟಿದ್ದಾರೆ. ನಿಮ್ಮಿಂದ ಈ ಕೆಲಸ ಸಾಧ್ಯವಾಗದಿದ್ರೆ, ಅಧಿಕಾರ ಬಿಟ್ಟು ತೊಲಗಿ, ನಾವು ಈ ಕೆಲಸ ಮಾಡುತ್ತೇವೆ ಎಂದು ರಾಹುಲ್ ಗಾಂಧಿ ಹೇಳಿದರು.

ಚಿಣ್ಣರ ಮೇಳದಲ್ಲಿ ಯೋಗಾ ತರಬೇತಿ



ಮೈಸೂರು, ಏ.17(ಜಿಎ)– ಹಾಡು, ನೃತ್ಯ, ಚಿತ್ರಕಲೆ, ನಾಟಕಾಭ್ಯಾಸ ಜೊತೆಗೆ ಯೋಗಾಸನದ ವಿವಿಧ ಭಂಗಿಗಳ ಕಲಿಕೆ ಚಿಣ್ಣರ ಆಸಕ್ತಿ ಕೆರಳಿಸಿತು.

ಮೈಸೂರು ರಂಗಾಯಣದಲ್ಲಿ ನಡೆಯುತ್ತಿರುವ ಮಕ್ಕಳ ಬೇಸಿಗೆ ಶಿಬಿರ 'ಚಿಣ್ಣರ ಮೇಳ'ದಲ್ಲಿ ಭಾನುವಾರ ಪುಟಾಣಿಗಳಿಗೆ ಯೋಗಾಭ್ಯಾಸದ ತರಬೇತಿ ನೀಡಲಾಯಿತು. ಮೈಸೂರಿನ ಅಂತರರಾಷ್ಟ್ರೀಯ ಯೋಗಪಟು ಖುಷಿ, ಹತ್ತು–ಹಲವು ಆಸನಗಳನ್ನು ತಿಳಿಸಿಕೊಡುವ ಮೂಲಕ ಮಕ್ಕಳಲ್ಲಿ ದೈಹಿಕ ಆರೋಗ್ಯದ ಅರಿವು ಮೂಡಿದರು. ಬಳಿಕ ಪುಟಾಣಿಗಳೊಂದಿಗೆ ನಡೆದ ಸಂವಾದದಲ್ಲಿ ಜೀವನದಲ್ಲಿ ಯಶಸ್ಸು ಸಾಧಿಸಲು ಮನಸ್ಸಿನ ಮೇಲೆ ಹಿಡಿತ ಇರಬೇಕು. ಇದಕ್ಕಾಗಿ ನಿತ್ಯವೂ ಒಂದು ಗಂಟೆಯಾದರು ಯೋಗ ಮಾಡಬೇಕು. ಬಾಲ್ಯದಿಂದಲೇ ಯೋಗಾಭ್ಯಾಸ ಮಾಡಿದರೆ, ಏಕಾಗ್ರತೆ ವೃದ್ಧಿಯಾಗುವ ಜೊತೆಗೆ ದೈಹಿಕ ಹಾಗೂ ಮಾನಸಿಕವಾಗಿ ಆರೋಗ್ಯವಾಗಿರುತ್ತೇವೆ ಎಂದು ತಿಳಿಸಿದರು.

ಪುಟಾಣಿಗಳ ಪ್ರಶ್ನೆ: ಯೋಗದಲ್ಲಿ ಎಷ್ಟು ಆಸನಗಳಿವೆ? ಯೋಗ ಅಭ್ಯಾಸ ಕಷ್ಟವೇ? ಯೋಗ ಮಾಡಲು ಸೂಕ್ತ ಸಮಯ ಯಾವುದು? ಯಾವುದು ಕಷ್ಟಕರ ಆಸನ? ಯೋಗಾಭ್ಯಾಸದ ವೇಳೆ ನೀರು ಸೇವಿಸಬಹುದು? ನೀವು ಹೇಗೆ ಯೋಗ ಕಲಿತ್ರಿ? ಎಂಬಿತ್ಯಾದಿ ಪ್ರಶ್ನೆಗಳಿಗೆ ಉತ್ತರಿಸಿದ ಖುಷಿ, ಲೋಕದಲ್ಲಿ ಎಷ್ಟು ಜೀವಿಗಳಿವೆಯೋ ಅಷ್ಟು, ಅಂದರೆ ಅಂದಾಜು 84 ಲಕ್ಷ ಆಸನಗಳಿವೆ.

ಮುಂಜಾನೆ 5 ಗಂಟೆಗೆ ಹಾಗೂ ಸಂಜೆ ಸೂರ್ಯ ಮುಳುಗಿದ ಮೇಲೆ ಯೋಗಾಭ್ಯಾಸ ಮಾಡುವುದು ಒಳ್ಳೆಯದು. ಚೆನ್ನಾಗಿ ಊಟ ಮಾಡಿದ 2 ಗಂಟೆಯ ನಂತರ ಯೋಗಾಭ್ಯಾಸ ಮಾಡಬೇಕು. ಯೋಗ ಮಾಡಿದ ತಕ್ಷಣ ನೀರು ಕುಡಿಯಬಾರದು. ಬಾಯಾರಿಕೆ ಬಂದರೆ ಸ್ವಲ್ಪ ಸ್ವಲ್ಪ ನೀರು ಕುಡಿಯಬೇಕು ಎಂದು ತಿಳಿಸಿಕೊಟ್ಟರು. ಪ್ರಾಣಾಯಾಮ ಮಾಡುವುದರಿಂದ ಆಯಸ್ಸು ವೃದ್ಧಿಯಾಗಲಿದೆ. ವಿದ್ಯಾರ್ಥಿಗಳು ಚೆನ್ನಾಗಿ ಓದಿ ರ್‍ಯಾಂಕ್ ಪಡೆಯಬೇಕಾದರೆ ಯೋಗಾಭ್ಯಾಸ ಮಾಡಬೇಕು. ಮಕ್ಕಳ ಅಂಕ ಗಳಿಕೆಯ ಒತ್ತಡದಿಂದ ಮುಕ್ತರಾಗಲು ಯೋಗ ಸಹಕಾರಿ ಎಂದು ತಿಳಿಸಿದರು.

ಸಾಮೂಹಿಕ ಉಪನಯನ

ಮೈಸೂರು, ಏ. 17 – ಮೈಸೂರಿನ ಬ್ರಾಹ್ಮಣ ಧರ್ಮ ಸಹಾಯ ಸಭಾದ ವತಿಯಿಂದ ಮೇ 8 ರಂದು ಶ್ರೀ ಶಂಕರ ಜಯಂತಿ ಪ್ರಯುಕ್ತ ಸಾಮೂಹಿಕ ಉಪನಯನ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಶ್ರೀ ಕೃಷ್ಣಸ್ವಾಮಿ ಶಾಸ್ತ್ರಿಗಳು ನೆರವೇರಿಸುವರು. ಅಧ್ಯಕ್ಷ ಎನ್. ಶ್ರೀನಿವಾಸ್ ಅವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದು ಸಭೆಯ ವ್ಯವಸ್ಥಾಪಕ ವಿ. ಸುದರ್ಶನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ

ಮೈಸೂರು, ಏ.17–ಮೈಸೂರಿನ ಲಕ್ಷ್ಮೀಪುರಂನಲ್ಲಿರುವ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಏ. 20 ರಂದು ಬೆಳಗ್ಗೆ 10 ರಿಂದ ರಾತ್ರಿ 8 ಗಂಟೆಯವರೆಗೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821–4259259 ಸಂಪರ್ಕಿಸಬಹುದು.



ಮೈಸೂರಿನ ಕೆ.ಆರ್. ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಕೆ.ವಿ. ಮಲ್ಲೇಶ್ ಮಂಗಳವಾರ ನಾಮಪತ್ರ ಸಲ್ಲಿಸಲಿದ್ದು, ಅವರು ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಗಳ ಆಶೀರ್ವಾದ ಪಡೆದರು. ಮುಖಂಡರಾದ ಆಯರಹಳ್ಳಿ ಪಿ. ವಿರೂಪಾಕ್ಷ, ಅಂಬಳಿಕೆ ಹಿರಿಯಣ್ಣ, ಚಂದ್ರಶೇಖರ್, ಮಂಜುನಾಥ್, ಗಣೇಶ್ ಮಲ್ಲಪ್ಪ, ರಾಮಪ್ಪ ಇತರರಿದ್ದರು.

ದಲಿತ ಸಮುದಾಯದಲ್ಲಿ ಶೈಕ್ಷಣಿಕ ವ್ಯವಸ್ಥೆ ಗಟ್ಟಿಯಾಗಬೇಕು

ಬುದ್ಧ ವಿಹಾರದಲ್ಲಿ ನಡೆದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಸಾಹಿತಿ ಮೂಡ್ನಾಕೂಡು ಚಿನ್ನಸ್ವಾಮಿ



ಮೈಸೂರು, ಏ. 17–ದಲಿತರಿಗೆ ಮತ್ತು ಅಸ್ಪೃಶ್ಯರಿಗೆ ಶಿಕ್ಷಣ ಪ್ರಬಲವಾದ ಅಸ್ತ್ರವಾಗಿದ್ದು, ಇದನ್ನ ಪ್ರತಿಯೊಬ್ಬರೂ ಪಡೆದುಕೊಳ್ಳಬೇಕು. ಶಿಕ್ಷಣ ವ್ಯವಸ್ಥೆ ಗಟ್ಟಿಯಾದಾಗ ಮಾತ್ರ ಸಾಮಾಜಿಕ ಅಸಮತೋಲನವನ್ನು ಹೋಗಲಾಡಿಸಬಹುದು ಎಂದು ಹಿರಿಯ ಸಾಹಿತಿ, ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಡಾ.ಮೂಡ್ನಾಕೊಡು ಚಿನ್ನಸ್ವಾಮಿ ಹೇಳಿದರು.

ವಿಜಯನಗರ 1ನೇ ಹಂತದ ಡಿ.ಸಂಜೀವಯ್ಯ ಸ್ಮಾರಕ ಶಿಕ್ಷಣ ಸಂಸ್ಥೆ ಆವರಣದಲ್ಲಿರುವ ಬುದ್ಧವಿಹಾರದಲ್ಲಿ ಕರ್ನಾಟಕ ಬುದ್ಧಧಮ್ಮ ಸಮಿತಿ ವತಿಯಿಂದ ಆಯೋಜಿಸಿದ್ದ ಬಾಬಾ ಸಾಹೇಬ್ ಅಂಬೇಡ್ಕರ್ ಅವರ 132ನೇ ಜನ್ಮದಿನಾಚರಣೆ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು. ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಉಳಿಸದಿದ್ದರೆ ಮುಂದಿನ ದಿನಮಾನಗಳಲ್ಲಿ ಕಷ್ಟವಾಗುತ್ತದೆ. ಜಾತಿ ಪ್ರಭುತ್ವ ಹೆಚ್ಚಾಗುತ್ತಿದ್ದು, ನೈತಿಕ ಮೌಲ್ಯಗಳು ಕುಸಿಯುತ್ತಿವೆ. ಶಿಕ್ಷಣದ ಮೂಲಕ ಸ್ವಾಭಿಮಾನವನ್ನು ಬೆಳೆಸಿಕೊಳ್ಳಬೇಕು. ಅಂಬೇಡ್ಕರ್ ಅವರ ಮಾರ್ಗಗಳನ್ನು ಅನುಸರಿಸದಿದ್ದರೆ ಮುಂದಿನ ದಿನಗಳಲ್ಲಿ ಸಂಧಿಗ್ನದ ಪರಿಸ್ಥಿತಿ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಹಿರಿಯ ಪತ್ರಕರ್ತ ದೀಪಕ್ ಮಾತನಾಡಿದರು. ಸಮಿತಿಯ ಪ್ರಧಾನ ಕಾರ್ಯದರ್ಶಿ ಆರ್.ಮಹಾದೇವಪ್ಪ ಅಧ್ಯಕ್ಷತೆ ವಹಿಸಿದ್ದರು. ಕೊಳ್ಳೇಗಾಲ ತಾಲ್ಲೂಕಿನ ಚೆನ್ನಾಲಿಂಗನಹಳ್ಳಿ ಜೇತವನ ಬುದ್ಧವಿಹಾರದ ಮನೋರಕ್ಖಿತ ಭಂತೇಜಿ ಬುದ್ಧವಂದನೆ ನಡೆಸಿಕೊಟ್ಟರು. ಇದೇ ವೇಳೆ ಸಾಹಿತಿ ಹಾಗೂ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಡಾ.ಮೂಡ್ನಾಕೂಡು ಚಿನ್ನಸ್ವಾಮಿ ಅವರನ್ನು ಸನ್ಮಾನಿಸಲಾಯಿತು. ಡಿ.ಸಂಜೀವಯ್ಯ ಸ್ಮಾರಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಪ್ರೊ.ಡಿ.ನಂಜುಂಡಯ್ಯ, ಸಮಿತಿಯ ಸಹಕಾರ್ಯದರ್ಶಿ ಎಚ್.ಶಿವರಾಜು, ಉಪಾಧ್ಯಕ್ಷರಾದ ಪಿ.ಮಹದೇವ, ನಿವೃತ್ತ ಇಂಜಿನಿಯರ್ ಆರ್.ನಟರಾಜು, ರಾಜು ಹಂಪಾಪುರ, ನಿಸರ್ಗ ಸಿದ್ದರಾಜು, ಪ್ರೊ.ಕ್ರಾಂತಿರಾಜ್ ಒಡೆಯರ್, ಪುಟ್ಟಸ್ವಾಮಿ, ರಾಜಮ್ಮ, ಲತಾ ನಟ ನಟರಾಜು, ಡಾ.ಟಿ.ಮಂಜು ಸತ್ತಿಗೆಹುಂಡಿ, ರೂಪೇಶ್, ವಿವಿಧ ದಲಿತ ಪರ ಸಂಘಟನೆಗಳ ಮುಖಂಡರು, ಸಂಶೋಧಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಜೆಎಸ್‌ಎಸ್ ನರ್ಸಿಂಗ್ ಕಾಲೇಜು ಉದ್ಘಾಟನೆ

ಮೈಸೂರು, ಏ. 17– ಚಾಮರಾಜನಗರ ಹಾಗೂ ಸುತ್ತಮುತ್ತಲಿನ ಪ್ರದೇಶದ ಗ್ರಾಮೀಣ ವಿದ್ಯಾರ್ಥಿಗಳಿಗೆ ನರ್ಸಿಂಗ್‌ನಲ್ಲಿ ಉನ್ನತ ಶಿಕ್ಷಣಕ್ಕೆ ಅವಕಾಶ ಒದಗಿಸುವ ದೃಷ್ಟಿಯಿಂದ ಜೆಎಸ್‌ಎಸ್ ಕಾಲೇಜ್ ಆಫ್ ನರ್ಸಿಂಗ್ ಅನ್ನು ಪ್ರಾರಂಭಿಸಲಾಗಿದೆ. ಸುತ್ತೂರು ಶ್ರೀ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ನವದೆಹಲಿಯ ಭಾರತೀಯ ಶುಶ್ರೂಷ ಮಂಡಳಿ ಅಧ್ಯಕ್ಷ ಡಾ.ಟಿ. ದಿಲೀಪ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ಬೆಂಗಳೂರು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ಎಂ.ಕೆ. ರಮೇಶ್ ಉದ್ಘಾಟಿಸಿದರು.

ಚಾಮರಾಜನಗರ ವಿವಿ ಕುಲಪತಿ ಡಾ. ಎಂ.ಆರ್.ಗಂಗಾಧರ್, ಜೆಎಸ್‌ಎಸ್ ಮಹಾವಿದ್ಯಾಪೀಠ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ. ಸಿ.ಜಿ. ಬೆಟಸೂರ ಮಠ ಹಾಗೂ ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕ ಆರ್. ಮಹೇಶ್ ಭಾಗವಹಿಸಿದ್ದರು.

ನೀರಿನ ಸಮಸ್ಯೆ ನೀಗಿಸದಿದ್ದರೆ ಮುಂದೆ ತೀವ್ರ ತೊಂದರೆ ನಿಶ್ಚಿತ

ಸಂವಾದ ಕಾರ್ಯಕ್ರಮದಲ್ಲಿ 'ಕಾವೇರಿ ಡಿಸ್‌ಪ್ಯೂಟ್: ಎ ಹಿಸ್ಟಾರಿಕಲ್ ಪರ್‌ಸ್ಪೆಕ್ಟೀವ್' ಕೃತಿ ಲೇಖಕರಾದ ನಿವೃತ್ತ ಐಪಿಎಸ್ ಅಧಿಕಾರಿ ಸಿ.ಚಂದ್ರಶೇಖರ್ ಅಭಿಮತ

ಮೈಸೂರು, ಏ.17(ಆರ್‌ಕೆ)–ನೀರಿನ ಕೊರತೆ ನೀಗಿಸದಿದ್ದಲ್ಲಿ ಮುಂದೆ ದೊಡ್ಡ ಪ್ರಮಾಣದ ತೊಂದರೆ ಎದುರಿಸಬೇಕಾಗುತ್ತದೆ ಎಂದು 'ಕಾವೇರಿ ಡಿಸ್‌ಪ್ಯೂಟ್: ಎ ಹಿಸ್ಟಾರಿಕಲ್ ಪರ್‌ಸ್ಪೆಕ್ಟೀವ್' ಕೃತಿಯ ಲೇಖಕರಾದ ನಿವೃತ್ತ ಐಪಿಎಸ್ ಅಧಿಕಾರಿ ಹಾಗೂ ಮೈಸೂರು ನಗರ ಮಾಜಿ ಪೊಲೀಸ್ ಆಯುಕ್ತ ಸಿ.ಚಂದ್ರಶೇಖರ್ ಇಂದಿಲ್ಲಿ ಅಭಿಪ್ರಾಯಪಟ್ಟಿದ್ದಾರೆ.



ಮೈಸೂರು ಲಿಟರರಿ ಅಸೋಸಿಯೇಷನ್ ವತಿಯಿಂದ ಮೈಸೂರಿನ ಸರಸ್ವತಿಪುರಂನ ರೋಟರಿ ಪಶ್ಚಿಮ ಸಭಾಂಗಣದಲ್ಲಿ ಭಾನುವಾರ ಆಯೋಜಿಸಿದ್ದ 'ಮೀಟ್ ದ ಆಥರ್' ಕಾರ್ಯಕ್ರಮದಲ್ಲಿ ನಿವೃತ್ತ ಐಪಿಎಸ್ ಅಧಿಕಾರಿ ಸಿ.ಚಂದ್ರಶೇಖರ್ ಅವರು ಕಾವೇರಿ ನೀರು ವಿವಾದ ಕುರಿತಂತೆ ಮಾತನಾಡಿದರು.

ಮೈಸೂರು ಲಿಟರರಿ ಅಸೋಸಿಯೇಷನ್ ವತಿಯಿಂದ ಮೈಸೂರಿನ ಸರಸ್ವತಿಪುರಂನಲ್ಲಿರುವ ರೋಟರಿ ಪಶ್ಚಿಮ ಸಭಾಂಗಣದಲ್ಲಿ ಏರ್ಪಡಿಸಿದ್ದ 'ಮೀಟ್ ದ ಆಥರ್' ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದ ಅವರು, ನೀರಿನ ಕೊರತೆಯು ಅತೀ ಶೀಘ್ರ ತೀವ್ರ ಸಮಸ್ಯೆ ತಂದೊಡ್ಡಬಹುದು ಎಂದು ಆತಂಕ ವ್ಯಕ್ತಪಡಿಸಿದರು.

ತಾವು ಬರೆದಿರುವ 'Kaveri Dispute - a Historical Perspective' ಕೃತಿ ಕುರಿತಂತೆ ನಡೆದ ಸಂವಾದದಲ್ಲಿ ಕಾವೇರಿ ನದಿ ನೀರಿನ ಹಂಚಿಕೆ ವಿವಾದ ಆರಂಭವಾದಾಗಿನಿಂದ ಈವತ್ತಿನ ಪರಿಸ್ಥಿತಿವರೆಗಿನ ಬೆಳವಣಿಗೆ, ಇತಿಹಾಸ ಕುರಿತಂತೆ ಎರಡು ತಾಸು ಸುದೀರ್ಘ ಚರ್ಚೆ ನಡೆಸಲಾಯಿತು. ಪವರ್ ಪಾಯಿಂಟ್ ಪ್ರೆಸೆಂಟೇಷನ್ ಮೂಲಕ ವಿವಾದದ ಬಗ್ಗೆ ಅಂಕಿ–ಅಂಶಗಳ ಸಮೇತ ಸಭಿಕರಿಗೆ ಮಾಹಿತಿ ನೀಡಿದ ಚಂದ್ರಶೇಖರ್, ತಾವು ಆಳವಾದ ಅಧ್ಯಯನ ನಡೆಸಿದ ನಂತರ ಸುದೀರ್ಘ ಸಂಶೋಧನೆ ನಡೆಸಿ 1608 ರಿಂದ 2018ರ ನಡುವಿನ 410 ವರ್ಷಗಳ ಅವಧಿಯ ಮಾಹಿತಿಯನ್ನು ತಮ್ಮ ಕೃತಿಯಲ್ಲಿ ದಾಖಲಿಸಿದ್ದೇನೆ ಎಂದರು.

ಕಾವೇರಿ ವಿವಾದ ಸಂಬಂಧ ಕರ್ನಾಟಕ ರಾಜ್ಯ ಸಲ್ಲಿಸಿದ್ದ ಮನವಿ ಕುರಿತು 'ಸುಪ್ರೀಂಕೋರ್ಟ್ 2018ರ ಫೆಬ್ರವರಿ ಮಾಹೆಯಲ್ಲಿ ನದಿ ನೀರಿನ ಹಂಚಿಕೆ ಬಗ್ಗೆ ತೀರ್ಪು ನೀಡಿದ್ದು, ನೀರಿನ ನಿರ್ವಹಣೆ, ಅತಿವೃಷ್ಟಿ, ಅನಾವೃಷ್ಟಿ ನಿಭಾಯಿಸುವ ಕುರಿತಂತೆಯೂ ಸಲಹೆ ನೀಡಿದೆ ಎಂದ ಅವರು, 1951ರಿಂದ ಈ ದಿನದವರೆಗೆ ನೈಸರ್ಗಿಕ ವಿಪತ್ತು (Flood and Drought) ಪರಿಸ್ಥಿತಿ ನಿರ್ವಹಣೆಗೆ ಸರ್ಕಾರ ಎಷ್ಟು ಹಣ ಖರ್ಚು ಮಾಡಿದೆ ಎಂಬುದನ್ನು ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕು ಎಂದರು.

ಅಂತರ್ಜಲ ಕುಗ್ಗುತ್ತಿರುವುದು, ನೀರಿಗೆ ಸಂಬಂಧಿಸಿದ ಖಾಯಿಲೆಗಳಿಂದಾಗಿ ಮಕ್ಕಳು ಸಾವನ್ನಪ್ಪುತ್ತಿದ್ದು, ನೀರಿನ ಕೊರತೆಯನ್ನು ಸರಿಪಡಿಸದಿದ್ದಲ್ಲಿ ಮುಂದೆ ತೀವ್ರ ಸ್ವರೂಪದ ತೊಂದರೆ ಎದುರಿಸಬೇಕಾಗುತ್ತದೆ ಎಂದ ಚಂದ್ರಶೇಖರ್, ನದಿ ನೀರಿನ ಹಂಚಿಕೆ ವಿವಾದ ಸಂಬಂಧ ಕಾವೇರಿ ನೀರು ವಿವಾದ ನ್ಯಾಯಾಧೀಕರಣ (CWDT) ನೀಡಿದ ತೀರ್ಪಿನಲ್ಲಿ ತಮಿಳುನಾಡಿಗೆ 205 ಟಿಎಂಸಿ ನೀರು ಬಿಡುವಂತೆ ಆದೇಶಿಸಿದ್ದಲ್ಲದೆ, 11.2 ಲಕ್ಷ ಎಕರೆ ಕೃಷಿ ಭೂಮಿಗೆ ನೀರಾವರಿ ವಿಸ್ತರಿಸಲು ನಿಷೇಧ ಹೇರಿತು ಎಂದರು. ನಾನು ಇಂಟೆಲಿಜೆನ್ಸ್ ವಿಂಗ್‌ನಲ್ಲಿ ಕೆಲಸ ಮಾಡುತ್ತಿದ್ದಾಗ ಕಾವೇರಿ ನೀರು ವಿವಾದದ ಬಗ್ಗೆ ಹೆಚ್ಚು ತಿಳಿದಿರಲಿಲ್ಲ. ಸುದೀರ್ಘ ಅಧ್ಯಯನ ಮಾಡಲಾರಂಭಿಸಿದಾಗ ಬ್ರಿಟಿಷರ ಆಳ್ವಿಕೆ ಬಗ್ಗೆ ದಾಖಲಾತಿಗಳು ಮಾಹಿತಿ ನೀಡಿದವು. ಹಲವು ಕಾನೂನು ಪ್ರಾಧಿಕಾರಗಳು ನೀಡಿರುವ ಸಲಹೆ, ನಿರ್ದೇಶನಗಳು ಒಂದೊಂದಾಗಿ ತಿಳಿಯಿತು ಎಂದು ಅವರು ನುಡಿದರು.

ಕಾವೇರಿ ನೀರು ವಿವಾದ ಸಂಬಂಧ ಕಾನೂನು ತಜ್ಞರಾಗಿದ್ದ ಸಿಕೆಎನ್ ರಾಜ ಅವರು ಹೊಂದಿದ್ದ ಅಪಾರ ಜ್ಞಾನದ ಬಗ್ಗೆ ಚಂದ್ರಶೇಖರ್ ಸ್ಮರಣೆ ಮಾಡಿಕೊಳ್ಳುತ್ತಿದ್ದಂತೆಯೇ ನಿಧನರಾಗಿರುವ ಸಿಕೆಎನ್ ರಾಜ ಅವರಿಗೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದವರೆಲ್ಲರೂ ಎದ್ದು ನಿಂತು ಮೌನಾಚರಿಸುವ ಮೂಲಕ ನಮನ ಸಲ್ಲಿಸಿದರು.

ನಂತರ ಸಿ.ಚಂದ್ರಶೇಖರ್‌ರೊಂದಿಗೆ ಕಾವೇರಿ ವಿವಾದ ಸಂಬಂಧ ಸಂವಾದ ನಡೆಯಿತು. ಮೈಸೂರು ಲಿಟರರಿ ಅಸೋಸಿಯೇಷನ್ ಉಪಾಧ್ಯಕ್ಷ ರಾಜಗೋಪಾಲ್, ಎಕ್ಸಿಕ್ಯೂಟಿವ್ ಕಮಿಟಿ ಸದಸ್ಯರಾದ ಎ.ಕೆ. ಮೊಣ್ಣಪ್ಪ, ಪ್ರೊ.ಅನಿತಾ ವಿಮಲಾ ಬ್ರಾಗ್ಸ್, ಪ್ರೊ. ನಿರ್ಮಲ, ಪಿ.ವಿ.ಗೋಪಿನಾಥ್, ಪ್ರೊ. ಶಿವಣ್ಣ, ಪ್ರೊ.ಲತಾ ಬಿದ್ದಪ್ಪ, ಹರಿದಾಸ್, ಚೇತನ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಡಾ. ದಮಯಂತಿ, ಪ್ರೊ.ಎಂ.ಕೃಷ್ಣೇಗೌಡ, ಕೃಷ್ಣಪ್ರಸಾದ್, ಅಶ್ವಿನಿ ರಂಜನ್, ಜೆ.ಬಿ.ರಂಗಸ್ವಾಮಿ, ರಘುರಾಂ ವಾಜಪೇಯಿ, ವಿಕ್ರಾಂತ್ ಪಿ.ದೇವೇಗೌಡ ಸೇರಿದಂತೆ ವಿವಿಧ ಕ್ಷೇತ್ರಗಳ ಗಣ್ಯರು, ನಿವೃತ್ತ ಪ್ರಾಧ್ಯಾಪಕರು, ಸಾಹಿತಿಗಳು, ಕೈಗಾರಿಕೋದ್ಯಮಿಗಳು ಸಂವಾದದಲ್ಲಿ ಪಾಲ್ಗೊಂಡಿದ್ದರು.

ಮೈಸೂರು ಮಿತ್ರ ಮಂಗಳವಾರ 18 ಏಪ್ರಿಲ್ 2023

ವಿಧಾನಸಭಾ ಚುನಾವಣೆ : ಕೊಡಗು ಜಿಲ್ಲೆಯಲ್ಲಿ ನಾಮಪತ್ರ ಸಲ್ಲಿಕೆ ಸಂಭ್ರಮ

ಮಡಿಕೇರಿ ಕ್ಷೇತ್ರಕ್ಕೆ ಬಿಜೆಪಿ ಅಭ್ಯರ್ಥಿ ಅಪ್ಪಚ್ಚು ರಂಜನ್, ಕಾಂಗ್ರೆಸ್ ಅಭ್ಯರ್ಥಿ ಡಾ.ಮಂಥರ್ ಗೌಡ ಸೇರಿ ನಾಲ್ವರು ನಾಮಪತ್ರ ಸಲ್ಲಿಕೆ




ಅಪ್ಪಚ್ಚು ರಂಜನ್ ಮಂಥರ್ ಗೌಡ,

ಮಡಿಕೇರಿ,ಏ.17– ವಿಧಾನಸಭಾ ಚುನಾವಣೆಗೆ ಮಡಿಕೇರಿ ವಿಧಾನಸಭಾ ಕ್ಷೇತ್ರದಿಂದ ಸೋಮವಾರ ಒಟ್ಟು 4 ನಾಮಪತ್ರಗಳು ಸಲ್ಲಿಕೆಯಾದವು. ಮಡಿಕೇರಿ ಕ್ಷೇತ್ರಕ್ಕೆ ಬಿಜೆಪಿ ಅಭ್ಯರ್ಥಿಯಾಗಿ ಹಾಲಿ ಶಾಸಕ ಮಂಡೇಪಂಡ ಅಪ್ಪಚ್ಚು ರಂಜನ್, ಕಾಂಗ್ರೆಸ್ ಅಭ್ಯರ್ಥಿಯಾಗಿ ಡಾ.ಮಂಥರ್ ಗೌಡ, ಬಿಜೆಪಿ 'ಬಂಡಾಯ' ಅಭ್ಯರ್ಥಿಯಾಗಿ ಜಿ.ಜಿ.ಹೇಮಂತ್, ಸಿಪಿಐ ಪಕ್ಷದಿಂದ ಹೆಚ್.ಎಂ. ಸೋಮಪ್ಪ ಅವರುಗಳು ಚುನಾವಣಾಧಿಕಾರಿ ಯತೀಶ್ ಉಲ್ಲಾಳ್ ಅವರಿಗೆ ನಾಮಪತ್ರ ಸಲ್ಲಿಸಿದರು.

ಶಾಸಕರ ನಾಮಪತ್ರ ನಗರದ ಶ್ರೀ ಚೌಡೇಶ್ವರಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಶಾಸಕ ಅಪ್ಪಚ್ಚು ರಂಜನ್ ತಮ್ಮ ಸಾವಿರಾರು ಬೆಂಬಲಿಗರೊಂದಿಗೆ ನಗರದಲ್ಲಿ ರೋಡ್ ಶೋ ನಡೆಸಿದರು. ಕೇರಳ ಚಂಡೆ ವಾದ್ಯಗಳೊಂದಿಗೆ ನಗರದ ಮುಖ್ಯ ಬೀದಿಗಳಲ್ಲಿ ಶಕ್ತಿ ಪ್ರದರ್ಶನದ ಮೆರವಣಿಗೆ ತೆರಳಿದ ಅಪ್ಪಚ್ಚು ರಂಜನ್ ಆ ಮೂಲಕ ಕ್ಷೇತ್ರದ ಮತದಾರರ ಓಲೈಸುವ ಪ್ರಯತ್ನ ನಡೆಸಿದರು.

ಬಿಜೆಪಿ, ಪ್ರಧಾನಿ ನರೇಂದ್ರ ಮೋದಿ, ಅಪ್ಪಚ್ಚು ರಂಜನ್ ಅವರುಗಳ ಪರ ಕಾರ್ಯಕರ್ತರು ಘೋಷಣೆಗಳನ್ನು ಮೊಳಗಿಸಿದರು. ಜಿಲ್ಲಾಡಳಿತ ಭವನದ ಪ್ರವೇಶ ದ್ವಾರಕ್ಕೆ ಆಗಮಿಸಿದ ಅಪ್ಪಚ್ಚು ರಂಜನ್ ಬಳಿಕ 5 ಮಂದಿ ಪಕ್ಷದ ಪ್ರಮುಖರ ಸಹಿತ ಚುನಾವಣಾಧಿಕಾರಿಗಳಿಗೆ ನಾಮಪತ್ರ ಸಲ್ಲಿಸಿದರು. ಈ ಸಂದರ್ಭ ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಬಿ.ಬಿ. ಭಾರತೀಶ್, ಮಾಜಿ ಎಂ.ಎಲ್.ಸಿ. ಮೇದಪ್ಪ ಎಸ್.ಜಿ. ಬಿಜೆಪಿ ಜಿಲ್ಲಾ ವಕ್ತಾರ ಅಭಿಮನ್ಯು ಕುಮಾರ್ ಉಪಸ್ಥಿತರಿದ್ದರು.

ಭಾರೀ ಅಂತರದ ಗೆಲುವು: ನಾಮಪತ್ರ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅಪ್ಪಚ್ಚುರಂಜನ್ ಈ ಬಾರಿ ಬಿಜೆಪಿ 134 ಕ್ಷೇತ್ರಗಳಲ್ಲಿ ಗೆಲುವು ಸಾಧಿಸುವ ಮೂಲಕ ರಾಜ್ಯದಲ್ಲಿ ಮತ್ತೆ ನಮ್ಮದೇ ಸರ್ಕಾರ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕೊಡಗು ಜಿಲ್ಲೆಯ ಎರಡೂ ಕ್ಷೇತ್ರಗಳಲ್ಲಿ ಬಿಜೆಪಿ ದೊಡ್ಡ ಅಂತರದಲ್ಲಿ ಗೆಲುವು ಸಾಧಿಸಲಿದೆ. ಕಾರ್ಯಕರ್ತರ ಉತ್ಸಾಹ ಇಮ್ಮಡಿಯಾಗಿದ್ದು, ಸುಮಾರು 30 ಸಾವಿರ ಮತಗಳ ಅಂತರದಲ್ಲಿ ನಾನು ಗೆಲ್ಲಲಿದ್ದೇನೆ. ವಿಧಾನಸಭಾ ಚುನಾವಣೆಯಲ್ಲಿ ಏಳನೇ ಬಾರಿಗೆ ನಾನು ಸ್ಪರ್ಧಿಸುತ್ತಿದ್ದು, ಐದು ಬಾರಿ ಗೆದ್ದಿದ್ದೇನೆ, ಆರನೇ ಗೆಲುವು ದಾಖಲಿಸುವುದು ಖಚಿತವೆಂದರು.

ಕಾಂಗ್ರೆಸ್ ನಾಮಪತ್ರ ಮಡಿಕೇರಿ ವಿಧಾನಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿ ಡಾ. ಮಂಥರ್ ಗೌಡ ಅವರು ಇಂದು ನಾಮಪತ್ರ ಸಲ್ಲಿಸಿದರು. ನಾಮಪತ್ರ ಸಲ್ಲಿಕೆಗೂ ಮೊದಲು ಡಾ.ಮಂತರ್ ಗೌಡ ಅವರು ತಮ್ಮ ನಿವಾಸದಲ್ಲಿ ಗೋವುಗಳಿಗೆ ಪೂಜೆ ಸಲ್ಲಿಸಿದರು. ನಂತರ ನಗರದ ಶ್ರೀ ಚೌಡೇಶ್ವರಿ ದೇವಾಲಯದ ಬಳಿಯಿಂದ ಗಾಂಧಿ ಮೈದಾನದವರೆಗೆ ಪಕ್ಷದ ಪ್ರಮುಖರು ಹಾಗೂ ಸಹಸ್ರಾರು ಕಾರ್ಯಕರ್ತರೊಂದಿಗೆ ಮೆರವಣಿಗೆ ನಡೆಸಿದರು.

ಮಂಥರ್ ಗೌಡ, ಡಿಕೆಶಿ, ಸಿದ್ದರಾಮಯ್ಯ, ರಾಹುಲ್ ಗಾಂಧಿ ಪರ ಘೋಷಣೆ ಮೊಳಗಿಸಿದ ಕಾರ್ಯಕರ್ತರು ಈ ಬಾರಿ ಕೊಡಗಲ್ಲಿ ಕಾಂಗ್ರೆಸ್ ಅಧಿಕಾರದ ಚುಕ್ಕಾಣಿ ಹಿಡಿಯುವ ವಿಶ್ವಾಸ ವ್ಯಕ್ತಪಡಿಸಿದರು. ಬಹುತೇಕ ಕಾರ್ಯಕರ್ತರು ಡಾ. ಮಂಥರ್ ಗೌಡ ಅವರ ಭಾವಚಿತ್ರವಿರುವ ಟೀ ಶರ್ಟ್‌ಗಳನ್ನು ತೊಟ್ಟು ಮೆರವಣಿಗೆಯಲ್ಲಿ ಸಾಗಿದರು. ಪಕ್ಷದ ಪ್ರಮುಖರೊಂದಿಗೆ ಜಿಲ್ಲಾಡಳಿತ ಭವನಕ್ಕೆ ಆಗಮಿಸಿದ ಮಂಥರ್ ಗೌಡ, ಮಡಿಕೇರಿ ಕ್ಷೇತ್ರದ ಚುನಾವಣಾಧಿಕಾರಿ ಡಾ.ಯತೀಶ್ ಉಲ್ಲಾಳ್ ಅವರಿಗೆ ನಾಮಪತ್ರ ಸಲ್ಲಿಸಿದರು. ಈ ಸಂದರ್ಭ ಕಾಂಗ್ರೆಸ್ ಪ್ರಮುಖರಾದ ಹೆಚ್.ಎಸ್.ಚಂದ್ರಮೌಳಿ, ಕೆ.ಎಂ. ಲೋಕೇಶ್ ಹಾಗೂ ಡಾ.ಮಂಥರ್ ಗೌಡ ಪತ್ನಿ ದಿವ್ಯ ಹಾಜರಿದ್ದರು.

ಗೆಲುವು ಖಚಿತ: ನಾಮಪತ್ರ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮಂಥರ್ ಗೌಡ ಮಡಿಕೇರಿ ಕ್ಷೇತ್ರದ ಜನ ಈ ಬಾರಿ ವಿದ್ಯಾವಂತರನ್ನು ಬೆಂಬಲಿಸಲಿದ್ದಾರೆ. ಭ್ರಷ್ಟಾಚಾರದ ವಿರುದ್ಧ ಮತ್ತು ಅಭಿವೃದ್ಧಿ ಪರ ಮತ ಚಲಾಯಿಸಲಿದ್ದು, ನನ್ನ ಗೆಲುವು ನೂರಕ್ಕೆ ನೂರು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕಳೆದ 25 ವರ್ಷಗಳಿಂದ ಶಾಸಕರಾದವರು ಜನಮೆಚ್ಚಿದ ಕಾರ್ಯ ಮಾಡಿಲ್ಲ ಎಂದು ಟೀಕಿಸಿದರು.

ಬಿಜೆಪಿ 'ಬಂಡಾಯ': ಮಡಿಕೇರಿ ವಿಧಾನಸಭಾ ಕ್ಷೇತ್ರದಿಂದ ಬಿಜೆಪಿ ಬಂಡಾಯ ಅಭ್ಯರ್ಥಿಯಾಗಿ ಸೋಮವಾರಪೇಟೆ ಗರಗಂದೂರು ಗ್ರಾಮದ ಜಿ.ಜಿ.ಹೇಮಂತ್ ಕುಮಾರ್ ಇಂದು ನಾಮಪತ್ರ ಸಲ್ಲಿಸಿದರು. ನಗರದ ಜನರಲ್ ತಿಮ್ಮಯ್ಯ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಬೆಂಬಲಿಗರೊಂದಿಗೆ ಮೆರವಣಿಗೆಯಲ್ಲಿ ಆಗಮಿಸಿದ ಹೇಮಂತ್ ಕುಮಾರ್ ಮಡಿಕೇರಿ ಕ್ಷೇತ್ರದ ಚುನಾವಣಾಧಿಕಾರಿ ಡಾ.ಯತೀಶ್ ಉಲ್ಲಾಳ್ ಅವರಿಗೆ ನಾಮಪತ್ರ ಸಲ್ಲಿಸಿದರು.

ಕಾರ್ಯಕರ್ತರ ಕಡೆಗಣನೆ: ಬಿಜೆಪಿಯ ಬಂಡಾಯ ಅಭ್ಯರ್ಥಿಯಾಗಿರುವ ಇವರು ಕ್ಷೇತ್ರದ ಮತದಾರರು ಬದಲಾವಣೆಯನ್ನು ಬಯಸಿದ್ದಾರೆ ಎಂದರು. ಕಳೆದ 30 ವರ್ಷಗಳಿಂದ ಬಿಜೆಪಿಯ ಪ್ರಾಮಾಣಿಕ ಕಾರ್ಯಕರ್ತನಾಗಿ ಕಾರ್ಯ ನಿರ್ವಹಿಸಿದ್ದೇನೆ. ಆದರೆ ಬಿಜೆಪಿಯಲ್ಲಿ ನೈಜ ಕಾರ್ಯಕರ್ತರನ್ನು ಕಡೆಗಣಿಸಲಾಗುತ್ತಿದೆ. ಪಕ್ಷದ ನಾಯಕರು ಈ ಬಾರಿ ಬದಲಾವಣೆಗೆ ಆದ್ಯತೆ ನೀಡುವುದಾಗಿ ಭರವಸೆ ನೀಡಿದ್ದರು. ಆದರೆ ಯಾವುದೇ ಬದಲಾವಣೆ ಮಾಡದೆ ಇರುವುದರಿಂದ ಮನನೊಂದು ಬಂಡಾಯ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿದ್ದೇನೆ. ಕಾರ್ಯಕರ್ತರ ಶ್ರಮದಿಂದ ನನ್ನ ಗೆಲುವು ಖಚಿತವಾಗಿದ್ದು, ಸ್ಪರ್ಧೆಯಿಂದ ಹಿಂದೆ ಸರಿಯುವ ಮಾತೇ ಇಲ್ಲ ಎಂದು ಹೇಮಂತ್ ಕುಮಾರ್ ಸ್ಪಷ್ಟಪಡಿಸಿದರು.

ವಿರಾಜಪೇಟೆಯಿಂದ ಬಿಜೆಪಿ ಅಭ್ಯರ್ಥಿ ಬೋಪಯ್ಯ ಸೇರಿ ಇಬ್ಬರ ನಾಮಪತ್ರ ಸಲ್ಲಿಕೆ





ಬೋಪಯ್ಯ

ವಿರಾಜಪೇಟೆ, ಏ.17– ವಿರಾಜಪೇಟೆ ವಿಧಾನಸಭಾ ಕ್ಷೇತ್ರದಿಂದ ಶಾಸಕ ಕೆ.ಜಿ. ಬೋಪಯ್ಯ ಸೇರಿದಂತೆ ಇಬ್ಬರು ಅಭ್ಯರ್ಥಿಗಳು ಇಲ್ಲಿನ ತಾಲೂಕು ಕಚೇರಿಯಲ್ಲಿ ಚುನಾವಣಾಧಿಕಾರಿ ಶಬಾನಾ ಎಂ.ಶೇಕ್ ಅವರಿಗೆ ನಾಮಪತ್ರ ಸಲ್ಲಿಸಿದರು.

ಇದಕ್ಕೂ ಮುನ್ನ ಪಟ್ಟಣದ ಶ್ರೀ ಮಹಾಗಣಪತಿ ದೇವಸ್ಥಾನದಲ್ಲಿ ಅಭ್ಯರ್ಥಿ ಬೋಪಯ್ಯ ಹಾಗೂ ಕುಂತಿ ಬೋಪಯ್ಯ ಅವರು ಕಾರ್ಯಕರ್ತರೊಂದಿಗೆ ಪೂಜೆ ಸಲ್ಲಿಸಿದರು. ನಂತರ ತೆಲುಗರ ಬೀದಿಯಲ್ಲಿರುವ ಮಾರಿ ಗುಡಿಯಲ್ಲಿ ಪೂಜೆ ಸಲ್ಲಿಸಿದ ಬಳಿಕ ಮುಖ್ಯರಸ್ತೆಯಿಂದ ಮೆರವಣಿಗೆ ಹೊರಟು ಜೈನರ ಬೀದಿ, ದೊಡ್ಡಟ್ಟಿಚೌಕಿ ಮಾರ್ಗವಾಗಿ, ಖಾಸಗಿ ಬಸ್ಸು ನಿಲ್ದಾಣದಿಂದ, ಗಡಿಯಾರ ಕಂಬದ ಬಳಿಯಿಂದ ತಾಲೂಕು ಕಚೇರಿವರೆಗೆ ಮೆರವಣಿಗೆ ಮೂಲಕ ಸಾಗಿ ನಂತರ ಚುನಾವಣಾಧಿಕರಿಗೆ ನಾಮಪತ್ರ ಸಲ್ಲಿಸಿದರು.

ನಂತರ ಮಾಧ್ಯಮದೊಂದಿಗೆ ಮಾತನಾಡಿದ ಶಾಸಕ ಬೋಪಯ್ಯ ವಿಧಾನಸಭಾ ಕ್ಷೇತ್ರದ ಎಲ್ಲಾ ಕಡೆಯಿಂದ ಬಂದಿದ್ದ ಕಾರ್ಯಕರ್ತರ ಅಭೂತಪೂರ್ವ ಬೆಂಬಲದೊಂದಿಗೆ ಐದನೆ ಬಾರಿಗೆ ಮರು ಆಯ್ಕೆ ಬಯಸಿ ನಾಮಪತ್ರ ಸಲ್ಲಿಸಿದ್ದೇನೆ. ಈ ಭಾರಿಯ ಚುನಾವಣೆಯಲ್ಲಿ ಕೊಡಗಿನ ಎರಡು ಕ್ಷೇತ್ರದಿಂದ ಪಕ್ಷ ಗೆದ್ದುಬರುವ ವಿಶ್ವಾಸವಿದ್ದು ಕಾರ್ಯಕರ್ತರು ನಿಷ್ಠೆಯಿಂದ ಕೆಲಸ ಮಾಡಲಿದ್ದಾರೆ ಎಂದರು. ವಿಧಾನಪರಿಷತ್ ಸದಸ್ಯ ಸುಜಾ ಕುಶಾಲಪ್ಪ ಮಾತನಾಡಿ, ಕೇಂದ್ರ ಮತ್ತು ರಾಜ್ಯ ಸರಕಾರ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದು, ಮತದಾರರು ಬಿಜೆಪಿ ಕೈ ಹಿಡಿಯಲಿದ್ದಾರೆ ಎಂದರು.

ಪಕ್ಷದ ಜಿಲ್ಲಾಧ್ಯಕ್ಷ ರಾಬೀನ್ ದೇವಯ್ಯ ಮಾತನಾಡಿ, ಯಾವುದೇ ಗೊಂದಲ ಇಲ್ಲದೆ ಪಕ್ಷದ ಕಾರ್ಯಕರ್ತರು ಒಂದಾಗಿ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಲಿದ್ದಾರೆ. ಇಂದು ಸೇರಿರುವ ಹೆಚ್ಚಿನ ಕಾರ್ಯಕರ್ತರೆ ಸಾಕ್ಷಿ. ಕೊಡಗಿನಲ್ಲಿ ಎರಡು ಕ್ಷೇತ್ರದಲ್ಲಿ ಗೆಲ್ಲಲಿದ್ದೆವೆ. ಈ ಸಂದರ್ಭ ಬಿಜೆಪಿಯ ಮಂಡಲ ಅಧ್ಯಕ್ಷ ನೆಲ್ಲಿರ ಚಲನ್, ನಗರ ಬಿಜೆಪಿ ಅಧ್ಯಕ್ಷ ಟಿ.ಪಿ.ಕೃಷ್ಣ, ಹಿರಿಯ ಪ್ರಮುಖರಾದ ಪಟ್ರಪಂಡ ರಘುನಾಣಯ್ಯ ಉಪಸ್ಥಿತರಿದ್ದರು.

ನಾಸರ್ ಮಕ್ಕಿ ನಾಮಪತ್ರ ಸಲ್ಲಿಕೆ: ವಿರಾಜಪೇಟೆ ವಿಧಾನಸಭಾ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧೆಗೆ ಮುಂದಾಗಿರುವ ನಾಲ್ಕುನಾಡು ಮುಸ್ಲಿಂ ಒಕ್ಕೂಟದ ಪ್ರಮುಖ, ಅಲ್ಪಸಂಖ್ಯಾತ ಮುಖಂಡ ಕುಂಜಿಲದ ನಾಸರ್ ಮಕ್ಕಿ ಅವರು ತಾಲೂಕು ಕಚೇರಿ ಸಭಾಂಗಣದಲ್ಲಿ ನಾಮಪತ್ರ ಸಲ್ಲಿಸಿದರು. ಮೊದಲಿಗೆ ನಗರದ ಗಡಿಯಾರ ಕಂಬದ ಬಳಿಯಿಂದ ಬೆಂಬಲಿಗರೊಂದಿಗೆ ಮೆರವಣಿಗೆ ಮೂಲಕ ಬಂದ ಅಭ್ಯರ್ಥಿ ನಾಸರ್ ಮಕ್ಕಿ ಅವರು ಕೊಡಗಿನಲ್ಲಿ ಹಿಂದಿನಿಂದಲೂ ರಾಜಕೀಯ ಪಕ್ಷಗಳು ಜಿಲ್ಲೆಯ ಅಲ್ಪಸಂಖ್ಯಾತರನ್ನು ಸೂಕ್ತ ರೀತಿಯಲ್ಲಿ ಪರಿಗಣಿಸಿಲ್ಲ. ಇದೀಗ ಪರಿಸ್ಥಿತಿ ಬದಲಾಗಿದ್ದು, ಅಲ್ಪಸಂಖ್ಯಾತರು ಆಮಿಷಗಳಿಗೆ ಬಲಿಯಾಗಿ ಮತ ನೀಡುವವರಲ್ಲ ಎಂಬುದನ್ನು ಮುಂಬರುವ ಚುನಾವಣೆ ಮೂಲಕ ತೋರಿಸಿಕೊಡಬೇಕಿದೆ ಎಂದರು.

ಅಜ್ಜಿಮುಟ್ಟ ಪಳ್ಳಿರಾಣೆಯಲ್ಲಿ ನೀರಿನ ಸಮಸ್ಯೆ: ಚುನಾವಣೆ ಬಹಿಷ್ಕಾರ



ನಾಪೋಕ್ಲು, ಏ.17– ಸ್ಥಳೀಯ ಗ್ರಾಮ ಪಂಚಾಯಿತಿಯ ಅಜ್ಜಿಮುಟ್ಟ ಪಳ್ಳಿರಾಣೆ ಎಂಬಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದು, ಇದರಿಂದ ಗ್ರಾಮಸ್ಥರು ಬೇಸತ್ತು ಭಾನುವಾರ ಗ್ರಾಪಂ ಹಾಗೂ ಜನಪ್ರತಿನಿಧಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಪ್ರತಿಭಟಿಸುವುದರ ಮೂಲಕ ಚುನಾವಣೆಯನ್ನು ಬಹಿಷ್ಕರಿದ್ದಾರೆ. ಕಳೆದ ಎರಡು–ಮೂರು ವರ್ಷಗಳಿಂದ ಇಲ್ಲಿನ ಜನರು ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸುತ್ತಿದ್ದಾರೆ. ನೀರಿನ ಟ್ಯಾಂಕ್ ಇದ್ದರೂ ನೀರು ಸರಬರಾಜು ಆಗುತ್ತಿಲ್ಲ, ಪ್ರಧಾನಮಂತ್ರಿಗಳ ಜಲಜೀವನ್ ವ್ಯವಸ್ಥೆ ಕ್ರಮ ಕೈಗೊಳ್ಳದೆ ಇದ್ದುದರಿಂದ ಕುಡಿಯುವ ನೀರಿಗಾಗಿ ಸಮೀಪದ ಮಸೀದಿಯ ಬಳಿಯ ಕೊಳವೆಬಾವಿಯನ್ನು ಅವಲಂಬಿಸಬೇಕಾಗಿದೆ. ಸ್ನಾನ ಮತ್ತಿತರ ಕಾರ್ಯಗಳಿಗೆ ದೂರದ ಹೊಳೆಗೆ ತೆರಳುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮಸ್ಥರು ಸುಡುಬಿಸಿಲಿನಲ್ಲಿ ಪರಿತಪಿಸುತಿದ್ದಾರೆ. ಕೂಡಲೇ ಸಮಸ್ಯೆಯನ್ನು ಪರಿಹರಿಸದಿದ್ದರೆ ಚುನಾವಣೆಯನ್ನು ಬಹಿಷ್ಕರಿಸುವುದಾಗಿ ಗ್ರಾಮಸ್ಥರಾದ ಮಂದಪಂಡ ಮೊಣ್ಣಪ್ಪ, ಇಬ್ರಾಹಿಂ ಪಿ.ಬಿ, ನಬೀಸಾ, ಫೇಮಿನಾ ಆಕ್ರೋಶ ವ್ಯಕ್ತಪಡಿಸಿ ಎಚ್ಚರಿಸಿದ್ದಾರೆ.

ಪಳ್ಳಿರಾಣೆಗೆ ತುರ್ತಾಗಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಿಕೊಡಬೇಕು. ಇಲ್ಲಿನ ರಸ್ತೆಯು ಸಂಪೂರ್ಣ ಹಾಳಾಗಿದೆ. ರಸ್ತೆಯನ್ನು ದುರಸ್ತಿಪಡಿಸಿಕೊಡಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದಲ್ಲದೆ ತಪ್ಪಿದಲ್ಲಿ ಗ್ರಾಮಸ್ಥರೆಲ್ಲ ಒಟ್ಟಾಗಿ ಚುನಾವಣೆಯನ್ನು ಸಂಪೂರ್ಣ ಬಹಿಷ್ಕರಿಸುವುದಾಗಿ ಗ್ರಾಮಸ್ಥರು ಹೇಳಿದರು. ಪ್ರತಿಭಟನೆಯಲ್ಲಿ ಗ್ರಾಮಸ್ಥರಾದ ಸುಲೇಮಾನ್ ಪಿ.ಎಂ., ಸುಬೇರ್ .ಪಿ.ಎಚ್, ಮಿಥುನ್.ಎಂ.ಆರ್. ಮಮ್ಮುಟಿ.ಎ, ಶಾದುಲಿ.ಪಿ.ಎ, ಚಾಮಿ ಬಿ.ಪಿ.ರಾಜೀವ್ ಬಿ.ಎಂ, ಹನೀಫ.ಎಂ.ಎ, ಮೈದು ಎಂ.ಎ, ಸೂಫಿ, ರಘು, ಸೇರಿದಂತೆ ಹಲವು ಗ್ರಾಮಸ್ಥರು ಉಪಸ್ಥಿತರಿದ್ದರು.

ಮೂಟೇರಿ ಉಮಾಮಹೇಶ್ವರಿ ವಾರ್ಷಿಕ ಉತ್ಸವ

ನಾಪೋಕ್ಲು, ಏ.17– ಸಮೀಪದ ಮೂಟೇರಿ ಉಮಾಮಹೇಶ್ವರಿ ವಾರ್ಷಿಕ ಉತ್ಸವ ದೀಪಾರಾಧನೆ, ದೇವರ ನೃತ್ಯಬಲಿ ಮೂಲಕ ವಿಜೃಂಭಣೆಯಿಂದ ನಡೆಯಿತು.

ಮುಖ್ಯ ಹಬ್ಬದಂದು ಮಧ್ಯಾಹ್ನ ಎತ್ತುಪೋರಾಟ, ಬೊಳಕಾಟ್, ದುಡಿಕೊಟ್ ಪಾಟ್, ಮಹಾಪೂಜೆ ತೀರ್ಥ ಪ್ರಸಾದ ವಿತರಣೆ ಸಾಂಗವಾಗಿ ನೆರವೇರಿತು. ರಾತ್ರಿ ದೇವರ ಅವಭೃತ ಸ್ನಾನ ಹಾಗೂ ನೃತ್ಯಬಲಿ ನಡೆಯಿತು. ವಾರ್ಷಿಕ ಉತ್ಸವದಲ್ಲಿ ಅಧಿಕ ಸಂಖ್ಯೆಯ ಭಕ್ತರು ಪಾಲ್ಗೊಂಡು ತಮ್ಮ ಇಷ್ಟಾರ್ಥ ಸಿದ್ಧಿಗೆ ವಿವಿಧ ಹರಕೆ ಪೂಜೆಯನ್ನು ನೆರವೇರಿಸಿ ಧನ್ಯತ ಬಾವ ಹೊಂದಿದರು. ಈ ಸಂದರ್ಭ ದೇವಾಲಯದ ತಕ್ಕರಾದ ವಾಂಜಂಡ ಬೋಪಯ್ಯ, ಆಡಳಿತ ಮಂಡಳಿ ಅಧ್ಯಕ್ಷ ಅಪ್ಪಚ್ಚಿರ ರಮ್ಮಿ ನಾಣಯ್ಯ,ಉಪಾಧ್ಯಕ್ಷ ಕಾಟುಮಣಿಯಂಡ ಉಮೇಶ್, ಕಾರ್ಯದರ್ಶಿ ಪುಲ್ಲೇರ ವಿಠಲ ಪಳಂಗಪ್ಪ, ಆಡಳಿತ ಮಂಡಳಿ ಸದಸ್ಯರು, ಊರ ಮತ್ತು ಪರಾವೂರಿನ ಭಕ್ತಾದಿಗಳು ಪಾಲ್ಗೊಂಡಿದ್ದರು. ದೇವಾಲಯದ ಮುಖ್ಯ ಅರ್ಚಕ ಕೀರ್ತೀಶ್ ಪೂಜಾ ಕೈ ಕಾರ್ಯಗಳನ್ನು ನೆರವೇರಿಸಿದರು.

ಕೊಳ್ಳೇಗಾಲದಿಂದ ಕಾಂಗ್ರೆಸ್ ಅಭ್ಯರ್ಥಿ ಎಆರ್‌ಕೆ, ಜೆಡಿಎಸ್ ಅಭ್ಯರ್ಥಿ ಪುಟ್ಟಸ್ವಾಮಿ ನಾಮಪತ್ರ ಸಲ್ಲಿಕೆ




ಕೃಷ್ಣಮೂರ್ತಿ ಪುಟ್ಟಸ್ವಾಮಿ

> ಜೆಡಿಎಸ್ ಅಭ್ಯರ್ಥಿ ಪುಟ್ಟಸ್ವಾಮಿ ಅವರು ನಾನು ವಯಸ್ಸಿನಲ್ಲಿ ಹಿರಿಯ ಎಂಬ ಕಾರಣಕ್ಕೆ ಕಾಲಿಗೆ ಬಿದ್ದು ನಮಸ್ಕಾರ ಮಾಡಿದ್ದಾರೆ. ಇದನ್ನು ತಪ್ಪಾಗಿ ಅರ್ಥೈಸುವುದು ಬೇಡ. ರಾಜ್ಯದಲ್ಲೂ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ. ಕೊಳ್ಳೇಗಾಲದಲ್ಲೂ ಇಂದು ನಾಮಪತ್ರ ಸಲ್ಲಿಸುವ ವೇಳೆ ಅಭೂತಪೂರ್ವ ಬೆಂಬಲ ವ್ಯಕ್ತವಾಗಿದೆ. ಮತದಾರರ ಆಶೀರ್ವಾದದಿಂದ ಗೆಲ್ಲುವ ವಿಶ್ವಾಸವಿದೆ.
>
> –ಎ.ಆರ್.ಕೃಷ್ಣಮೂರ್ತಿ, ಕಾಂಗ್ರೆಸ್ ಅಭ್ಯರ್ಥಿ

ಕೊಳ್ಳೇಗಾಲ, ಏ.17– ಕೊಳ್ಳೇಗಾಲ ಮೀಸಲು ವಿಧಾನಸಭಾ ಕ್ಷೇತ್ರದಿಂದ ಆಯ್ಕೆ ಬಯಸಿ ಕಾಂಗ್ರೆಸ್, ಜೆಡಿಎಸ್ ಸೇರಿದಂತೆ ವಿವಿಧ ಪಕ್ಷಗಳಿಂದ 7 ಮಂದಿ ಅಭ್ಯರ್ಥಿಗಳು ಸೋಮವಾರ ತಮ್ಮ ಬೆಂಬಲಿಗರೊಡಗೂಡಿ ನಾಮಪತ್ರ ಸಲ್ಲಿಸಿದ್ದಾರೆ.

ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಎ.ಆರ್. ಕೃಷ್ಣಮೂರ್ತಿ ಉಪವಿಭಾಗಾಧಿಕಾರಿ ಗೀತಾ ಹುಡೇದ್ ಅವರಿಗೆ ನಾಮಪತ್ರ ಸಲ್ಲಿಸಿದರು. ಈ ವೇಳೆ ಅವರ ಜೊತೆ ಸೂಚಕರಾಗಿದ್ದ ಮಾಜಿ ಶಾಸಕರಾದ ಎಸ್.ಜಯಣ್ಣ, ಜಿ.ಎನ್.ನಂಜುಂಡಸ್ವಾಮಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾಗಿದ್ದ ಬಿ.ತೋಟೇಶ್, ಚಂದ್ರು ಸಾಥ್ ನೀಡಿದರು. ಬಿಜೆಪಿ ಬಂಡಾಯ ಅಭ್ಯರ್ಥಿಯಾಗಿ ಕಿನಕಹಳ್ಳಿ ರಾಚಯ್ಯ ಅವರು ತಮ್ಮ ಬೆಂಬಲಿಗರೊಡಗೂಡಿ ಹಿರಿಯ ಮುಖಂಡ ಪುಟ್ಟಸುಬ್ಬಪ್ಪ, ಪುಟ್ಟಸ್ವಾಮಿ, ಅಭಿ, ಚಿನ್ನಸ್ವಾಮಿ, ಕೆಂಪಣ್ಣ ಅವರ ಜೊತೆ ತೆರಳಿ ತಮ್ಮ ಉಮೇದುವಾರಿಕೆ ಸಲ್ಲಿಸಿದರು.

ಜೆಡಿಎಸ್ ಪಕ್ಷದ ಅಭ್ಯರ್ಥಿಯಾಗಿ ಬಿ. ಪುಟ್ಟಸ್ವಾಮಿ ಅವರು ತಮ್ಮ ಬೆಂಬಲಿಗರೊಡಗೂಡಿ ಉಪವಿಭಾಗಾಧಿಕಾರಿ ಗೀತಾ ಹುಡೇದ್ ಅವರಿಗೆ ತಮ್ಮ ಉಮೇದುವಾರಿಕೆ ಸಲ್ಲಿಕೆ ಮಾಡಿದವರು. ಈವೇಳೆ ಸೂಚಕರಾಗಿ ಆಲಹಳ್ಳಿ ದುಂಡಪ್ಪ ಶಂಕರಪ್ಪ, ಚೈನ್ ರಾಮ್ ಕಾಪ್ರಿ, ರೇಚಂಬಳ್ಳಿ ಕುಮಾರ್ ಸಾಥ್ ನೀಡಿದರು.

ಅಮ್ ಆದ್ಮಿ ಪಕ್ಷದ ಅಭ್ಯರ್ಥಿಯಾಗಿ ಸಿದ್ದಯ್ಯನಪುರ ಗ್ರಾಮದ ಕೆಂಪರಾಜು ನಾಮಪತ್ರ ಸಲ್ಲಿಸಿದರು. ಇವರಿಗೆ ವಕೀಲ ಸಿ.ಬಿ.ಮಹೇಶ್ ಕುಮಾರ್, ನಂದೀಶ್, ಜಿಲ್ಲಾ ಉಪಾಧ್ಯಕ್ಷ ಮಹದೇವಸ್ವಾಮಿ, ಉಮಾಶಂಕರ್, ಲಿಂಗರಾಜು ಸಾಥ್ ನೀಡಿದರು.

ಪಕ್ಷೇತರರ ಅಭ್ಯರ್ಥಿಯಾಗಿ ಕೆ.ರಾಜು ಅವರು ನಾಮಪತ್ರ ಸಲ್ಲಿಸಿದರು. ಸೂಚಕರಾಗಿ ರಘು, ಚರಣ್, ಸೈಫ್ ಉಲ್ಲಾ ಖಾನ್, ತೋಸೀಫ್ ಸಾಥ್ ನೀಡಿದರು.

ಪ್ರಜಾಕೀಯ ಪಕ್ಷದ ಅಭ್ಯರ್ಥಿಯಾಗಿ ವಿ.ವಿನಯ್ ಕುಮಾರ್ ಅವರು ಸೂಚಕದ ನಂಜುಂಡಸ್ವಾಮಿ, ಮಧು, ಮಹೇಶ್, ಮಹೇಂದ್ರ ಅವರ ಜೊತೆ ತೆರಳಿ ತಮ್ಮ ಉಮೇದುವಾರಿಕೆ ಸಲ್ಲಿಸಿದರು.

ಜಿಲ್ಲೆಯ ಅಭಿವೃದ್ಧಿಗೆ ಸೋಮಣ್ಣ ಬೆಂಬಲಿಸಿ: ಅಮ್ಮನಪುರ ಮಲ್ಲೇಶ್



ಚಾಮರಾಜನಗರ, ಏ.17– ಜಿಲ್ಲೆಯ ಅಭಿವೃದ್ಧಿ ದೃಷ್ಟಿಯಿಂದ ಸಚಿವ ಹಾಗೂ ಚಾಮರಾಜನಗರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ ಅವರನ್ನು ಬೆಂಬಲಿಸಬೇಕು ಎಂದು ಬಿಜೆಪಿ ಮುಖಂಡ ಅಮ್ಮನಪುರ ಮಲ್ಲೇಶ್ ಮನವಿ ಮಾಡಿದ್ದಾರೆ.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸೋಮಣ್ಣ ಉತ್ತಮ ಕೆಲಸಗಾರರು. ಗೋವಿಂದರಾಜ ನಗರದಲ್ಲಿ ಒಳ್ಳೆಯ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. ಅವರಿಗೆ ನಾವೆಲ್ಲರೂ ಬೆಂಬಲ ಸೂಚಿಸಿ ಪಕ್ಷದ ಗೆಲುವಿಗೆ ಶ್ರಮಿಸೋಣ ಎಂದರು.

ಸೋಮಣ್ಣ ಹಿರಿಯ ರಾಜಕಾರಣಿ. ಅವರು ಚಾಮರಾಜನಗರ ಹಾಗೂ ವರುಣಾ ಎರಡು ಕ್ಷೇತ್ರದಲ್ಲಿಯೂ ಗೆಲುವು ಸಾಧಿಸಲಿದ್ದಾರೆ ಎಂಬ ವಿಶ್ವಾಸವಿದೆ. ಅಲ್ಲದೇ ಸೋಮಣ್ಣ ಮುಖ್ಯಮಂತ್ರಿ ಅಭ್ಯರ್ಥಿಯೂ ಆಗಿರುವುದರಿಂದ ಮುಂದಿನ ದಿನಗಳಲ್ಲಿ ಅವರಿಗೆ ಅವಕಾಶ ದೊರೆತರೆ ಜಿಲ್ಲೆಯ ಅಭಿವೃದ್ಧಿಗೆ ಸಾಕಷ್ಟು ಅನುಕೂಲವಾಗುತ್ತದೆ. ಹೀಗಾಗಿ ಎಲ್ಲರೂ ಸೋಮಣ್ಣ ಅವರನ್ನು ಬೆಂಬಲಿಸಬೇಕು ಎಂದು ತಿಳಿಸಿದರು.

ಇನ್ನೂ ಟಿಕೆಟ್ ವಿಚಾರವಾಗಿ ಮಾತನಾಡಿದ ಅವರು, ದೆಹಲಿಗೆ ನನ್ನದು(ಅಮ್ಮನಪುರ ಮಲ್ಲೇಶ್), ನಾಗಶ್ರೀ ಪ್ರತಾಪ್, ಎ.ಆರ್. ಬಾಬು ಅವರ ಹೆಸರು ಅಂತಿಮ ಸುತ್ತಿಗೆ ಹೋಗಿತ್ತು. ಯಡಿಯೂರಪ್ಪ ಅವರ ಕಡೆಯಿಂದ ರುದ್ರೇಶ್ ಹಾಗೂ ಕೇಂದ್ರದ ವರಿಷ್ಠರ ಆಯ್ಕೆ ಸಮಿತಿಯಿಂದ ಸೋಮಣ್ಣ ಅವರ ಹೆಸರು ಪ್ರಸ್ತಾಪವಾಗಿತ್ತು. ಅಂತಿಮವಾಗಿ ಸೋಮಣ್ಣ ಅವರಿಗೆ ಟಿಕೆಟ್ ದೊರಕಿದೆ. ಪಕ್ಷದ ತೀರ್ಮಾನಕ್ಕೆ ಎಲ್ಲರೂ ಬದ್ಧರಾಗಬೇಕು ಎಂದರು.

ಪುಟ್ಟರಂಗಶೆಟ್ಟಿ ಸೋಲಿಸಲು ಕೈ ಜೋಡಿಸಿ: ಟಿಕೆಟ್ ದೊರೆಯದಕ್ಕೆ ನಾಗಶ್ರೀ ಪ್ರತಾಪ್ ಬೇಸರಗೊಂಡಿರುವ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಶಾಸಕ ಪುಟ್ಟರಂಗಶೆಟ್ಟಿ ಅವರನ್ನು ಸೋಲಿಸಲು ಎಲ್ಲರೂ ಒಗ್ಗಡಬೇಕು. ಟಿಕೆಟ್ ದೊರೆಯದಕ್ಕೆ ಬೇಸರ ಬಿಟ್ಟು ನಮ್ಮದೊಂದಿಗೆ ಕೈ ಜೋಡಿಸಿ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಗಜೇಂದ್ರ, ಸ್ವಾಮಿ, ಮಂಜು, ಸತೀಶ್, ನಲ್ಲೂರು ಪರಮೇಶ್ ಇದ್ದರು.

ಚಾಮರಾಜನಗರ ವಿಧಾನಸಭೆಗೆ ನಾಮಪತ್ರಗಳ ಮಹಾಪೂರ

ಕಾಂಗ್ರೆಸ್ ಅಭ್ಯರ್ಥಿ ಪುಟ್ಟರಂಗಶೆಟ್ಟಿ, ಬಿಎಸ್‌ಪಿ ಅಭ್ಯರ್ಥಿ ಸೇರಿ 24 ಮಂದಿ ನಾಮಪತ್ರ ಸಲ್ಲಿಕೆ



ಪುಟ್ಟರಂಗಶೆಟ್ಟಿ



ಚಾಮರಾಜನಗರ, ಏ.17– ಚಾಮರಾಜನಗರ ವಿಧಾನಸಭಾ ಕ್ಷೇತ್ರದಿಂದ ಆಯ್ಕೆ ಬಯಸಿ ಕಾಂಗ್ರೆಸ್ ಅಭ್ಯರ್ಥಿ ಶಾಸಕ ಸಿ. ಪುಟ್ಟರಂಗಶೆಟ್ಟಿ, ಬಹುಜನ ಸಮಾಜ ಪಾರ್ಟಿ (ಬಿಎಸ್‌ಪಿ) ಅಭ್ಯರ್ಥಿ ಹ.ರಾ. ಮಹೇಶ್ ಸೇರಿದಂತೆ 24 ಮಂದಿ 32 ನಾಮಪತ್ರ ಸಲ್ಲಿಸಿದರು. ನಗರದ ಜೋಡಿ ರಸ್ತೆಯಲ್ಲಿರುವ ತಾಲೂಕು ಕಚೇರಿಗೆ ತೆರಳಿದ ಅಭ್ಯರ್ಥಿಗಳು ಚುನಾವಣಾಧಿಕಾರಿಗೆ ತಮ್ಮ ಉಮೇದುವಾರಿಕೆ ಸಲ್ಲಿಸಿದರು.

ಕಾಂಗ್ರೆಸ್ ಉಮೇದುವಾರಿಕೆ; ಕ್ಷೇತ್ರದಿಂದ ನಾಲ್ಕನೇ ಬಾರಿಗೆ ಆಯ್ಕೆ ಬಯಸಿರುವ ಶಾಸಕ ಸಿ.ಪುಟ್ಟರಂಗಶೆಟ್ಟಿ ಬೆಳಗ್ಗೆ ಕೊಳದ ಗಣಪತಿ ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸಿದರು. ಬಳಿಕ, ಶ್ರೀಚಾಮರಾಜೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ದೇವರ ದರ್ಶನ ಪಡೆದರು. ತದ ನಂತರ ಸತ್ತಿ ರಸ್ತೆಯಲ್ಲಿರುವ ಕಾಂಗ್ರೆಸ್ ಜಿಲ್ಲಾ ಕಾರ್ಯಾಲಯದಿಂದ ಮೆರವಣಿಗೆ ಹೊರಟು ನಗರದ ಪ್ರಮುಖ ಬೀದಿಗಳಲ್ಲಿ ಸಾಗಿ ಚುನಾವಣಾಧಿಕಾರಿಗೆ ನಾಮಪತ್ರ ಸಲ್ಲಿಸಿದರು. ಈ ವೇಳೆ ನಗರಸಭೆ ಮಾಜಿ ಅಧ್ಯಕ್ಷ ನಂಜುಂಡಸ್ವಾಮಿ, ರಾಜ್ಯ ಕನಿಷ್ಠ ವೇತನಾ ಸಲಹ ಮಂಡಳಿ ಮಾಜಿ ಅಧ್ಯಕ್ಷ ಆರ್.ಉಮೇಶ್, ಚೂಡಾ ಮಾಜಿ ಅಧ್ಯಕ್ಷ ಸೈಯದ್‌ರಫಿ, ಯರಗನಹಳ್ಳಿ ಮುಖಂಡ ಶಂಭಪ್ಪ, ಅವರು ಶಾಸಕರ ಜೊತೆ ಇದ್ದರು.

ತಮ್ಮ ಪಕ್ಷದ ಸಹಸ್ರಾರು ಕಾರ್ಯಕರ್ತರೊಂದಿಗೆ ಶಾಸಕರು ಕಾಲ್ನಡಿಗೆಯಲ್ಲಿ ಕೈ ಮುಗಿಯುತ್ತಾ ತೆರಳಿದ್ದು, ವಿಶೇಷವಾಗಿತ್ತು. ಬ್ಯಾಂಡ್‌ಸೆಟ್ ಶಬ್ಧಕ್ಕೆ ಯುವಕರು ಉರಿಬಿಸಿಲನ್ನು ಲೆಕ್ಕಿಸದೆ ಕುಣಿದು ಕುಪ್ಪಳಿಸಿದರು. ಕಾಂಗ್ರೆಸ್ ಪಕ್ಷದ ಪರ, ಪುಟ್ಟರಂಗಶೆಟ್ಟಿ ಪರ ಘೋಷಣೆ ಕೂಗಿದರು.

ಬಿಎಸ್‌ಪಿ ಅಭ್ಯರ್ಥಿ ನಾಮಪತ್ರ ಬಿಎಸ್‌ಪಿ ಅಭ್ಯರ್ಥಿ ಹ.ರಾ. ಮಹೇಶ್ ಬೆಳಗ್ಗೆ ಸಾರನಾಥ ಬೌದ್ಧ ವಿಹಾರದಲ್ಲಿ ಪ್ರಾರ್ಥನೆ ಸಲ್ಲಿಸಿದರು. ನಂತರ ಅಂಬೇಡ್ಕರ್ ಭವನದ ಮುಂಭಾಗದಿಂದ ಮೆರವಣಿಗೆ ಹೊರಟು ತಹಸಿಲ್ದಾರ್ ಕಚೇರಿಯಲ್ಲಿ ಉಮೇದುವಾರಿಕ್ಕೆ ಸಲ್ಲಿಸಿದರು. ಈ ವೇಳೆ ಬಿಎಸ್‌ಪಿ ಜಿಲ್ಲಾಧ್ಯಕ್ಷ ಎನ್.ನಾಗಯ್ಯ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬ.ಮ. ಕೃಷ್ಣಮೂರ್ತಿ, ಎಸ್‌ಡಿಪಿಐ ಜಿಲ್ಲಾಧ್ಯಕ್ಷ ಅಬ್ರಹಾರ್ ಅಹಮದ್, ಬಿಎಸ್‌ಪಿ ಮುಖಂಡ ಶ್ರೀನಿವಾಸಮೂರ್ತಿ ಹಾಜರಿದ್ದರು.

ಮೆರವಣಿಗೆಯಲ್ಲಿ ಬ್ಯಾಂಡ್‌ಸೆಟ್ ಕಲಾತಂಡದ ಕಲಾವಿದರು ಉರಿಬಿಸಿಲಿನ ನಡುವೆ ತಮ್ಮ ಕಲೆ ಪ್ರದರ್ಶನ ಮಾಡಿದರು. ಯುವಕರು ಕುಣಿದು ಕುಪ್ಪಳಿಸಿದರು. ಬಿಎಸ್‌ಪಿಗೆ ಎಸ್‌ಡಿಪಿಐ ಬೆಂಬಲ ವ್ಯಕ್ತಪಡಿಸಿದ್ದರಿಂದ ಎರಡೂ ಪಕ್ಷಗಳ ಬಾವುಟ ಹಾರಿಡಿದವು.

ಪ್ರಸನ್ನಕುಮಾರ್: ಕರ್ನಾಟಕ ಪ್ರಜಾ ಪಾರ್ಟಿಯ ಅಭ್ಯರ್ಥಿ ವಕೀಲ ಪ್ರಸನ್ನ ಕುಮಾರ್ ತಮ್ಮ ಬೆಂಬಲಿಗರೊಂದಿಗೆ ಕಾಲ್ನಡಿಗೆಯಲ್ಲಿ ತೆರಳಿ ನಾಮಪತ್ರ ಸಲ್ಲಿಸಿದರು. ಯುವಕರು ಮೆರವಣಿಗೆಯಲ್ಲಿ ಸಾಗಿದ್ದು ವಿಶೇಷವಾಗಿತ್ತು.

ಪಿ.ಗುರುಸಿದ್ದಪ್ಪ: ಚಾಮರಾಜನಗರ ವಿಧಾನಸಭಾ ಕ್ಷೇತ್ರದಿಂದ ಭಾರತೀಯ ಬೆಳಕು ಪಾರ್ಟಿಯ ಅಭ್ಯರ್ಥಿಯಾಗಿ ಪಿ.ಗುರುಸಿದ್ದಪ್ಪ ನಾಮಪತ್ರ ಸಲ್ಲಿಸಿದರು.

ನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದಲ್ಲಿ ತಮ್ಮ ಬೆಂಬಲಿರೊಂದಿಗೆ ಪೂಜೆ ಸಲ್ಲಿಸಿದ ಗುರುಸಿದ್ದಪ್ಪ ಮೆರವಣಿಗೆಯಲ್ಲಿ ನಗರದ ತಹಸೀಲ್ದಾರ್ ಕಚೇರಿಗೆ ತೆರಳಿ ಚುನಾವಣಾಧಿಕಾರಿ ಯೋಗಾನಂದ ಅವರಿಗೆ ತಮ್ಮ ಉಮೇದುವಾರಿಕೆ ಸಲ್ಲಿಸಿದರು. ಸೂಚಕರಾಗಿ ಉಮೇಶ್ ಕುಮಾರ್, ಎಸ್.ಪ್ರದೀಪ್, ಮೂರ್ತಿ, ಬಂಗಾರಚಾರಿ ಹಾಜರಿದ್ದರು.

ಬಿಜೆಪಿಯಲ್ಲಿ ಬಗೆಹರಿದ ಅಸಮಾಧಾನ

ಚಾಮರಾಜನಗರ, ಏ.17– ಚಾಮರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಆಕಾಂಕ್ಷಿಗಳಾಗಿದ್ದ ಎಲ್ಲಾ ಸ್ಥಳೀಯರು ಅಭ್ಯರ್ಥಿಯಾಗಿರುವ ಸಚಿವ ವಿ.ಸೋಮಣ್ಣ ಅವರನ್ನು ಬೆಂಬಲಿಸುವ ಮೂಲಕ ಬಿಜೆಪಿಯಲ್ಲಿದ್ದ ಅಸಮಾಧಾನ ಬಗೆಹರಿದಂತಾಗಿದೆ. ಜಿಪಂ ಮಾಜಿ ಅಧ್ಯಕ್ಷರಾದ ಜಿ. ನಾಗಶ್ರೀ ಪ್ರತಾಪ್, ಎಂ. ರಾಮಚಂದ್ರ, ಮಾಜಿ ಶಾಸಕರಾದ ಪ್ರೊ.ಕೆ.ಆರ್.ಮಲ್ಲಿಕಾರ್ಜುನಪ್ಪ, ರೈತ ಮುಖಂಡ ಅಮ್ಮನಪುರ ಮಲ್ಲೇಶ್, ವೈದ್ಯ ಡಾ.ಎ.ಆರ್. ಬಾಬು, ಕಾಡಾ ಅಧ್ಯಕ್ಷರಾದ ಜಿ. ನಿಜಗುಣರಾಜು ಹಾಗೂ ಇತರರು ಟಿಕೆಟ್ ಆಕಾಂಕ್ಷಿಗಳಾಗಿದ್ದರು. ಪಕ್ಷದ ವರಿಷ್ಠರು ವಿ.ಸೋಮಣ್ಣ ಅವರಿಗೆ ಟಿಕೆಟ್ ನೀಡಿದರು. ಹೀಗಾಗಿ ಆಕಾಂಕ್ಷಿಗಳಲ್ಲಿ ನಿರಾಶೆ ಉಂಟಾಗಿತ್ತು.

ನಾಗಶ್ರೀ ಪ್ರತಾಪ್ ಅವರನ್ನು ಹೊರತುಪಡಿಸಿ ಉಳಿದೆಲ್ಲಾ ಆಕಾಂಕ್ಷಿಗಳು ವಿ.ಸೋಮಣ್ಣ ಅವರನ್ನು ಬೆಂಬಲಿಸುವುದಾಗಿ ಘೋಷಣೆ ಮಾಡಿದರು. ಆದರೆ, ನಾಗಶ್ರೀ ಪ್ರತಾಪ್ ಅವರು ಮಾತ್ರ ಟಿಕೆಟ್ ಸಿಗದಿದ್ದಕ್ಕೆ ತೀವ್ರ ಬೇಸರಗೊಂಡಿದ್ದರು. ಈ ವೇಳೆ ಅವರ ಬೆಂಬಲಿಗರು ಹಾಗೂ ಕಾರ್ಯಕರ್ತರ ಸಭೆ ನಡೆಸಿ, ಪಕ್ಷೇತರವಾಗಿ ಸ್ಪರ್ಧೆ ಮಾಡುವಂತೆ ಒತ್ತಡ ಹಾಕಿದ್ದರು.

ಬಳಿಕ, ಸೋಮಣ್ಣ ಅವರು ಸೇರಿದಂತೆ ಅವರ ಪತ್ನಿ ಶೈಲಜಾ ಹಾಗೂ ಪುತ್ರಿ ಅಂಜು ಅವರು ನಾಗಶ್ರೀ ಅವರ ಮನೆಗೆ ತೆರಳಿ ಅವರ ಮನವೊಲಿಸಲು ಯತ್ನಿಸಿ, ಬೆಂಬಲ ನೀಡುವಂತೆ ಕೇಳಿದ್ದರು. ಆದರೂ ಸಹ ಅವರ ಬೇಸರ ಶಮನ ಆಗಿರಲಿಲ್ಲ. ಒಂದೆರಡು ದಿನಗಳಲ್ಲಿ ತಮ್ಮ ನಿರ್ಧಾರ ತಿಳಿಸುವುದಾಗಿ ಹೇಳಿದ್ದರು. ಎಲ್ಲವನ್ನು ಅಳಿದು– ಸುರಿದು, ಲೆಕ್ಕಹಾಕಿ ಸಚಿವರ ಮನವಿಗೆ ಓಗೊಟ್ಟು ಪಕ್ಷದ ವರಿಷ್ಠರ ಸಲಹೆಯಂತೆ, ಹಿತೈಷಿಗಳು ಹಾಗೂ ಬೆಂಬಲಿಗರ ಸಲಹೆಯಂತೆ ನಾಗಶ್ರೀ ಅವರು ಸೋಮಣ್ಣ ಅವರಿಗೆ ಬೆಂಬಲ ನೀಡಿದ್ದಾರೆ. ಈ ಮೂಲಕ ಬಿಜೆಪಿಯಲ್ಲಿ ಇದ್ದ ಅಸಮಾಧಾನ ಬಗೆಹರಿದಂತಾಗಿದೆ.

ಗುಂಡ್ಲುಪೇಟೆಯಲ್ಲಿ ನಿರಂಜನಕುಮಾರ್ ನಾಮಪತ್ರ ಸಲ್ಲಿಕೆ



ಗುಂಡ್ಲುಪೇಟೆಏ.17– ಸಹಸ್ರಾರು ಸಂಖ್ಯೆಯ ಅಭಿಮಾನಿಗಳು ಮತ್ತು ಕಾರ್ಯಕರ್ತರ ಜಯಘೋಷದೊಂದಿಗೆ ಬಿಜೆಪಿ ಅಭ್ಯರ್ಥಿ ಸಿ.ಎಸ್.ನಿರಂಜನಕುಮಾರ್ ತಮ್ಮ ಉಮೇದುವಾರಿಕೆಯನ್ನು ಸಲ್ಲಿಸಿದರು.

ಪಟ್ಟಣದ ಹಾಗೂ ಗ್ರಾಮಾಂತರ ಪ್ರದೇಶಗಳಿಂದ ಪ್ರವಾಹದೋಪಾದಿಯಲ್ಲಿ ಹರಿದು ಬಂದ ಸಹಸ್ರಾರು ಕಾರ್ಯಕರ್ತರಿಂದ ಪಟ್ಟಣದ ರಸ್ತೆಗಳು ಕಿಕ್ಕಿರಿದು ಎಲ್ಲೆಲ್ಲಿ ನೋಡಿದರೂ ಕೇಸರಿಮಯವಾಗಿ ಕಾಣುತ್ತಿತ್ತು.

ಸೋಮವಾರ ಬೆಳಗ್ಗೆ ಪತ್ನಿ ಸವಿತಾ, ಮಗ ಭುವನ್ ಜತೆಗೂಡಿ ತಾಲೂಕಿನ ಸ್ಕಂದಗಿರಿ ಬೆಟ್ಟಕ್ಕೆ ಭೇಟಿ ನೀಡಿ ಪಾರ್ವತಾಂಭೆ ಸೋಮೇಶ್ವರಸ್ವಾಮಿ, ಹಿಮವದ್ ಗೋಪಾಲಸ್ವಾಮಿ ಬೆಟ್ಟ, ಪಟ್ಟಣದ ಶಕ್ತಿಶಾಲಿ ಆಂಜನೇಯ ಮತ್ತು ಶ್ರೀ ವಿಜಯನಾರಾಯಣ ಸ್ವಾಮಿ ದೇವಾಲಯಗಳಲ್ಲಿ ಪೂಜೆ ಸಲ್ಲಿಸಿದರು.

ನಾಮಪತ್ರ ಸಲ್ಲಿಕೆಗೆ ಪಟ್ಟಣ ಹಾಗೂ ತಾಲೂಕಿನ ನಾನಾ ಗ್ರಾಮಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ್ದ ಕಾರ್ಯಕರ್ತರ ಜೈಕಾರದ ನಡುವೆ ಡಿ.ದೇವರಾಜ ಅರಸು ಕ್ರೀಡಾಂಗಣದಿಂದ ಮೆರವಣಿಗೆ ತೆರಳಿದರು. ಈ ವೇಳೆ ರಸ್ತೆಗಿಳಿದ ಭಾರೀ ಜನಸ್ತೋಮದಿಂದ ರಾಷ್ಟ್ರೀಯ ಹೆದ್ದಾರಿ ಕೆಲಕಾಲ ಬಂದ್ ಆಗಿತ್ತು. ತೆರೆದ ವಾಹನದ ಮೇಲೆ ವಿಧಾನಪರಿಷತ್ ಸದಸ್ಯೆ ತೇಜಸ್ವಿನಿ ರಮೇಶ್, ಬಿಜೆಪಿ ಮಂಡಲಾಧ್ಯಕ್ಷ ದೊಡ್ಡಹುಂಡಿ ಜಗದೀಶ್, ಪುರಸಭೆ ಅಧ್ಯಕ್ಷ ಪಿ.ಗಿರೀಶ್ ಜೊತೆ ತಾಲೂಕು ಕಚೇರಿಗೆ ಆಗಮಿಸಿದರು.

ನಂತರಚುನಾವಣಾಧಿಕಾರಿ ಕಚೇರಿಗೆ ತೆರಳಿ ಚುನಾವಣಾಧಿಕಾರಿ ಬಿ.ಮಲ್ಲಿಕಾರ್ಜುನ ಅವರಿಗೆ ತಮ್ಮ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಶ್ರೀಕಂಠಪ್ಪ, ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಎನ್.ಮಲ್ಲೇಶ್, ಎಲ್.ಸುರೇಶ್ ಇದ್ದರು. ನಾಮಪತ್ರ ಸಲ್ಲಿಸಿದ ನಂತರ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ನಿರಂಜನ್, ಕ್ಷೇತ್ರ ಸಾಕಷ್ಟು ಅಭಿವೃದ್ಧಿ ಕಂಡಿದೆ. ಮತ್ತಷ್ಟು ಅಭಿವೃದ್ಧಿಯೊಂದಿಗೆ ಮಾದರಿ ಕ್ಷೇತ್ರವನ್ನಾಗಿಸುವುದು ನನ್ನ ಗುರಿಯಾಗಿದೆ. ಮತ್ತೊಮ್ಮೆ ನನಗೆ ಅವಕಾಶ ನೀಡುವುದರೊಂದಿಗೆ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಬೆನ್ನೆಲುಬಾಗಿ ನಿಲ್ಲಿ ಎಂದು ಮತದಾರರಲ್ಲಿ ಮನವಿ ಮಾಡಿದರು.

ಮಂಡ್ಯದಲ್ಲೂ ಹೆಚ್.ಡಿ.ಕುಮಾರಸ್ವಾಮಿ ಸ್ಪರ್ಧೆ?

ಪ್ರತಿಷ್ಠಿತ ಹೋಟೆಲ್‌ನಲ್ಲಿ 3 ವಾರಕ್ಕೆ ಕೊಠಡಿ, ಮೀಟಿಂಗ್ ಹಾಲ್ ಬುಕ್, ಮಂಡ್ಯ ಬ್ಯಾಂಕ್‌ನಲ್ಲಿ ಹೆಚ್‌ಡಿಕೆ ಹೆಸರಲ್ಲಿ ಅಕೌಂಟ್ ಓಪನ್

ಮಂಡ್ಯ, ಏ. 17– ಮಂಡ್ಯ ವಿಧಾನಸಭಾ ಕ್ಷೇತ್ರದಿಂದ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಸ್ಪರ್ಧಿಸಲಿದ್ದಾರೆ ಎಂದು ವಿಶ್ವಾಸನೀಯ ಮೂಲಗಳು ತಿಳಿಸಿವೆ. ಈ ಹಿಂದೆ ಚನ್ನಪಟ್ಟಣ ಜೊತೆಗೆ ರಾಮನಗರದಲ್ಲಿ ಸ್ಪರ್ಧಿಸಿದ್ದ ಕುಮಾರಸ್ವಾಮಿ, ಈ ಬಾರಿ ಚನ್ನಪಟ್ಟಣ ಜೊತೆಗೆ ಮಂಡ್ಯದಲ್ಲೂ ಕಣಕ್ಕಿಳಿಯುವ ಮೂಲಕ ಎರಡು ಕ್ಷೇತ್ರಗಳಲ್ಲಿ ಸ್ಪರ್ಧೆ ಮಾಡಲಿದ್ದಾರೆ.

ಇದಕ್ಕೆ ಪೂರಕ ಎಂಬಂತೆ ಕಳೆದ ನಾಲ್ಕೈದು ದಿನಗಳಿಂದ ಸುದ್ದಿಗೋಷ್ಠಿ ನಡೆಸಿದ ಜೆಡಿಎಸ್ ಮುಖಂಡರು ಕುಮಾರಸ್ವಾಮಿ ಮಂಡ್ಯದಲ್ಲಿ ಸ್ಪರ್ಧಿಸಬೇಕೆಂದು ಹೇಳುತ್ತಿದ್ದರು. ಜೊತೆಗೆ ಟಿಕೆಟ್ ವಂಚಿತರಾಗಿದ್ದ ಕೆಲವು ಕಾಂಗ್ರೆಸ್ ಮುಖಂಡರು ಕೂಡ ಕುಮಾರಸ್ವಾಮಿಯವರನ್ನು ಭೇಟಿ ಮಾಡಿ ಬಂದಿದ್ದರು. ಈ ಹಿನ್ನೆಲೆಯಲ್ಲಿ ಮಂಡ್ಯ ಕ್ಷೇತ್ರದಲ್ಲಿ ಸ್ಪರ್ಧಿಸಲು ಕುಮಾರಸ್ವಾಮಿ ಮುಂದಾಗಿದ್ದಾರೆ ಎಂದು ಹೇಳಲಾಗಿದೆ. ಇದಕ್ಕೆ ಪುಷ್ಠಿ ನೀಡುವಂತೆ ಕುಮಾರಸ್ವಾಮಿ ಮಂಡ್ಯಕ್ಕೆ ಬಂದಾಗ ಉಳಿದುಕೊಳ್ಳಲು ಮಂಡ್ಯದ ಪ್ರತಿಷ್ಠಿತ ಹೋಟೆಲ್‌ವೊಂದರಲ್ಲಿ ಜೆಡಿಎಸ್ ಮುಖಂಡರೊಬ್ಬರ ಹೆಸರಿನಲ್ಲಿ ಮೂರು ವಾರಗಳ ಕಾಲಕ್ಕೆ ಕೊಠಡಿ ಮತ್ತು ಮೀಟಿಂಗ್ ಹಾಲ್ ಬುಕ್ ಮಾಡಲಾಗಿದೆ. ಮಂಡ್ಯದ ಬ್ಯಾಂಕ್‌ವೊಂದರಲ್ಲಿ ಕುಮಾರಸ್ವಾಮಿ ಹೆಸರಿನಲ್ಲಿ ಈಗಾಗಲೇ ಖಾತೆ ತೆರೆಯಲಾಗಿದೆ ಎಂದು ಮೂಲಗಳು ತಿಳಿಸಿವೆ.



"ಮಂಡ್ಯ ಕ್ಷೇತ್ರದಲ್ಲಿ ಸ್ಪರ್ಧಿಸಲೇಬೇಕೆಂದು ನನ್ನ ಮೇಲೆ ಒತ್ತಡ ಹೆಚ್ಚಾಗಿದೆ. ಕೆಲವು ಕಾಂಗೆಸ್ ಹಿರಿಯ ಮುಖಂಡರು ಕೂಡ ನನ್ನನ್ನು ಸಂಪರ್ಕಿಸಿ ನೀವು ಮಂಡ್ಯದಲ್ಲಿ ಸ್ಪರ್ಧಿಸಿದರೆ, ಕಳೆದ ಬಾರಿಯಂತೆ ಈ ಬಾರಿಯೂ ಜಿಲ್ಲೆಯ ಏಳು ಕ್ಷೇತ್ರಗಳಲ್ಲೂ ಗೆಲ್ಲಬಹುದು ಎಂದು ಸಲಹೆ ನೀಡಿದ್ದಾರೆ. ನಮ್ಮ ಪಕ್ಷದ ಅಭ್ಯರ್ಥಿಯೂ ಸೇರಿದಂತೆ ಜಿಲ್ಲೆಯ ಮುಖಂಡರು ಮಂಡ್ಯದಲ್ಲಿ ಸ್ಪರ್ಧಿಸುವಂತೆ ಕರೆಯುತ್ತಿದ್ದಾರೆ. ನನಗೆ ಚನ್ನಪಟ್ಟಣದಲ್ಲಿ ಯಾವುದೇ ರೀತಿಯ ಸಮಸ್ಯೆ ಇಲ್ಲ. ನಾನು ಗೆಲ್ಲುವುದು ನಿಶ್ಚಿತ. ಆದರೆ, ರಾಜಕೀಯ ವಿರೋಧಿಗಳು ನನಗೆ ಚೆನ್ನಪಟ್ಟಣದಲ್ಲಿ ಸೋಲಿನ ಆತಂಕವಿದ್ದು, ಮಂಡ್ಯದಲ್ಲೂ ಸ್ಪರ್ಧಿಸುತ್ತೇನೆ ಎಂದು ಅಪಪ್ರಚಾರ ಮಾಡುತ್ತಿದ್ದಾರೆ. ಅದೆಲ್ಲ ಸತ್ಯಕ್ಕೆ ದೂರವಾಗಿದ್ದು, ಸದ್ಯದಲ್ಲೇ ಮಂಡ್ಯದಲ್ಲಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರ ಸಭೆ ನಡೆಸಿ,ಅಲ್ಲಿ ಸ್ಪರ್ಧಿಸುವ ಬಗ್ಗೆ ತೀರ್ಮಾನ ಕೈಗೊಳ್ಳುತ್ತೇನೆ.

–ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಮುಖ್ಯಮಂತ್ರಿ

ಈಗಾಗಲೇ ಮಂಡ್ಯ ಟಿಕೆಟ್ ಘೋಷಣೆಯಾಗಿರುವ ಹಾಲಿ ಶಾಸಕ ಎಂ.ಶ್ರೀನಿವಾಸ್ ಅವರು ಸೋಮವಾರ ಸುದ್ದಿಗೋಷ್ಠಿ ನಡೆಸಿ ಹೆಚ್.ಡಿ. ಕುಮಾರಸ್ವಾಮಿ ಇಲ್ಲಿ ಸ್ಪರ್ಧಿಸಿದರೆ ಮಂಡ್ಯ ಉದ್ಧಾರವಾಗುತ್ತದೆ ಎಂಬ ಭಾವನೆ ತಮ್ಮದಾಗಿದ್ದು, ಅವರು ಸ್ಪರ್ಧಿಸುವುದಾದರೆ ನಾನು ಕ್ಷೇತ್ರ ತ್ಯಾಗ ಮಾಡಲು ಸಿದ್ಧವಿದ್ದೇನೆ ಎಂದು ಹೇಳಿದರಲ್ಲದೆ, ಈಗಾಗಲೇ ಮೂರು ಬಾರಿ ಕುಮಾರಸ್ವಾಮಿಯವರನ್ನು ಭೇಟಿ ಮಾಡಿ ಮಂಡ್ಯ ಕ್ಷೇತ್ರದಲ್ಲಿ ಸ್ಪರ್ಧಿಸುವಂತೆ ಆಹ್ವಾನ ನೀಡಿದ್ದೇವೆ ಎಂದರು.

ತಿ.ನ.ಪುರ ಬಳಿ ಬೋನಿಗೆ ಬಿದ್ದ ಚಿರತೆ ಬನ್ನೇರುಘಟ್ಟಗೆ ಸ್ಥಳಾಂತರ



ಮೈಸೂರು, ಏ.17(ಎಸ್‌ಬಿಡಿ)–ತಿ.ನರಸೀಪುರ ತಾಲೂಕು ರಂಗಸಮುದ್ರ ಗ್ರಾಮದ ಜಮೀನಿನಲ್ಲಿ ಬೋನಿಗೆ ಬಿದ್ದ ಚಿರತೆಯನ್ನು ಬನ್ನೇರುಘಟ್ಟ ಮೃಗಾಲಯಕ್ಕೆ ಸ್ಥಳಾಂತರಿಸಲಾಗಿದೆ. ತಿ.ನರಸೀಪುರ ತಾಲೂಕು, ಕಸಬಾ ಹೋಬಳಿ, ರಂಗಸಮುದ್ರ ಗ್ರಾಮದ ಜಮೀನಿನಲ್ಲಿ ಚಿರತೆ ಕಾಣಿಸಿಕೊಂಡಿರುವ ಬಗ್ಗೆ ಗ್ರಾಮಸ್ಥರು ಅರಣ್ಯ ಇಲಾಖೆ ಅಧಿಕಾರಿಗಳಿಗೆ ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ ವಲಯ ಅರಣ್ಯಾಧಿಕಾರಿ ಹಾಗೂ ಉಪ ವಲಯ ಅರಣ್ಯಾಧಿಕಾರಿ ನೇತೃತ್ವದಲ್ಲಿ ತಿ.ನರಸೀಪುರ ಚಿರತೆ ಕಾರ್ಯಪಡೆ, ಸುತ್ತಮುತ್ತಲಿನ ಗ್ರಾಮದ ಜಮೀನುಗಳಲ್ಲಿ ಕೂಂಬಿಂಗ್ ಕಾರ್ಯಾಚರಣೆ ನಡೆಸಿದ್ದರು. ಈ ವೇಳೆ ಹೆಜ್ಜೆ ಗುರುತನ್ನು ಪರಿಶೀಲಿಸಿ, ಚಿರತೆ ಚಲನವಲನ ಖಚಿತ ಪಡಿಸಿಕೊಂಡು ಏ.12ರಂದು ರಂಗಸಮುದ್ರದ ಗ್ರಾಮದ ನಾಗೇಂದ್ರ ಅವರ ಜಮೀನಿನಲ್ಲಿ ಬೋನ್ ಇಡಲಾಗಿತ್ತು.

ಸೋಮವಾರ ಮುಂಜಾನೆ 3.30ರ ಸಮಯದಲ್ಲಿ(ಜಿಪಿಎಸ್ ರೀಡಿಂಗ್) ಅಂದಾಜು ಮೂರೂವರೆ ವರ್ಷದ ಗಂಡು ಚಿರತೆ ಬೋನಿಗೆ ಬಿದ್ದಿದೆ. ನಂತರ ಮೇಲಧಿಕಾರಿಗಳ ಆದೇಶದ ಮೇರೆಗೆ ಬನ್ನೇರುಘಟ್ಟ ಸರ್ಕಾರಿ ಮೃಗಾಲಯಕ್ಕೆ ಸ್ಥಳಾಂತರಿಸಲಾಗಿದ್ದು, ಅಲ್ಲಿಯೇ ಸಲಹಲಾಗುತ್ತದೆ ಎಂದು ಡಿಸಿಎಫ್ ಬಸವರಾಜು ತಿಳಿಸಿದ್ದಾರೆ.

ಮೇ 10, ಶೇ.40ರ ಕಮಿಷನ್ ದಂಧೆ, ಭ್ರಷ್ಟಾಚಾರವನ್ನು ಓಡಿಸುವ ದಿನ

ಮಡಿಕೇರಿ ಕಾಂಗ್ರೆಸ್ ಸಮಾವೇಶದಲ್ಲಿ ಕೆಪಿಸಿಸಿ ಅಧ್ಯಕ್ಷ ಡಿಕೆಶಿ ವಾಗ್ದಾಳಿ

ಮಡಿಕೇರಿ,ಏ.17–ವಿಧಾನಸಭಾ ಚುನಾವಣೆ ಮೇ 10ರ ಮತದಾನದ ಪವಿತ್ರ ದಿನ. ಶೇ.40ರ ಕಮಿಷನ್ ದಂಧೆ, ಮೇರೆ ಮೀರಿರುವ ಭ್ರಷ್ಟಾಚಾರವನ್ನು ಓಡಿಸುವ ಮಹತ್ವದ ದಿನವಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿದರು.

ನಗರದ ಗಾಂಧಿ ಮೈದಾನದಲ್ಲಿ ಕಾಂಗ್ರೆಸ್ ಪಕ್ಷದಿಂದ ಆಯೋಜಿಸಲಾಗಿದ್ದ ಸಮಾವೇಶದಲ್ಲಿ ಪಾಲ್ಗೊಂಡು ಮಡಿಕೇರಿ ಕ್ಷೇತ್ರದ ಪಕ್ಷದ ಅಭ್ಯರ್ಥಿ ಡಾ. ಮಂಥರ್‌ಗೌಡ ಮತ್ತು ವಿರಾಜಪೇಟೆ ಕ್ಷೇತ್ರದ ಅಭ್ಯರ್ಥಿ ಅಜ್ಜಿಕುಟ್ಟೀರ ಪೊನ್ನಣ್ಣ ಅವರ ಗೆಲುವಿಗಾಗಿ ಮತಯಾಚನೆ ಮಾಡಿ ಅವರು ಮಾತನಾಡಿದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿ ನಿತ್ಯೋಪಯೋಗಿ ವಸ್ತುಗಳ ಬೆಲೆ ಗಗನಕ್ಕೇರುತ್ತಿದ್ದು, ಜನ ಸಾಮಾನ್ಯರು ಆರ್ಥಿಕ ಸಂಕಷ್ಟದಲ್ಲಿ ಸಿಲುಕಿಕೊಂಡಿದ್ದಾರೆ. ರೈತರ ಆದಾಯವನ್ನು ದ್ವಿಗುಣ ಗೊಳಿಸುವುದು ಮತ್ತು ಪ್ರತಿಯೊಬ್ಬರ ಬ್ಯಾಂಕ್ ಖಾತೆಗೆ 15 ಲಕ್ಷ ರೂ. ಕೊಡುವುದಾಗಿ ಡಬಲ್ ಇಂಜಿನ್ ಸರ್ಕಾರ ನೀಡಿದ್ದ ಭರವಸೆಗಳು ಹುಸಿಯಾಗಿದ್ದು, ಮೇ.10 ಇದಕ್ಕೆ ಉತ್ತರ ಕೊಡುವ ದಿನವಾಗಿದೆ ಎಂದು ಮಾರ್ಮಿಕವಾಗಿ ನುಡಿದರಲ್ಲದೇ, ಈ ಅವಕಾಶವನ್ನು ಸಮರ್ಪಕವಾಗಿ ಬಳಸಿಕೊಳ್ಳುವಂತೆ ಕರೆ ನೀಡಿದರು.



150ಕ್ಕೂ ಹೆಚ್ಚು ಸ್ಥಾನ: ರಾಜ್ಯದಲ್ಲಿ ರಾಜಕೀಯ ಬದಲಾವಣೆಯ ಪರ್ವ ಕಾಲ ಆರಂಭವಾಗಿದ್ದು, ಬದಲಾವಣೆಯ ಬಲವಾದ ಗಾಳಿ ಬೀಸಲಾರಂಭಿಸಿದೆ ಎಂದು ಹೇಳಿದ ಡಿ.ಕೆ.ಶಿವಕುಮಾರ್, ಪ್ರಸ್ತುತ ವಿವಿಧ ಪಕ್ಷಗಳ ಪ್ರಮುಖರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗುತ್ತಿದ್ದಾರೆ. ಬಿಜೆಪಿ ಪಕ್ಷವನ್ನು ತೊರೆದು ಕಾಂಗ್ರೆಸ್‌ಗೆ ಸೇರ್ಪಡೆಗೊಂಡ ಜಗದೀಶ್ ಶೆಟ್ಟರ್ ಮತ್ತು ಉಪ ಮುಖ್ಯಮಂತ್ರಿಯಾಗಿದ್ದ ಸವದಿ ಅವರ ಸೇರ್ಪಡೆಯಿಂದ ರಾಜ್ಯದಲ್ಲಿ ಈ ಬಾರಿ ಕಾಂಗ್ರೆಸ್ ಪಕ್ಷ 150ಕ್ಕೂ ಹೆಚ್ಚಿನ ಸ್ಥಾನಗಳನ್ನು ಪಡೆಯುವುದು ನಿಶ್ಚಿತವೆಂದು ದೃಢವಾಗಿ ನುಡಿದರು.

ನಿಮ್ಮ ಮಡಿಲಿಗೆ ಹಾಕಿದ್ದೇವೆ: ಮಡಿಕೇರಿ ಕ್ಷೇತ್ರದ ಸ್ಪರ್ಧೆಗೆ ಕಾಂಗ್ರೆಸ್‌ನಿಂದ ಡಾ. ಮಂಥರ್ ಗೌಡ ಅವರಿಗೆ ಅವಕಾಶ ನೀಡುವ ಮೂಲಕ, ಕ್ಷೇತ್ರದ ಜನತೆಯ ಮಡಿಲಿಗೆ ಅವರನ್ನು ಹಾಕಿದ್ದೇನೆ. ಮಡಿಕೇರಿ ಕ್ಷೇತ್ರದ ಡಾ. ಮಂಥರ್ ಹಾಗೂ ವಿರಾಜಪೇಟೆ ಕ್ಷೇತ್ರದ ಎ.ಎಸ್. ಪೊನ್ನಣ್ಣ ಅವರ ಗೆಲುವಿಗೆ ಪಕ್ಷದ ಎಲ್ಲಾ ಪ್ರಮುಖರು, ಕಾರ್ಯಕರ್ತರು ಕಟಿಬದ್ಧರಾಗಿದ್ದು, ಕೊಡಗಿನಲ್ಲು ಬದಲಾವಣೆಯ ಗಾಳಿ ಬೀಸುತ್ತಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಬಿಜೆಪಿಗೆ ಬುನಾದಿ ಹಾಕಿದ್ದ ಎ.ಕೆ.ಸುಬ್ಬಯ್ಯ ಅವರು ಆ ನಂತರ ಕಾಂಗ್ರೆಸ್ ಪಕ್ಷದಲ್ಲಿ ಗುರುತಿಸಿಕೊಂಡವರು. ಇವರ ಸುಪುತ್ರ ಎ.ಎಸ್. ಪೊನ್ನಣ್ಣ. ಕೊಡಗಿನವರೇ ಆಗಿರುವ ಡಾ.ಮಂಥರ್‌ಗೌಡ ಯುವಶಕ್ತಿ ಯಾಗಿದ್ದಾರೆ. ಇಬ್ಬರೂ ಪ್ರಜ್ಞಾವಂತ, ಬುದ್ಧಿವಂತ, ಕ್ರಿಯಾಶೀಲ ಅಭ್ಯರ್ಥಿಗಳನ್ನು ಕೊಡಗಿಗೆ ನೀಡಿದ್ದೇವೆ. ಇವರಿಗೆ ಎಲ್ಲಾ ಕಾರ್ಯಕರ್ತರೂ ಬೆಂಬಲ ನೀಡಬೇಕೆಂದು ಮನವಿ ಮಾಡಿದರು.

ಭರವಸೆ ಈಡೇರಿಸಿಯೇ ತೀರುತ್ತೇವೆ: ಪ್ರಜಾಧ್ವನಿ ಯಾತ್ರೆಯ ಮೂಲಕ 200 ಯೂನಿಟ್ ಉಚಿತ ವಿದ್ಯುತ್, ಪ್ರತೀ ತಿಂಗಳು ಮಹಿಳೆಯರಿಗೆ 2 ಸಾವಿರ ರೂ. ನೀಡುವ ಯೋಜನೆಯನ್ನೂ ಕಾಂಗ್ರೆಸ್ ಘೋಷಿಸಿದೆ. ನಾವು ಕೊಟ್ಟ ಗ್ಯಾರಂಟಿಯನ್ನು ಅಧಿಕಾರಕ್ಕೆ ಬಂದ 1 ತಿಂಗಳಲ್ಲಿ ಈಡೇರಿಸದೇ ಇದ್ದಲ್ಲಿ ಮತ್ತೆ ಕಾಂಗ್ರೆಸ್‌ಗೆ ಎಂದಿಗೂ ಮತ ಕೇಳುವುದಿಲ್ಲವೆಂದು ದೃಢವಾಗಿ ನುಡಿದರು.

ಸಮಾವೇಶದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಧರ್ಮಜ ಉತ್ತಪ್ಪ, ರಾಷ್ಟ್ರೀಯ ಯುವ ಕಾಂಗ್ರೆಸ್ ಅಧ್ಯಕ್ಷ ಶ್ರೀನಿವಾಸ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹೆಚ್.ಎಸ್.ಚಂದ್ರಮೌಳಿ, ಮಾಜಿ ಎಂಎಲ್‌ಸಿ ವೀಣಾ ಅಚ್ಚಯ್ಯ, ಮಾಜಿ ಸಚಿವೆ ಸುಮಾ ವಸಂತ್, ಕಾಂಗ್ರೆಸ್ ಮಾಧ್ಯಮ ವಕ್ತಾರ ಟಿ.ಪಿ.ರಮೇಶ್, ಹರಪಳ್ಳಿ ರವೀಂದ್ರ, ಕೆ.ಪಿ. ಚಂದ್ರಕಲಾ, ಮಾಜಿ ಎಂಎಲ್‌ಸಿ ಅರುಣ್ ಮಾಚಯ್ಯ, ಕೆ.ಎಂ.ಲೋಕೇಶ್, ತೆನ್ನಿರ ಮೈನಾ, ಕಾಂಗ್ರೆಸ್‌ನ ನಗರ ಸಭಾ ಸದಸ್ಯ ರಾಜೇಶ್ ಬಿ.ವೈ, ಸುರಯ್ಯಾ ಅಬ್ರಾರ್ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಇಂದಿನಿಂದ ಅಮರನಾಥ ಯಾತ್ರೆ ನೋಂದಣಿ ಆರಂಭ



ಅನಂತನಾಗ್: ಜಮ್ಮು ಮತ್ತು ಕಾಶ್ಮೀರದಲ್ಲಿ 62 ದಿನಗಳ ಕಾಲ ನಡೆಯುವ ಶ್ರೀ ಅಮರನಾಥ ಯಾತ್ರೆಯ ನೋಂದಣಿ ಸೋಮವಾರದಿಂದ ಆರಂಭವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಯಾತ್ರೆಯು ಜುಲೈ 1ರಂದು ಪ್ರಾರಂಭವಾಗುತ್ತದೆ ಮತ್ತು ಆಗಸ್ಟ್ 31ರಂದು ಮುಕ್ತಾಯಗೊಳ್ಳಲಿದೆ ಎಂದು ಕೇಂದ್ರಾಡಳಿತ ಪ್ರದೇಶದ ಸರ್ಕಾರ ತಿಳಿಸಿದೆ. ಅನಂತನಾಗ್ ಜಿಲ್ಲೆಯ ಪಹಲ್ಗಾಮ್ ಟ್ರ್ಯಾಕ್ ಮತ್ತು ಗಂಡರ್ಬಾಲ್ ಜಿಲ್ಲೆಯ ಬಲ್ತಾಲ್ ಎರಡಕ್ಕೂ ನೋಂದಣಿ ಪ್ರಾರಂಭವಾಗಿದೆ. ಪಂಜಾಬ್ ನ್ಯಾಷನಲ್ ಬ್ಯಾಂಕ್‌ನ 316 ಶಾಖೆಗಳು, ಜೆ–ಕೆಯ 90 ಶಾಖೆಗಳು, ಯೆಸ್ ಬ್ಯಾಂಕ್‌ನ 37 ಶಾಖೆಗಳು ಮತ್ತು ಎಸ್‌ಬಿಐ ಬ್ಯಾಂಕ್‌ನ 99 ಶಾಖೆಗಳು ಸೇರಿದಂತೆ ದೇಶಾದ್ಯಂತ 542 ಬ್ಯಾಂಕ್ ಶಾಖೆಗಳಲ್ಲಿ ಆಫ್‌ಲೈನ್ ನೋಂದಣಿ ಮಾಡಬಹುದಾಗಿದೆ. ನೋಂದಣಿಯಲ್ಲಿ ಹೊಸ ವೈಶಿಷ್ಟ್ಯವೆಂದರೆ ಆಧಾರ್ ಆಧಾರಿತ ನೋಂದಣಿ ಇದರಲ್ಲಿ ಯಾತ್ರಿಕರ ಹೆಬ್ಬೆರಳು ಸ್ಕ್ಯಾನ್ ಅನ್ನು ನೋಂದಣಿಗಾಗಿ ತೆಗೆದುಕೊಳ್ಳಲಾಗುತ್ತದೆ.



ಮೈಸೂರು ತಾಲೂಕು, ಹುಯಿಲಾಳು ಗ್ರಾಮದ ಶ್ರೀ ಮನೆ ಮಂಚಮ್ಮ ದೇವಸ್ಥಾನ ಸೇವಾ ಟ್ರಸ್ಟ್ ವತಿಯಿಂದ ಡಾ.ಬಿ.ಆರ್.ಅಂಬೇಡ್ಕರ್ ಅವರ 132ನೇ ವರ್ಷದ ಜನ್ಮ ದಿನಾಚರಣೆ ಹಿನ್ನೆಲೆಯಲ್ಲಿ ಮೈಸೂರು ನಗರದ ಪುರಭವನದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು. ಈ ವೇಳೆ ಟ್ರಸ್ಟ್ ಅಧ್ಯಕ್ಷ ಹುಯಿಲಾಳು ರಾಮಸ್ವಾಮಿ, ಬಂಡಿಪಾಳ್ಯ ವಿಜಯಕುಮಾರ್, ಸವಿತ ಸಮಾಜದ ನಗರಾಧ್ಯಕ್ಷ ಹರೀಶ್ ರೆಡ್ಡಿ, ಹೆಬ್ಬಾಳು ವಿಜಿ, ಶಿವರಾಜು ಹುಯಿಲಾಳು, ಮಂಜುನಾಥ ಪ್ರಸಾದ್, ಜಟ್ಟಿಹುಂಡಿ ಸುನೀಲ್ ಇದ್ದರು.

ವಿದ್ಯುನ್ಮಾನ ಮಾಧ್ಯಮಗಳಲ್ಲಿ ಜಾಹೀರಾತು ಪ್ರಕಟಿಸಲು ಅನುಮತಿ ಕಡ್ಡಾಯ: ಡಿಸಿ


ಮೈಸೂರು, ಏ.17– ವಿಧಾನಸಭಾ ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಎಲೆಕ್ಟ್ರಾನಿಕ್ ಮೀಡಿಯಾ ಮತ್ತು ಸೋಶಿಯಲ್ ಮೀಡಿಯಾಗಳಲ್ಲಿ ಜಾಹೀರಾತು ನೀಡಲು ಅಭ್ಯರ್ಥಿಗಳು ಪ್ರಿ–ಸರ್ಟಿಫಿಕೇಷನ್ ಪಡೆದಿರಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ತಿಳಿಸಿದರು.



ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಮಾಧ್ಯಮ ಪ್ರಮಾಣೀಕರಣ ಮತ್ತು ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪತ್ರಿಕಾ ಮಾಧ್ಯಮದಲ್ಲಿ ಜಾಹೀರಾತು ಪ್ರಕಟಿಸಲು ಚುನಾವಣೆ ಹಾಗೂ ಚುನಾವಣೆ ಮುನ್ನಾದಿನ ಅನುಮತಿ ಕಡ್ಡಾಯ. ಒಂದು ವೇಳೆ ಆ ಪತ್ರಿಕೆ ಆನ್‌ಲೈನ್ ಎಡಿಷನ್ ಇದ್ದಲ್ಲಿ ಸಮಿತಿ ಅನುಮತಿ ಕಡ್ಡಾಯವಾಗಿರುತ್ತದೆ ಎಂದರು.

ಯಾವುದೇ ಮಾಧ್ಯಮಗಳಲ್ಲಿ ಯಾವುದೇ ರೀತಿಯ ಪಾವತಿ(ಪೇಯ್ಡ್ ನ್ಯೂಸ್) ಸುದ್ದಿಗಳನ್ನು ನೀಡುವಂತಿಲ್ಲ ಹಾಗೂ ಪ್ರಕಟಿಸುವಂತಿಲ್ಲ, ಈ ರೀತಿಯ ಸುದ್ದಿಗಳನ್ನು ನೀಡಿದ್ದು ಕಂಡುಬಂದಲ್ಲಿ ಸಂಬಂಧಿಸಿದವರಿಗೆ ನೋಟಿಸ್ ನೀಡಿ ಕ್ರಮ ಜರುಗಿಸಲಾಗುವುದು. ಅಭ್ಯರ್ಥಿಗಳ ಅನುಮತಿಯಿಲ್ಲದೆ ಬೇರೆ ಯಾರಾದರು ಜಾಹೀರಾತು ನೀಡಿದರೆ ಅಂತಹವರ ವಿರುದ್ಧ ಐಪಿಸಿ ಸೆಕ್ಷನ್ 171 ಪ್ರಜಾ ಪ್ರತಿನಿಧಿ ಕಾಯ್ದೆ ಪ್ರಕಾರ ಕಾನೂನು ಕ್ರಮ ಕೈಗೊಳ್ಳಲಾಗುವುದು. ಅಭ್ಯರ್ಥಿಯ ಪರವಾಗಿ ಅವರ ಒಪ್ಪಿಗೆ ಮೇಲೆ ಮಾಡಲಾಗುವ ಪ್ರಚಾರದ ವೆಚ್ಚವನ್ನು ಸದರಿ ಅಭ್ಯರ್ಥಿ ಚುನಾವಣಾ ವೆಚ್ಚಕ್ಕೆ ಪರಿಗಣಿಸಲಾಗುವುದು ಎಂದರು.

ನಿಧನ



ಪಿ.ಪಾಪನಾಯಕ

ಮೈಸೂರು, ಏ.17– ಮೈಸೂರು ಕುವೆಂಪು ನಗರದ ನಿವಾಸಿ, ಸರಸ್ವತಿಪುರಂ ಪತ್ರಿಕಾ ವಿತರಕ ಪಿ.ಪಾಪನಾಯಕ(46) ಸೋಮವಾರ ನಿಧನರಾದರು. ಮೃತರು ತಾಯಿ, ಸಹೋದರರು, ಪತ್ನಿ, ಪುತ್ರಿ, ಪುತ್ರ ಹಾಗೂ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಕೆ.ಜಿ.ಕೊಪ್ಪಲು ರುದ್ರಭೂಮಿಯಲ್ಲಿ ಮಧ್ಯಾಹ್ನ 3 ಗಂಟೆಗೆ ನೆರವೇರಿತು ಎಂದು ಕುಟುಂಬ ಮೂಲಗಳು ತಿಳಿಸಿದೆ. ಪಿ.ಪಾಪನಾಯಕ ಅವರ ನಿಧನಕ್ಕೆ ಮೈಸೂರು ನಗರ ಪತ್ರಿಕಾ ವಿತರಕರ ಸಂಘ ಶಾಂತಿ ಕೋರಿದೆ.

ರಾಜ್ಯ ತೋಟಗಾರಿಕಾ ಇಲಾಖೆಗೆ ರಾಷ್ಟ್ರೀಯ ಪ್ರಶಸ್ತಿ






ಪ್ರಶಸ್ತಿ ಫಲಕ ಹಾಗೂ ತೋಟಗಾರಿಕೆ ಇಲಾಖೆ ಆಯುಕ್ತ ಬಿ.ಶರತ್

ಮೈಸೂರು,ಏ.17–ರಾಜ್ಯ ತೋಟಗಾರಿಕಾ ಇಲಾಖೆ, ರಾಷ್ಟ್ರೀಯ ಪ್ರಶಸ್ತಿಗೆ ಭಾಜನವಾಗಿದೆ. ಪ್ರಧಾನ ಮಂತ್ರಿ ಫಸಲ್ ಭೀಮ ಯೋಜನೆ(PMFBY)ಯನ್ನು ಅತ್ಯುತ್ತಮವಾಗಿ ಜಾರಿಗೊಳಿಸಿರುವ ಹಿನ್ನೆಲೆಯಲ್ಲಿ ಈ ಪ್ರತಿಷ್ಠಿತ ಪ್ರಶಸ್ತಿ ಲಭಿಸಿದೆ. ಹಿರಿಯ ಐಎಎಸ್ ಅಧಿಕಾರಿ, ತೋಟಗಾರಿಕೆ ಇಲಾಖೆ ಆಯುಕ್ತ ಬಿ.ಶರತ್ ನೇತೃತ್ವದಲ್ಲಿ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ, ರೈತರಿಗೆ ಕೇಂದ್ರ ಸರ್ಕಾರದ ಬೆಳೆ ವಿಮೆ ಯೋಜನೆಯನ್ನು ಸಮರ್ಪಕವಾಗಿ ತಲುಪಿಸುವಲ್ಲಿ ಯಶಸ್ವಿಯಾಗಿದ್ದಾರೆ. ಈ ಕಾರ್ಯವನ್ನು ಗುರುತಿಸಿ, ಕೇಂದ್ರ ಸರ್ಕಾರ ಕರ್ನಾಟಕ ತೋಟಗಾರಿಕೆ ಇಲಾಖೆಗೆ ಪ್ರಶಸ್ತಿ ನೀಡಿ, ಪ್ರಶಂಸಿಸಿದೆ. ನಮ್ಮ ಇಲಾಖೆ ಮತ್ತು ರಾಜ್ಯಕ್ಕೆ ಇದು ಹೆಮ್ಮೆಯ ಕ್ಷಣ. ಪಿಎಂಎಫ್‌ಬಿವೈ ಅನುಷ್ಠಾನದಲ್ಲಿ ನಾವು ದೇಶದಲ್ಲೇ ಅಗ್ರ ಶ್ರೇಯಾಂಕ ಪಡೆದಿದ್ದು, ಇದಕ್ಕೆ ಕಾರಣರಾದ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗೆ ತೋಟಗಾರಿಕೆ ಇಲಾಖೆ ಆಯುಕ್ತ ಬಿ.ಶರತ್ ಅಭಿನಂದನೆ ತಿಳಿಸಿದ್ದಾರೆ.

ಕಾಂಗ್ರೆಸ್‌ಗೆ ನೇಮಕ



ಮೈಸೂರು,ಏ.17–ಮೈಸೂರು ನಗರ ಜಿಲ್ಲಾ ಕಾಂಗ್ರೆಸ್ ಸಮಿತಿ, ಪರಿಶಿಷ್ಟ ಜಾತಿ ವಿಭಾಗದ ಪ್ರಧಾನ ಕಾರ್ಯದರ್ಶಿಯನ್ನಾಗಿ ಗಿರಿಯಾ ಬೋವಿ ಪಾಳ್ಯದ ಕೆ.ಚಂದ್ರ ಅವರನ್ನು ನೇಮಕ ಮಾಡಲಾಗಿದೆ.

ಕಾರ್ಗಿಲ್ ಯುದ್ಧದಲ್ಲಿ ಸ್ಫೋಟಗೊಳ್ಳದ ಬಾಂಬ್ 24 ವರ್ಷದ ಬಳಿಕ ಬ್ಲಾಸ್ಟ್, ಬಾಲಕ ಸಾವು

ಶ್ರೀನಗರ: 1999ರ ಕಾರ್ಗಿಲ್ ಯುದ್ಧದ ಸಂದರ್ಭದಲ್ಲಿ ಸ್ಫೋಟಗೊಂಡಿರದ ಬಾಂಬ್ ಒಂದು ಇತ್ತೀಚೆಗೆ ಸ್ಫೋಟಗೊಂಡ ಪರಿಣಾಮ ಓರ್ವ ಬಾಲಕ ಸಾವನ್ನಪ್ಪಿದ್ದು, ಇಬ್ಬರು ಗಾಯಗೊಂಡ ಘಟನೆ ಲಡಾಖ್‌ನ ಕುರ್ಬಥಾಂಗ್‌ನ ಫುಟ್‌ಬಾಲ್ ಮೈದಾನ ಒಂದರಲ್ಲಿ ನಡೆದಿದೆ. ಪಾಶ್ಕುಮ್‌ನ ಖಾರ್ಜಾಂಗ್‌ನ ನಿವಾಸಿಗಳಾದ ಅಲಿ ನಕಿ, ಮುಂತಜೀರ್ ಮೆಹದಿ ಮತ್ತು ಬಾಕಿರ್ ಎಂಬ ಮೂರು ಬಾಲಕರು ಫುಟ್ಬಾಲ್ ಮೈದಾನಕ್ಕೆ ಹೋಗುತ್ತಿದ್ದರು. ಆ ವೇಳೆ ಓರ್ವ ಬಾಲಕ ಬಾಂಬ್ ಮೇಲೆ ಎಡವಿ ಬಿದ್ದಿದ್ದಾನೆ. ಪರಿಣಾಮ ಬಾಂಬ್ ಸ್ಫೋಟಗೊಂಡು ಬಾಕಿರ್ ಮೃತಪಟ್ಟಿದ್ದಾನೆ. ಇನ್ನುಳಿದ ಇಬ್ಬರು ಬಾಲಕರಿಗೆ ಗಂಭೀರ ಗಾಯ ಗಳಾಗಿದ್ದು ಅವರನ್ನು ತಕ್ಷಣ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪಾಶ್ಕುಮ್‌ನ ಕೌನ್ಸಿಲರ್ ಕಚೋ ಮೊಹಮ್ಮದ್ ಫಿರೋಜ್ ಹೇಳಿದ್ದಾರೆ.

ಇಂದು ವಿಶ್ವ ಪರಂಪರೆ ದಿನಾಚರಣೆ

ಮೈಸೂರು,ಏ.17–2023–24ನೇ ಸಾಲಿನ ವಿಶ್ವ ಪರಂಪರೆ ದಿನಾಚರಣೆ ಅಂಗವಾಗಿ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ವತಿಯಿಂದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಮುಕ್ತ ಗಂಗೋತ್ರಿಯ, ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗದ ಸಭಾಂಗಣದಲ್ಲಿ ಏ.18ರ ಬೆಳಗ್ಗೆ 10.30 ಗಂಟೆಗೆ ಮೈಸೂರಿನ ಅಂಚೆ ತರಬೇತಿ ಸಂಸ್ಥೆಯ ವಿದ್ಯಾರ್ಥಿಗಳಿಗೆ ವಿಚಾರ ಸಂಕಿರಣ ಕಾರ್ಯಕ್ರಮ, ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪುರಾತತ್ವ ಸಂಗ್ರಹಾಲಯ–ಪರಂಪರೆ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಉಮೇಶ್ ಪಾಲ್ ಹತ್ಯೆಯಲ್ಲಿ ಉಳಿದಿರುವ ಏಕೈಕ ಆರೋಪಿ ಗುಡ್ಡು ಮುಸ್ಲಿಂ ಕರ್ನಾಟಕದಲ್ಲಿ ಪತ್ತೆ

ಬೆಂಗಳೂರು: ಉಮೇಶ್ ಪಾಲ್ ಹತ್ಯೆ ಪ್ರಕರಣದಲ್ಲಿ ಬದುಕುಳಿದಿರುವ ಏಕೈಕ ದಾಳಿಕೋರ ಗುಡ್ಡು ಮುಸ್ಲಿಂ. ಉಮೇಶ್ ಪಾಲ್ ಹತ್ಯೆ ವೇಳೆ ಗುಡ್ಡು ಮುಸ್ಲಿಂ ಕಚ್ಚಾ ಬಾಂಬ್‌ಗಳನ್ನು ಎಸೆದಿದ್ದು ನಂತರ ಏಳು ಜನರ ತಂಡ ಗುಂಡಿಕ್ಕಿ ಹತ್ಯೆ ಮಾಡಿತ್ತು.

ಉಮೇಶ್ ಪಾಲ್ ಮತ್ತು ಪೊಲೀಸ್ ಅಂಗರಕ್ಷಕರ ಮೇಲೆ ಗುಡ್ಡು ಮುಸ್ಲಿಂ ಕಚ್ಚಾ ಬಾಂಬ್‌ಗಳನ್ನು ಎಸೆದಿರುವುದು ಸಿಸಿಟಿವಿ ದೃಶ್ಯಾವಳಿಗಳಲ್ಲಿ ಸೆರೆಯಾಗಿತ್ತು. ನಂತರ ತಲೆ ಮರೆಸಿಕೊಂಡಿದ್ದ ಗುಡ್ಡು ಮುಸ್ಲಿಂ ಇದೀಗ ಕರ್ನಾಟಕದಲ್ಲಿ ಓಡಾಡುತ್ತಿರುವುದನ್ನು ಸಿಸಿಟಿವಿ ದೃಶ್ಯಾವಳಿಯಿಂಗಳಿಂದ ಪತ್ತೆ ಹಚ್ಚಲಾಗಿದೆ. ಆತನ ಬಂಧನಕ್ಕಾಗಿ ಉತ್ತರ ಪ್ರದೇಶ ಪೊಲೀಸರು ಕರ್ನಾಟಕ ಪೊಲೀಸರ ನೆರವು ಕೋರಿದ್ದಾರೆ. ಉಮೇಶ್ ಪಾಲ್ ಮತ್ತು ಇಬ್ಬರು ಪೊಲೀಸರನ್ನು ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿರುವ ಅವರ ನಿವಾಸದ ಹೊರಗೆ ಗುಂಡಿಕ್ಕಿ ಕೊಂದ ನಂತರ 2 ತಿಂಗಳೊಳಗೆ ಮಾಫಿಯಾ ಡಾನ್, ರಾಜಕಾರಣಿ ಅತೀಕ್ ಅಹ್ಮದ್‌ಗೆ ಸಂಬಂಧಿಸಿದ ಆರು ಜನರನ್ನು ಹತ್ಯೆ ಮಾಡಲಾಗಿದೆ. 6 ಮಂದಿಯ ಪಟ್ಟಿಯಲ್ಲಿ ಅತೀಕ್, ಅವರ ಪುತ್ರ ಅಸಾದ್, ಸಹಚರರಾದ ಅರ್ಬಾಜ್, ವಿಜಯ್ ಚೌಧರಿ ಅಲಿಯಾಸ್ ಉಸ್ಮಾನ್ ಮತ್ತು ಗುಲಾಮ್ ಹಸನ್ ಸೇರಿದ್ದಾರೆ.

CVIGIL ಆಪ್‌ನಲ್ಲಿ 3 ಸಾವಿರಕ್ಕೂ ಅಧಿಕ ದೂರು, 161 ಕೋಟಿ ರೂ ನಗದು ವಶ

ಬೆಂಗಳೂರು: ಕರ್ನಾಟಕ ವಿಧಾನಸಭೆ ಚುನಾವಣೆಗೆ ದಿನಗಣನೆ ಆರಂಭವಾಗಿರುವಂತೆಯೇ ಮತದಾರರ ಸೆಳೆಯಲು ರಾಜಕೀಯ ನಾಯಕರು ಹರಸಾಹಸ ಪಡುತ್ತಿದ್ದು, ಇದರ ನಡುವೆಯೇ ಚುನಾವಣಾ ಆಯೋಗದ ಸಿವಿಜಿಲ್ ಆಪ್‌ನಲ್ಲಿ ಸುಮಾರು 3 ಸಾವಿರಕ್ಕೂ ಅಧಿಕ ಚುನಾವಣಾ ಅಕ್ರಮದ ದೂರುಗಳು ಬಂದಿವೆ.



ಭಾರತದ ಚುನಾವಣಾ ಆಯೋಗ ಸಿವಿಜಿಲ್ (cVIGIL) ಆಪ್‌ವೊಂದನ್ನು ಪರಿಚಯಿಸಿದ್ದು, ಇದರ ಮೂಲಕ ಸಾರ್ವಜನಿಕರು ಆಯೋಗಕ್ಕೆ ದೂರು ನೀಡಬಹುದಾಗಿದೆ. ಹೀಗೆ ಆಪ್ ಮೂಲಕ ಇಲ್ಲಿಯವರೆಗೆ 3,147 ದೂರು ದಾಖಲಾಗಿದ್ದು, ಅದರಲ್ಲಿ 2,643 ದೂರುಗಳು ಸತ್ಯವಾಗಿವೆ ಎಂದು ಚುನಾವಣಾ ಆಯೋಗ ಹೇಳಿದೆ. ಸಿವಿಜಿಲ್ ಮೂಲಕ ಹೆಚ್ಚಿನ ದೂರುಗಳು ಅನುಮತಿಯಿಲ್ಲದೆ ಬ್ಯಾನರ್ ಅಥವಾ ಪೋಸ್ಟರ್ ಗಳನ್ನು ಹಾಕುವ ಬಗ್ಗೆ ಮತ್ತು ಉಡುಗೊರೆ, ಹಣ, ಮದ್ಯ ಮತ್ತು ಆಸ್ತಿ ಹಾನಿ ಕುರಿತಾಗಿವೆ. ಈ ಬಗ್ಗೆ ಫ್ಲೈಯಿಂಗ್ ಸ್ಕ್ವಾಡ್‌ಗಳು ಮತ್ತು ಪೊಲೀಸ್ ಅಧಿಕಾರಿಗಳು ಇಲ್ಲಿವರೆಗೆ 1,334 ಎಫ್‌ಐಆರ್‌ಗಳನ್ನು ದಾಖಲಿಸಿದ್ದಾರೆ ಎಂದು ಚುನಾವಣಾ ಆಯೋಗ ಪ್ರಕಟಣೆಯಲ್ಲಿ ತಿಳಿಸಿದೆ.

ಮಾರ್ಚ್ 29ರಿಂದ ಏಪ್ರಿಲ್ 14ರ ತನಕ ಚುನಾವಣಾ ಅಧಿಕಾರಿಗಳು 161 ಕೋಟಿ ರೂ. ಹಣ, ಉಡುಗೊರೆ, ಮಾದಕ ವಸ್ತುಗಳನ್ನು ಮತ್ತು ಲೋಹಗಳನ್ನು ವಶಪಡಿಸಿಕೊಂಡಿದ್ದಾರೆ. ಇನ್ನು ಆದಾಯ ತೆರಿಗೆ ಇಲಾಖೆ ಬೆಂಗಳೂರಿನ ದಾಸರಹಳ್ಳಿ, ಶಿವಾಜಿನಗರ, ಮಹಾಲಕ್ಷ್ಮಿ ಲೇಔಟ್, ರಾಜಾಜಿನಗರ, ಬಿಟಿಎಂ ಲೇಔಟ್ ಮತ್ತು ಮಲ್ಲೇಶ್ವರಂನಲ್ಲಿ ಚಿನ್ನ, ನಗದು ಸೇರಿದಂತೆ 25.45 ಕೋಟಿ ರೂ. ಅನ್ನು ಜಪ್ತಿ ಮಾಡಿದೆ.

ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ಪತ್ರಿಕಾ ಪ್ರಕಟಣೆಯ ಪ್ರಕಾರ, ಹೆಚ್ಚಿನ ದೂರುಗಳು ಅನು ಮತಿಯಿಲ್ಲದೆ ಬ್ಯಾನರ್ / ಪೋಸ್ಟರ್‌ಗಳನ್ನು ಹಾಕುವ ಬಗ್ಗೆ ಮತ್ತು ಉಳಿದವು ಉಡುಗೊರೆ, ಹಣ, ಮದ್ಯ ಮತ್ತು ಆಸ್ತಿ ವಿರೂಪಗೊಳಿಸುವಿಕೆಯ ಬಗ್ಗೆ ದೂರುಗಳಾಗಿವೆ. ಫ್ಲೈಯಿಂಗ್ ಸ್ಕ್ವಾಡ್‌ಗಳು ಮತ್ತು ಪೊಲೀಸ್ ಅಧಿಕಾರಿಗಳು ನಗದು, ಮದ್ಯ, ಡ್ರಗ್ಸ್, ಅಮೂಲ್ಯ ಲೋಹಗಳು ಮತ್ತು ಉಚಿತ ವಸ್ತುಗಳನ್ನು ವಶಪಡಿಸಿಕೊಂಡ ಬಗ್ಗೆ 1,334 ಎಫ್‌ಐಆರ್‌ಗಳನ್ನು ದಾಖಲಿಸಿದ್ದಾರೆ. ಆದಾಯ ತೆರಿಗೆ ಇಲಾಖೆ ಚಿನ್ನ, ನಗದು ಸೇರಿದಂತೆ 25.45 ಕೋಟಿ ರೂ. ಬೆಂಗಳೂರಿನ ದಾಸರಹಳ್ಳಿ, ಶಿವಾಜಿನಗರ, ಮಹಾಲಕ್ಷ್ಮಿ ಲೇಔಟ್, ರಾಜಾಜಿನಗರ, ಬಿಟಿಎಂ ಲೇಔಟ್ ಮತ್ತು ಮಲ್ಲೇಶ್ವರಂನಲ್ಲಿ ಹೆಚ್ಚಿನ ಜಪ್ತಿ ಮಾಡಲಾಗಿದೆ.

ಕಾರ್ಕಳ 50 ಲಕ್ಷ ರೂ. ನಗದು ಜಪ್ತಿ: ಸೂಕ್ತ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 50 ಲಕ್ಷ ರೂ. ನಗದನ್ನು ಜಿಲ್ಲೆಯ ಕಾರ್ಕಳ ತಾಲೂಕಿನ ಸಾಣೂರು ಚೆಕ್‌ಪೋಸ್ಟ್ ಪೊಲೀಸರು ನಿನ್ನೆ (ಏ.15)ರಂದು ಜಪ್ತಿ ಮಾಡಿದ್ದರು. ದಾಖಲೆ ಇಲ್ಲದೆ ಎಂಸಿಡಿಸಿಸಿ ಬ್ಯಾಂಕ್‌ಗೆ ಬೊಲೆರೊ ವಾಹನದಲ್ಲಿ ಹಣ ಸಾಗಿಸುತ್ತಿದ್ದರು. ಚುನಾವಣಾಧಿಕಾರಿ ಮದನ್ ಮೋಹನ್ ನೇತೃತ್ವದಲ್ಲಿ ಕಾರ್ಯಾಚರಣೆ ಮಾಡಿದ್ದು, ಬ್ಯಾಂಕ್ ಲೆಟರ್ ವಶಪಡಿಸಿಕೊಂಡಿದ್ದರು. ಸಾಣೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿತ್ತು.

ಕೆಎಸ್‌ಆರ್‌ಟಿಸಿ ಮೈಸೂರು ವಿಭಾಗದ ಇಬ್ಬರು ಚಾಲಕರಿಗೆ 'ಹೀರೋಸ್ ಆನ್ ದಿ ರೋಡ್' ಪ್ರಶಸ್ತಿ





ಎಜಾಜ್ ಷರೀಫ್



ಇಷಾಕ್ ಶರೀಫ್



ಲಕ್ಷ್ಮಣ ರೆಡ್ಡಿ

ಮೈಸೂರು,ಏ.17(ಎಸ್‌ಪಿಎನ್)–ನವದೆಹಲಿಯ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಸಂಘವು (ಅಸೋಸಿಯೇಷನ್ ಆಫ್ ಸ್ಟೇಟ್ ರೋಡ್ ಟ್ರಾನ್ಸ್‌ಪೋರ್ಟ್ ಅಂಡರ್ ರಿಂಗ್ಸ್) ಅಪಘಾತ ರಹಿತ ಚಾಲಕರನ್ನು ಗೌರವಿಸಿ, ಪ್ರೋತ್ಸಾಹಿಸುವ ಸಲುವಾಗಿ 'ಹೀರೋಸ್ ಆನ್ ದಿ ರೋಡ್' ಪ್ರಶಸ್ತಿಯನ್ನು ನೀಡುತ್ತಿದ್ದು, ಮೈಸೂರು ವಿಭಾಗದ ಇಬ್ಬರು ಚಾಲಕರು ಈ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಈ ಬಾರಿ ಕೆಎಸ್‌ಆರ್‌ಟಿಸಿ ಚಾಲಕ ಎಜಾಜ್ ಅಹಮದ್ ಷರೀಫ್, ಇಷಾಕ್ ಶರೀಫ್ ಹಾಗೂ ಬಿಎಂಟಿಸಿಯಿಂದ ಚಾಲಕ ಲಕ್ಷ್ಮಣರೆಡ್ಡಿ ಎಂಬುವವರು ಈ ಪ್ರಶಸ್ತಿಗೆ ಆಯ್ಕೆ ಆಗಿದ್ದಾರೆ. ಚಾಲಕ ಎಜಾಜ್ ಅಹಮದ್ ಷರೀಫ್ ಹಾಗ ಇಶಾಕ್ ಷರೀಫ್ ನಿಗಮದಲ್ಲಿ 33 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಇತ್ತ ಬಿಎಂಟಿಸಿಯ ಚಾಲಕ ಲಕ್ಷ್ಮಣ ರೆಡ್ಡಿ ಎಂಬುವವರು 35 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಈ ಮೂವರು ತಮ್ಮ ಸೇವಾ ಅವಧಿಯಲ್ಲಿ ಅಪಘಾತರಹಿತ ಸೇವೆ ಸಲ್ಲಿಸಿದ್ದಾರೆ. ಹೀಗಾಗಿ 'ಹೀರೋಸ್ ಆನ್ ದಿ ರೋಡ್' ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತಿದೆ.

ಚಾಲಕ ಎಜಾಜ್ ಅಹಮದ್ ಷರೀಫ್(ಬಿ.ಸಂ.), ಮೈಸೂರಿನ ಹುಣಸೂರು ಡಿಪೋದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಈಗಾಗಲೇ ಅಪಘಾತರಹಿತ ಚಾಲನೆಗೆ ನಿಗಮದಿಂದಲೇ ಬೆಳ್ಳಿ ಹಾಗೂ ಚಿನ್ನದ ಪದಕವನ್ನು ಪಡೆದುಕೊಂಡಿದ್ದಾರೆ. ಚಾಲಕ ಇಶಾಕ್ ಷರೀಫ್ (ಬಿ.ಸಂ:2197) ಮೈಸೂರಿನ ಸಾತಗಳ್ಳಿ ಡಿಪೋದಲ್ಲಿ 33 ವರ್ಷದಿಂದ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಮೈಸೂರು ಗ್ರಾಮಾಂತರ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಭಾರ ಮರಿಗೌಡ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಕೆಎಸ್‌ಆರ್‌ಟಿಸಿ ನಿಗಮದಿಂದ ಅಪಘಾತರಹಿತ ಸೇವೆಗೆ ಬೆಳ್ಳಿ ಹಾಗೂ ಚಿನ್ನದ ಪದಕವನ್ನು ಪಡೆದುಕೊಂಡಿದ್ದಾರೆ. ಬಿಎಂಟಿಸಿ ಚಾಲಕ ಲಕ್ಷ್ಮಣ ರೆಡ್ಡಿ ಅವರು ಬೆಂಗಳೂರು ಪೂರ್ವದ ಘಟಕ–41ರಲ್ಲಿ 35 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದು ನಿಗಮದಿಂದ ಅಪಘಾತರಹಿತ ಚಾಲನೆಗಾಗಿ ಬೆಳ್ಳಿ ಮತ್ತು ಚಿನ್ನದ ಪದಕವನ್ನು ಪಡೆದುಕೊಂಡಿದ್ದಾರೆ.

ನಾಳೆ ಪ್ರಶಸ್ತಿ ಪ್ರದಾನ: ಇದೀಗ ಕೇಂದ್ರ ಸರ್ಕಾರದ ಅಧೀನ ಸಂಸ್ಥೆ ನೀಡುತ್ತಿರುವ 'ಹೀರೋಸ್ ಆನ್ ದಿ ರೋಡ್' ಪ್ರಶಸ್ತಿಗೆ ಆಯ್ಕೆ ಆಗಿದ್ದಾರೆ. ಏ.18 ರಂದು ನವದೆಹಲಿಯಲ್ಲಿ ಪ್ರಶಸ್ತಿ ಪ್ರಧಾನ ಸಮಾರಂಭ ನಡೆಯಲಿದ್ದು, ಮಂಗಳವಾರ ಪ್ರಶಸ್ತಿ ಸ್ವೀಕರಿಸಲಿದ್ದಾರೆ. ಅಪಘಾತ ರಹಿತವಾಗಿ ನಗರ ಹಾಗೂ ಗ್ರಾಮೀಣ, ಅಂತರ ನಗರ ಸೇವೆಗಳು/ ಗ್ರಾಮಾಂತರ ಸಮೂಹ ಸಾರಿಗೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಚಾಲಕರನ್ನು ಗುರುತಿಸಿ ರಾಷ್ಟ್ರೀಯ ಮಟ್ಟದಲ್ಲಿ ಗೌರವಿಸಲಾಗುತ್ತದೆ ಎಂದರು. ಈ ಮೂಲಕ ಚಾಲಕರನ್ನು ಮತ್ತಷ್ಟು ಪ್ರೋತ್ಸಾಹಿಸುವ ಕೆಲಸ ಮಾಡುವಂತಾಗುತ್ತದೆ. ಮಾತ್ರವಲ್ಲದೆ ಅಪಘಾತದ ಪ್ರಮಾಣ ಕಡಿಮೆ ದೃಷ್ಟಿಯಿಂದ ಈ ಪ್ರಶಸ್ತಿಯನ್ನು ನೀಡಲಾಗುತ್ತಿದೆ. ಅಲ್ಲದೆ ಈ ಪ್ರಶಸ್ತಿ ಹುಣಸೂರು ಮತ್ತು ಸಾತಗಳ್ಳಿ ಡಿಪೋ ಚಾಲಕರಿಗೆ ಬಂದಿರುವುದು ಸಂತಸದ ವಿಷಯ ಎಂದರು.

ಮೈಸೂರು ಮಿತ್ರ





ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ರಾಜಸ್ಥಾನ್	5	4	1	0	8
ಲಕ್ನೋ	5	3	2	0	6
ಸಿಎಸ್‌ಕೆ	5	3	2	0	6
ಗುಜರಾತ್	5	3	2	0	6
ಪಂಜಾಬ್	5	3	2	0	6
ಕೋಲ್ಕತ್ತಾ	5	2	3	0	4
ಆರ್‌ಸಿಬಿ	5	2	3	0	4
ಮುಂಬೈ	4	2	2	0	4
ಎಸ್‌ಆರ್‌ಹೆಚ್	4	2	2	0	4
ಡೆಲ್ಲಿ	5	0	5	0	0

ಸಿಎಸ್‌ಕೆ ವಿರುದ್ಧ ಆರ್‌ಸಿಬಿಗೆ ವಿರೋಚಿತ ಸೋಲು



ಬೆಂಗಳೂರು, ಏ.17– ಆರಂಭಿಕ ಆಘಾತದ ನಡುವೆಯೂ ಗೆಲುವಿಗಾಗಿ ಕೊನೆವರೆಗೂ ಹೋರಾಡಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತನ್ನ ಬದ್ಧ ಎದುರಾಳಿ ಚೆನ್ನೈ ಸೂಪರ್ ಕಿಂಗ್ಸ್ ಎದುರು 8 ರನ್‌ಗಳ ವಿರೋಚಿತ ಸೋಲು ಅನುಭವಿಸಿತು.

ಇಲ್ಲಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ನೀಡಿದ 227 ರನ್‌ಗಳ ಬೃಹತ್ ಗುರಿ ಬೆನ್ನತ್ತಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 218 ರನ್ ಗಳಿಸಲಷ್ಟೇ ಶಕ್ತವಾಗಿ ಸೋಲು ಅನುಭವಿಸಿತು. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಕೊಹ್ಲಿ 6 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಇದರ ಬೆನ್ನಲ್ಲೇ ಮಹಿಪಾಲ್ ಲೊಮ್ರೊರ್ ಖಾತೆ ತೆರೆಯದೇ ಪೆವಿಲಿಯನ್ ಸೇರಿದರು. 15 ರನ್‌ಗೆ 2 ವಿಕೆಟ್ ಕಳೆದುಕೊಂಡಿದ್ದ ಹಂತದಲ್ಲಿ ಜೊತೆಯಾದ ಗ್ಲೆನ್ ಮ್ಯಾಕ್ಸ್‌ವೆಲ್ ಹಾಗೂ ಫಾಫ್ ಡು ಪ್ಲೆಸಿಸ್ ಅಕ್ಷರಶಃ ಚೆನ್ನೈ ಬೌಲಿಂಗ್ ಅನ್ನು ಚೆಂದಿ ಉಡಾಯಿಸಿದರು. ಇವರಿಬ್ಬರು 3ನೇ ವಿಕೆಟ್‌ಗೆ 61 ಎಸೆತಗಳಲ್ಲಿ 126 ರನ್‌ಗಳ ಜೊತೆಯಾಟವಾಡಿದರು. ಮಿಂಚಿನ ಬ್ಯಾಟಿಂಗ್ ನಡೆಸಿದ ಮ್ಯಾಕ್ಸ್‌ವೆಲ್ 36 ಎಸೆತಗಳಲ್ಲಿ 3 ಫೋರ್ ಮತ್ತು ಬರೋಬ್ಬರಿ 8 ಸಿಕ್ಸರ್‌ಗಳೊಂದಿಗೆ 76 ರನ್ ಬಾರಿಸಿ ವಿಕೆಟ್ ಒಪ್ಪಿಸಿದರು. ಈ ವೇಳೆ ತಂಡದ ಮೊತ್ತ 13 ಓವರ್‌ಗೆ 141ರನ್ ಗಳಿಸಿತ್ತು. ಈ ಮೊತ್ತಕ್ಕೆ 18 ರನ್ ಗಳಿಸುವ ವೇಳೆಗೆ 33 ಎಸೆತಗಳಲ್ಲಿ 5 ಫೋರ್ ಮತ್ತು 4 ಸಿಕ್ಸರ್‌ಗಳೊಂದಿಗೆ 62 ರನ್ ಡುಪ್ಲೆಸಿಸ್ ಔಟಾದಾಗ ಆರ್‌ಸಿಬಿ ದಿಕ್ಕು ತಪ್ಪಿತು. ಆದರೆ ನಂತರ ಬಂದ ಬ್ಯಾಟ್ಸ್‌ಮನ್‌ಗಳು ದೊಡ್ಡ ಇನ್ನಿಂಗ್ಸ್ ಆಡುವಲ್ಲಿ ವಿಫಲರಾದ ಕಾರಣ ಆರ್‌ಸಿಬಿ ಸೋಲು ಅನುಭವಿಸಿತು. ತಂಡದ ಪರ ದಿನೇಶ್ ಕಾರ್ತಿಕ್ 28, ಸುಯಾಷ್ ಪ್ರಭುದೇಸಾಯಿ 19, ಶಹಬ್ಬಾಸ್ ಅಹಮ್ಮದ್ 12 ರನ್ ಗಳಿಸಿದರು. ಸಿಎಸ್‌ಕೆ ಪರ ತುಷಾರ್ ದೇಶಪಾಂಡೆ 3, ಮತೀಶಾ ಪ್ರತಿರನ 2, ಮೊಯಿನ್ ಅಲಿ, ಆಕಾಶ್ ಸಿಂಗ್ ಹಾಗೂ ಮಹೀಶ ತೀಕ್ಷಣ ತಲಾ ಒಂದೊಂದು ವಿಕೆಟ್ ಕಬಳಿಸಿದರು.

ಇದಕ್ಕೂ ಮುನ್ನಾ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 226ರನ್‌ಗಳ ಬೃಹತ್ ಮೊತ್ತ ದಾಖಲಿಸಿತು. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಋತುರಾಜ್ ಗಾಯಕ್ವಾಡ್ 3 ರನ್ ಗಳಿಸಿ ನಿರ್ಗಮಿಸಿದರು. ನಂತರ ಬಂದ ಡಿವೋನ್ ಕಾನ್ವೆ 45 ಎಸೆತಗಳಲ್ಲಿ ತಲಾ 6 ಬೌಂಡರಿ, ಸಿಕ್ಸರ್ ಒಳಗೊಂಡ 83 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಅಜಿಂಕ್ಯಾ ರಹಾನೆ 37, ಶಿವಂ ದುಬೆ 27 ಎಸೆತಗಳಲ್ಲಿ 5 ಸಿಕ್ಸರ್, 2 ಬೌಂಡರಿ ಒಳಗೊಂಡ 52 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಉಳಿದಂತೆ ಅಂಬಟಿ ರಾಯುಡು 14, ಮೊಯಿನ್ ಅಲಿ 19, ರವೀಂದ್ರ ಜಡೇಜಾ 10ರನ್ ಗಳಿಸಿದರು. ಆರ್‌ಸಿಬಿ ಪರ ಹಸರಂಗ, ಸಿರಾಜ್, ಮರ್ನೆಲ್, ಹರ್ಷಲ್ ಪಟೇಲ್ ಮ್ಯಾಕ್ಸ್‌ವೆಲ್, ವಿಜಯ್ ಕುಮಾರ್ ವೈಶಾಖ್ ತಲಾ ಒಂದೊಂದು ವಿಕೆಟ್ ಪಡೆದರು. ಡಿವೋನ್ ಕಾನ್ವೆ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಇಂದಿನ ಪಂದ್ಯಗಳು

[ಏಪ್ರಿಲ್ 18]


ಹೈದರಾಬಾದ್ V/S ಮುಂಬೈ

ಸ್ಥಳ: ರಾಜೀವ್ ಗಾಂಧಿ ಅಂತರಾಷ್ಟ್ರೀಯ ಕ್ರೀಡಾಂಗಣ ಹೈದರಾಬಾದ್

ಸಮಯ: ಸಂಜೆ 7.30




ಭಾರತೀಯ ಜನತಾ ಪಕ್ಷದ ಅಭ್ಯರ್ಥಿಯಾದ ಶಾಸಕ ಸಿ.ಎಸ್.ನಿರಂಜನಕುಮಾರ್ ಅವರು ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದಿಂದ ಪುನರಾಯ್ಕೆ ಬಯಸಿ ತಮ್ಮ ಬೆಂಬಲಿಗರೊಂದಿಗೆ ನಾಮಪತ್ರ ಸಲ್ಲಿಸಿದರು.



ಚಾಮರಾಜನಗರ ವಿಧಾನಸಭಾ ಕ್ಷೇತ್ರದಿಂದ ಪುನರಾಯ್ಕೆ ಬಯಸಿ ಶಾಸಕ ಪುಟ್ಟರಂಗಶೆಟ್ಟಿ ಅವರು ತಮ್ಮ ಬೆಂಬಲಿಗರೊಂದಿಗೆ ತೆರಳಿ ನಾಮಪತ್ರ ಸಲ್ಲಿಸಿದರು.



ವಿರಾಜಪೇಟೆ ವಿಧಾನಸಭಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾದ ಶಾಸಕ ಕೆ.ಜಿ. ಬೋಪಯ್ಯ ಅವರು ಪುನರಾಯ್ಕೆ ಬಯಸಿ ತಮ್ಮ ಬೆಂಬಲಿಗರೊಂದಿಗೆ ತೆರಳಿ ನಾಮಪತ್ರ ಸಲ್ಲಿಸಿದರು.



ಮಡಿಕೇರಿ ವಿಧಾನಸಭಾ ಕ್ಷೇತ್ರದಿಂದ ಪನರಾಯ್ಕೆ ಬಯಸಿ ಶಾಸಕರಾದ ಬಿಜೆಪಿ ಅಭ್ಯರ್ಥಿ ಮಂಡೇಪಂಡ ಅಪ್ಪಚ್ಚು ರಂಜನ್ ತಮ್ಮ ಬೆಂಬಲಿಗರೊಂದಿಗೆ ನಾಮಪತ್ರ ಸಲ್ಲಿಸಿದರು.



ಮಡಿಕೇರಿ ವಿಧಾನಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿ ಡಾ. ಮಂಥರ್ ಗೌಡ ಅವರುಗಳು ತಮ್ಮ ಬೆಂಬಲಿಗರೊಂದಿಗೆ ನಾಮಪತ್ರ ಸಲ್ಲಿಸಿದರು.

ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ಪದವೀಧರರ ದಿನಾಚರಣೆ ನಾಳೆ

205 ಮಂದಿಗೆ ಎಂಬಿಬಿಎಸ್ ಪದವಿ

11 ವಿದ್ಯಾರ್ಥಿಗಳಿಗೆ ಚಿನ್ನದ ಪದಕ



ಮೈಸೂರು,ಏ.17(ಪಿಎಂ)– ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ಪದವೀಧರರ ದಿನಾಚರಣೆಯನ್ನು ಏ.19ರಂದು ಆಯೋಜಿಸಲಾಗಿದೆ ಎಂದು ಕಾಲೇಜಿನ ಪ್ರಾಂಶುಪಾಲ ಡಾ.ಹೆಚ್.ಬಸವನಗೌಡಪ್ಪ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಸಂಜೆ 4.30ಕ್ಕೆ ಕಾಲೇಜಿನ ಆವರಣದಲ್ಲಿ ಪದವೀಧರರ ದಿನಾಚರಣೆ ಆಯೋಜಿಸಿದ್ದು, 123 ವಿದ್ಯಾರ್ಥಿನಿಯರು ಹಾಗೂ 82 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 205 ಮಂದಿ ಎಂಬಿಬಿಎಸ್ ಪದವಿ ಸ್ವೀಕರಿಸಲಿದ್ದಾರೆ. ಈ ಪೈಕಿ 9 ವಿದ್ಯಾರ್ಥಿನಿಯರು ಹಾಗೂ ಇಬ್ಬರು ವಿದ್ಯಾರ್ಥಿಗಳು ಚಿನ್ನದ ಪದಕ ಹಾಗೂ ನಗದು ಬಹುಮಾನ ಪಡೆಯಲಿದ್ದಾರೆ ಎಂದರು.

ಪದವಿ ಸ್ವೀಕರಿಸುವ ವಿದ್ಯಾರ್ಥಿಗಳು, ಬಳಿಕ ಹಿಪೋಕ್ರೆಟಿಕ್ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಅಧ್ಯಾಪಕರಿಗೆ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಮಾಡಲಾಗುವುದು. ನಿಮ್ಹಾನ್ಸ್ (ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ) ನಿರ್ದೇಶಕಿ ಡಾ.ಪ್ರತಿಮಾ ಮೂರ್ತಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪದಕ ಹಾಗೂ ನಗದು ಬಹುಮಾನಗಳನ್ನು ಪ್ರದಾನ ಮಾಡಲಿದ್ದಾರೆ ಎಂದು ತಿಳಿಸಿದರು.

ಡಾ.ಪ್ರತಿಮಾ ಮೂರ್ತಿ ಅವರು ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ನಿಮ್ಹಾನ್ಸ್ ಹಳೇ ವಿದ್ಯಾರ್ಥಿನಿಯಾಗಿದ್ದಾರೆ ಇವರು ಮ್ಯಾಂಚೆಸ್ಟರ್ ವಿಶ್ವವಿದ್ಯಾನಿಲಯದಿಂದ ಮನೋವೈದ್ಯಶಾಸ್ತ್ರದಲ್ಲಿ ಡಿಪ್ಲೊಮಾ ಪಡೆದಿದ್ದಾರೆ. ಜೊತೆಗೆ ಗ್ಲಾಸ್ಗೋದ ರಾಯಲ್ ಕಾಲೇಜ್ ಆಫ್ ಸೈಕಿಯಾಟ್ರಿಸ್ಟ್ಸ್ ಮತ್ತು ಫಿಸಿಶಿಯನ್ಸ್ ಫೆಲೋ ಆಗಿದ್ದಾರೆ. ತಂಬಾಕು ನಿಯಂತ್ರಣಕ್ಕಾಗಿ ಮೊಬೈಲ್ ಮಾಡ್ಯೂಲ್‌ಗಳನ್ನು ಅಭಿವೃದ್ಧಿಪಡಿಸುವಲ್ಲಿ ತಮ್ಮದೇ ವಿಶಿಷ್ಟ ಕೊಡುಗೆ ನೀಡಿರುವ ಇವರು, ತಮ್ಮ ಹಲವು ವೈಜ್ಞಾನಿಕ ಸಂಶೋಧನೆಗಳನ್ನು ಪ್ರತಿಷ್ಠಿತ ಜರ್ನಲ್‌ಗಳಲ್ಲಿ ಪ್ರಕಟಿಸಿದ್ದಾರೆ ಎಂದು ವಿವರಿಸಿದರು.

ಜೆಎಸ್‌ಎಸ್ ವೈದ್ಯಕೀಯ ಕಾಲೇಜು, ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ ಘಟಕ ಕಾಲೇಜಾಗಿದ್ದು, ಅತ್ಯಾಧುನಿಕ ಮೂಲ ಸೌಕರ್ಯಗಳನ್ನು ಹೊಂದಿದೆ. ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಪದವಿ ದಿನಾಚರಣೆಯ ಸಾನಿಧ್ಯ ವಹಿಸಲಿದ್ದು, ಜೆಎಸ್‌ಎಸ್ ಮಹಾ ವಿದ್ಯಾಪೀಠದ ಕಾರ್ಯನಿರ್ವಹಕ ಕಾರ್ಯದರ್ಶಿ ಡಾ.ಸಿ. ಬೆಟಸೂರಮಠ ಅಧ್ಯಕ್ಷತೆ ವಹಿಸಲಿದ್ದಾರೆ. ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ ಸಮಕುಲಪತಿ ಡಾ.ಬಿ.ಸುರೇಶ್, ಉಪಕುಲಪತಿ ಡಾ.ಸುರೀಂದರ್ ಸಿಂಗ್ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಎಂಬಿಬಿಎಸ್ ಅವಧಿಯಲ್ಲಿ ಅತ್ಯುತ್ತಮ ಅಂಕ ಗಳಿಸಿದ ಮೈಸೂರಿನ ಡಾ. ಚೈತಾಲಿ ಅತ್ಯುತ್ತಮ ವಿದ್ಯಾರ್ಥಿನಿಯಾಗಿ ಹೊರಹೊಮ್ಮಿದ್ದಾರೆ. ಜೊತೆಗೆ ಒಂದು ಚಿನ್ನದ ಪದಕ ಹಾಗೂ 3 ನಗದು ಬಹುಮಾನಗಳಿಗೂ ಭಾಜನರಾಗಿದ್ದಾರೆ ಎಂದರು. ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ ಕುಲಸಚಿವ ಡಾ.ಬಿ.ಮಂಜುನಾಥ, ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ವೈದ್ಯಕೀಯ ಅಧೀಕ್ಷಕ ಡಾ.ಸಿ.ಪಿ.ಮಧು, ಉಪ ಪ್ರಾಂಶುಪಾಲರಾದ (ಪ್ರೀ ಕ್ಲಿನಿಕಲ್) ಡಾ.ಎಂ.ಎನ್. ಸುಮಾ, ಉಪ ಪ್ರಾಂಶುಪಾಲ (ಕ್ಲಿನಿಕಲ್) ಡಾ.ಮಂತಪ್ಪ ಪತ್ರಿಕಾಗೋಷ್ಠಿಯಲ್ಲಿದ್ದರು.

ಬಿಸಿಲಿನ ಝಳಕ್ಕೆ ಬಲಿಯಾದವರ ಸಂಖ್ಯೆ 13ಕ್ಕೆ ಏರಿಕೆ

ಮುಂಬೈ: ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಭಾಗವಹಿಸಿದ್ದ ನವಿ ಮುಂಬೈನಲ್ಲಿ ಭಾನುವಾರ ನಡೆದ 'ಮಹಾರಾಷ್ಟ್ರ ಭೂಷಣ' ಪ್ರಶಸ್ತಿ ಸಮಾರಂಭದಲ್ಲಿ ಬಿಸಿಲಿನ ತಾಪದಿಂದ ಮೃತಪಟ್ಟವರ ಸಂಖ್ಯೆ 13ಕ್ಕೆ ಏರಿಕೆಯಾಗಿದೆ ಮತ್ತು 50ಕ್ಕೂ ಹೆಚ್ಚು ಜನ ವಾಣಿಜ್ಯ ನಗರಿಯ ವಿವಿಧ ಆಸ್ಪತ್ರೆಯ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಬಿಸಿಲಿನ ತಾಪದಿಂದ ನೂರಾರು ಜನ ತೀವ್ರ ಅಸ್ವಸ್ಥರಾಗಿದ್ದು, ಖಾರ್ಘರ್ ಮತ್ತು ಸುತ್ತಮುತ್ತಲಿನ ಐದು ಆಸ್ಪತ್ರೆಗಳಲ್ಲಿ 44 ಜನರನ್ನು ದಾಖಲಿಸಲಾಗಿದೆ. ಹಲವರ ಸ್ಥಿತಿ ಗಂಭೀರವಾಗಿದ್ದು, ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

ಸಾಮಾಜಿಕ ಕಾರ್ಯಕರ್ತ ದತ್ತಾತ್ರೇಯ ನಾರಾಯಣ ಅಲಿಯಾಸ್ ಅಪ್ಪಾಸಾಹೇಬ್ ಧರ್ಮಾಧಿಕಾರಿ ಅವರಿಗೆ ಮಹಾರಾಷ್ಟ್ರ ಭೂಷಣ ಪ್ರಶಸ್ತಿ ಪ್ರದಾನ ಮಾಡಲಾದ ಈ ಮೆಗಾ ಕಾರ್ಯಕ್ರಮದಲ್ಲಿ ನಿನ್ನೆ 120ಕ್ಕೂ ಹೆಚ್ಚು ಜನ ಬಿಸಿಲಿನ ಝಳದಿಂದ ಡಿಹೈಡ್ರೇಶನ್ ಹಾಗೂ ಶಾಖ–ಸಂಬಂಧಿತ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದರು. ಇವರಲ್ಲಿ 15ಕ್ಕೂ ಹೆಚ್ಚು ಜನರನ್ನು ವಿವಿಧ ಸ್ಥಳೀಯ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ



ಮತದಾನ ದಿನದಂದು ಎನ್ಸಿಸಿ, ಸ್ಕೌಟ್ಸ್, ಗೈಡ್ಸ್ ವಿದ್ಯಾರ್ಥಿಗಳ ಸಹಕಾರ ಪಡೆಯಿರಿ

ಅಧಿಕಾರಿಗಳಿಗೆ ಡಾ.ಕೆ.ವಿ.ರಾಜೇಂದ್ರ ನಿರ್ದೇಶನ



ಮೈಸೂರು,ಏ.17(ಪಿಎಂ)– ಸಾರ್ವಜನಿಕ ವಿಧಾನಸಭಾ ಚುನಾವಣೆಯ ಮತದಾನ ದಿನದಂದು ಅಗತ್ಯ ಮೂಲಸೌಕರ್ಯ ಕಲ್ಪಿಸಲು ಎನ್ಸಿಸಿ, ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳ ಸಹಕಾರ ಪಡೆದುಕೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳೂ ಆದ ಜಿಲ್ಲಾ ಮುಖ್ಯ ಚುನಾವಣಾಧಿಕಾರಿ ಡಾ.ಕೆ.ವಿ.ರಾಜೇಂದ್ರ ನಿರ್ದೇಶನ ನೀಡಿದರು.

ಮೈಸೂರು ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ಮತದಾರರಿಗೆ ಅಗತ್ಯ ಸೌಲಭ್ಯ ಕಲ್ಪಿಸುವ ಕುರಿತಂತೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹಿರಿಯ ನಾಗರಿಕ ಮತದಾರರನ್ನು ಜೋಪಾನವಾಗಿ ಮತಗಟ್ಟೆಗೆ ಕರೆತರಲು ಹಾಗೂ ಮತಗಟ್ಟೆವರೆಗೆ ಬರಲು ತೊಂದರೆ ಇದ್ದಲ್ಲಿ ಅಂತಹವರನ್ನು ವ್ಹೀಲ್ಚೇರ್ ಮೂಲಕ ಮತಗಟ್ಟೆಗೆ ಕರೆತರಲು ಎನ್ಸಿಸಿ, ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳ ಸಹಕಾರ ಪಡೆಯಲು ಅಗತ್ಯ ಕ್ರಮ ವಹಿಸಬೇಕೆಂದು ಸೂಚನೆ ನೀಡಿದರು.

ಮತಗಟ್ಟೆ ಆವರಣದಲ್ಲಿ ಪುರುಷರು ಹಾಗೂ ಮಹಿಳೆಯರ ಪ್ರತ್ಯೇಕ ಸರದಿ ಸಾಲುಗಳ ನಿರ್ವಹಣೆಗೂ ಈ ವಿದ್ಯಾರ್ಥಿಗಳನ್ನು ನಿಯೋಜಿಸಿ ಅವರ ಸಹಕಾರ ಪಡೆದುಕೊಳ್ಳಬೇಕು. ಅದಕ್ಕಾಗಿ ಅವರಿಗೆ ಅಗತ್ಯ ತರಬೇತಿ ನೀಡಬೇಕು. ವಿದ್ಯಾರ್ಥಿಗಳು ಇಂತಹ ಚಟುವಟಿಕೆಯಲ್ಲಿ ಪಾಲ್ಗೊಳ್ಳುವುದು ಅವರಲ್ಲಿ ಪ್ರಜಾಪ್ರಭುತ್ವದ ಬಗ್ಗೆ ಜ್ಞಾನ ವೃದ್ಧಿಗೆ ಸಹಕಾರ ಆಗುತ್ತದೆ ಎಂದು ಹೇಳಿದರು.

ಮತದಾನಕ್ಕೆ ಮೂರು ದಿನ ಬಾಕಿಯಿರುವ ಸಂದರ್ಭದಲ್ಲಿ ಸೀರೆ, ಹಣ ಹಂಚುವುದು ಸೇರಿದಂತೆ ಮತದಾರರಿಗೆ ನಾನಾ ರೀತಿಯ ಆಮಿಷ ಒಡ್ಡುವುದು ಹಾಗೂ ಇನ್ನಿತರ ಅಕ್ರಮ ಚಟುವಟಿಕೆಗಳು ನಡೆಯುವ ಸಾಧ್ಯತೆ ಇರುತ್ತದೆ. ಇಂತಹ ಅಕ್ರಮಗಳಿಗೆ ಆಸ್ಪದ ನೀಡದ ರೀತಿಯಲ್ಲಿ ದಕ್ಷತೆಯಿಂದ ಕಾರ್ಯ ನಿರ್ವಹಿಸಬೇಕು ಎಂದು ತಿಳಿಸಿದರು. ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರೂ ಆದ ಜಿಲ್ಲಾ ಪಂಚಾಯಿತಿ ಸಿಇಓ ಕೆ.ಎಂ.ಗಾಯಿತ್ರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕ ರಾಮಚಂದ್ರ ರಾಜೇ ಅರಸ್ ಸೇರಿದಂತೆ ಇನ್ನಿತರ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.



ಮೈಸೂರಿನ ಜನತಾನಗರದ ಶ್ರೀ ಲಕ್ಷ್ಮೀ ಚಾರಿಟೆಬಲ್ ಟ್ರಸ್ಟ್‌ನ ವತಿಯಿಂದ ವಿಶ್ವಜ್ಞಾನಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರ 132ನೇ ಜಯಂತಿಯನ್ನು ಆಚರಿಸಲಾಯಿತು. ಟ್ರಸ್ಟ್‌ನ ಅಧ್ಯಕ್ಷೆ ಶ್ರೀಮತಿ ಶೋಭಾರಾಣಿ ಎನ್.ಪಿ, ಖಜಾಂಚಿ ಪುಟ್ಟಣ್ಣ, ಸದಸ್ಯರಾದ ಶ್ರೀಮತಿ ಕಾವ್ಯ, ಪರಿಣಿತ, ಪೃಥಾನವಿಲ್ ಮತ್ತಿತರರು ಹಾಜರಿದ್ದರು.



ಡಾ ಬಿ.ಆರ್.ಅಂಬೇಡ್ಕರ್ ಅವರ ಅವರ ಅಪ್ಪಟ ಅಭಿಮಾನಿಯಾದ ರಾಜೇಶ್ ಕಳಸ್ತವಾಡಿ ಅವರು, ಅಂಬೇಡ್ಕರ್ ಜಯಂತಿ ಅಂಗವಾಗಿ ತಮ್ಮ ಆಟೋಗೆ ಅಲಂಕಾರ ಮಾಡಿ, ಬಡವರಿಗೆ ಉಪಹಾರ ವಿತರಿಸಿದರು. ಪ್ರತಿ ವರ್ಷವೂ ಇವರು ಅಂಬೇಡ್ಕರ್ ಜಯಂತಿಯಂದು ಇದೇ ರೀತಿ ಆಟೋಗೆ ಅಲಂಕಾರ ಮಾಡಿ, ಹಸಿದವರಿಗೆ ಊಟ ಸೇರಿದಂತೆ ಇನ್ನಿತರ ಸೇವಾ ಕಾರ್ಯ ನಡೆಸುತ್ತಾರೆ.

ಸಜ್ಜನರ ಸಂಘ ಬಿಟ್ಟು ದುರ್ಜನರ ಸಂಘ ಸೇರಿದ ಶೆಟ್ಟರ್: ಸಿಎಂ ಬಸವರಾಜ ಬೊಮ್ಮಾಯಿ ಕಿಡಿ

ಮೈಸೂರು,ಏ.17(ಎಂಟಿವೈ)– ಮಾಜಿ ಮುಖ್ಯಮಂತ್ರಿಯಾಗಿದ್ದ ಜಗದೀಶ ಶೆಟ್ಟರ್ ಇಷ್ಟು ದಿನ ಸಜ್ಜನರ ಸಂಘದಲ್ಲಿದ್ದರು. ಆದರೆ ಇದೀಗ ದುರ್ಜನರ ಸಂಘಕ್ಕೆ ಸೇರಿಕೊಂಡಿದ್ದಾರೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಟೀಕಿಸಿದ್ದಾರೆ.

ವರುಣಾ ಕ್ಷೇತ್ರ ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ ಅವರ ನಾಮಪತ್ರ ಸಲ್ಲಿಕೆಯಲ್ಲಿ ಪಾಲ್ಗೊಳ್ಳಲು ಬೆಂಗಳೂರಿಂದ ವಿಮಾನದಲ್ಲಿ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ಸೋಮವಾರ ಆಗಮಿಸಿದ ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರಿಗೆ ಪಕ್ಷ ಎಲ್ಲವನ್ನೂ ನೀಡಿತ್ತು. ಪಕ್ಷದಲ್ಲಿ ಅವರಿಗೆ ದೊಡ್ಡ ಗೌರವದ ಸ್ಥಾನವಿತ್ತು. ಆದರೆ, ಟಿಕೆಟ್ ಸಿಗಲಿಲ್ಲ ಎಂಬ ಕಾರಣಕ್ಕೆ ಪಕ್ಷ ತೊರೆಯುವ ನಿರ್ಧಾರ ಮಾಡಿದ್ದು ಖಂಡನೀಯ ಎಂದರು.



ಬಸವಣ್ಣನವರು ಈ ಹಿಂದೆಯೇ 'ದುರ್ಜನರ ಸಂಘ ಮಾಡಬೇಡಿ ಎಂದು ಹೇಳಿದ್ದಾರೆ. ಆದರೆ ಶೆಟ್ಟರ್ ದುರ್ಜನರ ಸಹವಾಸವನ್ನೇ ಮಾಡಿದ್ದಾರೆ. ದುಡುಕಿನ ನಿರ್ಧಾರದಿಂದ ಶೆಟ್ಟರ್ ಬಲಿಪಶು ಆಗಿದ್ದಾರೆ. ಅವರು ಈಗ ಮಾಡಿರುವ ಸಂಘ ಸರಿಯಾದುದ್ದಲ್ಲ. ಜಗದೀಶ ಶೆಟ್ಟರ್‌ಗೆ ಪಕ್ಷ ಎಲ್ಲವನ್ನೂ ನೀಡಿದೆ. ಅವರ ರಾಜೀನಾಮೆಯಿಂದ ಪಕ್ಷಕ್ಕೆ ಯಾವುದೇ ಸಮಸ್ಯೆ ಆಗುವುದಿಲ್ಲ. ಬಿಜೆಪಿ ಕಾರ್ಯಕರ್ತರ ಪಕ್ಷ, ನಾಯಕ ಆಧಾರಿತ ಪಕ್ಷವಲ್ಲ. ಕೆಲ ನಾಯಕರ ಪಕ್ಷಾಂತರದಿಂದ ಪಕ್ಷದ ಮೇಲೆ ಯಾವುದೇ ಪರಿಣಾಮ ಬೀರಲ್ಲ ಎಂದು ಬೊಮ್ಮಾಯಿ ಸ್ಪಷ್ಟಪಡಿಸಿದರು.

ಕಾಂಗ್ರೆಸ್‌ನಲ್ಲಿ ಅಭ್ಯರ್ಥಿಗಳ ಕೊರತೆ ಬಹಳ ಇತ್ತು 60ಕ್ಕೂ ಹೆಚ್ಚು ಕ್ಷೇತ್ರಗಳಲ್ಲಿ ಅವರಿಗೆ ಅಭ್ಯರ್ಥಿಗಳೇ ಇರಲಿಲ್ಲ. ಮೊದಲ ಪಟ್ಟಿಯನ್ನು ಮಾತ್ರ ವೀರಾವೇಶದಿಂದ ಬಿಡುಗಡೆ ಮಾಡಿದ್ದರು. ಈಗ ಅವರ ಸ್ಥಿತಿ ಗೊತ್ತಾಗುತ್ತಿದೆ. ಆದರೆ, ಪಕ್ಷಾಂತರಕ್ಕೆ ಯಶಸ್ಸು ಸಿಗುವುದಿಲ್ಲ ಎಂದು ಸಿಎಂ ಜರಿದರು.

ರಾಜ್ಯದಲ್ಲಿ ಬಿಜೆಪಿಗೆ ಬಹುಮತ ದೊರೆಯುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಮುಖ್ಯಮಂತ್ರಿ ಬೊಮ್ಮಾಯಿ, ವರುಣಾ ಕ್ಷೇತ್ರದಲ್ಲಿ ಜಿದ್ದಾಜಿದ್ದಿನ ಸ್ಪರ್ಧೆ ನಡೆಯುವುದು ಖಚಿತ. ಈ ಕ್ಷೇತ್ರವನ್ನು ಗಂಭೀರವಾಗಿ ಪರಿಗಣಿಸಿದ್ದೇವೆ. ಅದಕ್ಕಾಗಿಯೇ ನಾವು ವಿ.ಸೋಮಣ್ಣ ಅವರಂತಹ ಪ್ರಭಾವಿ ಮತ್ತು ಬಲಿಷ್ಠ ನಾಯಕರನ್ನು ಕಣಕ್ಕಿಳಿಸಿದ್ದೇವೆ. ಈ ಕ್ಷೇತ್ರದಲ್ಲಿ ರಾಜ್ಯ, ರಾಷ್ಟ್ರ ನಾಯಕರು ಪ್ರಚಾರಕ್ಕೆ ಬರುತ್ತಾರೆ. ಈ ಬಾರಿ ರಾಜಕೀಯ, ಸಾಮಾಜಿಕ ಸಮೀಕರಣದ ಆಧಾರದ ಮೇಲೆ ಅಚ್ಚರಿ ಫಲಿತಾಂಶ ಹೊರಬೀಳುವುದು ಖಚಿತ ಎಂದರು.

ಮೋದಿ ಪ್ರಚಾರ ನಿಗದಿಯಾಗಿಲ್ಲ: ಪ್ರಧಾನಿ ನರೇಂದ್ರ ಮೋದಿ ಅವರ ಚುನಾವಣಾ ಪ್ರಚಾರದ ದಿನಾಂಕ ಇನ್ನೂ ನಿಗದಿಯಾಗಿಲ್ಲ. ಬಹುತೇಕ ನಾಮಪತ್ರ ಪ್ರಕ್ರಿಯೆ ಮುಗಿದ ವೇಲೆ ಅವರ ಮತಪ್ರಚಾರ ಆರಂಭವಾಗಲಿದೆ ಎಂದು ಬಸವರಾಜ ಬೊಮ್ಮಾಯಿ ಸ್ಪಷ್ಟಪಡಿಸಿದರು.

ತಿ.ನರಸೀಪುರದಲ್ಲಿ ಜೆಡಿಎಸ್‌ನ ಅಶ್ವಿನ್‌ಕುಮಾರ್, ಬಿಜೆಪಿಯ ಡಾ.ರೇವಣ್ಣ ನಾಮಪತ್ರ ಸಲ್ಲಿಕೆ





ತಿ.ನರಸೀಪುರ, ಏ.17– ತಿ.ನರಸೀಪುರ ಮೀಸಲು ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ, ಶಾಸಕ ಎಂ.ಅಶ್ವಿನ್ ಕುಮಾರ್, ಬಿಜೆಪಿ ಅಭ್ಯರ್ಥಿ ಡಾ.ಎಂ.ರೇವಣ್ಣ ಹಾಗೂ ಆಮ್ ಆದ್ಮಿ ಅಭ್ಯರ್ಥಿ ಎಂ.ಸಿದ್ದರಾಜು ಸೋಮವಾರ ನಾಮಪತ್ರ ಸಲ್ಲಿಸಿದರು. ಮೂವರು ಅಭ್ಯರ್ಥಿಗಳು ಪ್ರತ್ಯೇಕವಾಗಿ ತಾಲೂಕು ಕಚೇರಿಗೆ ಆಗಮಿಸಿ ಚುನಾವಣಾಧಿಕಾರಿ ಸೋಮಶೇಖರ್‌ಗೆ ನಾಮಪತ್ರ ಸಲ್ಲಿಸಿದರು.

ಶಾಸಕ ಎಂ.ಅಶ್ವಿನ್ ಕುಮಾರ್ ಬೆಳಗ್ಗೆ ಹಾಗೂ ಬಿಜೆಪಿ ಅಭ್ಯರ್ಥಿ ಡಾ.ಎಂ.ರೇವಣ್ಣ ಮಧ್ಯಾಹ್ನ ಪಟ್ಟಣದ ಶ್ರೀಗುಂಜಾನರಸಿಂಹಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ನಂತರ ತಮ್ಮ ಅಪಾರ ಬೆಂಬಲಿಗರೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ತಾಲೂಕು ಕಚೇರಿಗೆ ತೆರಳಿ ಉಮೇದುವಾರಿಕೆ ಸಲ್ಲಿಸಿದರು. ಮೆರವಣಿಗೆಯಲ್ಲಿ ಜೆಡಿಎಸ್, ಬಿಜೆಪಿ ಬಾವುಟಗಳು ರಾರಾಜಿಸಿದವು. ಪಕ್ಷಗಳ ಚಿನ್ಹೆ ಇರುವ ಟೋಪಿ ಧರಿಸಿ ಬಿಜೆಪಿ, ಜೆಡಿಎಸ್ ಕಾರ್ಯಕರ್ತರು, ಬೆಂಬಲಿಗರು ತಮ್ಮ ನೆಚ್ಚಿನ ಅಭ್ಯರ್ಥಿ ಪರ ಜೈಕಾರ ಕೂಗಿದರು.

ಜೆಡಿಎಸ್ ಅಭ್ಯರ್ಥಿ ಎಂ.ಅಶ್ವಿನ್‌ಕುಮಾರ್ ನಾಮಪತ್ರ ಸಲ್ಲಿಸುವ ವೇಳೆ ಜಿಪಂ ಸದಸ್ಯ ಎಸ್.ಎನ್.ಸಿದ್ದಾರ್ಥ, ಕ್ಷೇತ್ರಾಧ್ಯಕ್ಷ ಸಿ.ಬಿ.ಹುಂಡಿ ಚಿನ್ನಸ್ವಾಮಿ, ತಲಕಾಡು ರಾಜಣ್ಣ, ವಿವೇಕಾನಂದ ವಿದ್ಯಾಸಂಸ್ಥೆ ಸಂಸ್ಥಾಪಕ ಪ್ರಕಾಶ್ ಹಾಜರಿದ್ದರೆ, ಬಿಜೆಪಿ ಅಭ್ಯರ್ಥಿ ಡಾ.ಎಂ. ರೇವಣ್ಣ ಉಮೇದುವಾರಿಕೆ ಸಲ್ಲಿಸುವ ವೇಳೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ವರುಣಾ ಕ್ಷೇತ್ರದ ಅಭ್ಯರ್ಥಿ ವಿ.ಸೋಮಣ್ಣ, ಸಂಸದ ಪ್ರತಾಪ್ ಸಿಂಹ, ವಿಧಾನ ಪರಿಷತ್ ಮಾಜಿ ಸದಸ್ಯ ಸಿದ್ದರಾಜು, ಸಿ.ರಮೇಶ್ ಹಾಜರಿದ್ದರು. ನಾಮಪತ್ರ ಸಲ್ಲಿಸಿ ಮಾತನಾಡಿದ ಎಂ.ಅಶ್ವಿನ್ ಕುಮಾರ್, ಕ್ಷೇತ್ರದಲ್ಲಿ ಮೊದಲ ಸುತ್ತಿನ ಮತಯಾಚನೆ ನಂತರ ಮತದಾರರು ತಮ್ಮ ಪರ ಒಲವು ತೋರಿರುವುದು ಕಂಡು ಬಂದಿದೆ. ಕಳೆದ ಬಾರಿ 28 ಸಾವಿರಕ್ಕೂ ಅಧಿಕ ಮತಗಳ ಅಂತರದಿಂದ ಕ್ಷೇತ್ರದ ಜನತೆ ನನಗೆ ಆಶೀರ್ವದಿಸಿದ್ದರು. ಈ ಬಾರಿ ಗೆಲುವಿನ ಅಂತರ ಇನ್ನೂ ಹೆಚ್ಚಲಿದೆ ಎಂಬ ವಿಶ್ವಾಸವಿದೆ. ನಾಳೆಯಿಂದಲೇ ಕ್ಷೇತ್ರದಲ್ಲಿ ಮನೆ ಮನೆಗೆ ತೆರಳಿ ಮತಯಾಚನೆ ಮಾಡುತ್ತೇನೆ ಎಂದರು.

ನಾಮಪತ್ರ ಸಲ್ಲಿಸಿ ಮಾತನಾಡಿದ ಬಿಜೆಪಿ ಅಭ್ಯರ್ಥಿ ಡಾ.ಎಂ.ರೇವಣ್ಣ, ಈ ಬಾರಿ ಕ್ಷೇತ್ರದ ಜನತೆ ಬದಲಾವಣೆ ಬಯಸಿದ್ದಾರೆ. ಬಿಜೆಪಿ ಸ್ಥಳೀಯ ಅಭ್ಯರ್ಥಿಯಾದ ನನಗೆ ಚುನಾವಣೆಗೆ ಸ್ಪರ್ಧಿಸಲು ಅವಕಾಶ ಮಾಡಿಕೊಟ್ಟಿದೆ. ಸಮಾಜ ಸೇವೆಯನ್ನು ದೇವರೆಂದು ನಂಬಿರುವ ನನಗೆ ಒಮ್ಮೆ ಕ್ಷೇತ್ರದ ಜನತೆ ಅವಕಾಶ ಮಾಡಿಕೊಟ್ಟರೆ ಕ್ಷೇತ್ರದ ಅಭಿವೃದ್ಧಿಯ ಚಿತ್ರಣ ಬದಲಾಯಿಸುತ್ತೇನೆ. ಕ್ಷೇತ್ರದಲ್ಲಿ ಆಗಬೇಕಾದ ಸಾಕಷ್ಟು ಅಭಿವೃದ್ಧಿ ಕಾರ್ಯಗಳು ಸ್ಥಗಿತಗೊಂಡಿವೆ. ಹಾಗಾಗಿ ನನಗೊಮ್ಮೆ ಅವಕಾಶ ಮಾಡಿಕೊಟ್ಟರೆ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಹಗಲಿರುಳು ದುಡಿಯುತ್ತೇನೆ ಎಂದರು.

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಪ್ರವೀಣ (ಕ): ಬೆ.10.30ಕ್ಕೆ, ಗುರುದೇವ್ ಹೊಯ್ಸಳ (ಕ): ಮ.1.05ಕ್ಕೆ, ದಸರಾ (ತೆ): ಮ.3.45ಕ್ಕೆ, ರಾವಣಾಸುರ (ತೆ): ಸಂ.6.55ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 2	ದಿ ಸೂಪರ್ ಮಾರಿಯೋ ಬ್ರದರ್ಸ್ ಮೂವಿ (3ಡಿ)(ಇಂ): ಬೆ.11ಕ್ಕೆ, ಮ.1.05ಕ್ಕೆ, ಮ.3.10ಕ್ಕೆ, ದಿ ಪೋಪ್ಸ್ ಎಕ್ಸಾರ್ಸಿಸ್ಟ್ (ಇಂ): ಸಂ.5.10ಕ್ಕೆ, ರಾ.7.30ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ರಾಮಾಚಾರಿ 2.0 (ಕ): ಬೆ.10.45ಕ್ಕೆ, ಆಗಸ್ಟ್ 16 1947(ತ): ಮ.1.30ಕ್ಕೆ, ಪೆಂಟಗನ್ (ಕ): ಸಂ.4.20ಕ್ಕೆ, ಗುಮ್ರಾಹ್ (ಹಿಂ): ರಾ.7.30ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 4	ಗುರುದೇವ್ ಹೊಯ್ಸಳ (ಕ): ಬೆ.10.50ಕ್ಕೆ, ರಾ.7.40ಕ್ಕೆ, ರಾ.10.15ಕ್ಕೆ, ವೀರಂ (ಕ): ಮ.1.30ಕ್ಕೆ, ಸಂ.4.35ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಗುರುದೇವ್ ಹೊಯ್ಸಳ (ಕ): ಬೆ.10.20ಕ್ಕೆ, ವೀರಂ (ಕ): ಮ.1.05ಕ್ಕೆ, ರಾ.7.15ಕ್ಕೆ, ರಾವಣಾಸುರ (ತೆ): ಸಂ.4.20ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ದಿ ಪೋಪ್ಸ್ ಎಕ್ಸಾರ್ಸಿಸ್ಟ್ (ಇಂ): ಬೆ.10.25ಕ್ಕೆ, ದಿ ಸೂಪರ್ ಮಾರಿಯೋ ಬ್ರದರ್ಸ್ ಮೂವಿ (3ಡಿ)(ಇಂ): ಮ.12.45ಕ್ಕೆ, ಸಂ.5.40ಕ್ಕೆ, ರಾ.7.50ಕ್ಕೆ, ರಾಮಾಚಾರಿ 2.0(ಕ): ಮ.2.55ಕ್ಕೆ, ದಸರಾ (ತೆ): ರಾ.10ಕ್ಕೆ.
ಸ್ಕ್ರೀನ್ 3	ವೀರಂ (ಕ): ಬೆ.10.10ಕ್ಕೆ, ರಾವಣಾಸುರ (ತೆ): ಮ.1.25ಕ್ಕೆ, ಗುರುದೇವ ಹೊಯ್ಸಳ (ಕ): ಸಂ.4.20ಕ್ಕೆ, ರಾ.9.50ಕ್ಕೆ, ನಮ್ ನಾಣಿ ಮದುವೆ ಪ್ರಸಂಗ (ಕ): ರಾ.7.05ಕ್ಕೆ.
ಸ್ಕ್ರೀನ್ 4	ಪ್ರವೀಣ (ಕ): ಬೆ.11.10ಕ್ಕೆ, ಗುರುದೇವ ಹೊಯ್ಸಳ (ಕ): ಮ.1.45ಕ್ಕೆ, ದಿ ಪೋಪ್ಸ್ ಎಕ್ಸಾರ್ಸಿಸ್ಟ್ (ಇಂ): ಸಂ.4.30ಕ್ಕೆ, ರಾ.10.20ಕ್ಕೆ, ಪೆಂಟಗನ್ (ಕ): ಸಂ.6.50ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಮಂಡಲ (ಕ): ಮ.2.15ಕ್ಕೆ, 1 ರಾಬರಿ ಕಥೆ (ಕ): ಸಂ.4.50ಕ್ಕೆ, ಚೌಕಾಬಾರ (ಕ): ರಾ.7.50ಕ್ಕೆ, ಕ್ರಿಡ್ 3 (ಇಂ): ಬೆ.11.35ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.9.30ಕ್ಕೆ, ಬೆ.11ಕ್ಕೆ, ಮ.1ಕ್ಕೆ, ಮ.2.30ಕ್ಕೆ, ಸಂ.4.30ಕ್ಕೆ, ಸಂ.6ಕ್ಕೆ, ರಾ.8ಕ್ಕೆ, ರಾ.9.30ಕ್ಕೆ, ತುರಮುಖಂ (ಮ): ರಾ.10.30ಕ್ಕೆ, ಅಜಿಲನ್ ಕಿಂಗ್ ಆಫ್ ದಿ ಓಷನ್ (ತ): ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ, ಸ್ಕ್ರೀಮ್ 6 (ಇಂ): ಮ.2.45ಕ್ಕೆ, ರಾ.7.45ಕ್ಕೆ, 65 (ಇಂ): ಮ.12.30ಕ್ಕೆ, ಸಂ.5.30ಕ್ಕೆ, ರಾ.10.30ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	(ದೂ: 2521923)
ಹೊಯ್ಸಳ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರುದ್ರಂ (ತ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಡೇ ಅಂಡ್ ಸಮ್‌ಒನ್ (ತೆ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಪ್ರದರ್ಶನ ಇರುವುದಿಲ್ಲ	
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಉಂಡೆನಾಮ (ಕ)	4 ಪ್ರದರ್ಶನಗಳು
ಗಾಯಿತ್ರಿ	
ವೀರಂ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ವಿದುತಲೈ ಪಾರ್ಟ್–1 (ತ)	4 ಪ್ರದರ್ಶನಗಳು
ಸಂಗಂ	
ಶಂಕುಂತಲಂ (ತೆ)	4 ಪ್ರದರ್ಶನಗಳು
ಲಿಡೋ	
ಉಂಡೆನಾಮ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ವೀರಂ (ಕ)	4 ಪ್ರದರ್ಶನಗಳು
ಪ್ರಭಾ	
ಮಾರಿಗುಡ್ಡದ ಗಡ್ಡಧಾರಿಗಳು (ಕ)	4 ಪ್ರದರ್ಶನಗಳು

ಕೆ.ಆರ್.ನಗರದಲ್ಲಿ ಡಿ.ರವಿಶಂಕರ್, ವೆಂಕಟೇಶ್ ನಾಮಪತ್ರ ಸಲ್ಲಿಕೆ





ಕೆ.ಆರ್.ನಗರ, ಏ.17– ಕೆ.ಆರ್.ನಗರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಿ.ರವಿಶಂಕರ್ ಹಾಗೂ ಬಿಜೆಪಿ ಅಭ್ಯರ್ಥಿ ಹೊಸಹಳ್ಳಿ ವೆಂಕಟೇಶ್ ಸೋಮವಾರ ನಾಮಪತ್ರ ಸಲ್ಲಿಸಿದರು.

ರವಿಶಂಕರ್: ತಮ್ಮ ಕುಟುಂಬದ ಸದಸ್ಯರೊಂದಿಗೆ ತಾಲೂಕು ಕಚೇರಿಗೆ ತೆರಳಿ ಚುನಾವಣಾಧಿಕಾರಿಗಳಿಗೆ ಸಾಂಕೇತಿಕವಾಗಿ ನಾಮಪತ್ರ ಸಲ್ಲಿಸಿ ಮಾತನಾಡಿದ ರವಿಶಂಕರ್, ನಾನು ಏ.19ರಂದು ಕ್ಷೇತ್ರದ ಅಪಾರ ಕಾರ್ಯಕರ್ತರು, ಮುಖಂಡರು ಹಾಗೂ ಅಭಿಮಾನಿಗಳೊಂದಿಗೆ ಮೆರವಣಿಗೆಯಲ್ಲಿ ತೆರಳಿ ನಾಮಪತ್ರ ಸಲ್ಲಿಸಲಿದ್ದೇನೆ. ಇಂದು ಸಾಂಕೇತಿಕವಾಗಿ ನಾಮಪತ್ರ ಸಲ್ಲಿಸಿದ್ದು, ಈ ಬಾರಿ ಕ್ಷೇತ್ರದ ಜನತೆ ನನ್ನ ಕೈ ಹಿಡಿಯಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಈ ವೇಳೆ ಕಾಂಗ್ರೆಸ್ ಮುಖಂಡ ದೊಡ್ಡಸ್ವಾಮೇಗೌಡ, ಡಿ.ರವಿಶಂಕರ್ ತಾಯಿ ವನಜಾಕ್ಷಮ್ಮ, ಪತ್ನಿ ಸುನಿತಾ ರವಿಶಂಕರ್, ನಗರಾಧ್ಯಕ್ಷ ಎಂ.ಜೆ.ರಮೇಶ್ ಇದ್ದರು.

ಹೊಸಹಳ್ಳಿ ವೆಂಕಟೇಶ್: ನಾಮಪತ್ರ ಸಲ್ಲಿಕೆಗೂ ಮುನ್ನ ಪಟ್ಟಣದ ತೋಪಮ್ಮ ದೇವಸ್ಥಾನದಲ್ಲಿ ಪತ್ನಿ ನಳಿನಾಕ್ಷಿ ಸೇರಿದಂತೆ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರರೊಂದಿಗೆ ವಿಶೇಷ ಪೂಜೆ ಸಲ್ಲಿಸಿದ ನಂತರ ತೆರೆದ ವಾಹನದಲ್ಲಿ ಮೆರವಣಿಗೆ ಮೂಲಕ ಗರುಡಗಂಭ ವೃತ್ತದ ಮಾರ್ಗದಲ್ಲಿ ಸಾಗಿ ತಾಲೂಕು ಆಡಳಿತ ಸೌಧದಲ್ಲಿ ಚುನಾವಣಾಧಿಕಾರಿಗೆ ನಾಮಪತ್ರ ಸಲ್ಲಿಸಿದರು. ಹೊಸಹಳ್ಳಿ ವೆಂಕಟೇಶ್ ಮಾತನಾಡಿ, ಕಳೆದ 25 ವರ್ಷಗಳಿಂದ ಕ್ಷೇತ್ರದ ಜನರ ಕಷ್ಟ ಸುಖಗಳಿಗೆ ಭಾಗಿಯಾಗಿದ್ದೇನೆ. ಪಕ್ಷ ನನ್ನ ಸೇವೆ ಗುರುತಿಸಿ ಈ ಬಾರಿ ಟಿಕೆಟ್ ನೀಡಿದೆ. ಯಾವುದೇ ಕಾರಣಕ್ಕೂ ಈ ನಿಮ್ಮ ಹೊಸಹಳ್ಳಿ ವೆಂಕಟೇಶ್ ಮಾರಿಕೊಳ್ಳುವ ವಸ್ತು ಅಲ್ಲ. ಕಾಂಗ್ರೆಸ್ ಮತ್ತು ಜೆಡಿಎಸ್ ಪಕ್ಷದ ಅಭ್ಯರ್ಥಿಗಳ ಅಪಪ್ರಚಾರಕ್ಕೆ ಮತದಾರರು ಕಿವಿಗೊಡದೆ ಈ ಬಾರಿ ನನಗೆ ಆಶೀರ್ವದಿಸಿ ಶಾಸಕನಾಗಿ ಆಯ್ಕೆ ಮಾಡಿ ಎಂದು ಮನವಿ ಮಾಡಿದರು.

ಈ ವೇಳೆ ಜಿಲ್ಲಾ ಬಿಜೆಪಿ ಅಧ್ಯಕ್ಷೆ ಮಂಗಳಾ ಸೋಮಶೇಖರ್, ಕರ್ನಾಟಕ ವಸ್ತು ಪ್ರಾಧಿಕಾರದ ಮಾಜಿ ಅಧ್ಯಕ್ಷ ಮಿರ್ಲೆ ಶ್ರೀನಿವಾಸ್ ಗೌಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರಭಾಕರ್ ಜೈನ್, ತಾಲೂಕು ಬಿಜೆಪಿ ಅಧ್ಯಕ್ಷ ಕೆ.ವೈ. ಮಂಜು, ತಾಲೂಕು ಬಿಜೆಪಿ ಮಹಿಳಾ ಘಟಕದ ಅಧ್ಯಕ್ಷೆ ದಾಕ್ಷಾಯಿಣಿ, ಮುಖಂಡರಾದ ಅನಿಲ್, ಧರ್ಮ, ಅರವಿಂದ್, ಪುರಸಭಾ ಸದಸ್ಯೆ ವೀಣಾ, ಭಾಜಪ ಮಾಧ್ಯಮ ವಕ್ತಾರ ನಾಗೇಶ್, ಸಾ.ರಾ. ತಿಲಕ್ ಸೇರಿದಂತೆ ಕಾರ್ಯಕರ್ತರು ಮತ್ತು ಮುಖಂಡರು ಹಾಜರಿದ್ದರು.

ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿಸಲು ಮನವಿ



ಮಲ್ಕುಂಡಿ, ಏ.17– ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ದರ್ಶನ್ ಧ್ರುವನಾರಾಯಣ್ ಅವರನ್ನು ಬೆಂಬಲಿಸುವಂತೆ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಕುರಹಟ್ಟಿ ಕೆ.ಜಿ.ಮಹೇಶ್ ಮನವಿ ಮಾಡಿದರು.

ಈ ಸಂಬಂಧ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಅವರು, ಕ್ಷೇತ್ರದ ಅಭಿವೃದ್ಧಿ ಕುಂಠಿತವಾಗಿದೆ. ಹೀಗಾಗಿ ಕ್ಷೇತ್ರದ ಅಭಿವೃದ್ಧಿಗಾಗಿ ಕಾಂಗ್ರೆಸ್ ಅಭ್ಯರ್ಥಿ ದರ್ಶನ್ ಧ್ರುವನಾರಾಯಣ್ ಅವರನ್ನು ಜನತೆ ಈ ಬಾರಿಯ ಚುನಾವಣೆಯಲ್ಲಿ ಅತ್ಯಧಿಕ ಮತಗಳಿಂದ ಗೆಲ್ಲಿಸಿಕೊಡಬೇಕು ಎಂದು ಮನವಿ ಮಾಡಿದರು. ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ್ ಸಂಸದರಾಗಿದ್ದ ವೇಳೆ ಕ್ಷೇತ್ರದ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನ ನೀಡಿ ಶ್ರಮಿಸಿದ್ದಾರೆ. ಈ ಬಾರಿಯ ಚುನಾವಣೆಯಲ್ಲಿ ಅವರು ನಂಜನಗೂಡಿನಿಂದ ಸ್ಪರ್ಧಿಸುವ ಇಚ್ಛೆ ಹೊಂದಿದ್ದರು. ಆದರೆ ಅವರು ನಿಧನರಾಗಿರುವುದು ರಾಜ್ಯಕ್ಕೆ ತುಂಬಲಾರದ ನಷ್ಟವಾಗಿದೆ. ಕ್ಷೇತ್ರದ ಹಿತದೃಷ್ಟಿಯಿಂದ ಕಾಂಗ್ರೆಸ್ ಹೈಕಮಾಂಡ್ ದರ್ಶನ್ ಧ್ರುವನಾರಾಯಣ್ ಅವರನ್ನು ಗೆಲ್ಲಿಸಿಕೊಡಬೇಕು ಎಂದು ತಿಳಿಸಿದರು.



ತಿ.ನರಸೀಪುರ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ರೇವಣ್ಣ ಸುತ್ತೂರು ಶಾಖಾ ಮಠಕ್ಕೆ ಭೇಟಿ ನೀಡಿ, ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರ ಆಶೀರ್ವಾದ ಪಡೆದರು. ಈ ವೇಳೆ ಮುಖಂಡ ದಯಾನಂದ ಪಟೇಲ್ ಇದ್ದರು.

ಬಿಜೆಪಿ ಅಭ್ಯರ್ಥಿ ಕೃಷ್ಣನಾಯಕ ಗೆಲುವಿಗೆ ಶ್ರಮಿಸಿ



ಸರಗೂರು, ಏ.17– ಕ್ಷೇತ್ರದ ಮತದಾರರ ಆಶೀರ್ವಾದಿಂದ ಈ ಬಾರಿ ಕೋಟೆಯಲ್ಲಿ ಬಿಜೆಪಿ ಅಭ್ಯರ್ಥಿ ಕೃಷ್ಣ ನಾಯಕ ಗೆಲುವು ಸಾಧಿಸಲಿದ್ದಾರೆ. ಹೀಗಾಗಿ ಕಾರ್ಯಕರ್ತರು ಪಕ್ಷ ಸಂಘಟಿಸುವ ಮೂಲಕ ಅವರ ಗೆಲುವಿಗೆ ಶ್ರಮಿಸಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಸಂಘದ ತಾಲೂಕು ಅಧ್ಯಕ್ಷ ಡಿ.ಜಿ.ಶಿವರಾಜು ತಿಳಿಸಿದರು.

ತಾಲೂಕಿನ ದಡದಹಳ್ಳಿಯಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಬಿಜೆಪಿ ಹಿರಿಯ ಮುಖಂಡರಾದ ಸಿದ್ದರಾಜು, ಅಪ್ಪಣ್ಣ, ಕೃಷ್ಣಸ್ವಾಮಿ ಅವರ ಮಾರ್ಗದರ್ಶನದಲ್ಲಿ ಪಕ್ಷದ ಕಾರ್ಯಚಟುವಟಿಕೆಗಳು ನಡೆಯಲಿವೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ಜನಪರ ಯೋಜನೆಗಳನ್ನು ಕ್ಷೇತ್ರದ ಮನೆ ಮನೆಗೂ ತಲುಪಿಸುವ ಮೂಲಕ ಈ ಬಾರಿ ಕೃಷ್ಣ ನಾಯಕ ಅವರ ಗೆಲುವಿಗೆ ಶ್ರಮಿಸಬೇಕು ಎಂದರು. ಇದೇ ವೇಳೆ ಗ್ರಾಮಕ್ಕೆ ಆಗಮಿಸಿದ ಕೃಷ್ಣನಾಯಕ ಶ್ರೀಮಠಕ್ಕೆ ತೆರಳಿ ಷಡಕ್ಷರಿ ಸ್ವಾಮೀಜಿ ಅವರ ಆಶೀರ್ವಾದ ಪಡೆದರು. ಬಳಿಕ ಮಾತನಾಡಿದ ಅವರು, ಈ ಚುನಾವಣೆಯಲ್ಲಿ ಪಕ್ಷದ ಗೆಲುವಿಗಾಗಿ ಪ್ರತಿಯೊಬ್ಬರೂ ಶ್ರಮಿಸಬೇಕು ಎಂದರು. ಇದೇ ವೇಳೆ ಕೃಷ್ಣ ನಾಯಕ ಅವರನ್ನು ಸನ್ಮಾನಿಸಲಾಯಿತು. ತಾಲೂಕು ಬಿಜೆಪಿ ಅಧ್ಯಕ್ಷ ಹಂಚೀಪುರ ಗುರುಸ್ವಾಮಿ, ಗ್ರಾಮದ ಮುಖಂಡರಾದ ಡಿ.ಮಲ್ಲಪ್ಪ, ಕೆ.ಗುರುಸ್ವಾಮಿ, ಶಾಂತಮಲ್ಲಪ್ಪ, ಡಿ.ಎಸ್.ಮಹದೇವಪ್ಪ, ಪಪಂ ಉಪಾಧ್ಯಕ್ಷ ವಿನಯ್‌ಪ್ರಸಾದ್, ಎಸ್.ಮುನಿ, ಡಿ.ಎಸ್. ಶಿವಪ್ಪ, ಕೆ.ಎಂ.ಗುರು, ಮಂಜು, ಸಕಲೇಶ್, ತಾಪಂ ಮಾಜಿ ಸದಸ್ಯರಾದ ಮಹದೇವಸ್ವಾಮಿ, ಬಸವಣ್ಣ, ತೇಜ, ಮಾದಪ್ಪ, ರವೀಶ, ಶೇಖರ್ ಹಾಗೂ ಇನ್ನಿತರರಿದ್ದರು.

ಹುಣಸೂರಲ್ಲಿ ಶಾಸಕ ಹೆಚ್.ಪಿ.ಮಂಜುನಾಥ್ ಮತಯಾಚನೆ



ಹುಣಸೂರು, ಏ.17–ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಬಡ ಕುಟುಂಬದ ಮಹಿಳೆಯರಿಗೆ ಪ್ರತಿ ತಿಂಗಳು 2 ಸಾವಿರ ರೂ. ನೀಡಲಿದೆ ಎಂದು ಕಾಂಗ್ರೆಸ್ ಅಭ್ಯರ್ಥಿ, ಶಾಸಕ ಹೆಚ್.ಪಿ.ಮಂಜುನಾಥ್ ತಿಳಿಸಿದರು. ನಗರದ 7ನೇ ವಾರ್ಡ್‌ನಲ್ಲಿ ಜೆಡಿಎಸ್ ಮುಖಂಡರನ್ನು ಕಾಂಗ್ರೆಸ್ ಪಕ್ಷಕ್ಕೆ ಬರಮಾಡಿಕೊಂಡು, ಮತಯಾಚಿಸಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಲ್ಲಿ ಪ್ರತಿ ಬಿಪಿಎಲ್ ಕುಟುಂಬದ ಮಹಿಳೆಗೆ ಪ್ರತಿ ತಿಂಗಳು 2 ಸಾವಿರ ರೂ.ನಂತೆ ವರ್ಷಕ್ಕೆ 24 ಸಾವಿರ ರೂ ಕೊಡಲಿದೆ. ಇದರೊಂದಿಗೆ ಪ್ರತಿ ಮನೆಗೂ 200 ಯೂನಿಟ್ ಉಚಿತ ವಿದ್ಯುತ್, ಪ್ರತಿ ವ್ಯಕ್ತಿಗೆ 10 ಕೆಜಿ ಅಕ್ಕಿ ಉಚಿತವಾಗಿ ನೀಡುವುದಾಗಿ ಪ್ರಣಾಳಿಕೆಯಲ್ಲಿ ತಿಳಿಸಿದೆ.

ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರುವುದು ಸೂರ್ಯ ಚಂದ್ರರಷ್ಟೇ ಸತ್ಯ. ಇದರಲ್ಲಿ ಸಂಶಯವೇ ಇಲ್ಲ. ನಾನು ರಾಜಕೀಯಕ್ಕೆ ಬಂದಿರುವುದು ದುಡ್ಡು ಮಾಡಲು ಅಲ್ಲ. ಬಡವರ ಸೇವೆ ಮಾಡಲು. ನನ್ನ ಹಿಂದೆಯೂ ಗೆಲ್ಲಿಸಿದ್ದೀರಿ. ನಿಮ್ಮೆಲ್ಲರ ಆಶೀರ್ವಾದದಿಂದ ಈ ಬಾರಿ ಗೆದ್ದರೆ ಸಚಿವನಾಗುವ ಅವಕಾಶವಿದೆ. ನನ್ನ ಅಧಿಕಾರವಧಿಯಲ್ಲಿ ತಾಲೂಕಿನ ಅಭಿವೃದ್ಧಿಗೆ ಶ್ರಮಿಸಿದ್ದೇನೆ ಎಂದರು.

ತಾಲೂಕಿನಲ್ಲಿ ಉಚಿತ ಆರೋಗ್ಯ ಸೇವೆ, ವೃದ್ಧರಿಗೆ ಕಣ್ಣಿನ ತಪಾಸಣೆ, ಕೋವಿಡ್ ವೇಳೆ ಆಹಾರದ ಕಿಟ್ ವಿತರಣೆ ಸೇರಿದಂತೆ ನಿಮ್ಮ ಕಷ್ಟ ಕಾಲದಲ್ಲಿ ಸಹಕಾರ ನೀಡಿದ್ದೇನೆ. ನಿಮ್ಮೆಲ್ಲರ ಅಭಿಮಾನ ಆಶೀರ್ವಾದ ಸದಾ ನನ್ನ ಮೇಲಿರಲಿ. ಈ ಬಾರಿ ಅತೀ ಹೆಚ್ಚಿನ ಮತ ನೀಡಿ ನನ್ನನ್ನು ಆಯ್ಕೆ ಮಾಡುವ ವಿಶ್ವಾಸವಿದೆ ಎಂದರು.

ಈ ವೇಳೆ ಕಾಂಗ್ರೆಸ್ ಅಧ್ಯಕ್ಷರಾದ ರಮೇಶ್, ಟಿ.ವಿ.ನಾರಾಯಣ್, ಕಾರ್ಯಾಧ್ಯಕ್ಷ ವಕೀಲ ಪುಟ್ಟರಾಜ್, ನಗರಸಭೆ ಸದಸ್ಯರಾದ ಸ್ವಾಮಿಗೌಡ, ದೇವ ನಾಯಕ, ಅನುಷಾ, ಟಿಂಬರ್ ಉದ್ಯಮಿಗಳಾದ ಮಹೇಶ್, ಅಶೋಕ್, ಸಂತೋಷ್, ಶೇಖರ್, ರವಿಕುಮಾರ್, ಮಹೇಶ್, ಲೋಕೇಶ್, ಕುಮಾರ್, ವಕೀಲ ಸತೀಶ್, ಮದನ್ ಸೇರಿದಂತೆ ಇತರರಿದ್ದರು

ಕೋಟೆಯಲ್ಲಿ 'ಕೈ' ಅಭ್ಯರ್ಥಿ ಅನಿಲ್, ಜೆಡಿಎಸ್ ಅಭ್ಯರ್ಥಿ ಜಯಪ್ರಕಾಶ್ ನಾಮಪತ್ರ ಸಲ್ಲಿಕೆ





ಹೆಚ್.ಡಿ.ಕೋಟೆ, ಏ.17– ಹೆಚ್.ಡಿ.ಕೋಟೆ ಎಸ್‌ಟಿ ಮೀಸಲು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ, ಶಾಸಕ ಅನಿಲ್ ಚಿಕ್ಕಮಾದು ಹಾಗೂ ಜೆಡಿಎಸ್ ಅಭ್ಯರ್ಥಿ ಜಯಪ್ರಕಾಶ್ ಚಿಕ್ಕಣ್ಣ ಸೋಮವಾರ ನಾಮಪತ್ರ ಸಲ್ಲಿಸಿದರು. ಇವರಿಬ್ಬರೂ ಪ್ರತ್ಯೇಕವಾಗಿ ಸಾವಿರಾರು ಮುಖಂಡರು, ಕಾರ್ಯಕರ್ತರು ಹಾಗೂ ಬೆಂಬಲಿಗರೊಂದಿಗೆ ತಾಲೂಕು ಕಚೇರಿಗೆ ಆಗಮಿಸಿ ಚುನಾವಣಾಧಿಕಾರಿ ಕುಮುದಾ ಶರತ್ ಅವರಿಗೆ ನಾಮಪತ್ರ ಸಲ್ಲಿಸಿದರು.

ಅನಿಲ್ ಚಿಕ್ಕಮಾದು: ತಾಯಿ ನಾಗಮ್ಮ ಹಾಗೂ ಅಪಾರ ಬೆಂಬಲಿಗರೊಂದಿಗೆ ಬೆಳಗ್ಗೆ ತಾಲೂಕಿನ ಶಕ್ತಿದೇವತೆ ಚಿಕ್ಕದೇವಮ್ಮ ಬೆಟ್ಟಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದ ಶಾಸಕ ಅನಿಲ್ ಚಿಕ್ಕಮಾದು, ಪಟ್ಟಣದ ಮೇಟಿಕುಪ್ಪೆ ರಸ್ತೆಯಲ್ಲಿರುವ ಮಹದೇಶ್ವರ ದೇವಸ್ಥಾನದ ಆವರಣದಿಂದ ತೆರೆದ ವಾಹನದಲ್ಲಿ ತಮ್ಮ ಅಪಾರ ಬೆಂಬಲಿಗರೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ತಾಲೂಕು ಕಚೇರಿಗೆ ಆಗಮಿಸಿದರು. ಈ ವೇಳೆ ಮೆರವಣಿಗೆಯಲ್ಲಿ ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್, ದಿ.ಆರ್. ಧ್ರುವನಾರಾಯಣ್, ದಿ.ಚಿಕ್ಕಮಾದು, ನಟ ದಿ.ಪುನೀತ್ ರಾಜ್‌ಕುಮಾರ್, ಸುದೀಪ್ ಫೋಟೋಗಳು ಹಾಗೂ ಕಾಂಗ್ರೆಸ್ ಬಾವುಟ ರಾರಾಜಿಸಿದವು. ಉರಿ ಬಿಸಿಲಿನ ನಡುವೆಯೂ ಕಾಂಗ್ರೆಸ್ ಕಾರ್ಯಕರ್ತರು ಪಕ್ಷಗಳ ಚಿನ್ಹೆ ಇರುವ ಟೋಪಿ ಧರಿಸಿ ಅಭ್ಯರ್ಥಿ ಪರ ಜೈಕಾರ ಕೂಗಿದರು. ತಾಲೂಕು ಕಚೇರಿಯಲ್ಲಿ ಚುನಾವಣಾಧಿಕಾರಿ ಕುಮುದಾ ಶರತ್ ಅವರಿಗೆ ಅನಿಲ್ ಚಿಕ್ಕಮಾದು ನಾಮಪತ್ರ ಸಲ್ಲಿಸುವ ವೇಳೆ ಹೆಚ್.ಸಿ. ನರಸಿಂಹಮೂರ್ತಿ, ಈರೇಗೌಡ, ಶಂಭುಲಿಂಗ ನಾಯಕ, ಏಜಾಜ್ ಪಾಷ, ಬಿ.ವಿ.ಬಸವರಾಜು ಸಾಥ್ ನೀಡಿದರು.

ಶಾಸಕ ಅನಿಲ್ ಚಿಕ್ಕಮಾದು ಮಾತನಾಡಿ, ನಿರೀಕ್ಷೆಗೂ ಮೀರಿ ತಾಲೂಕಿನ ಜನತೆ ಆಗಮಿಸಿರುವುದು ನನಗೆ ಸಂತಸ ತಂದಿದೆ. ಈ ಬಾರಿಯ ಚುನಾವಣೆಯಲ್ಲಿ ನನಗೆ ಆಶೀರ್ವಾದ ಮಾಡುವ ಮೂಲಕ 2ನೇ ಬಾರಿ ಶಾಸಕರನ್ನಾಗಿ ಆಯ್ಕೆ ಮಾಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ವೇಳೆ ಯೂತ್ ಕಾಂಗ್ರೆಸ್ ಅಧ್ಯಕ್ಷ ನಯಾಜ್, ಜಿಪಂ ಮಾಜಿ ಸದಸ್ಯರಾದ ನಂದಿನಿ, ಭಾಗ್ಯಲಕ್ಷ್ಮಿ, ಎಚ್.ಸಿ. ಮಂಜುನಾಥ್, ಬಿ.ವಿ.ಬಸವರಾಜು, ಚಿಕ್ಕವೀರನಾಯ್ಕ, ಮುಖಂಡರಾದ ಸತೀಶ್‌ಗೌಡ, ಶಂಭುಲಿಂಗನಾಯಕ ಸೋಮೇಶ್, ನರಸಿಂಹಮೂರ್ತಿ, ಗಣೇಶ್ ಆಚಾರ್, ನಾಗರಾಜ್, ರಾಜನಾಯಕ, ರಾಜು, ವೀರೇಂದ್ರ ಪರಶಿವಮೂರ್ತಿ, ಆಸಿಫ್ ಮಧು, ವೆಂಕಟೇಶ್, ರಾಜನಾಯಕ, ಪುಟ್ಟಬಸವ ನಾಯಕ, ಮರಿದೇವಯ್ಯ ಸೇರಿದಂತೆ ಸಾವಿರಾರು ಕಾರ್ಯಕರ್ತರು, ಮುಖಂಡರು, ಅಭಿಮಾನಿಗಳಿದ್ದರು.

ಜಯಪ್ರಕಾಶ್ ಚಿಕ್ಕಣ್ಣ: ಇಂದು ಬೆಳಗ್ಗೆ ತಾಲೂಕಿನ ಚಿಕ್ಕದೇವಮ್ಮನ ಬೆಟ್ಟದಲ್ಲಿ ತಂದೆ ಮಾಜಿ ಶಾಸಕ ಬೀಚನಹಳ್ಳಿ ಚಿಕ್ಕಣ್ಣ, ತಾಯಿ ಮಹದೇವಮ್ಮ, ಪತ್ನಿ ಮಂಜುಳಾ, ಸಹೋದರಿಯರಾದ ಸುಮಾ, ಮಂಜುಳಾ ಹಾಗೂ ಕಾರ್ಯಕರ್ತರೊಂದಿಗೆ ವಿಶೇಷ ಪೂಜೆ ಸಲ್ಲಿಸಿದ ಜಯಪ್ರಕಾಶ್ ಚಿಕ್ಕಣ್ಣ ಪಟ್ಟಣದ ಚಾಮುಂಡೇಶ್ವರಿ ದೇವಾಲಯದಲ್ಲಿ ಪೂಜೆ ಸಲ್ಲಿಸಿ ಅಲ್ಲಿಂದ ಮೆರವಣಿಗೆಯಲ್ಲಿ ತಾಲೂಕು ಕಚೇರಿಗೆ ತೆರಳಿ, ತಂದೆ ಮಾಜಿ ಶಾಸಕ ಚಿಕ್ಕಣ್ಣ, ತಾಲೂಕು ಜೆಡಿಎಸ್ ಅಧ್ಯಕ್ಷ ರಾಜೇಂದ್ರ, ಗೋಪಾಲಸ್ವಾಮಿ, ಮುಖಂಡ ಸುರೇಂದ್ರ ಅವರೊಂದಿಗೆ ಚುನಾವಣಾಧಿಕಾರಿ ಕುಮುದಾ ಶರತ್ ಅವರಿಗೆ ನಾಮಪತ್ರ ಸಲ್ಲಿಸಿದರು. ಜಯಪ್ರಕಾಶ್ ಚಿಕ್ಕಣ್ಣ ಮಾತನಾಡಿ, ಪಟ್ಟಣಕ್ಕೆ ಪಂಚರತ್ನ ರಥಯಾತ್ರೆ ವೇಳೆ ಆಗಮಿಸಿದ್ದ ಮಾಜಿ ಸಿಎಂ ಕುಮಾರಸ್ವಾಮಿ ಅವರು ಈ ಬಾರಿ ನನ್ನನ್ನು ಆಶೀರ್ವದಿಸಿ, ಗೆಲ್ಲಿಸುವಂತೆ ಮನವಿ ಮಾಡಿದ್ದಾರೆ. ತಾಲೂಕಿನ ಸಮಗ್ರ ಅಭಿವೃದ್ಧಿಗಾಗಿ ಈ ಬಾರಿ ಜನತೆ ನನಗೆ ಆಶೀರ್ವಾದ ಮಾಡಲಿದ್ದಾರೆ ಎಂಬ ನಂಬಿಕೆ ನನಗಿದೆ. ನಾಮಪತ್ರ ಸಲ್ಲಿಕೆ ವೇಳೆ ಆಗಮಿಸಿದ ಸಾವಿರಾರು ಮಂದಿ ಕಾರ್ಯಕರ್ತರು, ಮುಖಂಡರು ಹಾಗೂ ಅಭಿಮಾನಿಗಳಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ಈ ವೇಳೆ ಎಂ.ಸಿ.ದೊಡ್ಡ ನಾಯಕ, ಪುರಸಭಾಧ್ಯಕ್ಷೆ ಅನಿತಾ, ಜೆಡಿಎಸ್ ಜಿಲ್ಲಾ ಅಧ್ಯಕ್ಷ ನರಸಿಂಹಸ್ವಾಮಿ, ಕೋಟೆ ಸರಗೂರು ತಾಲೂಕು ಅಧ್ಯಕ್ಷರಾದ ರಾಜೇಂದ್ರ, ಗೋಪಾಲಸ್ವಾಮಿ, ಜಿಪಂ ಮಾಜಿ ಸದಸ್ಯರಾದ ಹೆಚ್.ಸಿ.ಶಿವಣ್ಣ, ಎಂ.ಪಿ. ನಾಗರಾಜ್, ತಾಲೂಕು ಅಧ್ಯಕ್ಷೆ ಗಾಯತ್ರಿ, ಮುಖಂಡರಾದ ನರಸಿಂಹೇಗೌಡ, ಚಾ.ನಂಜುಂಡ ಮೂರ್ತಿ, ಸುರೇಂದ್ರ ಡಿ.ಗೌಡ, ನಾರಾಯಣಗೌಡ, ಡಿ.ಆರ್.ಮಹೇಶ್, ನಾಗನಾಯಕ, ರಾಜು, ಕೃಷ್ಣ, ಅನು, ಕಲೀಮ್, ಪರಶಿವಮೂರ್ತಿ, ಯೋಗೇಶ್, ನಿಂಗನಾಯಕ, ನಾಗರಾಜು ತಿಮ್ಮಯ್ಯ, ಕಾಳೇಗೌಡ, ಗುರುಸ್ವಾಮಿ, ಶಶಿ ಸೇರಿದಂತೆ ಇನ್ನಿತರರಿದ್ದರು.

ಮಾತಿನ ಚಕಮಕಿ

ಕಾಂಗ್ರೆಸ್ ಅಭ್ಯರ್ಥಿ ಅನಿಲ್ ಚಿಕ್ಕಮಾದು ಹಾಗೂ ಜೆಡಿಎಸ್ ಅಭ್ಯರ್ಥಿ ಜಯಪ್ರಕಾಶ್ ಚಿಕ್ಕಣ್ಣ ಪಟ್ಟಣದ ತಾಲೂಕು ಕಚೇರಿಯಲ್ಲಿ ನಾಮಪತ್ರ ಸಲ್ಲಿಸುವ ವೇಳೆ ಜೆಡಿಎಸ್, ಕಾಂಗ್ರೆಸ್ ಕಾರ್ಯಕರ್ತರ ನಡುವೆ ತಳ್ಳಾಟ, ಮಾತಿನ ಚಕಮಕಿ ನಡೆಯಿತು. ಈ ವೇಳೆ ಪೊಲೀಸರು ಲಾಠಿ ಬೀಸಿ ಎಲ್ಲರನ್ನೂ ಚದುರಿಸುವ ಮೂಲಕ ಸುಗಮ ರೀತಿಯಲ್ಲಿ ನಾಮಪತ್ರ ಸಲ್ಲಿಸಲು ಅವಕಾಶ ಮಾಡಿಕೊಟ್ಟರು.

‘ಕಮಲ’ ಬಿಟ್ಟು ‘ಕೈ’ ಹಿಡಿದ ಜಗದೀಶ್ ಶೆಟ್ಟರ್

● ಸ್ವಾಭಿಮಾನಕ್ಕೆ ಧಕ್ಕೆ ಬಂದಿದ್ದರಿಂದ ಬಿಜೆಪಿ ತೊರೆದೆ ● ಪಕ್ಷ ನನಗೆ ಅನ್ಯಾಯ ಮಾಡಿಲ್ಲ, ಅಲ್ಲಿನ ಕೆಲವರಿಂದ ಅನ್ಯಾಯವಾಗಿದೆ ● ಪಕ್ಷ ಬಿಟ್ಟೆನೆಂದು ಬಿಜೆಪಿ ಟೀಕಿಸುವುದಿಲ್ಲ ● ಕಾಂಗ್ರೆಸ್ ಸೇರ್ಪಡೆ ನಂತರ ಶೆಟ್ಟರ್ ಮಾತು



ಬೆಂಗಳೂರು, ಏ. 17 (ಕೆಎಂಶಿ)– ಭಾರತೀಯ ಜನತಾ ಪಕ್ಷದ ಗುಜರಾತ್ ವಿಧಾನಸಭೆ ಚುನಾವಣಾ ತಂತ್ರಗಾರಿಕೆ ಕರ್ನಾಟಕ ಮಟ್ಟಿಗೆ ಮುಳುವಾಗಿದ್ದು, ಆ ಪಕ್ಷದ ಮುಖಂಡರು ಸರದಿ ಸಾಲಿನಲ್ಲಿ ಬಂಡಾಯದ ಬಾವುಟ ಹಾರಿಸಿದ್ದಾರೆ.

ವಿಧಾನಸಭಾ ಚುನಾವಣೆಗೆ ಸ್ಪರ್ಧಿಸಲು ಟಿಕೆಟ್ ನಿರಾಕರಿಸಿದ ಹಿನ್ನೆಲೆಯಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿಯ ಹಿರಿಯ ನಾಯಕ ಜಗದೀಶ್‌ಶೆಟ್ಟರ್ ಪಕ್ಷ ತೊರೆದು, ಕಾಂಗ್ರೆಸ್ ಸೇರ್ಪಡೆಗೊಂಡಿದ್ದಾರೆ. ಪ್ರದೇಶ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ನಡೆದ ಕಾರ್ಯಕ್ರಮದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್ ಸಮ್ಮುಖದಲ್ಲಿ ಕಾಂಗ್ರೆಸ್‌ಗೆ ಸೇರ್ಪಡೆಗೊಂಡರು. ಜನಸಂಘ ಮತ್ತು ಬಿಜೆಪಿಯಲ್ಲಿ ಸಕ್ರಿಯವಾಗಿದ್ದ ಶೆಟ್ಟರ್ ಶಾಸಕರಾಗಿ, ವಿಧಾನಸಭೆಯ ಪ್ರತಿಪಕ್ಷದ ನಾಯಕರಾಗಿ, ಸಭಾಧ್ಯಕ್ಷರಾಗಿ, ಸಚಿವರಾಗಿ ಹಾಗೂ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದರು. ಕಾಂಗ್ರೆಸ್ ಸೇರ್ಪಡೆಗೊಂಡ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕದಲ್ಲಿ ಬಿಜೆಪಿ ಕಟ್ಟಿ ಬೆಳೆಸಿದ ಪ್ರಮುಖರಲ್ಲಿ ನಾನೂ ಒಬ್ಬ. ಆದರೆ ಈ ಚುನಾವಣೆಯಲ್ಲಿ ಪಕ್ಷ ಟಿಕೆಟ್ ನಿರಾಕರಿಸುವ ಮೂಲಕ ಕೆಲ ಮುಖಂಡರು ನನಗೆ ಅಪಮಾನ ಮಾಡಿದರು. ಸ್ವಾಭಿಮಾನಕ್ಕೆ ಧಕ್ಕೆ ಬಂದಿರುವುದರಿಂದ ನಾನು ಬಿಜೆಪಿಯ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿ, ಕಾಂಗ್ರೆಸ್ ಸೇರಿದ್ದೇನೆ ಎಂದು ತಿಳಿಸಿದರು.

ಬಿಜೆಪಿ ತೊರೆದೆನೆಂದು ಆ ಪಕ್ಷವನ್ನು ಟೀಕಿಸುವುದಿಲ್ಲ. ಅಲ್ಲಿನ ಕೆಲವರಿಂದ ನನಗೆ ಅನ್ಯಾಯವಾಗಿದೆ. ಆ ಬಗ್ಗೆ ಬೇಸರವಿದೆ. ಕೆಲವರ ಷಡ್ಯಂತರದಿಂದ ಪಕ್ಷ ಬಿಡಬೇಕಾಯಿತು. ಪಕ್ಷ ನನಗೆ ಅನ್ಯಾಯ ಮಾಡಿಲ್ಲ. ಹಾಗಾಗಿ ನಾನು ಬಿಜೆಪಿಯನ್ನು ನಿಂದಿಸುವುದಿಲ್ಲ, ಟೀಕಿಸುವುದಿಲ್ಲ. ಜನರ ವಿಶ್ವಾಸವಿರುವವರೆಗೂ ರಾಜಕೀಯದಲ್ಲಿರುತ್ತೇನೆ ಎಂದರು. ಜಗದೀಶ್ ಶೆಟ್ಟರ್ ಅವರನ್ನು ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡ ನಂತರ ಮಾತನಾಡಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಶೆಟ್ಟರ್ ಅವರು ಸಂಘ ಪರಿವಾರದ ಮೂಲದವರು. ಎಂದೂ ಕೂಡಾ ಜನ ವಿರೋಧಿಯಾಗಿ ನಡೆದುಕೊಂಡಿರಲಿಲ್ಲ. ಅವರೊಬ್ಬ ಸಜ್ಜನ ರಾಜಕಾರಣಿ ಎಂದು ಬಣ್ಣಿಸಿದರಲ್ಲದೆ, ಶೆಟ್ಟರ್ ಸೇರ್ಪಡೆಯಿಂದ ಪಕ್ಷಕ್ಕೆ ಹೆಚ್ಚಿನ ಬಲ ಬಂದಿದೆ. ಇದು ರಾಷ್ಟ್ರ ಮಟ್ಟದಲ್ಲೂ ಬದಲಾವಣೆಯ ದಿಕ್ಸೂಚಿಯಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ, ಜಗದೀಶ್ ಶೆಟ್ಟರ್ ಅವರ ಸೇರ್ಪಡೆಯಿಂದ ಕಾಂಗ್ರೆಸ್‌ಗೆ ಬಲ ಬಂದಿದ್ದು, 150 ಕ್ಕೂ ಹೆಚ್ಚು ಸ್ಥಾನ ಗೆಲ್ಲಲಿದೆ ಎಂದರು.

ಶೆಟ್ಟರ್ ಅವರನ್ನು ಆತ್ಮೀಯವಾಗಿ ಕಾಂಗ್ರೆಸ್ ಪಕ್ಷಕ್ಕೆ ಸ್ವಾಗತಿಸುತ್ತೇನೆ. ಶೆಟ್ಟರ್ ಅವರು ಕರ್ನಾಟಕ ಕಂಡ ಸಜ್ಜನ ರಾಜಕಾರಣಿ. ಅವರು ಆರ್‌ಎಸ್‌ಎಸ್‌ನಿಂದ ಬಂದಿದ್ದರೂ ಜಾತ್ಯಾತೀತ ತತ್ವದ ಮೇಲೆಯೇ ಕೆಲಸ ಮಾಡಿದ್ದಾರೆ. ನಾನು ಅವರನ್ನು ಹತ್ತಿರದಿಂದ ಕಂಡಿದ್ದೇನೆ. ಅವರು ಮುಖ್ಯಮಂತ್ರಿಯಾಗಿದ್ದಾಗ ನಾನು ವಿರೋಧ ಪಕ್ಷದ ನಾಯಕನಾಗಿ, ನಾನು ಮುಖ್ಯಮಂತ್ರಿಯಾಗಿದ್ದಾಗ ಅವರು ವಿರೋಧ ಪಕ್ಷದ ನಾಯಕರಾಗಿದ್ದರು. ಅವರು ಎಂದಿಗೂ ತಮ್ಮ ವೈಯಕ್ತಿಕ ಕೆಲಸಕ್ಕಾಗಿ ಭೇಟಿ ಮಾಡಿದವರಲ್ಲ ಎಂದು ಅವರು ತಿಳಿಸಿದರು. ಐದು ವರ್ಷಗಳ ಕಾಲ ವಿಧಾನಸಭೆ ಒಳಗೆ ಹಾಗೂ ಹೊರಗೆ ಬಿಜೆಪಿ ಪರವಾಗಿ ಹೋರಾಟ ಮಾಡಿದ್ದರು. ಬಹಳ ನಿಷ್ಠಾವಂತರಾಗಿದ್ದರು. ಬಿಜೆಪಿಯ ನೀತಿ ಕಾರ್ಯಕ್ರಮಗಳ ಬಗ್ಗೆ ರಾಜೀ ಮಾಡಿಕೊಳ್ಳುತ್ತಿರಲಿಲ್ಲ. ಸ್ವಾರ್ಥಕ್ಕಾಗಿ ಅದನ್ನು ಬಲಿ ಕೊಟ್ಟಿರಲಿಲ್ಲ. ನಮ್ಮ ಸರ್ಕಾರದ ವಿರುದ್ಧ ಹೋರಾಟವನ್ನೂ ಮಾಡಿದ್ದಾರೆ ಎಂದು ನುಡಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ವಿರೋಧ ಪಕ್ಷದ ಕೆಲಸವನ್ನು ನಿರ್ಭಯವಾಗಿ ನಿಷ್ಠೂರವಾಗಿ ಮಾಡುತ್ತಿದ್ದರು. ಎಸ್.ಎಂ. ಕೃಷ್ಣ ಅವರ ಕಾಲದಲ್ಲೂ ವಿರೋಧ ಪಕ್ಷದ ನಾಯಕರಾಗಿದ್ದರು. ಅವರು ಕೇವಲ ಉತ್ತರ ಕರ್ನಾಟಕದ ನಾಯಕರಲ್ಲ, ಅವರು ಇಡೀ ರಾಜ್ಯದ ನಾಯಕರು ಎಂದು ಸಿದ್ದರಾಮಯ್ಯ ಬಣ್ಣಿಸಿದರು.

ಲಿಂಗಾಯತ ಸಮಾಜ ದೊಡ್ಡ ಸಮಾಜ. ಸಾಮಾನ್ಯವಾಗಿ ಯಡಿಯೂರಪ್ಪ ಅವರನ್ನು ಆ ಸಮಾಜದ ನಾಯಕ ಎಂದು ಬಿಂಬಿಸುತ್ತಾರೆ. ಎರಡನೇ ಸ್ಥಾನದಲ್ಲಿ ನೋಡುತ್ತಿದ್ದದ್ದು ಶೆಟ್ಟರ್ ಅವರನ್ನು. ಬಿಜೆಪಿಯವರು ಯಡಿಯೂರಪ್ಪ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ನಿರ್ದಾಕ್ಷಣ್ಯವಾಗಿ ತೆಗೆದು ಅಪಮಾನ ಮಾಡಿದರು. ಅವರ ಕಣ್ಣೀರು ಹಾಕಿಸಿದರು. ಜಗದೀಶ್ ಶೆಟ್ಟರ್ ಅವರು ಲಿಂಗಾಯತ ಸಮಾಜದ ದೊಡ್ಡ ನಾಯಕರೆಂದು ಗುರುತಿಸಿಕೊಂಡಿದ್ದರು. ಅವರು ಬಹಳ ನೋವಿನಿಂದ ಮಾತನಾಡಿದ್ದಾರೆ. ಬಹುಶಃ ಬಿಜೆಪಿ ಅವರನ್ನು ನಡೆಸಿಕೊಂಡಿರುವ ರೀತಿ ಯಾವ ಪಕ್ಷದಲ್ಲಿ ಯಾವುದೇ ನಾಯಕರಿಗೆ ಆಗಬಾರದು ಎಂದು ತಿಳಿಸಿದರು.

ನಿಖಿಲ್ ಕುಮಾರಸ್ವಾಮಿ ಕುಟುಂಬದ ಆಸ್ತಿ ರೂ. 77 ಕೋಟಿ

ರಾಮನಗರ: ರಾಮನಗರದ ಜೆಡಿಎಸ್ ಅಭ್ಯರ್ಥಿಯಾಗಿ ಕಣಕ್ಕೆ ಇಳಿದಿರುವ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರ ಪುತ್ರ ನಿಖಿಲ್‌ಕುಮಾರಸ್ವಾಮಿ ಕುಟುಂಬವು ಒಟ್ಟು 77 ಕೋಟಿ ರೂ. ಮೌಲ್ಯದ ಆಸ್ತಿ ಘೋಷಣೆ ಮಾಡಿದೆ.

ನಿಖಿಲ್ ಸೋಮವಾರ ರಾಮನಗರದಲ್ಲಿ ನಾಮಪತ್ರ ಸಲ್ಲಿಸಿದ್ದು, ಇದರೊಟ್ಟಿಗೆ ತಮ್ಮ ಆಸ್ತಿ ವಿವರಗಳ ಪ್ರಮಾಣಪತ್ರವನ್ನೂ ನೀಡಿದ್ದಾರೆ. ಅದರಂತೆ ಅವರ ಬಳಿ ರೂ. 46.81 ಕೋಟಿ ಹಾಗೂ ಅವರ ಪತ್ನಿ ರೇವತಿ ಹೆಸರಿನಲ್ಲಿ ರೂ. 1.79 ಕೋಟಿ ಮೌಲ್ಯದ ಚರಾಸ್ತಿ ಇದೆ. ಜೊತೆಗೆ ನಿಖಿಲ್ ಬಳಿ ರೂ. 28 ಕೋಟಿ ಮೌಲ್ಯದ ಸ್ಥಿರಾಸ್ತಿ ಹಾಗೂ ಅವರ ಪತ್ನಿ ಬಳಿ ರೂ. 28 ಲಕ್ಷ ಮೌಲ್ಯದ ಸ್ಥಿರಾಸ್ತಿ ಇದೆ. ಒಟ್ಟು ರೂ. 38.94 ಕೋಟಿ ಸಾಲ ತೋರಿಸಿದ್ದಾರೆ. 2019ರ ಲೋಕಸಭೆ ಚುನಾವಣೆ ವೇಳೆ ನಿಖಿಲ್ ರೂ. 74 ಕೋಟಿ ಮೌಲ್ಯದ ಆಸ್ತಿ ಘೋಷಣೆ ಮಾಡಿಕೊಂಡಿದ್ದರು.



